

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಆಗಸ್ಟ್ 23 ಬುಧವಾರ 2023

ಸಂಪುಟ: 44 | ಸಂಚಿಕೆ: 128 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಬೆಳೆ ಸಮೀಕ್ಷೆ ವರದಿ ಪಡೆದು ವಾರದಲ್ಲಿ

ರಾಜ್ಯದ ಬರಪೀಡಿತ ಪ್ರದೇಶಗಳ ಘೋಷಣೆ

ಕಂದಾಯ ಸಚಿವ ಕೃಷ್ಣಭೈರೇಗೌಡ ನೇತೃತ್ವದ ಸಂಪುಟ ಉಪ ಸಮಿತಿ ನಿರ್ಧಾರ





ಬೆಂಗಳೂರು, ಆ.22(ಕೆಎಂಶಿ)– ಒಂದು ವಾರದಲ್ಲಿ ಬೆಳೆ ಸಮೀಕ್ಷೆಯ ವರದಿ ಪಡೆದು ರಾಜ್ಯದಲ್ಲಿ ಬರಪೀಡಿತ ಪ್ರದೇಶಗಳ ಘೋಷಣೆ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ಕಂದಾಯ ಸಚಿವ ಕೃಷ್ಣಭೈರೇಗೌಡ ನೇತೃತ್ವದ ಸಂಪುಟ ಉಪ ಸಮಿತಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ. ನಿಯಮಾವಳಿಗಳ ಪ್ರಕಾರ ಮಳೆ ಕೊರತೆ ಹಾಗೂ ಕೃಷಿ ಸಂಬಂಧಿತ ನಿಖರ ಅಂಕಿ–ಅಂಶಗಳ ಸಲುವಾಗಿ 75 ತಾಲೂಕುಗಳಲ್ಲಿ ಬೆಳೆ ಸಮೀಕ್ಷೆಯನ್ನು ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬರ ಘೋಷಣೆಯನ್ನು ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ನೀಡಿರುವ ಮಾರ್ಗಸೂಚಿಯನ್ವಯ ಮಳೆ ಕೊರತೆ, ಶುಷ್ಕ ವಾತಾವರಣ (ಒಣ ಹವೆ), ಬಿತ್ತನೆಯಾದ ಪ್ರದೇಶ, ತೇವಾಂಶ ಕೊರತೆ, ಬೆಳೆಗಳ ಆರೋಗ್ಯ, ಜಲಾಶಯಗಳ ನೀರಿನ ಸಂಗ್ರಹಣೆ ಹಾಗೂ ಅಂತರ್ಜಲ ಮಟ್ಟವನ್ನು ಅವಲೋಕಿಸಿ ಕೈಗೊಳ್ಳಲಾಗುತ್ತದೆ.

ಈ ಎಲ್ಲಾ ಅಂಶಗಳ ಮೇಲೆ ಬರಕ್ಕೆ ತುತ್ತಾಗಬಹುದಾದ ತಾಲೂಕುಗಳನ್ನು ಗುರುತಿಸಿದ್ದು, ಈ ತಾಲೂಕುಗಳಲ್ಲಿ ಬೆಳೆ ಹಾನಿ ಸಮೀಕ್ಷೆಯ ನಂತರ ಬೆಳೆಹಾನಿಯು ಶೇ.50ಕ್ಕೂ ಅಧಿಕವಾಗಿದ್ದಲ್ಲಿ ಬರ ಎಂದು ಕೇಂದ್ರಕ್ಕೆ ಪತ್ರ ಬರೆಯಲು ತೀರ್ಮಾನಿಸಲಾಗಿದೆ. ರಾಜ್ಯದಲ್ಲಿ ಆಗಸ್ಟ್ ಮಾಹೆಯಲ್ಲಿ ರಾಜ್ಯಾದ್ಯಂತ ಅನೇಕ ಭಾಗಗಳಲ್ಲಿ ಮಳೆ ಕೊರತೆಯಾಗಿದೆ. ರಾಜ್ಯದಲ್ಲಿ ಜೂನ್ 1ರಿಂದ ಆಗಸ್ಟ್ 21ರ ವರೆಗೆ 487 ಮಿ.ಮೀ. ಮಳೆಯಾಗಿದ್ದು, ವಾಡಿಕೆ ಮಳೆ (635 ಮಿ.ಮೀ.)ಗೆ ಹೋಲಿಸಿದಾಗ ಶೇ.23 ರಷ್ಟು ಮಳೆ ಕೊರತೆಯಿದೆ.

ಮುಂಗಾರು ಅವಧಿಗೆ ಒಟ್ಟು 82.35 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು, ಆ.4ರವರೆಗೆ 51.87 ಲಕ್ಷ ಹೆಕ್ಟೇರ್ ಬಿತ್ತನೆಯಾಗಿದ್ದು, ಇದೇ ಅವಧಿಯ ವಾಡಿಕೆ ಬಿತ್ತನೆಗೆ (60.26 ಲಕ್ಷ ಹೆಕ್ಟೇರ್) ಹೋಲಿಸಿದಾಗ ಶೇ.89ರಷ್ಟು ಬಿತ್ತನೆಯಾಗಿದೆ. ಜುಲೈ ತಿಂಗಳಲ್ಲಿ ▶ 8ನೇ ಪುಟಕ್ಕೆ

ತಮಿಳುನಾಡಿಗೆ ನೀರು ಹರಿಸುವುದನ್ನು ಖಂಡಿಸಿ

ಎಕ್ಸ್‌ಪ್ರೆಸ್ ವೇ ತಡೆಗೆ ಯತ್ನ: ಹಲವು ರೈತರ ಬಂಧನ

ಪೊಲೀಸರೊಂದಿಗೆ ತಳ್ಳಾಟ–ನೂಕಾಟದಲ್ಲಿ ಐವರಿಗೆ ಗಾಯ

ಮಂಡ್ಯ, ಆ.22–ಜಿಲ್ಲೆಯ ಕೆಆರ್‌ಎಸ್‌ನಿಂದ ತಮಿಳುನಾಡಿಗೆ ನೀರು ಹರಿಸುತ್ತಿರುವುದನ್ನು ಖಂಡಿಸಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ತಡೆಯಲು ಮುಂದಾದ ರೈತ ಮುಖಂಡರನ್ನು ಪೊಲೀಸರು ತಾಲೂಕಿನ ಇಂಡುವಾಳು ಬಳಿ ವಶಕ್ಕೆ ಪಡೆದರು.

ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದನ್ನು ಖಂಡಿಸಿ, ಕರ್ನಾಟಕ ರಾಜ್ಯ ರೈತ ಸಂಘ (ಮೂಲ ಸಂಘಟನೆ) ಮಂಗಳವಾರ ಹೆದ್ದಾರಿ ಬಂದ್‌ಗೆ ಕರೆ ಕೊಟ್ಟಿತ್ತು. ಆದರೆ ಪೊಲೀಸರು ಅದಕ್ಕೆ ಅವಕಾಶ ಕೊಡದೇ, ಇಂಡುವಾಳು ಬಳಿ ಮಂಡ್ಯ ನಗರದಿಂದ ಎಕ್ಸ್ ಪ್ರೆಸ್ ವೇ ಪ್ರವೇಶಿಸುವಲ್ಲಿ ಬ್ಯಾರಿಕೇಡ್ ಗಳನ್ನು ಅಳವಡಿಸಿ, ಸರ್ಪಗಾವಲು ಹಾಕಿದ್ದರು. ಆದರೆ ಎತ್ತಿನಗಾಡಿಯೊಂದಿಗೆ ಸ್ಥಳಕ್ಕಾಗಮಿಸಿದ ನೂರಾರು ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಬಳಿಕ ಎಕ್ಸ್‌ಪ್ರೆಸ್ ವೇ ಪ್ರವೇಶಿಸಲು ಮುಂದಾದರು. ಆಗ ಪೊಲೀಸರು ತಡೆದರು. ಈ ವೇಳೆ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ತಳ್ಳಾಟ–ನೂಕಾಟ ನಡೆಯಿತು. ಕೊನೆಗೆ ಪೊಲೀಸರು ಹಲವು ಹೋರಾಟಗಾರರನ್ನು ವಶಕ್ಕೆ ಪಡೆದರು. ಇದಕ್ಕೂ ಮುನ್ನ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ರೈತರು ಇಂಡುವಾಳು ಸರ್ಕಾರಿ ಶಾಲಾವರಣದಿಂದ ಹೊರಟು ಸರ್ವಿಸ್ ರಸ್ತೆಯಲ್ಲಿ ಮೆರವಣಿಗೆ ಸಾಗಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಜಿಲ್ಲಾ ಶಾಸಕರು ಮತ್ತು ಸಂಸದರ ವಿರುದ್ಧ ಘೋಷಣೆ ಕೂಗಿದರು. ಅಲ್ಲದೇ ರೈತರು ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇ ಸರ್ವಿಸ್ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ ಪರಿಣಾಮ ಅರ್ಧ ತಾಸಿಗೂ ಹೆಚ್ಚು ಸಮಯ ವಾಹನ ಸಂಚಾರ ಅಸ್ತವ್ಯಸ್ತವಾಗಿತ್ತು. ಘೋಷಣೆ ಮೊಳಗಿಸುತ್ತಾ ರೈತರು ಎಕ್ಸ್‌ಪ್ರೆಸ್ ಹೈವೇಗೆ ನುಗ್ಗಲು ಮುಂದಾದಾಗ ಪೊಲೀಸರು ತಡೆದರು. ಈ ವೇಳೆ ಪ್ರತಿಭಟನಾನಿರತ ರೈತರು ಮತ್ತು ಪೊಲೀಸರ ನಡುವೆ ವಾಗ್ವಾದ ನಡೆದು, ಪರಸ್ಪರ ತಳ್ಳಾಟ– ನೂಕಾಟ ಉಂಟಾದಾಗ ಪೊಲೀಸರು ಬಲಪ್ರಯೋಗಿಸಿ ಬಂಧಿಸಿದರು. ಈ ವೇಳೆ ಐದಾರು ರೈತರಿಗೆ ಸಣ್ಣಪುಟ್ಟ ಗಾಯಗಳಾದವು.

ಪೊಲೀಸರ ದೌರ್ಜನ್ಯದ ವಿರುದ್ಧ ಬಂಧಿತ ರೈತರು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭ ಎಸ್ಪಿ ಎನ್. ಯತೀಶ್ ಅವರನ್ನು ರೈತರು ತರಾಟೆಗೆ ತೆಗೆದುಕೊಂಡರು. ಕಾವೇರಿ ನೀರಿನ ಹೋರಾಟವನ್ನು ನೀವು ಹತ್ತಿಕ್ಕುತ್ತಿದ್ದೀರಿ. ಬೆಂಗಳೂರು ಸೇರಿ ▶ 8ನೇ ಪುಟಕ್ಕೆ



> “ರೈತರು ಹೆದ್ದಾರಿಯಲ್ಲಿ ಪ್ರತಿಭಟನೆ ನಡೆಸುತ್ತೇವೆ ಎಂದು ಅನುಮತಿ ಕೇಳಿದ್ದರು. ಆದರೆ ಎಕ್ಸ್‌ಪ್ರೆಸ್‌ವೇನಲ್ಲಿ ಪ್ರತಿಭಟನೆ ನಡೆಸಲು ಅನುಮತಿ ಕೊಡಲು ಬರುವುದಿಲ್ಲ ಎಂದು ಅವರಿಗೆ ನೋಟಿಸ್ ಮೂಲಕ ತಿಳಿವಳಿಕೆ ನೀಡಲಾಗಿತ್ತು. ಆದರೂ ಅವರು ಮುತ್ತಿಗೆ ಹಾಕಲು ಯತ್ನಿಸಿದಾಗ 40–50 ಮಂದಿಯನ್ನು ವಶಕ್ಕೆ ಪಡೆಯಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಮುಂದಿನ ಕ್ರಮವನ್ನು ಕೈಗೊಂಡಿದ್ದೇವೆ.
> –ಎನ್.ಯತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಮೈಸೂರಲ್ಲಿ ‘ಗೃಹಲಕ್ಷ್ಮಿ’ ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಎರಡು ಲಕ್ಷ ಜನ ಪಾಲ್ಗೊಳ್ಳುವ ನಿರೀಕ್ಷೆ ■ ಪುಟ–5

ಮೈಸೂರಿನ ವಿದ್ಯಾನಗರ ಯುವಕನ ಕೊಲೆ ಪ್ರಕರಣ: ನಾಲ್ವರ ಬಂಧನ

ಆರೋಪಿ ತಾಯಿ ಆತ್ಮಹತ್ಯೆ; ಆಘಾತದಿಂದ ಜೈಲಲ್ಲಿ ತಂದೆಯೂ ಸಾವು

● ಏಕಕಾಲದಲ್ಲಿ ಇಬ್ಬರ ಮರಣೋತ್ತರ ಪರೀಕ್ಷೆ, ಒಟ್ಟಿಗೆ ಅಂತ್ಯಕ್ರಿಯೆ ● ನ್ಯಾಯಾಲಯದ ಅನುಮತಿ ಪಡೆದು ತಂದೆ–ತಾಯಿ ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡು ನಂತರ ಜೈಲಿಗೆ ಹೋದ ಮಗ ● ಕ್ಷುಲ್ಲಕ ವಿಚಾರಕ್ಕೆ ನಡೆದ ಕೊಲೆ: ತಂದೆ–ಮಗನ ಅಚಾತುರ್ಯಕ್ಕೆ ಜೀವ ಬಲಿ

ಮೈಸೂರು, ಆ.22(ಆರ್‌ಕೆ)– ಕ್ಷುಲ್ಲಕ ಕಾರಣಕ್ಕೆ ಚಾಕುವಿನಿಂದ ಇರಿದು ಯುವಕನನ್ನು ಹತ್ಯೆ ಮಾಡಿದ್ದ ಪ್ರಕರಣ ಸಂಬಂಧ ಬಂಧಿತ ನಾಲ್ವರ ಪೈಕಿ ಓರ್ವ ಆರೋಪಿ ತಾಯಿ ಆತ್ಮಹತ್ಯೆಗೆ ಶರಣಾದರೆ, ಈ ಆಘಾತದಿಂದ ಇದೇ ಪ್ರಕರಣದ ಮತ್ತೋರ್ವ ಆರೋಪಿಯೂ ಆದ ಅವನ ತಂದೆಯೂ ನ್ಯಾಯಾಂಗ ಬಂಧನದಲ್ಲಿ ತೀವ್ರ ಹೃದಯಾಘಾತದಿಂದ ಜೈಲಿನಲ್ಲೇ ಸಾವನ್ನಪ್ಪಿರುವ ಹೃದಯ ವಿದ್ರಾವಕ ಘಟನೆ ಮೈಸೂರಲ್ಲಿ ಸಂಭವಿಸಿದೆ.

ಆ.19ರಂದು ರಾತ್ರಿ 9.45ರಲ್ಲಿ ಮೈಸೂರಿನ ನಜರ್‌ಬಾದ್ ಠಾಣಾ ವ್ಯಾಪ್ತಿಯ ವಿದ್ಯಾನಗರದಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ ಕಾರಣಕ್ಕೆ ಬಾಲರಾಜ್ ಎಂಬ ಯುವಕನನ್ನು ಚಾಕುವಿನಿಂದ ಇರಿದು ಆತನ ಮೂವರು ಸ್ನೇಹಿತರು ಹಾಗೂ ಓರ್ವನ ತಂದೆ ಸೇರಿ ಹತ್ಯೆ ಮಾಡಿದ್ದರು. ವಿಷಯ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಕೆ.ಜೀವನ್ ಮತ್ತು ಸಿಬ್ಬಂದಿ, ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡು ಅಂದೇ ರಾತ್ರಿ ಕೊಲೆ ಆರೋಪಿಗಳಾದ ವಿದ್ಯಾನಗರ 7ನೇ ಕ್ರಾಸ್ ನಿವಾಸಿ ತೇಜಸ್ ಅಲಿಯಾಸ್ ಸಾಮ್ರಾಟ್(20), ಆತನ ತಂದೆ ಎನ್.ಎಂ.ಉಮಾಶಂಕರ್ ಅಲಿಯಾಸ್ ಸಾಮ್ರಾಟ್(50), ಮೇಟಗಳ್ಳಿಯ ಮಹದೇವ ಅವರ ಮಗ ಸಂಜಯ್ ಅಲಿಯಾಸ್ ಸಂಜು ಅಲಿಯಾಸ್ ಸೊಪ್ಪು(20) ಹಾಗೂ ವಿದ್ಯಾನಗರದ ▶ 8ನೇ ಪುಟಕ್ಕೆ



ಆರೋಪಿ ಮಗನೊಂದಿಗೆ ಮೃತ ತಂದೆ–ತಾಯಿ

ಇಂದು ಸಂಜೆ 5.20ರಿಂದ 6.04ರ ಅವಧಿಯಲ್ಲಿ

ಚಂದ್ರಯಾನ–3 ಮಿಷನ್ ಲ್ಯಾಂಡಿಂಗ್


ಬೆಂಗಳೂರು: ಚಂದ್ರಯಾನ–3 ಮಿಷನ್ ನಿಗದಿತ ಹಂತದಲ್ಲಿದೆ ಎಂದು ಇಸ್ರೋ ಮಂಗಳವಾರ ತಿಳಿಸಿದೆ. ಚಂದ್ರನ ಮೇಲ್ಮೈಯಲ್ಲಿ ತನ್ನ ಲ್ಯಾಂಡರ್‌ನ ನಿಗದಿತ ಸ್ಪರ್ಶದ ಸಮಯವನ್ನು ಅಂದಾಜಿಸಿರುವ ಇಸ್ರೋ ಅದರ ಬಗ್ಗೆ ಮಾಹಿತಿ ನೀಡಿದೆ.

ಬೆಂಗಳೂರಿನ ಇಸ್ರೋ ಟೆಲಿಮೆಟ್ರಿ, ಟ್ರ್ಯಾಕಿಂಗ್ ಮತ್ತು ಕಮಾಂಡ್ ನೆಟ್‌ವರ್ಕ್ (ISTRAC)ನಲ್ಲಿರುವ ಮಿಷನ್ ಆಪರೇಷನ್ ಕಾಂಪ್ಲೆಕ್ಸ್ (MOX) ಉತ್ಸಾಹದಿಂದ ಯಶಸ್ಸಿಗೆ ಕಾಯುತ್ತಿದೆ ಎಂದು ಬಾಹ್ಯಾಕಾಶ ಸಂಸ್ಥೆ ಹೇಳಿದೆ. ಮಿಷನ್ ವೇಳಾಪಟ್ಟಿಯಲ್ಲಿದೆ. ವ್ಯವಸ್ಥೆಗಳು ನಿಯಮಿತ ತಪಾಸಣೆಗೆ ಒಳಗಾಗುತ್ತಿವೆ. ಸುಗಮ ನೌಕಾಯಾನ ಮುಂದುವರಿಯುತ್ತಿದೆ ಎಂದು ಇಸ್ರೋ ತಿಳಿಸಿದೆ. ಮಾಕ್ಸ್/ಇಸ್ಟ್ರಾಕ್‌ನಲ್ಲಿ ಲ್ಯಾಂಡಿಂಗ್‌ನ ನೇರ ಪ್ರಸಾರವು ನಾಳೆ (ಬುಧವಾರ) ಸಂಜೆ 5.20ಕ್ಕೆ ಪ್ರಾರಂಭವಾಗುತ್ತದೆ. ಸಂಜೆ 6.04ರ ಸುಮಾರಿಗೆ ದಕ್ಷಿಣ ಧ್ರುವ ಪ್ರದೇಶದ ಬಳಿ ರೋವರ್‌ನೊಂದಿಗೆ ಲ್ಯಾಂಡರ್‌ನ ನಿಗದಿತ ಸ್ಪರ್ಶವಾಗಲಿದೆ. 70 ಕಿಮೀ ಎತ್ತರದಿಂದ ಲ್ಯಾಂಡರ್ ಸೆರೆಹಿಡಿದ ಚಂದ್ರನ ಚಿತ್ರಗಳು ಬಿಡುಗಡೆಯಾಗಿವೆ. ಆಗಸ್ಟ್ 19ರಂದು ಸುಮಾರು 70 ಕಿಮೀ ಎತ್ತರದಿಂದ ಚಂದ್ರಯಾನ–3 ಮಿಷನ್‌ನ ಲ್ಯಾಂಡರ್ ಪೊಸಿಷನ್ ಡಿಟೆಕ್ಷನ್ ಕ್ಯಾಮೆರಾ (LPDC) ಸೆರೆಹಿಡಿದ ಚಂದ್ರನ ಚಿತ್ರಗಳನ್ನು ಇಸ್ರೋ ಇಂದು ಬಿಡುಗಡೆ ಮಾಡಿದೆ.

LPDC ಚಿತ್ರಗಳು ಬುಧವಾರ ಚಂದ್ರನ ಮೇಲ್ಮೈಯಲ್ಲಿ ಮೃದುವಾದ ಲ್ಯಾಂಡಿಂಗ್ ಮಾಡಲು ನಿರ್ಧರಿಸಲಾದ ಮಿಷನ್‌ನ ಲ್ಯಾಂಡರ್ ಮಾಡ್ಯೂಲ್ (LM)ಗೆ ಸಹಾಯ ಮಾಡುತ್ತವೆ, ಅದರ ಸ್ಥಾನವನ್ನು ನಿರ್ಧರಿಸುವಲ್ಲಿ ಅವುಗಳನ್ನು ಚಂದ್ರನ ಉಲ್ಲೇಖ ನಕ್ಷೆ, ಬೆಂಗಳೂರು ಪ್ರಧಾನ ಕಚೇರಿಯ ರಾಷ್ಟ್ರೀಯ ನಕ್ಷೆಯೊಂದಿಗೆ ಹೊಂದಿಸುತ್ತದೆ. ಲ್ಯಾಂಡರ್ ಹಜಾರ್ಡ್ ಡಿಟೆಕ್ಷನ್ ಮತ್ತು ಅವಾಯಿಡೆನ್ಸ್ ಕ್ಯಾಮೆರಾ (LHDAC) ಸೆರೆ ಹಿಡಿದ ಚಂದ್ರನ ದೂರದ ಪ್ರದೇಶದ ಚಿತ್ರಗಳನ್ನು ಇಸ್ರೋ ನಿನ್ನೆ ಬಿಡುಗಡೆ ಮಾಡಿತ್ತು. ಸುರಕ್ಷಿತ ಲ್ಯಾಂಡಿಂಗ್ ▶ 8ನೇ ಪುಟಕ್ಕೆ

ಚಂದ್ರನ ಮೇಲ್ಮೈನ ಹೊಸ ಚಿತ್ರಗಳ ಬಿಡುಗಡೆ: ಇಸ್ರೋ





ಮೈಸೂರು ದಸರಾ ಮಹೋತ್ಸವ–2023 ಪ್ರಕ್ರಿಯೆ ಆರಂಭ


ದಸರಾ ಗಜಪಡೆಗೆ ಮೈಸೂರು ಅರಮನೆ ಆವರಣದಲ್ಲಿ

ಸೂರು ನಿರ್ಮಾಣ ಕಾರ್ಯ ಆರಂಭ

ಆನೆಗಳ ಮಾವುತರು, ಕಾವಾಡಿಗಳ ಪರಿವಾರ ವಾಸ್ತವ್ಯಕ್ಕೂ ತಾತ್ಕಾಲಿಕ ವಸತಿ ವ್ಯವಸ್ಥೆ







- ■ ಗಜಪಡೆ ಪರಿವಾರಕ್ಕೆ ಶಾಶ್ವತ ಶೌಚಾಲಯ ನಿರ್ಮಾಣ
- ■ ದಸರಾ ಆರಂಭಕ್ಕೆ 45 ದಿನ ಮುನ್ನ ಗಜಪಡೆ ಮೊದಲ ತಂಡ ಆಗಮನ
- ■ ಅರಮನೆ ಆವರಣದಲ್ಲಿ ಆನೆಗಳು ಬೀಡುಬಿಟ್ಟ ಸ್ಥಳದಲ್ಲಿ ಸಿಸಿ ಕ್ಯಾಮರಾ ಕಾವಲು

ಮೈಸೂರು, ಆ.22(ಬಿಎಲ್‌ಯು)– ಮೈಸೂರು ದಸರಾ ಮಹೋತ್ಸವ–2023, ಪ್ರಕ್ರಿಯೆ ಚಾಲನೆ ಪಡೆದುಕೊಂಡಿದೆ. ಉತ್ಸವದಲ್ಲಿ ಪಾಲ್ಗೊಳ್ಳುವ ಗಜಪಡೆಗೆ ಮೈಸೂರು ಅರಮನೆ ಆವರಣದಲ್ಲಿ ಸೂರು ನಿರ್ಮಾಣ ಕಾರ್ಯ ಆರಂಭವಾಗಿದೆ. ದಸರಾ ಗಜಪಡೆಯ ಮಾವುತರು ಹಾಗೂ ಕಾವಾಡಿಗಳ ಪರಿವಾರದ ವಾಸ್ತವ್ಯ ಹಾಗೂ ಆನೆಗಳ ಆಹಾರ ತಯಾರಿಕೆಗೆ ಶೆಡ್ ನಿರ್ಮಿಸುವ ಕಾರ್ಯವೂ ಭರದಿಂದ ಸಾಗಿದೆ. ವಿಶ್ವ ಪ್ರಸಿದ್ಧ ಮೈಸೂರು ದಸರಾ ಮಹೋತ್ಸವ ಅಕ್ಟೋಬರ್ 15 ರಿಂದ 24 ರವರೆಗೆ ನಡೆಯಲಿದ್ದು, ದಸರಾ ಆರಂಭಕ್ಕೆ 45 ದಿನಗಳ ಮುನ್ನವೇ ಗಜಪಡೆ ಮೈಸೂರಿಗೆ ಆಗಮಿಸುತ್ತಿದೆ.

ಸೆ.1, ಗಜ ಪಯಣ: ಮೈಸೂರು ಜಿಲ್ಲೆ ಹುಣಸೂರಿನ ನಾಗರಹೊಳೆಯ ಹೆಬ್ಬಾಗಿಲು ವೀರನಹೊಸಳ್ಳಿಯಲ್ಲಿ ಸೆಪ್ಟೆಂಬರ್ 1, ದಸರಾ ಗಜಪಯಣಕ್ಕೆ ವಿಧ್ಯುಕ್ತ ಚಾಲನೆ ನೀಡಲಾಗುವುದು. ಮೊದಲ ತಂಡದಲ್ಲಿ 9 ಆನೆಗಳು ಅಂದೇ ಮೈಸೂರಿನ ಅಶೋಕಪುರಂನ ಅರಣ್ಯ ಭವನಕ್ಕೆ ಬಂದು ತಲುಪಲಿವೆ.

ಎರಡು ದಿನಗಳ ಕಾಲ ಅರಣ್ಯ ಭವನದಲ್ಲಿ ಬೀಡು ಬಿಡುವ ಗಜಪಡೆಯನ್ನು ಸೆ.4ರಂದು ಮೈಸೂರು ಅರಮನೆಯ ಜಯಮಾರ್ತಾಂಡ ದ್ವಾರದಲ್ಲಿ ಸಾಂಪ್ರದಾಯಿಕವಾಗಿ ಸ್ವಾಗತಿಸಲಾಗುವುದು. ಅಂದಿನಿಂದ ಅರಮನೆ ಆವರಣದಲ್ಲಿ ಬೀಡು ಬಿಡುವುದರೊಂದಿಗೆ ಮೈಸೂರಿನಲ್ಲಿ ದಸರಾ ಆನೆಗಳ ದರ್ಬಾರು ಆರಂಭವಾಗಲಿದೆ.

ಆರು ಶೆಡ್ ಪೂರ್ಣ: ಆನೆಗಳಿಗೆ ಮೈಸೂರು ಅರಮನೆ ಆವರಣದಲ್ಲಿ ಶೆಡ್ ನಿರ್ಮಾಣ ಕಾರ್ಯ ಆರಂಭವಾಗಿದೆ. ಈಗಾಗಲೇ ಆರು ಆನೆಗಳಿಗೆ ಶಾಶ್ವತ ಶೆಡ್ ನಿರ್ಮಿಸಲಾಗಿದೆ. ಜಂಬೂ ಸವಾರಿ ಮೆರವಣಿಗೆಯಲ್ಲಿ ಚಿನ್ನದ ಅಂಬಾರಿ ಹೊರುವ ಅಭಿಮನ್ಯು, ನಿಶಾನೆ ಆನೆ ಸೇರಿದಂತೆ ಕುಮ್ಕಿ ಆನೆಗಳಿಗೆ ಸೂರು ನಿರ್ಮಾಣ ವ್ಯವಸ್ಥೆ ಮಾಡಲಾಗಿದೆ. ಇನ್ನುಳಿದ ಮೂರು ಆನೆಗಳಿಗೆ ಸೋಮೇಶ್ವರ ದೇವಸ್ಥಾನದ ಬಳಿ ಶೆಡ್ ನಿರ್ಮಿಸಲಾಗುತ್ತಿದೆ. ಎರಡನೇ ಹಂತದಲ್ಲಿ ಬರುವ ಉಳಿದ 5 ಆನೆಗಳಿಗೆ ಬಲರಾಮ ದ್ವಾರದ ಬಳಿ ಶೆಡ್ ನಿರ್ಮಾಣ ಮಾಡಲಾಗುತ್ತಿದೆ. ತಗಡಿನ ಶೀಟ್‌ಗಳಿಂದ ನಿರ್ಮಿಸುವುದರಿಂದ ▶ 8ನೇ ಪುಟಕ್ಕೆ



ಮೇಟಗಳ್ಳಿ ಪೊಲೀಸರಿಂದ 6 ಮಂದಿ ಖದೀಮರ ಸೆರೆ

2 ಲಕ್ಷ ರೂ. ಮೌಲ್ಯದ ಕಲ್ಲಿನ ಆನೆ ವಿಗ್ರಹ ವಶ

ಮೈಸೂರು, ಆ. 22(ಆರ್‌ಕೆ)– ಬೆಲೆ ಬಾಳುವ ಅಮೂಲ್ಯ ಕಲ್ಲಿನ ವಿಗ್ರಹ ಸಾಗಿಸುತ್ತಿದ್ದ 6 ಮಂದಿ ಖದೀಮರನ್ನು ಮೈಸೂರಿನ ಮೇಟಗಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ಗೋಕುಲಂ 3ನೇ ಹಂತದ ನಿವಾಸಿ ಹನುಮಂತನ ಮಗ ಹೆಚ್. ಮನೋಜ್(26), ಕಿಟ್ಟಪ್ಪನ ಮಗ ಕಿರಣ್(24), ನಾಗನಹಳ್ಳಿ ನಿವಾಸಿ ನಾಗರಾಜು ಮಗ ಎನ್. ಸಂತೋಷ್‌ಕುಮಾರ್(33), ನಂಜನಗೂಡು ತಾಲೂಕು ತಾಯೂರು ಗ್ರಾಮದ ಚಂದ್ರಶೇಖರ ಮೂರ್ತಿ(42), ಮಲ್ಲಹಳ್ಳಿ ಗ್ರಾಮದ ಈರಣ್ಣ ಮಗ ಗೋಪಾಲ್(36), ಭುಗತಗಳ್ಳಿ ನಿವಾಸಿ ಲೇಟ್ ದೇವಪ್ಪನ ಮಗ ನಾಗೇಶ್(30) ಬಂಧಿತ ಆರೋಪಿಗಳು.

ಆಗಸ್ಟ್ 8ರಂದು ಮುಂಜಾನೆ ಮೈಸೂರು–ಬೆಂಗಳೂರು ಹೆದ್ದಾರಿಯ ನಾಗನಹಳ್ಳಿ ಗೇಟ್ ಬಳಿ ಕಸ್ತೂರಿ ನಿವಾಸ ಹೋಟೆಲ್ ಪಕ್ಕದ ಕಲ್ಲಿನ ವಿಗ್ರಹ ತಯಾರಿಸುವ ಕಾರ್ಯಾಗಾರದ ಮುಂಭಾಗ ಇದ್ದ 2 ಲಕ್ಷ ರೂ. ಮೌಲ್ಯದ ಒಂದು ಜೊತೆ ಕಲ್ಲಿನ ಆನೆ ವಿಗ್ರಹಗಳನ್ನು ಟಾಟಾ ಜೀಪ್ (ಕೆಎ 45–ಎ 0819) ವಾಹನಕ್ಕೆ ತುಂಬುತ್ತಿದ್ದಾಗ ಗಸ್ತಿನಲ್ಲಿದ್ದ ಮೇಟಗಳ್ಳಿ ಠಾಣೆ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದರು. ಡಿಸಿಪಿ ಎಸ್. ಜಾಹ್ನವಿಯವರ ಮಾರ್ಗದರ್ಶನದಲ್ಲಿ ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ನೇತೃತ್ವದಲ್ಲಿ ಮೇಟಗಳ್ಳಿ ಠಾಣೆ ಇನ್ಸ್‌ಪೆಕ್ಟರ್ ಆರ್.ವಿಜಾಕರ, ಸಬ್ ಇನ್ಸ್‌ಪೆಕ್ಟರ್‌ಗಳಾದ ವಿ.ಆರ್.ಶಬರೀಶ, ಆರ್. ಜ್ಯೋತ್ಸ್ನಾರಾಜ್, ಎಎಸ್‌ಐಗಳಾದ ಜೋಸೆಫ್ ನರೋನ್ಹ, ಪಾಪೇಗೌಡ, ಸಿಬ್ಬಂದಿಗಳಾದ ಕೆ.ಎಸ್.ಹರೀಶ್, ದಿವಾಕರ, ಜಿ.ಎಸ್.ಮಾಣಿಕ್, ಬಿ.ಎಸ್. ಅಭಿಜಿತ್, ಪರಶುರಾಮ ರಾಥೋಡ್, ಕೆ.ಆರ್ಡರ್, ನಾಗರಾಜು ಆರೋಪಿಗಳ ಪತ್ತೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಖದೀಮರಿಬ್ಬರ ಸೆರೆ, ಚಿನ್ನದ ಸರ, ದ್ವಿಚಕ್ರ ವಾಹನ ವಶ



ಮೈಸೂರು,ಆ.22(ಆರ್‌ಕೆ)– ಖದೀಮರಿಬ್ಬರನ್ನು ಬಂಧಿಸಿರುವ ನಜರ್‌ಬಾದ್ ಠಾಣೆ ಪೊಲೀಸರು, 80,000 ರೂ. ಮೌಲ್ಯದ ಚಿನ್ನದ ಸರ ಹಾಗೂ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ಮೈಸೂರು ತಾಲೂಕು ಕೆಂಪಸಿದ್ದನ ಹುಂಡಿ ಗ್ರಾಮದ ಲೇಟ್ ಶ್ರೀಕಂಠ ಅವರ ಮಗ ನಂಜುಂಡ (23) ಹಾಗೂ ಸಜ್ಜೆಹುಂಡಿ ಗ್ರಾಮದ ಲೇಟ್ ದಾಸೇಗೌಡರ ಮಗ ಮಾದಪ್ಪ (24) ಬಂಧಿತ ಸರಗಳ್ಳರು. ಆ.8ರಂದು ಬೆಳಿಗ್ಗೆ 7.15ರಲ್ಲಿ ಕೆ.ಸಿ.ನಗರ ನಿವಾಸಿ ಚಂದ್ರಶೇಖರ ಅವರ ಪತ್ನಿ ಭಾರತಿ (50), ವಾಯುವಿಹಾರ ಮುಗಿಸಿ ಹಾಲು ತೆಗೆದುಕೊಂಡು ಬರಿಡಾವಣೆ 7ನೇ ಮೇನ್‌ನಲ್ಲಿ ಹೋಗುತ್ತಿದ್ದಾಗ ಹೀರೋ ಹೋಂಡಾ ಫ್ಯಾಷನ್ ಪ್ಲಸ್ ಬೈಕಿನಲ್ಲಿ ಬಂದ ಇಬ್ಬರು 17 ಗ್ರಾಂ ಚಿನ್ನದ ಸರ ಕಿತ್ತುಕೊಂಡು ಪರಾರಿಯಾಗಿದ್ದರು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿ, ಸ್ಥಳ ಮಹಜರು ನಡೆಸಿದ್ದ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಕೆ. ಜೀವನ್ ಹಾಗೂ ಸಿಬ್ಬಂದಿ, ಪ್ರಕರಣ ದಾಖಲಿಸಿಕೊಂಡು ಆರೋಪಿಗಳಿಗಾಗಿ ಶೋಧ ನಡೆಸುತ್ತಿದ್ದರು. ಸಿಸಿಟಿವಿ ಕ್ಯಾಮರಾ ಫುಟೇಜ್‌ಗಳ ಸುಳಿವಿನ ಬೆನ್ನತ್ತಿದ ಪೊಲೀಸರು, ಆ.13ರಂದು ಆರೋಪಿಗಳನ್ನು ಬಂಧಿಸಿ 17 ಗ್ರಾಂ ಚಿನ್ನದ ಸರ ಹಾಗೂ ಕೃತ್ಯಕ್ಕೆ ಬಳಸಿದ್ದ ಹೀರೋ ಹೋಂಡಾ ಫ್ಯಾಷನ್ ಪ್ಲಸ್ (ಕೆಎ 09–ಇಕ್ಯೂ 673) ಬೈಕ್ ಅನ್ನು ವಶಕ್ಕೆ ಪಡೆದಿದ್ದಾರೆ. ಚಿನ್ನದ ಸರ ಅಪಹರಿಸಲು ಬಳಸಿದ್ದ ಬೈಕನ್ನು ನಂಜನಗೂಡು ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಆರೋಪಿಗಳು ಕಳವು ಮಾಡಿದ್ದರು ಎಂಬುದು ವಿಚಾರಣಾ ವೇಳೆ ತಿಳಿದುಬಂದಿದೆ. ಡಿಸಿಪಿ ಎಸ್. ಜಾಹ್ನವಿ ಮಾರ್ಗದರ್ಶನದಲ್ಲಿ ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ಅವರ ನೇತೃತ್ವದಲ್ಲಿ ನಡೆದ ಪತ್ತೆ ಕಾರ್ಯದಲ್ಲಿ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಕೆ. ಜೀವನ್, ಸಬ್ ಇನ್ಸ್‌ಪೆಕ್ಟರ್‌ಗಳಾದ ಶ್ರೀನಿವಾಸ ಪಾಟೀಲ್, ಸಿದ್ದಬಾಯಿ ಮಮದಾಪುರ, ಸಿಬ್ಬಂದಿಗಳಾದ ಬಿ.ವಿ. ಪ್ರಕಾಶ್, ಎಸ್.ಸತೀಶ್‌ಕುಮಾರ್, ಕಿರಣ್ ರಾಥೋಡ್, ಮಲ್ಲಿಕಾರ್ಜುನ, ಎಂ. ಸಂಜು, ಪಿ.ಕುಮಾರ್ ಪಾಲ್ಗೊಂಡಿದ್ದರು.

ಅಂಗಡಿಯಲ್ಲಿ ಚಿನ್ನದ ಸರ ಎಗರಿಸಿದ್ದವನ ಸೆರೆ

ಮೈಸೂರು,ಆ.22(ಆರ್‌ಕೆ)–ಗ್ರಾಹಕನ ಸೋಗಿನಲ್ಲಿ ಬಂದು ಜುವೆಲರಿ ಶಾಪ್‌ನಲ್ಲಿ 2 ಚಿನ್ನದ ಸರ ಎಗರಿಸಿ ಪರಾರಿಯಾಗಿದ್ದ ಆರೋಪಿಯನ್ನು ಮೈಸೂರಿನ ಲಷ್ಕರ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಹಾಸನ ಜಿಲ್ಲೆ ಅರಕಲಗೂಡು ತಾಲೂಕು ಅರದೂರು ಗ್ರಾಮದ ಪುಟ್ಟಸ್ವಾಮಿ ಅವರ ಮಗ ಪ್ರತಾಪ್(28) ಬಂಧಿತ ಆರೋಪಿಯಾಗಿದ್ದು, ಆತನಿಂದ 2 ಲಕ್ಷ ರೂ. ಮೌಲ್ಯದ 40 ಗ್ರಾಂ ತೂಗುವ 2 ಚಿನ್ನದ ಸರಗಳನ್ನು ವಶಪಡಿಸಿಕೊಳ್ಳಲಾಗಿದೆ. ಮೈಸೂರಿನ ಅಶೋಕ ರಸ್ತೆಯಲ್ಲಿರುವ ಶ್ರೀಹರಿ ಜ್ಯುವೆಲರ್ಸ್‌ನಲ್ಲಿ ಆಭರಣ ಖರೀದಿಸುವ ನೆಪದಲ್ಲಿ ಮಾಸ್ಕ್ ಧರಿಸಿ ಬಂದ ಆತ, ಚಿನ್ನದ ಸರಗಳನ್ನು ನೋಡುತ್ತಿದ್ದಾಗ ಮಾಲೀಕರು ಬೇರೆ ಕಡೆ ಗಮನಹರಿಸಿದಾಗ ತಲಾ 20 ಗ್ರಾಂ ತೂಗುವ 2 ಚಿನ್ನದ ಸರಗಳೊಂದಿಗೆ ಆಗಸ್ಟ್ 7ರಂದು ಪರಾರಿಯಾಗಿದ್ದ.

ಸ್ಥಳಕ್ಕೆ ಧಾವಿಸಿದ್ದ ಲಷ್ಕರ್ ಠಾಣೆ ಇನ್ಸ್‌ಪೆಕ್ಟರ್ ಕೆ.ಆರ್.ಪ್ರಸಾದ್ ಹಾಗೂ ಸಿಬ್ಬಂದಿ, ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದರು. ಅಂಗಡಿ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದ ದೃಶ್ಯಾವಳಿಗಳ ಆಧಾರದಲ್ಲಿ ತನಿಖೆ ನಡೆಸಿ ಆ.17ರಂದು ಹೊಳೆನರಸೀಪುರದಲ್ಲಿ ಆರೋಪಿಯನ್ನು ಬಂಧಿಸಿ ಆತನಿಂದ 2 ಲಕ್ಷ ರೂ. ಮೌಲ್ಯದ ಚಿನ್ನದ ಸರಗಳನ್ನು ವಶಪಡಿಸಿಕೊಂಡಿದ್ದಾರೆ.

ಡಿಸಿಪಿ ಎಸ್.ಜಾಹ್ನವಿ ಅವರ ಮಾರ್ಗದರ್ಶನದಲ್ಲಿ ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ನಡೆದ ಪತ್ತೆ ಕಾರ್ಯದಲ್ಲಿ ಲಷ್ಕರ್ ಠಾಣೆ ಇನ್ಸ್‌ಪೆಕ್ಟರ್ ಕೆ.ಆರ್.ಪ್ರಸಾದ್, ಸಬ್‌ಇನ್ಸ್‌ಪೆಕ್ಟರ್ ಚಂದ್ರಶೇಖರ್ ಮಾಗನೂರ್, ಸಿಬ್ಬಂದಿಗಳಾದ ಲೋಕೇಶ್, ಚೇತನ್, ಚನ್ನಪ್ಪ ಮಾ.ಕಳ್ಳೋಳ್, ಮಂಜುನಾಥ್, ರಾಜೇಸಾಬ್ ನದಾಫ್, ಮಂಜುನಾಥ್ ಗದಗೆಗೋಳ್, ಪಿ.ಕುಮಾರ್ ಪಾಲ್ಗೊಂಡಿದ್ದರು.

ಆರೋಪಿ ಸೆರೆ; 87,000 ರೂ. ಮೌಲ್ಯದ ಗಾಂಜಾ, ಸ್ಕೂಟರ್ ವಶ

ಮೈಸೂರು,ಆ.22(ಆರ್‌ಕೆ)–ಗಾಂಜಾ ಸಾಗಿಸುತ್ತಿದ್ದ ಪೆಡ್ಲರ್‌ನನ್ನು ಬಂಧಿಸಿರುವ ಸಿಇಎನ್ ಕ್ರೈಂ ಠಾಣೆ ಪೊಲೀಸರು, 87,000 ರೂ. ಮೌಲ್ಯದ ಮಾಲನ್ನು ವಶಪಡಿಸಿಕೊಂಡಿದ್ದಾರೆ.

ಆ.18ರಂದು ಬೆಳಿಗ್ಗೆ 10 ಗಂಟೆಯಲ್ಲಿ ಮೈಸೂರಿನ ಎಂ.ಜಿ.ರಸ್ತೆಯಲ್ಲಿ ಗಾಂಜಾ ಪೆಡ್ಲರ್‌ನನ್ನು ವಶಕ್ಕೆ ಪಡೆದ ಪೊಲೀಸರು, ಆತನ ಬಳಿ ಇದ್ದ 37 ಸಾವಿರ ರೂ. ಮೌಲ್ಯದ 1 ಕೆ.ಜಿ. 227 ಗ್ರಾಂ ಗಾಂಜಾ ಹಾಗೂ ಕೃತ್ಯಕ್ಕೆ ಬಳಸುತ್ತಿದ್ದ 50 ಸಾವಿರ ರೂ. ಬೆಲೆಯ ಹೋಂಡಾ ಡಿಯೋ ಸ್ಕೂಟರ್ ವಶಪಡಿಸಿಕೊಂಡಿದ್ದಾರೆ. ದೇವರಾಜ ಉಪವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ನಡೆದ ಪತ್ತೆ ಕಾರ್ಯದಲ್ಲಿ ಸಿಇಎನ್ ಕ್ರೈಂ ಠಾಣೆ ಇನ್ಸ್‌ಪೆಕ್ಟರ್ ಪ್ರಸನ್ನಕುಮಾರ್, ಸಬ್‌ಇನ್ಸ್‌ಪೆಕ್ಟರ್ ಎಸ್.ಅನಿಲ್‌ಕುಮಾರ್, ಸಿಬ್ಬಂದಿಗಳಾದ ಟಿ.ಪಿ.ನಾಗೇಂದ್ರ, ಕೆ.ಎನ್.ಶ್ರೀನಿವಾಸ್, ವಿ.ಎ.ಮಧು, ಭಾನಿ ಪಾಲ್ಗೊಂಡಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಆ.22–ತುರ್ತು ನಿರ್ವಹಣಾ ಕೆಲಸದ ನಿಮಿತ್ತ ಆ.24ರ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿಜಯನಗರ 1ನೇ ಹಂತ, ಅಂಬರೀಶ್ ರಸ್ತೆ, ಯೋಗ ನರಸಿಂಹ ಸ್ವಾಮಿ ದೇವಸ್ಥಾನ ಸುತ್ತಮುತ್ತ, ಕೊಡವ ಸಮಾಜ ಸುತ್ತಮುತ್ತ, ಹಿನಕಲ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.


ನಿಧನ



ರಂಗಸ್ವಾಮಿ

ಮೈಸೂರು, ಆ.22– ಮೈಸೂರು ನಗರ ಬನ್ನಿಮಂಟಪ ಬಿ ಬಡಾವಣೆಯ ಶಿವರಾತ್ರೀಶ್ವರನಗರ ನಿವಾಸಿ ರಂಗಸ್ವಾಮಿ (97) ಇಂದು ಮಧ್ಯಾಹ್ನ ಹೃದಯಾಘಾತದಿಂದ ನಿಧನರಾದರು. ಮೃತರು ಪುತ್ರ, ಮೂವರು ಪುತ್ರಿಯರು, ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಬುಧವಾರ) ಬೆಳಿಗ್ಗೆ 11 ಗಂಟೆಗೆ ಬನ್ನಿಮಂಟಪ ಜೋಡಿ ತೆಂಗಿನಮರದ ರಸ್ತೆಯಲ್ಲಿನ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗುರುಕಾರ್ ಎಸ್.ಪುಟ್ಟಬುದ್ಧಿ



ಮೈಸೂರಿನ ಸೆಂಚುರಿ ಪಾರ್ಕ್ ನಿವಾಸಿ ಹಾಗೂ ಕೈಗಾರಿಕೋದ್ಯಮಿ ಗುರುಕಾರ್ ಎಸ್.ಪುಟ್ಟಬುದ್ಧಿ (88) ಅವರು ನಿನ್ನೆ ನಿಧನರಾದರು. ಮೃತರು ಪುತ್ರ ಸೇರಿದಂತೆ ಅಪಾರ ಬಂಧು ವರ್ಗ, ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು ಮೈಸೂರಿನ ವಿದ್ಯಾರಣ್ಯಪುರಂ ವೀರಶೈವ ರುದ್ರಭೂಮಿಯಲ್ಲಿ ನೆರವೇರಿತು.

ದಸರಾ ಫಲಪುಷ್ಪ ಪ್ರದರ್ಶನ ಸಂಬಂಧ ಸೆ.1ರಂದು ಸಭೆ





2022ರ ದಸರಾ ಪುಷ್ಪಪ್ರದರ್ಶನದ ಅಂಗವಾಗಿ ಕುಪ್ಪಣ್ಣ ಪಾರ್ಕ್ ಗ್ಲಾಸ್‌ಹೌಸ್‌ನಲ್ಲಿ ರಚಿಸಿದ್ದ ರಾಷ್ಟ್ರಪತಿ ಭವನದ 20 ಅಡಿ ಹೂವಿನ ಪ್ರತಿಕೃತಿ ಆಕರ್ಷಿಸಿತ್ತು.

ಮೈಸೂರು,ಆ.22(ಜಿಎ)– ಈ ಬಾರಿ ದಸರಾ ಮಹೋತ್ಸವದಲ್ಲಿ ಫಲಪುಷ್ಪ ಪ್ರದರ್ಶನವನ್ನು ಅದ್ದೂರಿಯಾಗಿ ನಡೆಸಲು ತೋಟಗಾರಿಕೆ ಇಲಾಖೆ ಚಿಂತನೆ ನಡೆಸಿದ್ದು, ಈ ಹಿನ್ನೆಲೆಯಲ್ಲಿ ಸೆ.1ರಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೇತೃತ್ವದಲ್ಲಿ ವಿಶೇಷ ಸಭೆ ಆಯೋಜಿಸಲಾಗಿದೆ.

ದಸರಾ ಮಹೋತ್ಸವದಲ್ಲಿ ಫಲಪುಷ್ಪ ಪ್ರದರ್ಶನವು ಪ್ರಮುಖ ಆಕರ್ಷಣೆಯಾಗಿದ್ದು, ಪ್ರತಿ ವರ್ಷವೂ ಇಲಾಖೆಯು ವಿವಿಧ ವಿಶೇಷಗಳಿಂದ ಮೆಚ್ಚುಗೆ ಗಳಿಸಿದೆ. ಅದರಂತೆ ಈ ಬಾರಿ ವಿಭಿನ್ನವಾಗಿ ನಡೆಸಲು ಚಿಂತಿಸಲಾಗಿದೆ. ನವರಾತ್ರಿಯ 9 ದಿನಗಳು ಇಡೀ ಮೈಸೂರು ನವ ವಧುವಿನಂತೆ ಕಂಗೊಳಿಸಿದರೆ, ಕುಪ್ಪಣ್ಣ ಪಾರ್ಕ್‌ನಲ್ಲಿ ಏರ್ಪಡಿಸುವ ಫಲಪುಷ್ಪ ಪ್ರದರ್ಶನ ಎಲ್ಲರನ್ನು ಕೈಬೀಸಿ ಕರೆಯುತ್ತದೆ. ಇದನ್ನು ನೋಡಲು ಲಕ್ಷಾಂತರ ಪ್ರವಾಸಿಗರು ಮೈಸೂರಿಗೆ ಆಗಮಿಸುತ್ತಾರೆ. ಕಳೆದ ವರ್ಷದ ದಸರಾ ಮಹೋತ್ಸವದಲ್ಲಿ ಕುಪ್ಪಣ್ಣ ಪಾರ್ಕ್ ಗ್ಲಾಸ್ ಹೌಸ್‌ನಲ್ಲಿ ರಚಿಸಿದ 20 ಅಡಿ ರಾಷ್ಟ್ರಪತಿ ಭವನದ ಹೂವಿನ ಪ್ರತಿ ಕೃತಿ, ನಟ ಪುನೀತ್ ರಾಜ್‌ಕುಮಾರ್ ಪ್ರತಿಕೃತಿಗಳು ಎಲ್ಲರನ್ನು ಆಕರ್ಷಿಸಿತ್ತು. ಈ ಬಾರಿ ಯಾವ ರೀತಿ ಫಲಪುಷ್ಪ ಪ್ರದರ್ಶನ ಎಲ್ಲರನ್ನು ಆಕರ್ಷಿಸುತ್ತದೆ ಎಂಬುದನ್ನು ಕಾದು ನೋಡಬೇಕಿದೆ. ದಸರಾ ಮಹೋತ್ಸವ ಫಲಪುಷ್ಪ ಪ್ರದರ್ಶನಕ್ಕೆ ಈಗಾಗಲೇ ತೋಟಗಾರಿಕೆ ಇಲಾಖೆ ವತಿಯಿಂದ ಪೂರ್ವಭಾವಿಯಾಗಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು 'ಮೈಸೂರು ಮಿತ್ರ'ನಿಗೆ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಮಂಜುನಾಥ್ ಅಂಗಡಿ ತಿಳಿಸಿದರು.

ಪ್ರತಿ ವರ್ಷದಂತೆ ಈ ಬಾರಿಯೂ ವಿಭಿನ್ನವಾಗಿ ನಡೆಸಲು ನಗರದ ಕುಪ್ಪಣ್ಣ ಪಾರ್ಕ್‌ನಲ್ಲಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಹೂ ಗಿಡಗಳನ್ನು ಬೆಳೆಸಲು ಆರಂಭಿಸಲಾಗಿದೆ. ಫಲಪುಷ್ಪ ಪ್ರದರ್ಶನಕ್ಕೆ ಬೇಕಿರುವ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಫಲಪುಷ್ಪ ಪ್ರದರ್ಶನದ ಈ ಬಾರಿಯ ವಿಶೇಷತೆ ಸೇರಿದಂತೆ ಅನೇಕ ವಿಷಯಗಳ ಬಗ್ಗೆ ಸೆ.1ರಂದು ಜಿಲ್ಲಾ ಪಂಚಾಯತ್ ಸಿಇಒ ಕೆ.ಎಂ. ಗಾಯತ್ರಿ ಅವರ ನೇತೃತ್ವದಲ್ಲಿ ವಿಶೇಷ ಸಭೆ ನಡೆಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತದೆ ಎಂದರು.

ವರಮಹಾಲಕ್ಷ್ಮಿಯಂದು ಮಹಿಳೆಯರಿಗೆ ಅರಿಶಿನ ಕುಂಕುಮ



ಮೈಸೂರು,ಆ.22(ಎಸ್‌ಬಿಡಿ)– ಪ್ರತಿ ವರ್ಷದಂತೆ ಈ ವರ್ಷವೂ ರಾಜ್ಯದ ಎಲ್ಲಾ ದೇವಾಲಯಗಳಿಗೆ ಬರುವ ಮಹಿಳೆಯರಿಗೆ ವರ ಮಹಾಲಕ್ಷ್ಮೀ ವ್ರತದ ದಿನದಂದು ಗುಣಮಟ್ಟದ ಕಸ್ತೂರಿ, ಅರಿಶಿನ–ಕುಂಕುಮ ಮತ್ತು ಹಸಿರು ಬಳೆಗಳನ್ನು ದೇವರ ಮುಂದಿಟ್ಟು ಪೂಜಿಸಿ ಗೌರವ ಪೂರ್ವಕವಾಗಿ ಮಹಿಳೆಯರಿಗೆ ನೀಡಬೇಕೆಂದು ಧಾರ್ಮಿಕ ದತ್ತಿ ಇಲಾಖೆ ಆದೇಶ ಹೊರಡಿಸಿದೆ.

ಭಾರತೀಯ ಸಂಸ್ಕೃತಿಯಲ್ಲಿ ನಾರಿಯರಿಗೆ ವಿಶೇಷ ಸ್ಥಾನಮಾನಗಳನ್ನು ನೀಡಲಾಗಿದ್ದು, ಪ್ರತಿ ವರ್ಷದಂತೆ ಈ ವರ್ಷವೂ ವರ ಮಹಾಲಕ್ಷ್ಮೀ ವ್ರತ, ಸ್ವರ್ಣಗೌರಿ ವ್ರತ, ನವರಾತ್ರಿಗಳಲ್ಲಿಯೂ ಸಹ ಸ್ತ್ರೀ ದೇವತೆಯನ್ನು ವಿಶೇಷವಾಗಿ ಪೂಜಿಸುತ್ತಾರೆ. ಅದರಂತೆ ಪ್ರತಿ ವರ್ಷದ ಶ್ರಾವಣ ಮಾಸದ ಶುಕ್ಲಪಕ್ಷದ ಪೌರ್ಣಮಿಯ ಮೊದಲ ಶುಕ್ರವಾರದಂದು ಶ್ರೀ ವರಮಹಾಲಕ್ಷ್ಮಿ ವ್ರತ ಮಾಡಿ, ಪ್ರಸಾದವನ್ನು ಸ್ವೀಕರಿಸಿದ್ದಲ್ಲಿ ಸಕಲ ಸೌಭಾಗ್ಯಗಳು, ಅಷ್ಟ ಐಶ್ವರ್ಯಗಳು, ಫಲಗಳು, ಧನ ಧಾನ್ಯಾದಿಗಳು ಲಭಿಸುತ್ತದೆ ಎಂಬ ನಂಬಿಕೆ ಇರುವುದರಿಂದ ಈ ದಿನ ಮಹಿಳೆಯರು ಬಹಳ ಭಕ್ತಿ–ಭಾವಗಳಿಂದ ಮನೆಯಲ್ಲಿ ವಿಶೇಷ ಪೂಜೆ ಸಲ್ಲಿಸುತ್ತಾರೆ. ದೇವರ ಪ್ರಸಾದದ ರೂಪದಲ್ಲಿ ಅರಿಶಿನ ಕುಂಕುಮ, ಹೂವು, ಪ್ರಸಾದಗಳನ್ನು ಸ್ವೀಕರಿಸುವ ಸಂಪ್ರದಾಯವಿರುತ್ತದೆ. ಹಾಗಾಗಿ ದೇವಾಲಯಗಳಲ್ಲಿ ಪ್ರಸಾದ ರೂಪವಾದ ಅರಿಶಿನ, ಕುಂಕುಮವನ್ನು ಕಾಗದದ ಲಕೋಟೆಗಳಲ್ಲಿ ಸರ್ಕಾರದ ಲಾಂಛನದೊಂದಿಗೆ ದೇವಾಲಯದ ಹೆಸರನ್ನು ಮುದ್ರಿಸಿ ಮಹಿಳೆಯರಿಗೆ ನೀಡಬೇಕು ಎಂದು ಧಾರ್ಮಿಕ ದತ್ತಿ ಇಲಾಖೆ ಆಯುಕ್ತರು ಆದೇಶಿಸಿದ್ದಾರೆ.

ಚಂದ್ರಯಾನ–3 ಯಶಸ್ವಿಯಾಗಲು ಇಂದು ಮಂತ್ರಾಲಯದಲ್ಲಿ ಬಿಜೆಪಿ ವಿಶೇಷ ಪೂಜೆ



ಮೈಸೂರು,ಆ.22(ಜಿಎ)–ಚಂದ್ರಯಾನ–3 ಯಶಸ್ವಿಯಾಗಲಿ ಎಂದು ರಾಘವೇಂದ್ರರ ಸನ್ನಿಧಿ ಮಂತ್ರಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲು ಮೈಸೂರು ನಗರ ಬಿಜೆಪಿ ಪದಾಧಿಕಾರಿಗಳು ಮಂಗಳವಾರ ಪ್ರಯಾಣ ಬೆಳೆಸಿದರು.

ಮೈಸೂರು ರೈಲ್ವೇ ನಿಲ್ದಾಣದಿಂದ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಬಸವ ಎಕ್ಸ್‌ಪ್ರೆಸ್‌ನಲ್ಲಿ ಬಿಜೆಪಿ ನಗರಾಧ್ಯಕ್ಷ ಮತ್ತು ಶಾಸಕರೂ ಆದ ಟಿ.ಎಸ್.ಶ್ರೀವತ್ಸ ಅವರ ನೇತೃತ್ವದಲ್ಲಿ 83 ಪದಾಧಿಕಾರಿಗಳು ಮಂತ್ರಾಲಯಕ್ಕೆ ಪ್ರಯಾಣ ಬೆಳೆಸಿದರು. ಚಂದ್ರಯಾನ–3 ಯಶಸ್ವಿಯಾಗಲೆಂದು ಬುಧವಾರ (ಆ.23)ದಂದು ಬೆಳಿಗ್ಗೆ ಮಂತ್ರಾಲಯದಲ್ಲಿ ವಿಶೇಷ ಪೂಜೆ ನಡೆಸಲಿದ್ದಾರೆ. ಈ ವೇಳೆ ರೈಲು ಹತ್ತುವ ಮೂಲಕ ಇಸ್ರೋ ವಿಜ್ಞಾನಿಗಳಿಗೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಜೈಕಾರ ಕೂಗಿದರು. ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಮಂಗಳ ಸೋಮಶೇಖರ್, ನಗರ ಪ್ರಧಾನ ಕಾರ್ಯದರ್ಶಿಗಳಾದ ಸೋಮಸುಂದರ್, ಗಿರಿಧರ್ ಹಾಗೂ ವಾಣೀಶ್, ವಕ್ತಾರ ಮೋಹನ್, ಬಿಜೆಪಿ ಮುಖಂಡ ಮೈ.ವಿ.ರವಿಶಂಕರ್ ಸೇರಿದಂತೆ ಬಿಜೆಪಿಯ ಎಲ್ಲಾ ಮೋರ್ಚಾಗಳ ಅಧ್ಯಕ್ಷರು ಮತ್ತು ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ತೆರಳಿದರು.

ಮೈಸೂರಲ್ಲಿ ನಾಳೆ ಯುವ ಸಬಲೀಕರಣ ಕೇಂದ್ರ, ಸಮಾಲೋಚನಾ ಕೇಂದ್ರ ಲೋಕಾರ್ಪಣೆ



ಮೈಸೂರು, ಆ.22(ಜಿಎ)– ಭಾರತೀಯ ಗ್ರಾಮೀಣ ಶೈಕ್ಷಣಿಕ ಅಭಿವೃದ್ಧಿ ಮತ್ತು ಆವಿಷ್ಕಾರಿ ತಂತ್ರಜ್ಞಾನ ಕೇಂದ್ರದಿಂದ (ಕ್ರೆಡಿಟ್–ಐ) ಆ.24ರಂದು ನೂತನವಾಗಿ ನಿರ್ಮಿಸಿರುವ ವನಿತಾಶ್ರೀ ಮಹಿಳಾ ಮತ್ತು ಯುವ ಸಬಲೀಕರಣ ಕೇಂದ್ರ ಹಾಗೂ ಮನೋಲ್ಲಾಸ ಆಪ್ತ ಸಮಾಲೋಚನಾ ಕೇಂದ್ರವನ್ನು ಲೋಕಾರ್ಪಣೆ ಮಾಡಲಾಗುತ್ತದೆ ಎಂದು ಸಂಸ್ಥೆಯ ವ್ಯವಸ್ಥಾಪಕ ಟ್ರಸ್ಟಿ ಎಂ.ಪಿ.ವರ್ಷ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10.30ಕ್ಕೆ ಮೈಸೂರಿನ ಗೌರಿಶಂಕರನಗರದಲ್ಲಿ ನೂತನವಾಗಿ ನಿರ್ಮಿಸಿರುವ ವನಿತಾಶ್ರೀ ಮಹಿಳಾ ಮತ್ತು ಯುವ ಸಬಲೀಕರಣ ಕೇಂದ್ರ ಹಾಗೂ ಮನೋಲ್ಲಾಸ ಆಪ್ತ ಸಮಾಲೋಚನಾ ಕೇಂದ್ರವನ್ನು ಜಿಲ್ಲಾ ಪಂಚಾಯತ್ ಸಿಇಒ ಕೆ.ಎಂ. ಗಾಯತ್ರಿ ಉದ್ಘಾಟಿಸಲಿದ್ದು, ಶಾಸಕ ಟಿ.ಎಸ್. ಶ್ರೀವತ್ಸ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದರು.

ಸಮಾಜದ ಅಭಿವೃದ್ಧಿಗಾಗಿ ಗುಣಮಟ್ಟದ ಸೇವೆ ಸಲ್ಲಿಸುವುದು ನಮ್ಮ ಸಂಸ್ಥೆಯ ಧ್ಯೇಯ. ಅದರ ಭಾಗವಾಗಿ ಮಹಿಳೆಯರು ಮತ್ತು ಯುವಕರಿಗೆ ಉದ್ಯಮಶೀಲತಾ, ಕೌಶಲ ಅಭಿವೃದ್ಧಿಗಾಗಿ ಸಬಲೀಕರಣ ಕೇಂದ್ರ, ವಿದ್ಯಾರ್ಥಿಗಳಿಗೂ ಸೇರಿದಂತೆ ಮಾನಸಿಕ ಹಾಗೂ ದೈಹಿಕ ಸಮಸ್ಯೆ ನಿವಾರಣೆಯ ಆಪ್ತ ಸಮಾಲೋಚನಾ ಕೇಂದ್ರವನ್ನು ಪ್ರಾರಂಭಿಸಲಾಗಿದ್ದು, ಕಟ್ಟಡವು ವ್ಯ'ಕ್ತಿ ಪ್ರ'ರ ಸಮಾಜ ಕಾರ್ಯಕರ್ತರಿಗೆ, ಶೈಕ್ಷಣಿಕ ಮತ್ತು ಉದ್ಯೋಗ ಕಾರ್ಯಕ್ಕೆ ನಗರಕ್ಕೆ ಬರುವ ವಿದ್ಯಾರ್ಥಿಗಳಿಗೆ ಅಲ್ಪಕಾಲದ ವಸತಿ ಸೌಕರ್ಯವನ್ನು ಕಲ್ಪಿಸಲಿದೆ. ಸ್ವಯಂ ಸೇವಾ ಸಂಸ್ಥೆಗಳಿಗೆ ಸಭಾಂಗಣವನ್ನು ಉಚಿತವಾಗಿ ನೀಡುವ ವ್ಯವಸ್ಥೆಯನ್ನು ಮಾಡಲಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಖಜಾಂಚಿ ಎಂ.ಆರ್.ಮಂಜುನಾಥ್, ಸಂಸ್ಥೆಯ ಸಮಾಲೋಚಕ ಪ್ರೊ.ಎಂ.ಎಸ್. ಮನೋನ್ಮಣಿ ಉಪಸ್ಥಿತರಿದ್ದರು.




ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆದ ವಲಯ ಮಟ್ಟದ ಕಬಡ್ಡಿ ಸ್ಪರ್ಧೆಯಲ್ಲಿ ಮೈಸೂರು ನೃಪತುಂಗ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಪ್ರಥಮ ಸ್ಥಾನವನ್ನು ಗಳಿಸಿದ್ದಾರೆ. ಚಿತ್ರದಲ್ಲಿ ಸಂಸ್ಥೆಯ ಕಾರ್ಯದರ್ಶಿ ಗಣಪತಿ ಎಚ್.ಜಿ.ಕೃಷ್ಣಪ್ಪ ಮತ್ತು ಸವಿತಾ ಪಿ.ಮಲ್ಲೇಶ್, ಖಜಾಂಚಿ ಹೆಚ್.ಟಿ. ಶೈಲಜಾ, ಮುಖ್ಯ ಶಿಕ್ಷಕರಾದ ಶೀಲಾ, ಸೌಮ್ಯಶ್ರೀ ಅವರನ್ನು ಕಾಣಬಹುದು.

ರಿಂಗ್ ರಸ್ತೆಯಲ್ಲಿ 'ಅಡ್ಡಾದಿಡ್ಡಿ' ಸರಕು ವಾಹನಗಳಿಗೆ ಕಡಿವಾಣ





ಸಂಚಾರ ನಿಯಮ ಧಿಕ್ಕರಿಸಿ ಸಂಚರಿಸುತ್ತಿರುವ ವಾಹನಗಳು; ಭಾರಿ ಅನಾಹುತದ ಆತಂಕ



ಮೈಸೂರು,ಆ.22(ಜಿಎ)– ಮೈಸೂರು ರಿಂಗ್ ರಸ್ತೆಯಲ್ಲಿ ಅಡ್ಡಾದಿಡ್ಡಿಯಾಗಿ ಸಂಚರಿಸುತ್ತಿದ್ದ ಭಾರಿ ಸರಕು ವಾಹನಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಮುಂದಾಗಿದ್ದು, ಇಂತಹ ಸ್ಥಳಗಳಲ್ಲಿ ಸಿಬ್ಬಂದಿ ನಿಯೋಜನೆ ಮಾಡಿದ್ದಾರೆ.

ರಿಂಗ್ ರಸ್ತೆಯಲ್ಲಿ ಭಾರಿ ಸರಕು ವಾಹನಗಳು ಅಡ್ಡಾದಿಡ್ಡಿಯಾಗಿ ಸಂಚರಿಸುತ್ತಿದ್ದು, ಸಾರ್ವಜನಿಕರು ಜೀವವನ್ನು ಕೈಯಲ್ಲಿ ಹಿಡಿದು ರಸ್ತೆ ದಾಟುವ ಸ್ಥಿತಿ ನಿರ್ಮಾಣವಾಗುತ್ತಿದೆ ಎಂದು 'ಮೈಸೂರು ಮಿತ್ರ'ನ ಆ.17ರ ಸಂಚಿಕೆಯಲ್ಲಿ 'ಸಂಚಾರ ನಿಯಮ ಧಿಕ್ಕರಿಸಿ ಸಂಚರಿಸುತ್ತಿರುವ ವಾಹನಗಳು; ಭಾರಿ ಅನಾಹುತದ ಆತಂಕ' ಎಂಬ ಶೀರ್ಷಿಕೆಯಡಿ ಸುದ್ದಿ ಪ್ರಕಟ ಮಾಡಲಾಗಿತ್ತು. ಅದರ ಪರಿಣಾಮ ಈಗ ಇಂತಹ ಸ್ಥಳಗಳಲ್ಲಿ ಟ್ರಾಫಿಕ್ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ.

ರಿಂಗ್ ರಸ್ತೆಯ ಅನೇಕ ಸ್ಥಳಗಳಲ್ಲಿ ಯೂಟರ್ನ್ ತೆಗೆದುಕೊಂಡು ಸರ್ವಿಸ್ ರಸ್ತೆಯಲ್ಲಿ ಸಂಚರಿಸಬೇಕಿರುವ ಸರಕು ವಾಹನಗಳು ಯೂಟರ್ನ್ ತೆಗೆದುಕೊಳ್ಳದೆ ಮುಖ್ಯ ರಸ್ತೆಯಲ್ಲೂ ವಿರುದ್ಧ ದಿಕ್ಕಿನಲ್ಲಿ ಚಲಿಸುತ್ತಿತ್ತು. ಇದರಿಂದ ಮುಖ್ಯ ರಸ್ತೆಯಲ್ಲಿ ವೇಗವಾಗಿ ಬರುವ ದ್ವಿಚಕ್ರ, ಕಾರು, ಸೈಕಲ್ ಸವಾರರು ವಿಚಲಿತರಾಗಿ ಹಲವಾರು ಅಪಘಾತ ಸಂಭವಿಸಿತ್ತು. ಈ ಬಗ್ಗೆ ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದರು.

ಈ ವರದಿಯಿಂದ ಎಚ್ಚೆತ್ತ ಪೊಲೀಸ್ ಇಲಾಖೆ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜನೆ ಮಾಡಿರುವುದರಿಂದ ಯೂಟರ್ನ್ ತೆಗೆದುಕೊಂಡು ಸಂಚಾರಿ ನಿಯಮ ಪಾಲಿಸುತ್ತಿದ್ದಾರೆ. ಪೊಲೀಸ್ ಇಲಾಖೆಯ ಈ ಕಾರ್ಯಕ್ಕೆ ಸಾರ್ವಜನಿಕರಿಂದ ಭಾರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಕಾವೇರಿ ನೀರು ಹಂಚಿಕೆ ವಿವಾದ: ಅರ್ಜಿ ವಿಚಾರಣೆಗೆ ತ್ರಿಸದಸ್ಯ ಪೀಠ ರಚನೆ ಮಾಡಿದ ಸುಪ್ರೀಂಕೋರ್ಟ್

ಬೆಂಗಳೂರು: ಕರ್ನಾಟಕ ಮತ್ತು ತಮಿಳುನಾಡಿನ ನಡುವೆ ಮತ್ತೆ ತಿಕ್ಕಾಟಕ್ಕೆ ಕಾರಣವಾಗಿರುವ ಕಾವೇರಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ವಿಚಾರಣೆಗಾಗಿ ಸುಪ್ರೀಂ ಕೋರ್ಟ್ ಇಂದು ತ್ರಿಸದಸ್ಯ ಪೀಠ ರಚನೆ ಮಾಡಿದೆ.

ಕರ್ನಾಟಕಕ್ಕೆ ನೀರು ಬಿಡುವಂತೆ ಸೂಚಿಸಬೇಕು ಎಂದು ಆಗ್ರಹಿಸಿ ತಮಿಳುನಾಡು ಸಲ್ಲಿಸಿದ್ದ ಅರ್ಜಿಯ ವಿಚಾರಣೆಗಾಗಿ ಸುಪ್ರೀಂ ಕೋರ್ಟ್ ಪ್ರತ್ಯೇಕ ಪೀಠ ರಚನೆಗೆ ಒಪ್ಪಿಗೆ ನೀಡಿತ್ತು. ಅದರಂತೆ ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿ ಬಿಆರ್ ಗವಾಯಿ, ನ್ಯಾಯಮೂರ್ತಿ ಪಿಎಸ್ ನರಸಿಂಹ, ನ್ಯಾಯಮೂರ್ತಿ ಪಿಕೆ ಮಿಶ್ರಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠ ರಚನೆ ಮಾಡಿದ್ದು ಶುಕ್ರವಾರದಿಂದ ವಿಚಾರಣೆ ನಡೆಯಲಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.8.2023 ಬುಧವಾರ, ಮಳೆ ನಕ್ಷತ್ರ: ಮಖ 17.08.2023 ರಿಂದ 30.08.2023

ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ,

ತಿಥಿ: ಸಪ್ತಮಿ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಲಯನ್ಸ್ ಕ್ಲಬ್ ಆಫ್ ಮೈಸೂರು ನಿರ್ಮಲ್, ಲಯನ್ಸ್ ಕ್ಲಬ್ ಆಫ್ ಮಯೂರಿ, ಲಿಯೋ ಕ್ಲಬ್ ಆಫ್ ಮೈಸೂರು ಯುರೇಕ್, ಮೈಸೂರು ಡಿಸ್ಟ್ರಿಕ್ ಚೆಫ್ ಅಸೋಸಿಯೇಷನ್:** ಉಚಿತ ಅಕ್ಯುಪ್ರೆಶರ್, ಸುಜೋಕ್ ಮ್ಯಾಗ್ನೆಟ್ ಮತ್ತು ವೈಬ್ರೇಷನ್ ತೆರಪಿ ಚಿಕಿತ್ಸೆ, ಸ್ಥಳ: ರಾಹುಲ್ ಕನ್ವೆನ್ಷನ್ ಹಾಲ್, ವಿಶ್ವೇಶ್ವರನಗರ, ಬೆಳಿಗ್ಗೆ 8ರಿಂದ ಮಧ್ಯಾಹ್ನ 12 ಗಂಟೆವರೆಗೆ, ಸಂಜೆ 4ರಿಂದ 8ರವರೆಗೆ.

■ **ಜೆಎಸ್ಎಸ್ ಮೈಸೂರು ಅರ್ಬನ್ ಹಾತ್:** ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ವಸ್ತ್ರ ಉತ್ಸವ–2023, ಸ್ಥಳ: ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ರಿಂಗ್ ರೋಡ್, ಬೆಳಿಗ್ಗೆ 10ರಿಂದ ರಾತ್ರಿ 9ರವರೆಗೆ.

■ **ಅನ್ನಪೂರ್ಣ ಕಣ್ಣಿನ ಆಸ್ಪತ್ರೆ:** ಗೌರಿ ಗಣೇಶ ಹಬ್ಬದ ಪ್ರಯುಕ್ತ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರ, ಸ್ಥಳ: ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ಶಾರದಾದೇವಿನಗರ, ಬೆಳಿಗ್ಗೆ 10ರಿಂದ.

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ, ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಕೆ.ಅನಂತರಾಮು ಅವರಿಂದ ಲಕ್ಷ್ಮಣ ದಂಡೇಶ ವಿರಚಿತ ಶಿವತತ್ವ ಚಿಂತಾಮಣಿ ಕುರಿತು ಪ್ರವಚನ, ವಾಚನ: ನಿವೃತ್ತ ಕಾರ್ಯಪಾಲಕ ಅಭಿಯಂತರ ವಿದ್ವಾನ್ ಕೃ.ರಾಮಚಂದ್ರ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6ಕ್ಕೆ.

■ **ಸನಾತನ ಸಭಾ, ಮೈಸೂರು:** ರಾಮಾಯಣ ಪ್ರವಚನ ಮಾಲಿಕೆ ಏಳನೇ ಸರಣಿ, ವಿದ್ವಾನ್ ಗ.ನಾ. ಭಟ್ಟ ಅವರಿಂದ ಶ್ರೀ ಮದ್ವಾಲ್ಮೀಕಿ ರಾಮಾಯಣದ ಕಿಷ್ಕಿಂಧಾಕಾಂಡ ಕುರಿತು ಪ್ರವಚನ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಕೆ.ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 6.30ರಿಂದ 8ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಜಿಎಸ್‌ಎಸ್ ಯೋಗದ ಮಾತು, ಪ್ರಸ್ತುತಿ– ಡಿ. ಶ್ರೀಹರಿ, 6.40 ಪದಸಂಸ್ಕೃತಿ, ಪ್ರಸ್ತುತಿ– ಡಾ. ಸಂಗಮೇಶ್ ಸವದತ್ತಿ ಮಠ, 7.15 ಭಾವಗೀತೆಗಳು –ಸಿ. ಅಶ್ವಥ್, ಶಂಕರ್ ಶ್ಯಾನುಭೋಗ್, 9.05 ವಸುದೈವ ಕುಟುಂಬಕಂ – ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 9.10 ವೃತ್ತಿ ಮಾರ್ಗದರ್ಶನ, ಸ್ಪೋರ್ಟ್ಸ್ ನ್ಯೂಟ್ರಿಷನ್ ಅಂಡ್ ಮ್ಯಾನೇಜ್‌ಮೆಂಟ್ ವಿಷಯದಲ್ಲಿ ಇರುವ ವೃತ್ತಿಪರ ಅವಕಾಶಗಳು ಕುರಿತು ಡಾ. ಇ. ಶ್ವೇತಾ ಅವರೊಂದಿಗೆ ಮಾತುಕತೆಯಲ್ಲಿ ಭಾಗವಹಿಸುವವರು ಬೇದ್ರೆ ಮಂಜುನಾಥ್, 9.30 ಚಿತ್ರಗೀತೆ, 10.00 ಹಿಂದೂಸ್ತಾನಿ ಸಂಗೀತ– ಭಾರತಿ ಬಾಲಕೃಷ್ಣ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ–ಅಂಬಯ್ಯನುಲಿ, ರೇಖಾ ವೆಂಕಟೇಶ್, 12.45 ಜನಪದ ಸಂಗೀತ –ಮಾಯಮ್ಮ ಮತ್ತು ಸಂಗಡಿಗರು, 1.20 ಭಾವಗೀತೆಗಳು–ವೃಂದಗಾನ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ– ತಾಳ, ಲಯ ರಸಾಸ್ವಾದ. ವಿಷಯ– ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿಗಳಲ್ಲಿ ಮೃದಂಗದ ಪಾತ್ರವನ್ನು ತಿಳಿಸಿಕೊಡುತ್ತಾರೆ ಸಂಗೀತ ವಿದ್ವಾಂಸರಾದ ಡಾ. ಸುಕನ್ಯಾ ಪ್ರಭಾಕರ್ ಪರಿಕಲ್ಪನೆ ಹಾಗೂ ಪ್ರಸ್ತುತಿ– ಹೆಚ್.ಎಲ್.ಶಿವಶಂಕರ ಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ, ಭಾಗವಹಿಸುವವರು ಡಾ. ಸುಷ್ಮಾ ಕೃಷ್ಣಮೂರ್ತಿ, 4.45 ಹಿಂದಿ ಪಾಠ –ಡಾ.ಮಾಧವಿ ಭಂಡಾರಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ– ಸಾವಯವ ಸಂಪದ–ಜೈವಿಕ ಗೊಬ್ಬರದ ಮಹತ್ವ ಕುರಿತು ಡಾ. ಎನ್.ಎನ್.ಅಶಾ ಅವರೊಂದಿಗೆ ಸಂದರ್ಶನ, ಪ್ರಸ್ತುತಿ–ಎನ್.ಕೇಶವಮೂರ್ತಿ, 9.30 ಹಿಂದೂಸ್ತಾನಿ ಸಂಗೀತ–ಉಸ್ತಾದ್ ಬಿಸ್ಮಿಲ್ಲಾ ಖಾನ್–ಷಹನಾಯ್ ವಾದನ, 10.00 ಜನಪದ ಸಂಗೀತ– ಬಸವನಹಳ್ಳಿ ತಂಬೂರಿ ರಾಚಪ್ಪ ಮತ್ತು ಸಂಗಡಿಗರು

ಚಾ.ನಗರ, ಕೊಡಗಲ್ಲಿ ಉಪಟಳ ನೀಡುವ ಪುಂಡಾನೆಗಳಿಗೆ ರೇಡಿಯೋ ಕಾಲರ್ ಅಳವಡಿಕೆ

ಹಾಲಿ ಇರುವ ಕ್ಷಿಪ್ರ ಕಾರ್ಯಪಡೆ ಸಾಮರ್ಥ್ಯ ಹೆಚ್ಚಳಕ್ಕೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ

ಬೆಂಗಳೂರು,ಆ.22–ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳಲ್ಲಿ ಆನೆಗಳ ಉಪಟಳ ಹೆಚ್ಚಾಗಿದೆ. ಈ ನಿಟ್ಟಿನಲ್ಲಿ ಕಾಡಾನೆಗಳಿಗೆ ರೇಡಿಯೋ ಕಾಲರ್ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ಆ.13ರಿಂದ ಇಲ್ಲಿವರೆಗೆ ಕಾಡಾನೆಗಳ ದಾಳಿಯಿಂದ ಐವರು ಮೃತಪಟ್ಟಿರುವ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ, ಕಾಡಂಚಿನಲ್ಲಿರುವ ಜನರಲ್ಲಿ ಈ ಸಂಬಂಧ ಹೆಚ್ಚಿನ ಜಾಗೃತಿ ಮೂಡಿಸಲು ಮತ್ತು ಮುನ್ನೆಚ್ಚರಿಕಾ ಕ್ರಮ ವಹಿಸಲು ಅರಣ್ಯಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅರಣ್ಯ ಇಲಾಖೆ ಉನ್ನತಾಧಿಕಾರಿಗಳೊಂದಿಗೆ ವಿಕಾಸ ಸೌಧದಲ್ಲಿ ಸಭೆ ನಡೆಸಿದ ಸಚಿವರು, ಮಾನವ–ವನ್ಯಮೃಗಗಳ ಸಂಘರ್ಷ ಹೆಚ್ಚುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ಅಮೂಲ್ಯವಾದ ಮಾನವ ಪ್ರಾಣಹಾನಿ ಆಗಬಾರದು, ಅದೇ ವೇಳೆ ವನ್ಯಮೃಗಗಳೂ ಅಕ್ರಮ ವಿದ್ಯುತ್ ಬೇಲಿ ಸ್ಪರ್ಶ ಹಾಗೂ ಬೇಲಿಯಲ್ಲಿ ಹಾಕುವ ಉರುಳಿಗೆ ಸಿಲುಕಿ ಸಾವಿಗೀಡಾಗಬಾರದು. ಈ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶಿಸಲು, ಸೂಚಿಸಿದರು.





> ಜನವಸತಿ ಪ್ರದೇಶ, ರೈತರ ತೋಟ, ಗದ್ದೆಗಳ ಬಳಿ ಆನೆಗಳು ಕಾಣಿಸಿಕೊಂಡಾಗ ತುರ್ತಾಗಿ ಅವುಗಳನ್ನು ಕಾಡಿಗಟ್ಟಲು ಕ್ರಮ ಕೈಗೊಳ್ಳಬೇಕು. ಹಾಗೆಯೇ ಸುತ್ತಮುತ್ತಲ ಜನರಿಗೆ ವಾಟ್ಸಾಪ್, ಎಸ್‌ಎಂಎಸ್ ಮತ್ತು ಸಾರ್ವಜನಿಕ ಪ್ರಚಾರ ವಿಧಾನಗಳ ಮೂಲಕ ಮಾಹಿತಿ ನೀಡಿ, ಜೀವಹಾನಿ ತಗ್ಗಿಸಿ.
> – ಈಶ್ವರ ಖಂಡ್ರೆ, ಸಚಿವ

ಆನೆ ಕಾರ್ಯಪಡೆಯಲ್ಲಿನ ಗುಂಪು ಹೆಚ್ಚಳ: ಆನೆಗಳ ಹಾವಳಿ ಹೆಚ್ಚಾಗಿರುವ ಚಾಮರಾಜನಗರ ಮತ್ತು ಕೊಡಗು ಭಾಗದಲ್ಲಿ ಕಾಡಾನೆಗಳನ್ನು ತಕ್ಷಣವೇ ಮತ್ತೆ ಕಾಡಿಗೆ ಓಡಿಸಲು ಹಾಲಿ ಕಾರ್ಯನಿರ್ವಹಿಸುತ್ತಿರುವ ಕ್ಷಿಪ್ರ ಕಾರ್ಯಪಡೆಗಳ ಸಾಮರ್ಥ್ಯ ಹೆಚ್ಚಿಸುವಂತೆ ಈಶ್ವರ ಖಂಡ್ರೆ ಸೂಚನೆ ನೀಡಿದರು.

ರೇಡಿಯೋ ಕಾಲರ್: ಎಲ್ಲ ಆನೆಗಳೂ ನಾಡಿಗೆ ಬರುವುದಿಲ್ಲ. ಕೆಲವು ಆನೆಗಳು ಮಾತ್ರವೇ ಪದೇ ಪದೇ ನಾಡಿಗೆ ದಾಳಿ ಇಟ್ಟು ಹಾನಿ ಮಾಡುತ್ತವೆ. ಇಂತಹ ಆನೆಗಳನ್ನು ಗುರುತಿಸಿ ರೇಡಿಯೋ ಕಾಲರ್ ಅಳವಡಿಸಲಾಗುತ್ತಿದೆ ಎಂದು ಅಧಿಕಾರಿಗಳು ಸಚಿವರಿಗೆ ವಿವರಿಸಿದರು.

ಪ್ರಸ್ತುತ ರಾಜ್ಯದಲ್ಲಿ ಇಂತಹ 14 ಕಾಡಾನೆಗಳಿಗೆ ರೇಡಿಯೋ ಕಾಲರ್ ಅಳವಡಿಸಲಾಗಿದೆ. ಇದರಿಂದ ಆನೆಗಳ ಚಲನವಲನದ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಾಗುತ್ತದೆ. ಅರಣ್ಯ ಇಲಾಖೆಯಲ್ಲಿ ಪ್ರಸ್ತುತ ಇನ್ನೂ 30 ರೇಡಿಯೋ ಕಾಲರ್ ಲಭ್ಯವಿದ್ದು, ಪುಂಡಾನೆಗಳನ್ನು ಸೆರೆ ಹಿಡಿದು ಕಾಡಿಗೆ ಬಿಡುವ ಮೊದಲು ಅವುಗಳಿಗೆ ರೇಡಿಯೋ ಕಾಲರ್ ಅಳವಡಿಸಲಾಗುತ್ತಿದೆ. ಹಿಂದೆ ವಿಶ್ವ ವನ್ಯಜೀವಿ ನಿಧಿಗಾಗಿ ಕಾಯಬೇಕಾಗುತ್ತಿತ್ತು, ಈಗ ಇಲಾಖೆಯೇ ರೇಡಿಯೋ ಕಾಲರ್ ಖರೀದಿ ಮಾಡುತ್ತಿದೆ. ಪ್ರತಿ ರೇಡಿಯೋ ಕಾಲರ್‌ಗೆ ಸುಮಾರು 7 ಲಕ್ಷ ವೆಚ್ಚವಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ರೈಲ್ವೆ ಬ್ಯಾರಿಕೇಡ್: ಕಾಡಾನೆಗಳು ನಾಡಿಗೆ ಬಾರದಂತೆ ತಡೆಯಲು ಅರಣ್ಯದಂಚಿನಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಸುವುದು ಉತ್ತಮ ವಿಧಾನವಾಗಿದೆ. ಆನೆಗಳು ಹೆಚ್ಚಾಗಿ ನಾಡಿನತ್ತ ಬರುವ ಪ್ರದೇಶಗಳನ್ನು ಗುರುತಿಸಿ ಬ್ಯಾರಿಕೇಡ್ ಹಾಕಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಕಾಂಬೋಡಿಯಾ ಪ್ರವಾಸ ಕೈಗೊಂಡಿರುವ ಉಬುಂಟು ಮಹಿಳಾ ಉದ್ಯೋಗಿಗಳ ನಿಯೋಗಕ್ಕೆ ಸಿದ್ದರಾಮಯ್ಯ ಶುಭ ಹಾರೈಕೆ



ಬೆಂಗಳೂರು, ಆ.22– ಕಾಂಬೋಡಿಯಾ ದೇಶಕ್ಕೆ ತೆರಳುತ್ತಿರುವ ಉಬುಂಟು ಮಹಿಳಾ ಉದ್ಯಮಿಗಳ ನಿಯೋಗವು ಮಂಗಳವಾರ ಉಬುಂಟು ಅಧ್ಯಕ್ಷರು ಹಾಗೂ ಸಂಸ್ಥಾಪಕರಾದ ರತ್ನಪ್ರಭಾ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿತು.

ದೆಹಲಿ, ಜೈಪುರ, ಕೊಲ್ಕತ್ತಾ, ವಿಶಾಖಪಟ್ಟಣಂ, ಬೆಂಗಳೂರು, ಮೈಸೂರು, ಚೆನ್ನೈ, ಮುಂಬೈ, ಹೈದರಾಬಾದ್, ಕೊಚ್ಚಿನ್ ಮಹಿಳೆಯರು ನಿಯೋಗದಲ್ಲಿದ್ದು, ಇದೇ 26–29ರವರೆಗೆ ಮೂರು ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಭಾರತ ಹಾಗೂ ಕಾಂಬೋಡಿಯಾ ಸಂಸ್ಥೆಗಳ ನಡುವೆ 5 ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆ ಇದೆ ಎಂದು ರತ್ನಪ್ರಭಾ ವಿವರಿಸಿದರು.

ಉಬುಂಟು ಸಂಸ್ಥಾಪಕರಾದ ರತ್ನಪ್ರಭಾ, ವಾಣಿಜ್ಯ ಮತ್ತು ಕೈಗಾರಿಕೆಗಳ ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷರಾದ ಛಾಯಾ ನಂಜಪ್ಪ, ಎಫ್.ಕೆ.ಸಿ.ಸಿ.ಐ. ಸೇರಿದಂತೆ ವಿವಿಧ ಸಂಸ್ಥೆಯ ಪ್ರತಿನಿಧಿಗಳು ನಿಯೋಗದಲ್ಲಿದ್ದಾರೆ. ಕಾಂಬೋಡಿಯಾ ಪ್ರವಾಸ ಫಲಪ್ರದವಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭ ಹಾರೈಸಿದರು.

ಚುನಾವಣಾ ರಾಜಕೀಯಕ್ಕೆ ಬಿಜೆಪಿ ಸಂಸದ ಬಿ.ಎನ್.ಬಚ್ಚೇಗೌಡ ನಿವೃತ್ತಿ ಘೋಷಣೆ

ಹೆಚ್ಚುವರಿ ಅಕ್ಕಿ ಕೊಡದ್ದಕ್ಕೆ ಕೇಂದ್ರದ ವಿರುದ್ಧ ವಾಗ್ದಾಳಿ

ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಬಿಜೆಪಿ ಸಂಸದ ಬಿಎನ್ ಬಚ್ಚೇಗೌಡ ಅವರು ಮಂಗಳವಾರ ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಣೆ ಮಾಡಿದ್ದಾರೆ.



ಪ್ರಧಾನಿ ನರೇಂದ್ರ ಮೋದಿ ಅವರ ಪ್ರಕಾರ ಪಕ್ಷದಲ್ಲಿ 75 ವರ್ಷ ವಯಸ್ಸಿಗೆ ನಿವೃತ್ತಿಯಾಗಬೇಕು. ಈಗ ನನಗೆ 81 ವರ್ಷ ವಯಸ್ಸಾಗಿದೆ. ನನಗೆ ಪಕ್ಷದಲ್ಲಿ ಟಿಕೆಟ್ ಕೊಡುವುದಿಲ್ಲ ಅಂತ ಪ್ರಧಾನಿ ಮೋದಿ ಹೇಳಿಬಿಟ್ಟಿದ್ದಾರೆ. ಹೀಗಾಗಿ ನಿವೃತ್ತಿಯಾಗುತ್ತಿದ್ದೇನೆ ಎಂದು ಬಚ್ಚೇಗೌಡ ಹೇಳಿದ್ದಾರೆ.

ಮೋದಿ ಅವರು ಬಿಜೆಪಿಯಲ್ಲಿ ಒಂದು ಕುಟುಂಬಕ್ಕೆ ಒಂದು ಟಿಕೆಟ್ ಎಂದು ಘೋಷಣೆ ಮಾಡಿದ್ದಾರೆ. ತಂದೆ, ಮಗ, ಮೊಮ್ಮಗ, ಮೊಮ್ಮಗಳು ರಾಜಕಾರಣಕ್ಕೆ ಅವಕಾಶ ಇಲ್ಲ ಎಂದು ಹೇಳಿದ್ದಾರೆ. ಹೀಗಾಗಿ ನಿವೃತ್ತಿಯಾಗುತ್ತಿದ್ದೇನೆ ಎಂದು ಬಚ್ಚೇಗೌಡ ತಿಳಿಸಿದ್ದಾರೆ.

ಚುನಾವಣಾ ರಾಜಕೀಯದಲ್ಲಿ ಇರದಿದ್ದರೂ ರಾಜಕಾರಣದಲ್ಲಿ ಸಕ್ರಿಯವಾಗಿ ಕೆಲಸ ಮಾಡಿಕೊಂಡು ಇರುತ್ತೇನೆ ಎಂದು ಬಿಜೆಪಿ ಸಂಸದ ಹೇಳಿದ್ದಾರೆ.

ಕೇಂದ್ರದ ವಿರುದ್ಧ ವಾಗ್ದಾಳಿ: ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ ಬೆನ್ನಲ್ಲೇ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಬಚ್ಚೇಗೌಡ, ರಾಜ್ಯಕ್ಕೆ ಹೆಚ್ಚುವರಿ ಅಕ್ಕಿ ನೀಡದ ಕೇಂದ್ರ ಸರ್ಕಾರದ ಕ್ರಮ ಸರಿ ಇಲ್ಲ ಎಂದು ಸ್ವಪಕ್ಷ ಸರ್ಕಾರದ ವಿರುದ್ಧವೇ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರ ಹಣ ನೀಡುತ್ತೇವೆ ಎಂದರೂ ಅಕ್ಕಿ ನೀಡದಿರುವುದು ತಪ್ಪು. ನಾನು ರಾಜ್ಯದ ಸಂಸದನಾಗಿ ಹೇಳುತ್ತಿದ್ದೇನೆ. ಅಕ್ಕಿ ಕೊಡದಿರುವುದು ತಪ್ಪು. ಕೇಂದ್ರದ ಬಿಜೆಪಿ ಸರ್ಕಾರ ಕರ್ನಾಟಕಕ್ಕೆ ಅಕ್ಕಿ ಕೊಡದೆ ಅನ್ಯಾಯ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

ನಾಳೆ ರಂಗಯಾತ್ರೆ ಸಾಕ್ಷ್ಯಚಿತ್ರ ಬಿಡುಗಡೆ



ಮೈಸೂರು,ಆ.22(ಜಿಎ)–ಕದಂಬ ರಂಗ ವೇದಿಕೆಯ ಆರು ದಶಕಗಳ ರಂಗ ಯಾತ್ರೆಯನ್ನು ತೋರುವ ಸಾಕ್ಷ್ಯಚಿತ್ರವೂ ಆ.24ರಂದು ಬಿಡುಗಡೆಯಾಗಲಿದೆ ಎಂದು ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 5.30ಕ್ಕೆ ನಗರದ ರಂಗಾಯಣದ ಶ್ರೀರಂಗ ವೇದಿಕೆಯಲ್ಲಿ 30 ನಿಮಿಷದ ಸಾಕ್ಷ್ಯಚಿತ್ರದಲ್ಲಿ ರಂಗವೇದಿಕೆ ಹುಟ್ಟಿದ ರೀತಿ ಮತ್ತು ನಡೆದು ಬಂದ ಹಾದಿಯನ್ನು ಅನೇಕ ಛಾಯಾಚಿತ್ರಗಳು ಮತ್ತು ಖ್ಯಾತನಾಮರ ಮಾತುಗಳೊಂದಿಗೆ ತಿಳಿಸಲಾಗುವುದು. ಸಾಕ್ಷ್ಯಚಿತ್ರವನ್ನು ರಂಗಕರ್ಮಿ ಎನ್.ಧನಂಜಯ್ ಸಾಹಿತ್ಯ ಮತ್ತು ನಿರೂಪಣೆ ಮಾಡಿದ್ದು, ಕಲಾವಿದ ಡಿ.ಮಧು ನಿರ್ದೇಶಿಸಿದ್ದಾರೆ ಎಂದರು.

ಹಿರಿಯ ರಂಗಕರ್ಮಿ ಮೈಮ್ ರಮೇಶ್ ಸಾಕ್ಷ್ಯಚಿತ್ರ ಬಿಡುಗಡೆ ಮಾಡಲಿದ್ದಾರೆ. ಅತಿಥಿಗಳಾಗಿ ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಅಧ್ಯಕ್ಷ ಹೆಚ್.ಎಸ್.ಸುರೇಶ್ ಬಾಬು, ನಟ ಹೆಚ್.ಆರ್.ರವಿಪ್ರಸಾದ್ ಆಗಮಿಸಲಿದ್ದಾರೆ. ಈ ವೇಳೆ ಧನಂಜಯ್ ಹಾಗೂ ಮಧು ಅವರನ್ನು ಅಭಿನಂದಿಸಲಾಗುವುದು ಎಂದರು. ಗೋಷ್ಠಿಯಲ್ಲಿ ಕನ್ನಡ ಸಾಹಿತ್ಯ ಕಲಾಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ವೇದಿಕೆ ಸದಸ್ಯರಾದ ಡಿ ಅಶ್ವತ್ಥ ಕದಂಬ, ಪವಿತ್ರಾ ಫಣಿ ಉಪಸ್ಥಿತರಿದ್ದರು.



ಮೈಸೂರು ತಾಲೂಕು ಏಕಲವ್ಯನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಲೋಕೋಪಯೋಗಿ ಇಲಾಖೆ ನಿವೃತ್ತ ಅಧೀಕ್ಷಕಿ ಟಿ.ಕೆ.ಮಾಲಿನಿ ಅವರು ತಮ್ಮ ತಂದೆ–ತಾಯಿ (ಟಿ.ಕೆ.ದೇವಕಿ ಮತ್ತು ಟಿ.ಎಲ್.ಕೃಷ್ಣ ಉಪಾಧ್ಯಾಯ) ಅವರ ಸ್ಮರಣಾರ್ಥ ಒಂದು ಲಕ್ಷ ರೂ. ಮೌಲ್ಯದ ಪೀಠೋಪಕರಣ ಮತ್ತು ಪ್ರೊಜೆಕ್ಟರ್, ಸ್ಟೀಲ್ ರಾಕ್ ಸೇರಿದಂತೆ ಇತರ ವಸ್ತುಗಳನ್ನು ಕೊಡುಗೆಯಾಗಿ ನೀಡಿದರು. ಈ ವೇಳೆ ಲಯನ್ ಡಾ.ನಾಗರಾಜ ವಿ.ಬೈರಿ, ಕ್ಲಬ್‌ನ ಅಧ್ಯಕ್ಷ ಲಯನ್ ಎ.ಸಿ.ರವಿ, ಕಾರ್ಯದರ್ಶಿ ಲಯನ್ ಎನ್.ಸುನಿಲ್‌ಕುಮಾರ್, ಖಜಾಂಚಿ ಎಂ.ಜೆ.ರಮೇಶ್, ಕ್ಲಬ್‌ನ ಸದಸ್ಯರು, ಗ್ರಾಪಂ ಸದಸ್ಯರು, ಎಸ್‌ಡಿಎಂಸಿ ಉಪಾಧ್ಯಕ್ಷರು, ಮತ್ತಿತರರು ಉಪಸ್ಥಿತರಿದ್ದರು.

ಆಪರೇಷನ್ ಹಸ್ತ ಡಿಸೆಂಬರ್‌ಗೆ ಮುಂದೂಡಿಕೆ

● ಈಗ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದರೂ ತಕ್ಷಣ ಚುನಾವಣೆ ಸಾಧ್ಯವಿಲ್ಲ ● ತಕ್ಷಣಕ್ಕೆ ಶಾಸಕರ ಹೊರತು ಮಾಜಿ ಶಾಸಕರು, ಮುಖಂಡರ ಸೆಳೆಯಲು ಕಾಂಗ್ರೆಸ್ ನಿರ್ಧಾರ

ಬೆಂಗಳೂರು,ಆ.22(ಕೆಎಂಶಿ)–ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ಸದಸ್ಯರ ಕ್ಷೇತ್ರಗಳಿಗೆ ತಕ್ಷಣವೇ ಉಪಚುನಾವಣೆ ನಡೆಯುವುದಿಲ್ಲ ಎಂಬುದನ್ನು ಮನಗಂಡ ಕಾಂಗ್ರೆಸ್ ಆಪರೇಷನ್ ಹಸ್ತಾವನ್ನು ಡಿಸೆಂಬರ್‌ಗೆ ಮುಂದೂಡಿದೆ.

ಆದರೆ, ಮಾಜಿ ಸಚಿವ ವಿ.ಸೋಮಣ್ಣ ಸೇರಿದಂತೆ ಯಾವುದೇ ಸದನದ ಸದಸ್ಯರಲ್ಲದ, ಬಿಜೆಪಿಯ ಮುಖಂಡರನ್ನು ಪಕ್ಷಕ್ಕೆ ಸೇರಿಸಿಕೊಳ್ಳಲು ಕಾಂಗ್ರೆಸ್ ವೇದಿಕೆ ಸಿದ್ಧಪಡಿಸಿದೆ. ಬಿಜೆಪಿ ಶಾಸಕರ ಸೇರ್ಪಡೆಗೆ ವಿಳಂಬ ಧೋರಣೆ ಅನುಸರಿಸಿರುವ ಕಾಂಗ್ರೆಸ್, ಪ್ರಬಲ ಮುಖಂಡರನ್ನು ಸೇರಿಸಿಕೊಳ್ಳಲು ತೆರೆಮರೆಯಲ್ಲಿ ಮಾತುಕತೆ ನಡೆಸಿದೆ. ಆದರೂ ಕಾಂಗ್ರೆಸ್ ಸೇರಲು ಮುಂದಾಗಿರುವ ಬಿಜೆಪಿಯ ಕೆಲವು ಶಾಸಕರ ಬೆಂಬಲಿಗರು ಹಾಗೂ ಸ್ಥಳೀಯ ಮುಖಂಡರು ಈ ಕ್ಷಣದಿಂದಲೇ ಪಕ್ಷ ತೊರೆದು, 'ಕೈ' ಹಿಡಿಯಲಿ ಎಂಬ ಸಂದೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ರವಾನಿಸಿದ್ದಾರೆ.

ಮಾಜಿ ಸಚಿವರಾದ ಎಸ್.ಟಿ.ಸೋಮಶೇಖರ್, ಶಿವರಾಮ್ ಹೆಬ್ಬಾರ್ ಸೇರಿದಂತೆ ಕೆಲವು ಬಿಜೆಪಿ ಶಾಸಕರು ಬಹಿರಂಗವಾಗಿ, ಇನ್ನೂ ಕೆಲವರು ಗೌಪ್ಯವಾಗಿ ಮುಖ್ಯಮಂತ್ರಿ ಭೇಟಿಯಾಗಿ ಕಾಂಗ್ರೆಸ್ ಸೇರುವ ಬಗ್ಗೆ ಚರ್ಚೆ ನಡೆಸಿದ ಸಂದರ್ಭದಲ್ಲಿ ಈ ಕಿವಿಮಾತನ್ನು ಸಿದ್ದರಾಮಯ್ಯ ಹೇಳಿದ್ದಾರೆ. ತಕ್ಷಣಕ್ಕೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಪಕ್ಷ ತೊರೆದು ಬಂದರೂ ನಿಮ್ಮ ನಿಮ್ಮ ಕ್ಷೇತ್ರಗಳಿಗೆ 2024ರ ಏಪ್ರಿಲ್–ಮೇನಲ್ಲಿ ನಡೆಯುವ ಲೋಕಸಭಾ ಚುನಾವಣೆವರೆಗೂ ಉಪಚುನಾವಣೆ ನಡೆಯುವುದಿಲ್ಲ. ಆದ್ದರಿಂದ ತಕ್ಷಣ ದುಡುಕಿ ನಿರ್ಧಾರ ಕೈಗೊಳ್ಳದೆ, ಡಿಸೆಂಬರ್‌ನಲ್ಲಿ ವಿಧಾನಸಭಾ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿಕೊಳ್ಳಿ. ಅಲ್ಲಿಯವರೆಗೂ ನಿಮ್ಮ ಕ್ಷೇತ್ರದ ಜನಪ್ರತಿನಿಧಿಯಾಗಿ ಕೆಲಸ ಮಾಡಿ. ಈಗಲೇ ರಾಜೀನಾಮೆ ನೀಡಿದರೆ, ಆರೇಳು ತಿಂಗಳ ಕಾಲ ನಿಮಗೆ ಅಧಿಕಾರವಿಲ್ಲದಂತಾಗುತ್ತದೆ. ಲೋಕಸಭಾ ಚುನಾವಣೆಗೂ ಮುನ್ನವೇ ತಾಲೂಕು, ಜಿಲ್ಲಾ ಪಂಚಾಯ್ತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುತ್ತೇವೆ. ಈ ಚುನಾವಣೆಯಲ್ಲಿ ಸ್ಪರ್ಧಿಸಲು ನಿಮ್ಮ ಬೆಂಬಲಿಗರು ಸಮರ್ಥರಿದ್ದರೆ, ಅಂತಹ ಮುಖಂಡರು ಹಾಗೂ ಕಾರ್ಯಕರ್ತರು ಕೂಡಲೇ ಬಿಜೆಪಿ ತೊರೆದು ಕಾಂಗ್ರೆಸ್‌ಗೆ ಸೇರ್ಪಡೆಗೊಳ್ಳಲಿ ಎಂಬ ಸಲಹೆ ನೀಡಿದ್ದಾರೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಪರೋಕ್ಷವಾಗಿ ಕೆಲಸ ಮಾಡಿ ನಿಮ್ಮ ಬೆಂಬಲಿಗರನ್ನೇ ಗೆಲ್ಲಿಸಿಕೊಳ್ಳಿ ಎಂದು ತಿಳಿ ಹೇಳಿದ್ದಾರೆ. ಮುಖ್ಯಮಂತ್ರಿ ಅವರ ಈ ಸಂದೇಶದ ನಂತರ ಬಿಜೆಪಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದವರು ತಾತ್ಕಾಲಿಕವಾಗಿ ಹಿಂದೆ ಸರಿದಿದ್ದಾರೆ. ಆದರೆ, ಅವರ ಬೆಂಬಲಿಗರ ಒಂದು ತಂಡ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಬಿಜೆಪಿ ಮತ್ತು ಜೆಡಿಎಸ್ ತೊರೆದು ಕೈ ಹಿಡಿದಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು: ಕನ್ನಡ ವೇದಿಕೆ ಪ್ರತಿಭಟನೆ

ಮೈಸೂರು,ಆ.22(ಪಿಎಂ)–ಕಾವೇರಿ ನೀರನ್ನು ತಮಿಳುನಾಡಿಗೆ ಬಿಡುತ್ತಿರುವುದನ್ನು ಖಂಡಿಸಿ ಮೈಸೂರು ಕನ್ನಡ ವೇದಿಕೆ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.



ಮೈಸೂರಿನ ಡಾ.ರಾಜ್‌ಕುಮಾರ್ ಉದ್ಯಾನವನದ ಮುಖ್ಯ ದ್ವಾರದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯದಲ್ಲಿ ನೀರು ಇಲ್ಲದಿದ್ದರೂ ತಮಿಳುನಾಡಿಗೆ ನೀರು ಬಿಡುತ್ತಿರುವ ಸರ್ಕಾರದ ಕ್ರಮ ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾವೇರಿ ತೀರದ ಜಲಾಶಯಗಳು ಭರ್ತಿಯಾಗದೇ ಇದ್ದರೂ ನೀರನ್ನು ತಮಿಳುನಾಡಿಗೆ ಹರಿಸಲಾಗುತ್ತಿದೆ. ರಾಜ್ಯದಲ್ಲಿ ಏಕೈಕ ಪಕ್ಷವನ್ನು ಅಧಿಕಾರಕ್ಕೆ ತಂದು ಹಾಗೂ ಅತಿ ಹೆಚ್ಚಿನ ಬಿಜೆಪಿ ಸಂಸದರನ್ನು ರಾಜ್ಯದಿಂದ ಆಯ್ಕೆ ಮಾಡಿದ್ದರೂ ಕಷ್ಟ ಕಾಲದಲ್ಲಿ ಯಾವುದೇ ಪ್ರಯೋಜನವಾಗಿಲ್ಲ ಎಂದು ಕಿಡಿಕಾರಿದರು.

ಇಂತಹ ರಾಜಕೀಯ ಪಕ್ಷಗಳು, ರಾಜಕಾರಣಿಗಳಿಂದ ನಮ್ಮ ನೆಲ, ಜಲವನ್ನು ಸಂರಕ್ಷಣೆ ಮಾಡಲು ಸಾಧ್ಯವೇ ಎಂಬ ಪ್ರಶ್ನೆ ಎದುರಾಗಿದೆ. ಇಂತಹ ಹದಗೆಟ್ಟ ರಾಜಕೀಯ ವ್ಯವಸ್ಥೆಯಿಂದ ರಾಜ್ಯಕ್ಕೆ ನಿರಂತರವಾಗಿ ಅನ್ಯಾಯವೇ ಆಗುತ್ತಿದೆ. ಇನ್ನಾದರೂ ಎಚ್ಚೆತ್ತು ಕಾವೇರಿ ನದಿ ನೀರಿನ ವಿಚಾರದಲ್ಲಿ ರಾಜಕಾರಣ ಮಾಡುವುದನ್ನು ಪಕ್ಷಗಳು ಬಿಡಬೇಕು. ನೆಲ–ಜಲ ವಿಚಾರದಲ್ಲಿ ರಾಜ್ಯದ ಪರವಾಗಿ ಎಲ್ಲಾ ರಾಜಕೀಯ ಪಕ್ಷಗಳು ಒಟ್ಟಾಗಿ ಧ್ವನಿ ಎತ್ತಬೇಕು ಎಂದು ಒತ್ತಾಯಿಸಿದರು. ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ಮುಖಂಡರಾದ ನಾಲಾಬೀದಿ ರವಿ, ಬೋಗಾದಿ ಸಿದ್ದೇಗೌಡ, ಮಹದೇವಸ್ವಾಮಿ, ಪ್ಯಾಲೇಸ್ ಬಾಬು, ಸುನೀಲ್, ಎಲ್‌ಐಸಿ ಸಿದ್ದಪ್ಪ, ಗೋವಿಂದರಾಜು, ಬೀಡಾ ಬಾಬು, ಸ್ವಾಮಿ ಗೈಡ್, ಮಾದಪ್ಪ, ಪುಷ್ಪ, ರಮೇಶ್ ಡೋಲ್, ಬಸವರಾಜು ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಮೈಸೂರಿನ ಮಹಾರಾಜ ಓವಲ್ ಮೈದಾನದಲ್ಲಿ ಕಾಳೀಸುವರಿ ರಿಫೈನರಿ ಪ್ರೈವೇಟ್ ವತಿಯಿಂದ ಮಕ್ಕಳಲ್ಲಿ ಟಿವಿ ಮತ್ತು ಗ್ಯಾಡ್ಜೆಟ್‌ಗಳನ್ನು ವೀಕ್ಷಿಸುವುದನ್ನು ತಡೆಗಟ್ಟುವ ಉದ್ದೇಶದಿಂದ ಗೋಲ್ಡ್ ವಿನ್ನರ್ ಕಿಡ್ಸ್ ಓಟ ಆಯೋಜಿಸಲಾಗಿತ್ತು. ಓಟಕ್ಕೆ ಬಿ.ಎಂ.ಕುಮಾರ್‌ಗೌಡ ಚಾಲನೆ ನೀಡಿದರು. ಓಟದಲ್ಲಿ 1500ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.

ವೈದ್ಯಕೀಯ ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ 5 ಲಕ್ಷ ರೂ. ಸಾಲ

ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಚಿಂತನೆ

ಬೆಂಗಳೂರು, ಆ.22(ಕೆಎಂಶಿ)– ಎಂಬಿಬಿಎಸ್ ವ್ಯಾಸಂಗ ಮಾಡುವ ಅಲ್ಪಸಂಖ್ಯಾತ ಸಮುದಾಯದ ಮೆರಿಟ್ ವಿದ್ಯಾರ್ಥಿಗಳಿಗೆ ಸಾಲದ ಪ್ರಮಾಣ ಐದು ಲಕ್ಷ ರೂ.ಗೆ ಹೆಚ್ಚಿಸಲು ಚಿಂತನೆ ನಡೆಸಲಾಗಿದೆ ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಇಂದಿಲ್ಲಿ ತಿಳಿಸಿದ್ದಾರೆ.



ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ 2023–24ನೇ ಸಾಲಿನ ಯೋಜನೆಗಳಿಗೆ ಚಾಲನೆ ನೀಡಿದ ಅವರು, ಪ್ರಸ್ತುತ ಕೆಎಂಡಿಸಿ ವತಿಯಿಂದ ಸರ್ಕಾರಿ ಕೋಟಾದಡಿ ಸೀಟು ಪಡೆಯುವ ಮೆರಿಟ್ ವಿದ್ಯಾರ್ಥಿಗಳಿಗೆ ಮೂರು ಲಕ್ಷ ರೂ. ಸಾಲ ನೀಡಲಾಗುತ್ತಿದ್ದು, ಬೇಡಿಕೆ ಮೇರೆಗೆ ಅದನ್ನು ಐದು ಲಕ್ಷ ರೂ.ಗಳಿಗೆ ಹೆಚ್ಚಿಸುವ ಬಗ್ಗೆ ಚಿಂತನೆ ನಡೆಸಿದ್ದು, ಬಡ ಕುಟುಂಬಗಳ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಇದರಿಂದ ಅನುಕೂಲವಾಗಲಿದೆ ಎಂದು ಹೇಳಿದರು.

ಅದೇ ರೀತಿ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ವಿದೇಶದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡ ಬಯಸಿದರೆ ಪ್ರಸ್ತುತ 20 ಲಕ್ಷ ರೂ. ಶಿಕ್ಷಣ ಸಾಲ ನೀಡಲಾಗುತ್ತಿದ್ದು, ಇದೀಗ ಎನ್‌ಎಂಡಿಸಿ ನೆರವಿನೊಂದಿಗೆ ಹತ್ತು ಲಕ್ಷ ಹೆಚ್ಚುವರಿಯಾಗಿ ಒಟ್ಟು 30 ಲಕ್ಷ ರೂ.ಸಾಲ ಸೌಲಭ್ಯ ಒದಗಿಸುವ ಬಗ್ಗೆಯೂ ಚಿಂತನೆ ನಡೆಸಲಾಗಿದೆ ಎಂದು ಹೇಳಿದರು.

ಕಳೆದ 3 ವರ್ಷಗಳಿಂದ ನ್ಯಾಷನಲ್ ಮೈನಾರಿಟಿ ಡೆವಲಪ್‌ಮೆಂಟ್ ಬೋರ್ಡ್‌ನ ಯೋಜನೆಗಳು ರಾಜ್ಯಕ್ಕೆ ಪಡೆಯುತ್ತಿರಲಿಲ್ಲ. ಇತ್ತೀಚೆಗೆ ಸಭೆ ನಡೆಸಿ ನಿರ್ದೇಶನ ನೀಡಿ ಪತ್ರ ವ್ಯವಹಾರ ನಡೆಸಿದ ನಂತರ ವಾರ್ಷಿಕ 50 ಕೋಟಿ ರೂ. ಅನುದಾನ ರಾಜ್ಯಕ್ಕೆ ಈ ವರ್ಷ ದೊರೆಯುತ್ತಿದೆ ಎಂದರು.

ನಿಗಮದ ವತಿಯಿಂದ ಇಂದು ಎಂಟು ಯೋಜನೆಗೆ ಚಾಲನೆ ನೀಡಿದ್ದು, ಆ ಪೈಕಿ ಅರಿವು ಸೇರಿ ನಾಲ್ಕು ಹಳೇ ಯೋಜನೆ ಮತ್ತೆ ಆರಂಭಿಸಲಾಗಿದೆ. ನಾಲ್ಕು ಹೊಸ ಯೋಜನೆ ಪ್ರಾರಂಭಿಸಲಾಗುತ್ತಿದೆ. ನಿರುದ್ಯೋಗಿಗಳಿಗೆ ಕಾರು ಸೇರಿ ನಾಲ್ಕು ಚಕ್ರ ವಾಹನ ಖರೀದಿಗೆ 3 ಲಕ್ಷ ಸಬ್ಸಿಡಿ ನೀಡುವ ಸ್ವಾವಲಂಬಿ, ತಾಂತ್ರಿಕ ಕೌಶಲ್ಯ ತರಬೇತಿ ನೀಡುವ ಶ್ರಮಶಕ್ತಿ, ವಿಧವೆ, ವಿಚ್ಛೇದಿತ, ಅವಿವಾಹಿತ ಮಹಿಳೆಯರಿಗೆ 50 ಸಾವಿರ ಸಾಲ ನೀಡುವ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗೆ ಚಾಲನೆ ನೀಡಿದ್ದೇವೆ ಎಂದು ಹೇಳಿದರು.

ರವಿಕುಮಾರ್‌ಗೆ ಪಿಎಚ್.ಡಿ ಪದವಿ



ಮೈಸೂರು: ಕರಾಮುವಿವಿ ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ನಿವೃತ್ತ ಪ್ರಾಧ್ಯಾಪಕ ಡಾ.ಟಿ.ಡಿ.ದೇವೇಗೌಡ ಅವರ ಮಾರ್ಗದರ್ಶನದಲ್ಲಿ ರವಿಕುಮಾರ್ ಸಂಶೋಧನೆ ನಡೆಸಿ ಸಾದರಪಡಿಸಿದ ಗ್ರಾಮೀಣ ಅಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿ ರಾಜಕೀಯ ಹಸ್ತಕ್ಷೇಪ ಮಹಾಪ್ರಬಂಧವನ್ನು ಕರಾಮುವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಡಿಸಿಎಂ ಡಿ.ಕೆ.ಶಿವಕುಮಾರ್ ಯಾರನ್ನು ಬೇಕಾದರೂ ಖರೀದಿ ಮಾಡ್ತಾರೆ!

● ಮಾಜಿ ಸಿಎಂ ಕುಮಾರಸ್ವಾಮಿ ವಾಗ್ದಾಳಿ ● ಆದರೆ ಮಾಜಿ ಪ್ರಧಾನಿ ದೇವೇಗೌಡರ ಕುಟುಂಬ ಖರೀದಿಸುವ ಶಕ್ತಿ ಅವರಿಗೆ ಇಲ್ಲ ● ಸದ್ಯದಲ್ಲೇ ನೈಸ್ ಯೋಜನೆ ಹಗರಣದ ಬಗ್ಗೆ ದಾಖಲೆ ಬಿಡುಗಡೆ

ಬೆಂಗಳೂರು,ಆ.22(ಕೆಎಂಶಿ)–ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕುಟುಂಬವನ್ನು ಬಿಟ್ಟು ಯಾರನ್ನು ಬೇಕಾದರೂ ಖರೀದಿ ಮಾಡುವ ಶಕ್ತಿ ಇದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ನೇರ ಆರೋಪ ಮಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ವಿರುದ್ಧ ದಾಖಲೆ ಬಿಡುಗಡೆ ಮಾಡಿದರೆ ಭಯ ಇಲ್ಲ ಎಂದು ಭಂಡತನದ ಹೇಳಿಕೆ ನೀಡಿದ ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯ ಬಗ್ಗೆ ಖಾರವಾಗಿ ಪ್ರತಿಕ್ರಿಯಿಸಿದರು. ಅವರು ಯಾರಿಗೂ ಹೆದರಲ್ಲ. ಅವರು ಯಾರನ್ನು ಬೇಕಾದರೂ ಖರೀದಿ ಮಾಡುತ್ತಾರೆ. ಬಿಜೆಪಿಯ ದೆಹಲಿಯ ನಾಯಕರನ್ನೇ ಖರೀದಿ ಮಾಡಿದ್ದರೂ ಅಚ್ಚರಿ ಇಲ್ಲ. ಯಾರನ್ನು ಬೇಕಾದರೂ ಅವರು ಖರೀದಿ ಮಾಡಬಹುದು, ಅವರಿಗೆ ಆ ಶಕ್ತಿ ಇದೆ ಎಂದು ಮಾರ್ಮಿಕವಾಗಿ ಹೇಳಿದರು.

ಬಿಚ್ಚೊದು ಎಂದು ಅವರು ಪದೇ ಪದೇ ಹೇಳುತ್ತಿದ್ದಾರೆ. ಹೊರಗೆ ಬರಬೇಕಾದದ್ದು ಬಂದೇ ಬರುತ್ತದೆ. ಈವರೆಗೂ ಮಾಡಿಕೊಂಡಿದ್ದು ಸಾಕು. ಅಣ್ಣ ಅಂತಿರಲ್ಲ. ಅಣ್ಣನಾಗಿ ಹೇಳುತ್ತೇನೆ. ಇನ್ನಾದರೂ ಈ ಲೂಟಿ ನಿಲ್ಲಿಸಿ. ಈ ಕಿವಿಮಾತು ಕೇಳಿದರೆ ನಿಮ್ಮನ್ನು ತಮ್ಮ ಎಂದು ಒಪ್ಪಿಕೊಳ್ಳುತ್ತೇನೆ ಎಂದು ಡಿಕೆಶಿ ವಿರುದ್ಧ ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

ನೈಸ್ ಅಕ್ರಮಗಳ ದಾಖಲೆ ಶೀಘ್ರವೇ ಬಿಡುಗಡೆ ಮಾಡುತ್ತೇನೆ. ಇದರಲ್ಲಿ ಸಂಶಯ ಇಲ್ಲ. ಈ ಯೋಜನೆ ಹೆಸರಲ್ಲಿ ಏನೇನು ಆಗಿದೆ? ಎಷ್ಟೆಲ್ಲ ಅಕ್ರಮ ನಡೆದಿದೆ? ಯಾರೆಲ್ಲಾ ಫಲಾನುಭವಿಗಳು ಇದ್ದಾರೆ? ಎಲ್ಲವನ್ನೂ ಜನರ ಮುಂದೆ ಇಡುತ್ತೇನೆ. ಕೆಲವರ ಹಣೇಬರಹ ಹೊರಬರುತ್ತದೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು.



ದಾಖಲೆ ಬಿಡುಗಡೆ ಸಮಸ್ಯೆ ಇದೆ. ಬುಧವಾರ ಚಂದ್ರಯಾನ–3 ರೋವರ್ ಚಂದ್ರನ ಮೇಲೆ ಇಳಿಯಲಿದೆ. ಎಲ್ಲರಂತೆ ನನಗೂ ಕುತೂಹಲ ಇದೆ. ಪ್ರತಿಯೊಬ್ಬರ ಗಮನವೂ ಆ ಕಡೆಯೇ ಇರುತ್ತದೆ. ಹೀಗಾಗಿ ಕೆಲ ದಿನದಲ್ಲಿ ದಾಖಲೆಗಳನ್ನು ಬಿಡುಗಡೆ ಮಾಡುತ್ತೇನೆ ಎಂದರು.

ಕೆಲವರು ನೈಸ್ ಯೋಜನೆ ದೇವೇಗೌಡರ ಪಾಪದ ಕೂಸು ಎಂದು ಹೇಳಿದ್ದಾರೆ. ಅವರಿಗೆ ಗೊತ್ತಿರಲಿ, ಯೋಜನೆಯ ಮೂಲ ಒಪ್ಪಂದ ಏನಿದೆ? ಅದನ್ನು ಅವರು ಓದಿಕೊಳ್ಳಬೇಕು. ಅದನ್ನು ಪೂರ್ಣವಾಗಿ ತಿಳಿದು ಮಾತನಾಡಿದರೆ ಚೆನ್ನಾಗಿರುತ್ತದೆ.

ದೇವೇಗೌಡರು ಒಪ್ಪಂದ ಮಾಡಿಕೊಂಡಿದ್ದು ರಸ್ತೆ ಮಾಡಲಿ ಎಂದು, ಬೆಂಗಳೂರು ಮತ್ತು ಮೈಸೂರು ನಡುವೆ ಓಡಾಡುವ ಜನರಿಗೆ ಒಳ್ಳೆಯದಾಗಲಿ ಎಂದು. ಈ ಮಹಾನುಭಾವರು ಮಾಡಿದ್ದೇನು? ಮೂಲ ಒಪ್ಪಂದವನ್ನು ಹೇಗೆಲ್ಲ ತಿರುಚಿದರು, ಇವರ ಮಹಾನ್ ಸಾಧನೆಗಳನ್ನೆಲ್ಲ ಬಿಡುಗಡೆ ಮಾಡುತ್ತೇನೆ ಎಂದು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

ಹೆಚ್ಚುವರಿ ಜಮೀನು ಹಿಂಪಡೆಯಿರಿ: ನಾನು ಮಾಜಿ ಸಚಿವ ಟಿ.ಬಿ.ಜಯಚಂದ್ರ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಅವರು ಯೋಜನೆ ಅಕ್ರಮದ ಬಗ್ಗೆ ಮಾತಾಡಿದ್ದಾರೆ. ಈ ಅಕ್ರಮದ ಬಗ್ಗೆ ವರದಿ ಕೊಟ್ಟ ಸದನ ಸಮಿತಿಯ ನೇತೃತ್ವ ವಹಿಸಿದವರು ಕೂಡ ಅವರೇ. ಅದಕ್ಕಾಗಿಯೇ ನಾನು ಮುಖ್ಯಮಂತ್ರಿಗಳನ್ನು ಒತ್ತಾಯ ಮಾಡುತ್ತೇನೆ. ನೀವು ರೈತರ ಪರವಾಗಿ ಇದ್ದರೆ, ತಕ್ಷಣ ನೈಸ್ ಹೆಚ್ಚುವರಿ ಜಮೀನು ವಾಪಸ್ ಪಡೆದು ಮೂಲ ರೈತರಿಗೆ ನೀಡಿ ಎಂದರು.

ಸರ್ವ ಪಕ್ಷ ಸಭೆಗೆ ಒತ್ತಾಯಿಸಿದ್ದೇ ನಾನು: ಕಾವೇರಿ ವಿಚಾರದ ಬಗ್ಗೆ ಚರ್ಚೆ ನಡೆಸಲು ಕರೆಯಲಾಗುವ ಸರ್ವಪಕ್ಷ ಸಭೆಯಲ್ಲಿ ಭಾಗಿಯಾಗುತ್ತೇನೆ. ಅಲ್ಲಿ ನಮ್ಮ ಪಕ್ಷದ ನಿಲುವನ್ನು ಸ್ಪಷ್ಟವಾಗಿ ಹೇಳಲಾಗುವುದು ಎಂದರು.

ಸರ್ವಪಕ್ಷ ಸಭೆಗೆ ಹೋಗಬೇಕಾದದ್ದು ನನ್ನ ಕರ್ತವ್ಯ. ತಮಿಳುನಾಡಿಗೆ ನೀರು ಬಿಟ್ಟ ಕೂಡಲೇ ಮೊದಲು ದನಿ ಎತ್ತಿದವನೇ ನಾನು. ಸರ್ವಪಕ್ಷ ಸಭೆ ಕರೆಯಬೇಕು ಎಂದು ಒತ್ತಾಯ ಮಾಡಿದವನು ಕೂಡ ನಾನೇ ಎಂದು ಅವರು ಹೇಳಿದರು.

ಆದರೆ, ರಾಜ್ಯದ ಹಿತ ಪರಿಗಣನೆಗೆ ಕ್ರಮ ಕೈಗೊಳ್ಳಬೇಕಾದ ಜಲಸಂಪನ್ಮೂಲ ಸಚಿವರೂ ಆದ ಉಪ ಮುಖ್ಯಮಂತ್ರಿ ಅವರು, ಯಾವುದೋ ಹಳೆಯ ಟ್ವೀಟ್ ಪ್ರಸ್ತಾಪ ಮಾಡಿದ್ದಾರೆ. ಆ ಟ್ವೀಟ್‌ನಲ್ಲಿ ಏನು ಹೇಳಿದ್ದೇನೆ? ಎರಡೂ ರಾಜ್ಯಗಳ ಜನರು ಅಣ್ಣ–ತಮ್ಮಂದಿರ ರೀತಿ ಇರಬೇಕೆಂದು ಹೇಳಿದ್ದೇನೆ. ಕಾನೂನು ವ್ಯಾಪ್ತಿಯಲ್ಲಿ ನೂರಾರು ವರ್ಷ ಹೋರಾಟ ಮಾಡಿ ಆಗಿದೆ. ಈಗ ಕೊಟ್ಟು ತೆಗೆದುಕೊಳ್ಳುವ ಮನಸ್ಸು ಇರಬೇಕು. ತಮಿಳುನಾಡಿನ ರೈತರಿಗೆ ನಾವು ಎಂದೂ ದ್ರೋಹ ಮಾಡಿಲ್ಲ, ನಮ್ಮ ರಾಜ್ಯದ ರೈತರಿಗೆ ಅನ್ಯಾಯ ಮಾಡಬೇಡಿ ಅಂತ ಹೇಳಿದ್ದೇನೆ. ಸ್ಟಾಲಿನ್ ಅವರಿಗೆ ಈ ಮಾತು ಹೇಳಿದ್ದೀನಿ. ಇದರಲ್ಲಿ ಹುಳುಕು ಹುಡುಕುವಂತಹ ಅಂಶ ಏನಿದೆ? ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುಳ್ಳು ಹೇಳಿಕೊಂಡು ರಾಜಕಾರಣ ಮಾಡಬೇಡಿ. ನಾನು ನನ್ನ ಟ್ವೀಟ್‌ನಲ್ಲಿ ಎಲ್ಲಾದರೂ ನೀರು ಬಿಡ್ತೀನಿ ಅಥವಾ ಬಿಡಿ ಎಂದು ಹೇಳಿದ್ದೀನಾ? ಉನ್ನತ ಸ್ಥಾನದಲ್ಲಿ ಇದ್ದೀರಾ, ಹೀಗೆ ಸುಳ್ಳು ಹೇಳುವುದಾ? ಪೆನ್ ಪೆನ್ ಕೊಡಿ ಎಂದು ನಾನು ಜನರನ್ನು ಕೇಳಿದೆನಾ? ನಮ್ಮ ರಾಜ್ಯವನ್ನು ಹಾಳು ಮಾಡಲು ಪೆನ್ ಕೇಳಿದ್ದಿರಾ ನೀವು? ಹುಡುಗಾಟ ಆಡಬೇಡಿ, ಆ ಸ್ಥಾನದ ಗಾಂಭೀರ್ಯತೆ ಕಾಪಾಡಿಕೊಳ್ಳಿ. ಆ ಸ್ಥಾನದ ಗೌರವವನ್ನು ಉಳಿಸಿಕೊಳ್ಳಿ ಎಂದು ಶಿವಕುಮಾರ್ ಅವರ ಹೆಸರೇಳದೇ ಟೀಕಾಪ್ರಹಾರ ನಡೆಸಿದರು.

ಕಾಂಗ್ರೆಸ್ ಪಕ್ಷದ 30 ಶಾಸಕರು ಪಕ್ಷ ಬಿಡಲು ಮುಂದಾಗಿದ್ದಾರೆ

ನಮ್ಮ ಶಾಸಕರು ಪಕ್ಷ ಬಿಡಲ್ಲ

ಕಾಂಗ್ರೆಸ್ ಪಕ್ಷ, ಜೆಡಿಎಸ್ ಪಕ್ಷದ ಶಾಸಕರನ್ನು ಸೆಳೆಯುತ್ತಿದೆಯಲ್ಲ ಎನ್ನುವ ಪ್ರಶ್ನೆಗೆ ಖಾರವಾಗಿ ಉತ್ತರಿಸಿದ ಕುಮಾರಸ್ವಾಮಿ, ನಮ್ಮ ಶಾಸಕರು ಪಕ್ಷ ಬಿಡುವ ಸಾಧ್ಯತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್‌ನವರು ಯಾಕೆ ಈ ರೀತಿಯ ಚರ್ಚೆ ಹುಟ್ಟುಹಾಕಿದ್ದಾರೆ ಎಂದರೇ ಅವರದೇ ಪಕ್ಷದ 30 ಶಾಸಕರು ಪಕ್ಷ ಬಿಡಲು ಮುಂದಾಗಿದ್ದಾರೆ. ಅದನ್ನು ಸರಿ ಮಾಡಿಕೊಳ್ಳಲು ಸಾಧ್ಯ ಅಗದ ಕಾಂಗ್ರೆಸ್‌ನವರು ಬೇರೆ ಪಕ್ಷಗಳ ಶಾಸಕರು ಬರುತ್ತಿದ್ದಾರೆ ಎಂದು ಗುಲ್ಲು ಹಬ್ಬಿಸುತ್ತಿದ್ದಾರೆ. ಕಾಂಗ್ರೆಸ್ ಶಾಸಕರು ಪಕ್ಷ ಬಿಡುವುದನ್ನು ತಡೆಯಲು ಈ ಗುಮ್ಮ ಬಿಟ್ಟುಕೊಂಡು ತಿರುಗಾಡುತ್ತಿದ್ದಾರೆ ಎಂದು ತಿರುಗೇಟು ಕೊಟ್ಟರು.

ಇಂಥ ವಾತಾವರಣದಲ್ಲಿ ಮೊದಲನೇ ಘರ್ ವಾಪಸ್ ಮಾಡಿಕೊಂಡಿದ್ದಾರೆ. ಆದರೆ, ನಾನು ಹೋಗಲ್ಲ ಎಂದು ಸೋಮಶೇಖರ್ ಹೇಳುತ್ತಿದ್ದಾರೆ. ಅವರು ಮೈಸೂರು ಉಸ್ತುವಾರಿ ಸಚಿವರಾಗಿದ್ದರು. ಮಂತ್ರಿಯಾಗಿ ಅವರು ಕೇಳಿದ್ದಕ್ಕೆಲ್ಲಾ ಸಹಿ ಹಾಕಿದ್ದರು ಅಲ್ಲವೇ? ಅಭಿವೃದ್ಧಿಗಾಗಿ ಕಾಂಗ್ರೆಸ್‌ಗೆ ಹೋಗ್ತಾ ಇದ್ದೀನಿ ಅಂತ ಹೇಳ್ತಾ ಇದ್ದಾರೆ. ಹಾಗಾದರೆ ಇವರು ಸಂಪೂರ್ಣವಾಗಿ ಅಭಿವೃದ್ಧಿ ಕೆಲಸ ಮಾಡಿಲ್ಲ ಅಂತ ಆಯ್ತು ಅಲ್ಲವೇ? ಮೂರು ವರ್ಷಗಳಿಂದ ಈ ಕ್ಷೇತ್ರಕ್ಕೆ ಅವರು ಏನು ಮಾಡಿದರು? ಕ್ಷೇತ್ರದ ಅಭಿವೃದ್ಧಿ ಮಾಡಿಲ್ಲ ಅಲ್ಲವೇ? ಎಂದು ಟಾಂಗ್ ಕೊಟ್ಟರು.

ಪತ್ರದ ಉಲ್ಲೇಖ ತನಿಖೆ ಮಾಡ್ತಿಲ್ಲಾ: ಕೃಷಿ ಸಚಿವ ಚೆಲುವರಾಯಸ್ವಾಮಿ ಅವರ ವಿರುದ್ಧ ಅಧಿಕಾರಿಗಳು ಬರೆದಿರುವ ದೂರಿನ ಪತ್ರದ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರ ನೀಡಿದ ಅವರು, ಯಾಕೆ ಆ ಪತ್ರ ಬರೆಯಲಾಗಿದೆ? ಸಿಐಡಿ ಅವರು ಆ ಪತ್ರ ನಕಲಿನಾ? ಅಸಲಿನಾ ಅಂತ ತನಿಖೆ ಮಾಡ್ತಾ ಇದ್ದಾರೆ. ಆದರೆ, ಪತ್ರದಲ್ಲಿ ಉಲ್ಲೇಖ ಮಾಡಿ ರುವ ಅಂಶಗಳ ಬಗ್ಗೆ ಅವರು ತನಿಖೆ ಮಾಡುತ್ತಿಲ್ಲ. ಅಧಿಕಾರಿಗಳು ದುಡ್ಡು ಕೊಟ್ಟಿರುವ ಬಗ್ಗೆ ಹೇಳೋಕೆ ಆಗುತ್ತದೆಯೇ? ಈ ಲಂಚ ವ್ಯವಹಾರದ ಸತ್ಯವನ್ನು ಜನರ ಮುಂದೆ ಇಡಿ. ನಾನು ಇದು ಚಲುವರಾಯಸ್ವಾಮಿ ಅವರ ವಿಚಾರ ಅಂತ ಹೇಳುತ್ತಿಲ್ಲ ಎಂದರು.

ನಕ್ಕರೆ ಅದೇ ಸ್ವರ್ಗ

ಆತ : ಪ್ರತಿದಿನ ಆಫೀಸಿಗೆ ಲೇಟಾಗಿ ಬರುತ್ತಿದ್ದವನು ಈ ದಿನ ಬೇಗ ಬಂದಿದ್ದಿಯಲ್ಲಾ ಯಾಕೆ?

ಈತ : ಹೆಂಡತಿ ಮಕ್ಕಳೆಲ್ಲಾ ಊರಿಗೆ ಹೋಗಿದ್ದಾರೆ. ತಿಂಡಿ ಅಡುಗೆ ನನಗೊಬ್ಬನಿಗೇ. ಹಾಗಾಗಿ ಕೆಲಸ ಬೇಗ ಮುಗಿಸಿದೆ.

ಮೈಸೂರು ಮಿತ್ರ

ಬುಧವಾರ, 23 ಆಗಸ್ಟ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಶ್ರೀಮಂತಿಕೆಯ ಸ್ವಾರ್ಥ ಎಂತಹದ್ದೆಂದರೆ ನಾವು ಹೆಚ್ಚು ಹೆಚ್ಚು ಸಂಪಾದಿಸುವುದಷ್ಟೇ ಅಲ್ಲ, ಇತರರು ಕಡಿಮೆ ಉಳ್ಳವರಾಗಿರುವಂತೆಯೂ ಯತ್ನಿಸುವುದು. –ಜಾನ್‌ರಸ್ಕಿನ್

ವೇದ ಸುಳ್ಳಾದರೂ { ಕಾಸಿದ್ದಾಗ
ಗಾದೆ ಸುಳ್ಳಾಗದು { ಹಬ್ಬ ಮಾಡು

ನಿಮ್ಮ ಪತ್ರಗಳು

ದಸರಾ ಆಚರಣೆ ರಾಜಕೀಯ ವೇದಿಕೆ ಆಗದಿರಲಿ

ಮಾನ್ಯರೆ,



ಮೈಸೂರಿನಲ್ಲಿ ದಸರಾ ಹಬ್ಬದ ಪ್ರಾರಂಭದಿಂದ ಪಂಜಿನ ಕವಾಯಿತಿನವರೆಗೂ ಸಡಗರ ಸಂಭ್ರಮವು ಮುಗಿಲುಮುಟ್ಟಿರುತ್ತದೆ. ಅದ್ದೂರಿಯಾಗಿ ದಸರಾ ಹಬ್ಬವು ಯಶಸ್ವಿಯಾಗಿ ನಡೆಯುವುದಕ್ಕಾಗಿ ಹಲವು ಕಮಿಟಿಗಳನ್ನು ಮಾಡಿ ಕೆಲಸ ಕಾರ್ಯಗಳನ್ನು ವಹಿಸುವುದು ನಡೆದುಕೊಂಡು ಬಂದಿರುವ ಪದ್ಧತಿ. ಈ ಕಮಿಟಿಗಳಲ್ಲಿ ಅಧಿಕಾರದಲ್ಲಿ ಇರುವ ಪಕ್ಷದ ಮುಖಂಡರುಗಳನ್ನು ಮಾತ್ರ ನಿಯೋಜಿಸಿ ಪಕ್ಷದ ಹಬ್ಬವನ್ನಾಗಿ ಎಲ್ಲಾ ಸರ್ಕಾರಗಳು ಮಾಡಿಬಿಟ್ಟಿವೆ. ಅವರುಗಳ ಶ್ರಮದಿಂದ ಎಷ್ಟೇ ವಿಜೃಂಭಣೆಯಿಂದ ದಸರಾ ನಡೆದರೂ ವಿರೋಧ ಪಕ್ಷದಲ್ಲಿ ಇರುವವರು ಏನಾದರೊಂದು ತಗಾದೆ ತೆಗೆಯುವುದು ಸಾಮಾನ್ಯ. ಇದು ರಾಜ್ಯದ ಜನರಿಗೆ ಸಾಂಸ್ಕೃತಿಕ ಹೆಮ್ಮೆಯ ಬಿರುದು ಪಡೆದಿರುವ ನಮ್ಮ ನಗರದ ಬಗ್ಗೆ ಕೆಟ್ಟ ಸಂದೇಶ ರವಾನೆಯಾಗುವುದು. ಕಮಿಟಿಗಳಲ್ಲಿ ಪಕ್ಷಾತೀತವಾಗಿ ನಗರಕ್ಕೆ ತಮ್ಮದೇ ಆದ ಕ್ಷೇತ್ರಗಳಲ್ಲಿ ಕೊಡುಗೆಗಳನ್ನು ಕೊಟ್ಟು ಮೈಸೂರಿನ ಪ್ರಗತಿಗೆ ದುಡಿಯುತ್ತಿರುವ ಮಹನೀಯ ಸಾಧಕರನ್ನು, ವಿಚಾರವಂತರನ್ನು ಹಾಗೂ ಸಾಹಿತಿಗಳನ್ನು ಪರಿಗಣಿಸಿ ಚರ್ಚೆಗೆ ಆಸ್ಪದವಿಲ್ಲದ ರೀತಿ ದಸರಾ ಹಬ್ಬವು ವಿಶ್ವದ ಜನರು ಇತ್ತ ತಿರುಗಿ ನೋಡುವ ಹಾಗೆ ಅದ್ಧೂರಿಯಾಗಿ ನಡೆಯುವಂತೆ ನೋಡಿಕೊಳ್ಳಬೇಕಿದೆ!

ದಸರಾ ಉದ್ಘಾಟನೆಯನ್ನು ಯಾರು ಮಾಡಬೇಕು? ಎಂಬುದು ಪ್ರತೀ ಬಾರಿಯು ಚರ್ಚೆಗೆ ಒಳಪಡುವ ವಿಷಯ. ಸಾಹಿತ್ಯ ಕೃಷಿಯಲ್ಲಿ ಕುವೆಂಪು, ದೇಜಗೌರವರ ಒಡನಾಡಿಯಾಗಿ ಅಂದಿನಿಂದ ಇಲ್ಲಿಯವರೆಗೂ ಹಗಲಿರುಳು ಸಾಹಿತ್ಯಸೇವೆ ಮಾಡಿಕೊಂಡು ಬಂದಿರುವ ನಮ್ಮ ಜಿಲ್ಲೆಯವರೇ ಆದ, ನಮ್ಮ ನಗರದಲ್ಲೇ ಪೂರ್ಣಕಾಲ ಬದುಕು ಸವೆಸಿರುವ ಚಿಕ್ಕನಾಯಕನಹಳ್ಳಿ ಪುಟ್ಟೇಗೌಡರ ಮಗ ಕೃಷ್ಣಕುಮಾರ್(ಸಿಪಿಕೆ) ಅವರು ಉದ್ಘಾಟಿಸುವುದು ಸೂಕ್ತ (ಈ ಅಭಿಪ್ರಾಯವು ಹಲವರಿಂದ ಈಗಾಗಲೇ ವ್ಯಕ್ತವಾಗಿದೆ). ಅವರೀಗ ಇಳಿವಯಸ್ಸಿನಲ್ಲಿ ಇದ್ದಾರೆ. ಅವರಿಗೆ ಇಲ್ಲಿಯವರೆಗೂ ನೀಡಿರುವ ಗೌರವ–ಪುರಸ್ಕಾರ–ಬಿರುದುಗಳು ಕಡಿಮೆಯೇ. ಅವರನ್ನು ದಸರಾ ಉದ್ಘಾಟನೆಗೆ ಆಯ್ಕೆ ಮಾಡುವುದರಿಂದ ಮಹಾನ್ ಸಾಧಕನಿಗೆ ಸಂಸ್ಕೃತಿ ಚಿಂತಕನಿಗೆ ನೀಡುವ ದೊಡ್ಡ ಕೊಡುಗೆ ಆಗುವುದು. ಸಿಪಿಕೆ ಯವರಂತಹ ಅನೇಕರು ಅರಸರ ಕಾಲದಿಂದಲೂ ಮೈಸೂರಿನಲ್ಲಿ ನೆಲೆಸಿದ್ದರಿಂದಲೇ ಮೈಸೂರು ಸಾಂಸ್ಕೃತಿಕ ನಗರವಾಗಿ ಬೆಳೆದಿರುವುದು.

ದೇಶ ವಿದೇಶಗಳಿಂದ ಬರುವ ಜನರ ನಿರೀಕ್ಷೆಗೆ ಚ್ಯುತಿ ಬಾರದ ರೀತಿ ನಮ್ಮ ನಗರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ಮತ್ತೊಂದು ಸವಾಲಿನ ಕೆಲಸ, ನಗರವನ್ನು ಪ್ರವೇಶಿಸುವ ಎಲ್ಲಾ ದಿಕ್ಕುಗಳ ರಸ್ತೆಗಳು ಹಾಗೂ ರಿಂಗ್ ರೋಡ್ ಇಕ್ಕೆಲಗಳಲ್ಲಿ ಉದ್ದಕ್ಕೂ ಕಸದ ರಾಶಿಗಳು ಬಿದ್ದಿರುತ್ತವೆ, ಇದಕ್ಕೆ ಆದ್ಯತೆ ಕೊಟ್ಟು ತೆರವುಗೊಳಿಸಿ ಗುಂಡಿ ಮುಚ್ಚುವುದು, ದುರಸ್ತಿ ಕೆಲಸಗಳು, ಸುಣ್ಣಬಣ್ಣ ಬಳಿಯುವ ಕೆಲಸಗಳನ್ನು ವಿಳಂಬ ಮಾಡದೆ ಸಾಕಷ್ಟು ಮುಂಚಿನಿಂದಲೇ ಪ್ರಾರಂಭಿಸುವುದರಿಂದ 'ತೇಪೆ ಕೆಲಸ, ಕಳಪೆ ಕಾಮಗಾರಿ' ಎನ್ನುವ ಕಳಂಕದಿಂದ ಮುಕ್ತಿ ಸಿಗಬಹುದು!

ದಸರಾ ಆಚರಣೆಗಾಗಿ ಪ್ರಾಧಿಕಾರವನ್ನು ರಚಿಸುವ ಕೂಗು ಹಿಂದಿನಿಂದಲೂ ಇದೆ, ಅನುಷ್ಠಾನಗೊಳ್ಳದ ಆ ಕೂಗಿನ ಶಬ್ದ ಗಾಳಿಯಲ್ಲಿ ಲೀನವಾಗುತ್ತಾ ಬಂದಿದೆ. ಎಂದು ಬರುವುದೋ ಆ ಕೂಗಿಗೆ ಮುಕ್ತಿ?, ಕಾಯೋಣ!. ಒಟ್ಟಿನಲ್ಲಿ ದಸರಾ ವೈಭವ ಎಲ್ಲೆಲ್ಲೂ ಮೊಳಗಲಿ, ಮೈಸೂರು ಬೆಳಕಿನ ಚಿತ್ತಾರದಿಂದ ಜಗಮಗಿಸಲಿ!.

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

ಆಸ್ಟ್ರೇಲಿಯಾದಲ್ಲಿ ಭಾರತಾಂಭೆಯ ಕಲರವ

ಮಾನ್ಯರೆ,

ಇತ್ತೀಚೆಗೆ ಆಸ್ಟ್ರೇಲಿಯಾದ ಮೆಲ್ಬರ್ನ್‌ನಲ್ಲಿ ನಡೆದ ಭಾರತ ಸ್ವಾತಂತ್ರ್ಯೋತ್ಸವದ ದಿನಾಚರಣೆ ಅತ್ಯಂತ ಆಕರ್ಷಣೀಯವಾಗಿತ್ತು. ಇದಕ್ಕೆ ಸಂಬಂಧಿಸಿದ ವೀಡಿಯೋ ಸಾಮಾಜಿಕ ತಾಣಗಳಲ್ಲಿ ಹರಿದಾಡುತ್ತಿದ್ದು, ಭಾರತಾಂಭೆಯ ಕಲರವ ಆಸ್ಟ್ರೇಲಿಯಾ ದೇಶದಲ್ಲಿ ಕೂಡ ಮುಗಿಲೆತ್ತರಕ್ಕೇರಿದ್ದು ಭಾರತೀಯರಾದ ನಮಗೆಲ್ಲರಿಗೂ ಅತ್ಯಂತ ಸಂತೋಷದಾಯಕವಾದ ವಿಚಾರವಾಗಿದೆ. ದೇಶದ ರಾಜಧಾನಿ ನವದೆಹಲಿಯಲ್ಲಿ ಪ್ರತಿ ವರ್ಷ ನಡೆಯುವ ಸ್ವಾತಂತ್ರ್ಯೋತ್ಸವದ ಸಮಾರಂಭ ಅತ್ಯಾಕರ್ಷಕವಾಗಿರುತ್ತದೆ. ದೇಶದ ತ್ರಿವರ್ಣ ಧ್ವಜವನ್ನು ಗಣ್ಯಾತಿಗಣ್ಯರ ಉಪಸ್ಥಿತಿಯಲ್ಲಿ ಹಾರಿಸುವ ಗೌರವಾನ್ವಿತ ಪ್ರಧಾನ ಮಂತ್ರಿಗಳು, ನಂತರ ದೇಶದ ಜನತೆಯನ್ನು ಉದ್ದೇಶಿಸಿ ಮಾಡುವ ಭಾಷಣಕ್ಕೆ ತನ್ನದೇ ಆದ ಮೆರುಗಿದೆ. ಆದರೆ, ದುರದೃಷ್ಟವಶಾತ್ ನಮ್ಮಲ್ಲಿ ಕೆಲವು ಕಡೆ, ಸ್ವಾತಂತ್ರ್ಯೋತ್ಸವದ ಸಮಾರಂಭವನ್ನು ಬೇಕಾಬಿಟ್ಟಿ ಅಥವಾ ಕಾಟಾಚಾರಕ್ಕೆ ಅನ್ನುವ ರೀತಿಯಲ್ಲಿ ನಡೆಸಲಾಗುತ್ತದೆ. ಕೆಲವು ಕಡೆ ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ ಪ್ರಸಂಗವೂ ಜರುಗಿದೆ. ಆದರೆ ಆಸ್ಟ್ರೇಲಿಯಾದಂತಹ ಪರ ದೇಶದಲ್ಲಿ ನಮ್ಮ ದೇಶದ ಸ್ವಾತಂತ್ರ್ಯೋತ್ಸವವನ್ನು ರಾಷ್ಟ್ರೀಯ ಹಬ್ಬದ ರೀತಿಯಲ್ಲಿ ಆಚರಿಸಿರುವುದು ಅತ್ಯಂತ ಶ್ಲಾಘನೀಯ ಸಂಗತಿ. ಇದಕ್ಕಾಗಿ ಆ ದೇಶದ ಛಾನ್ಸಲರ್ ಹಾಗೂ ಮೆಲ್ಬರ್ನ್ ನಗರದ ಸ್ಥಳೀಯ ಆಡಳಿತ ವರ್ಗ ಎಲ್ಲಕ್ಕಿಂತ ಹೆಚ್ಚಾಗಿ ಅಲ್ಲಿ ವಾಸಿಸುವ ಗೌರವಾನ್ವಿತ ಭಾರತೀಯ ಮೂಲದವರಿಗೆ ಗೌರವಪೂರ್ವಕ ವಂದನೆಗಳು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಎಕ್ಸ್‌ಪ್ರೆಸ್‌ವೇ ದರೋಡೆ ತಡೆಗೆ ಪೊಲೀಸ್ ಗಸ್ತು ನಿಯೋಜಿಸಿ

ಮಾನ್ಯರೆ,

ಇತ್ತೀಚೆಗೆ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇ ಹೆದ್ದಾರಿಯಲ್ಲಿ ಆಗಾಗ್ಗೆ ರಾತ್ರಿ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿದ್ದು ರಾತ್ರಿ 10 ಗಂಟೆಯ ನಂತರ ಸಾರ್ವಜನಿಕರು ಈ ರಸ್ತೆಯಲ್ಲಿ ಓಡಾಡಲು ಭಯ ಪಡುವಂತಾಗಿದೆ. ಇತ್ತೀಚೆಗೆ ನಡೆದಿರುವ ಎಲ್ಲಾ ರಸ್ತೆ ದರೋಡೆಗಳು ಚನ್ನಪಟ್ಟಣ ತಾಲೂಕಿನ ಪೊಲೀಸ್ ಸರಹದ್ದು ಮತ್ತು ಶ್ರೀರಂಗಪಟ್ಟಣ ತಾಲೂಕಿನ ಪೊಲೀಸ್ ಸರಹದ್ದುಗಳಲ್ಲಿ ರಾತ್ರಿ 12 ಗಂಟೆಯ ನಂತರ ಬೆಳಗಿನ ಜಾವ 4.00 ಗಂಟೆ ಸುಮಾರಿಗೆ ನಡೆಯುತ್ತಿವೆ.

ಈ ಪೊಲೀಸ್ ಠಾಣೆಯ ಸರಹದ್ದುಗಳಲ್ಲಿ ಸಿ.ಸಿ. ಕ್ಯಾಮೆರಾ ಅಳವಡಿಸುವುದರ ಜೊತೆಗೆ ಪೊಲೀಸ್ ಗಸ್ತು ಹೆಚ್ಚು ಮಾಡುವುದು ಮತ್ತು ಮುಖ್ಯವಾಗಿ ಗಸ್ತು ಮಾಡುವ ಪೊಲೀಸರು ಯುವಕರಾಗಿದ್ದು, ದೃಢಕಾಯರಾಗಿರಬೇಕು. ವ್ಯವಸ್ಥಿತವಾದ ಪೊಲೀಸ್ ಗಸ್ತಿನಿಂದ ಮಾತ್ರ ಇಂತಹ ದರೋಡೆ ಪ್ರಕರಣಗಳನ್ನು ತಡೆಗಟ್ಟಬಹುದು. ಈ ರಸ್ತೆಯಲ್ಲಿ ನಡೆದಿರುವ ಹಲವಾರು ದರೋಡೆ ಪ್ರಕರಣಗಳು ಬೆಳಕಿಗೆ ಬಾರದೇ ಹೋಗಿವೆ. ಈ ಎಕ್ಸ್‌ಪ್ರೆಸ್ ವೇನಲ್ಲಿ ಯಾವುದೇ ರೀತಿಯ ಹೋಟೆಲ್‌ಗಳು ಅಂಗಡಿ ಮುಂಗಟ್ಟುಗಳು ಇಲ್ಲದೇ ಇರುವುದು ಸಹ ದರೋಡೆಗಳು ಹೆಚ್ಚಾಗಲು ಕಾರಣವಾಗಿವೆ. ಈ ಬಗ್ಗೆ ಪೊಲೀಸರು ಹೆಚ್ಚಿನ ಗಮನ ಹರಿಸಬೇಕು. ಮತ್ತು ಸಾರ್ವಜನಿಕರು ನಿರ್ಭೀತಿಯಿಂದ ರಾತ್ರಿ ವೇಳೆ ಓಡಾಡುವಂತ ವ್ಯವಸ್ಥೆಯಾಗಬೇಕು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ

ಕುತೂಹಲವನ್ನು ಕೆರಳಿಸುವ ಶ್ವೇತಾಶ್ವತರೋಪನಿಷತ್ತು

ಅತ್ಯಂತ ಪ್ರಾಚೀನವೆಂದು ಪರಿಗಣಿತವಾಗಿರುವ ಈಶಾವಾಸ್ಯ, ಕೇನ, ಕಠ, ಪ್ರಶ್ನೆ, ಮುಂಡಕ, ಮಾಂಡೂಕ್ಯ, ತೈತ್ತಿರೀಯ, ಐತರೇಯ, ಛಾಂದೋಗ್ಯ, ಬೃಹದಾರಣ್ಯಕ ಎಂಬ ಹತ್ತು ಉಪನಿಷತ್ತುಗಳು ಅತ್ಯಂತ ಪೂಜ್ಯ. ಇವುಗಳನ್ನು ಆಧಾರವಾಗಿ ಇಟ್ಟುಕೊಂಡೇ ಬ್ರಹ್ಮಸೂತ್ರಗಳನ್ನು ರಚಿಸಲಾಗಿದೆ. ಆದರೂ ಇತರ ಕೆಲವು ಉಪನಿಷತ್ತುಗಳನ್ನೂ ಆಚಾರ್ಯರು ಪ್ರಮಾಣಗಳೆಂದು ಪರಿಗ್ರಹಿಸಿ ತಮ್ಮ ಗ್ರಂಥಗಳಲ್ಲಿ ಉದಾಹರಿಸಿದ್ದಾರೆ. ಅವುಗಳಲ್ಲಿ ಶ್ವೇತಾಶ್ವತರೋಪನಿಷತ್ತು ಮುಖ್ಯವಾದುದು. ಇದು ಪದ್ಯರೂಪದಲ್ಲಿದೆ. ಮೊದಲನೆಯ ಪುಟ್ಟ ವಾಕ್ಯ ಬ್ರಹ್ಮವಾದಿನೋ ವದಂತಿ ಎಂಬುದು ಮಾತ್ರ ಗದ್ಯದಲ್ಲಿದೆ. ಇದರಲ್ಲಿ ಆರು ಅಧ್ಯಾಯಗಳಿದ್ದು ನೂರಕ್ಕಿಂತ ಹೆಚ್ಚು ಪದ್ಯಗಳಿವೆ.

ಈ ಉಪನಿಷತ್ತನ್ನು ಸಾಕ್ಷಾತ್ಕರಿಸಿಕೊಂಡು ಹೇಳಿದ ಋಷಿಯ ಹೆಸರು ಶ್ವೇತಾಶ್ವತರ. ಇದು ಅವನ ತಾಯಿ ತಂದೆಯರು ಇಟ್ಟ ಹೆಸರಿನಂತೆ ಕಾಣದು. ಶ್ವೇತ ಎಂದರೆ ಬೆಳ್ಳಗಿರುವುದು. ಅಶ್ವತರ ಎಂದರೆ ಹೇಸರಗತ್ತೆ. ಬಿಳುಪಾದ ಹೇಸರಗತ್ತೆಯನ್ನು ವಾಹನವಾಗಿ ಇಟ್ಟುಕೊಂಡವನು ಎಂದು ಈ ಪದದ ಅರ್ಥ. ಇದು ಅವನ ಅಡ್ಡ ಹೆಸರಾಗಿರಬಹುದು. ಶಂಕರಾನಂದ ಎಂಬ ವಿದ್ವಾಂಸರು ಇಲ್ಲಿ ಅಶ್ವತರ ಎಂದರೆ ಇಂದ್ರಿಯಗಳು ಎಂಬ ತಾತ್ಪರ್ಯವಿದೆ. ಶ್ವೇತ ಎಂದರೆ ಸ್ವಚ್ಛವಾದುದೆಂದು ಅರ್ಥ. ಆದ್ದರಿಂದ ಶ್ವೇತಾಶ್ವತರ ಎಂದರೆ ಸ್ವಚ್ಛ ಇಂದ್ರಿಯಗಳನ್ನುಳ್ಳವನು ಎಂಬ ಅಭಿಪ್ರಾಯ ಎಂದು ಹೇಳಿದ್ದಾರಂತೆ. ಆದರೆ ಉಪನಿಷತ್ತುಗಳಲ್ಲಿ ಇಂದ್ರಿಯಗಳನ್ನು ಅಶ್ವ (=ಹಯ) ಎಂದು ಮಾತ್ರ ಕರೆದಿರುವುದನ್ನು ನಾವು ಕಂಡಿದ್ದೇವೆ. ಕಠೋಪನಿಷತ್ತಿನಲ್ಲಿ–

ಆತ್ಮಾನಂ ರಥಿನಂ ವಿದ್ಧಿ
ಶರೀರಂ ರಥಮೇವ ತು ।
ಬುದ್ಧಿಂ ತು ಸಾರಥಿಂ ವಿದ್ಧಿ ಮನಃ
ಪ್ರಗ್ರಹಮೇವ ಚ ॥
ಇಂದ್ರಿಯಾಣಿ
ಹಯಾನಾಹುರ್ವಿಷಯಾಂಸ್ತೇಷು
ಗೋಡರಾನ್ ।
ಆತ್ಮೇಂದ್ರಿಯಮನೋಯುಕ್ತಂ
ಭೋಕ್ತೇತ್ಯಾಹುರ್ಮನೀಕ್ಷಿಣಃ ॥

ಎಂದು ಹೇಳಿದ್ದಾರೆ. ಎಲ್ಲೂ ಇಂದ್ರಿಯಗಳು ಅಶ್ವತರಗಳು ಎಂದು ಹೇಳಿಲ್ಲ. ಸ್ವಚ್ಛ ಇಂದ್ರಿಯಗಳುಳ್ಳವನು ಎಂಬ ಅಭಿಪ್ರಾಯವಿದ್ದರೆ ಶ್ವೇತಾಶ್ವ ಎಂದು ಹೇಳಬೇಕಾಗಿತ್ತು. ಶ್ವೇತಾಶ್ವತರ ಎಂಬ ಪದ ಅಲ್ಲಿ ಹೊಂದುವುದಿಲ್ಲ. ಪ್ರಾಣಿ–ವಾಚಕವಾದ ವ್ಯಾಘ್ರ, ಸಿಂಹ, ಋಷಭ ಮುಂತಾದ ಪದಗಳನ್ನು ಪ್ರಶಂಸಾವಾಚಕವಾಗಿ ಬಳಸುವುದುಂಟು. ರಾಜಸಿಂಹ, ಪುರುಷ ವ್ಯಾಘ್ರ, ಪುರುಷರ್ಷಭ ಮುಂತಾದ ಪದಗಳನ್ನು ನೋಡಿದ್ದೇವೆ. ಆದರೆ ಅಶ್ವತರ ಎಂಬುದು ಪ್ರಶಂಸಾವಾಚಕವಲ್ಲ. ಆದ್ದರಿಂದ ಶ್ವೇತಾಶ್ವತರ ಎಂಬುದು ಅಡ್ಡ ಹೆಸರಾಗಿರಬಹುದು.

ಈ ಉಪನಿಷತ್ತಿನ ಆರಂಭವೇ ಕುತೂಹಲವನ್ನು ಕೆರಳಿಸುತ್ತದೆ.

ಬ್ರಹ್ಮವಾದಿನೋ ವದಂತಿ ।
ಕಿಂ ಕಾರಣಂ ಬ್ರಹ್ಮ ಕುತಃ ಸ್ಮ ಜಾತಾ?
ಜೀವಾಮ ಕೇನ? ಕ್ವ ಚ ಸಂಪ್ರತಿಷ್ಠಾ?
ಅಧಿಷ್ಠಿತಾಃ ಕೇನ ಸುಖೇತರೇಷು
ವರ್ತಾಮಹೇ ಬ್ರಹ್ಮವಿದೋ ವ್ಯವಸ್ಥಾಮ್ ।

ಎಂಬುದೇ ಮೊದಲನೆಯ ಪದ್ಯ.

ಹೀಗೆ ಬ್ರಹ್ಮವಾದಿಗಳು ಹೇಳುತ್ತಾರೆ (ಅಥವಾ ಕೇಳುತ್ತಾರೆ)

ಕಾರಣವು ಯಾವುದು? ಬ್ರಹ್ಮ ಇರಬಹುದೇ? ನಾವೆಲ್ಲ ಯಾವುದರಿಂದ ಹುಟ್ಟಿದೆವು? ಯಾವ ಪ್ರಯೋಜನಕ್ಕಾಗಿ ಬದುಕಿದ್ದೇವೆ? ನಮ್ಮ ಅಂತಿಮ ನೆಲೆ ಯಾವುದು? ಯಾರ ಅಧಿಕಾರದಲ್ಲಿ ಇರುವುದರಿಂದ ನಾವು ಸುಖದಲ್ಲೂ ದುಃಖದಲ್ಲೂ ಇದ್ದೇವೆ?

ಯಾವ ಬ್ರಹ್ಮಜ್ಞರು ಮಾಡಿದ ವ್ಯವಸ್ಥೆಯಲ್ಲಿ ನಾವು ಬದುಕಿದ್ದೇವೆ? ಈ ಪ್ರಶ್ನೆಗಳೆಲ್ಲ ಮೂಲ ಪ್ರಶ್ನೆಗಳು. ನಾವಿರುವುದು ಅದ್ಭುತವಾದ ಮತ್ತು ವಿಚಿತ್ರವಾದ ಪ್ರಪಂಚದಲ್ಲಿ ಎಷ್ಟು ಗ್ರಹಗಳು, ನಕ್ಷತ್ರಗಳು, ತಾರೆಗಳು, ನೀಹಾರಿಕೆಗಳು! ಎಷ್ಟು ದೇಶಗಳು, ಎಷ್ಟು ವಿಧದ ವೃಕ್ಷಗಳು. ಎಷ್ಟು ಬಗೆಯ ಪ್ರಾಣಿಗಳು, ಪಕ್ಷಿಗಳು, ಜಲಚರಗಳು, ಕೀಟಗಳು. ಇದೆಲ್ಲಕ್ಕೂ ಕಾರಣವೇನು? ವೇದಾಂತಿಗಳು ಹೇಳುವ ಬ್ರಹ್ಮ ಆಕಾರಣವೆ? ಹಾಗೆ ಹೇಳಲು ಪ್ರಮಾಣವೇನಿದೆ? ಬ್ರಹ್ಮದ ಗುಣಲಕ್ಷಣಗಳೇನು? ಅದು ಏಕೆ ಸೃಷ್ಟಿ ಮಾಡಲು ಹೊರಟಿತು? ಅದರ ಪಾಡಿಗೆ ಅದು ಇರಬಹುದಾಗಿತ್ತಲ್ಲ? ನಾವೇಕೆ ಈ ಸ್ವರೂಪದಲ್ಲಿ ಹುಟ್ಟಿದೆವು? ನಮ್ಮನ್ನು ಸೃಷ್ಟಿಸಿದ ಬ್ರಹ್ಮಕ್ಕೆ ನಮ್ಮ ಬದುಕಿನ ಪ್ರಯೋಜನವೇನು ಎಂಬುದು ತಿಳಿದಿರಬೇಕಲ್ಲ? ಹೋಗಲಿ, ಹಾಗೆ ಬದುಕಿ ಕೊನೆಯಲ್ಲಿ ನಾವೆಲ್ಲಿಗೆ ಹೋಗಿ ಸೇರಬೇಕು? ನಮ್ಮ ಅಂತಿಮ ಗುರಿ ಯಾವುದು? ಈ ಜೀವನದಲ್ಲಿ ನಮಗೆ ಸುಖವೂ ದುಃಖಗಳೂ ಇವೆ. ಇವು ನಮಗೆ ಉಂಟಾಗುವಂತೆ ಮಾಡಿದವರು ಯಾರು? ನಮ್ಮದೇ ಅಧಿಕಾರ ಆಗಿದ್ದರೆ ಸದಾ ಸುಖದಲ್ಲಿರುತ್ತಿದ್ದೆವು. ಆದರೆ ಹಾಗಿಲ್ಲ. ನಮಗೆ ಸರ್ವಥಾ ಇಷ್ಟವಿಲ್ಲದ ದುಃಖಗಳು ಬರುತ್ತಿವೆ. ಹೀಗಾಗುವಂತೆ ವ್ಯವಸ್ಥೆ ಮಾಡಿದವರು ಯಾರು?

ಹೀಗೆ ಮೊದಲನೆಯ ಪದ್ಯದಲ್ಲೇ ನಮಗೆ ಹುಟ್ಟಬಹುದಾದ ನಾನಾ ಪ್ರಶ್ನೆಗಳನ್ನು ಶ್ವೇತಾಶ್ವತರೋಪನಿಷತ್ತು ಕೇಳಿದೆ. ಅಂದಿನ ಪ್ರಪಂಚದಲ್ಲಿ, ಎಂದರೆ ಮೂರು ಸಾವಿರ ವರ್ಷಗಳಷ್ಟು ಹಿಂದಿನ ಭಾರತದಲ್ಲಿ ಪ್ರಖರ ವಿಚಾರವಾದಿಗಳಿದ್ದರು. ಯಾವನೋ ಒಬ್ಬ ಋಷಿ ಹೇಳಿದ್ದನ್ನು ಇತರರು ಪ್ರಶ್ನೆ ಮಾಡದೆ ಒಪ್ಪಿಕೊಳ್ಳುತ್ತಿದ್ದರೆಂಬುದು ಸುಳ್ಳು. ಆಗಲೂ ಆಸ್ತಿಕರು, ನಾಸ್ತಿಕರು, ಸಂದೇಹವಾದಿಗಳು, ಅಜ್ಞೇಯವಾದಿಗಳು ಇದ್ದರು. ಒಂದೊಂದು ಪ್ರಶ್ನೆಗೂ ಹಲವರು ಹಲವು ರೀತಿಯಲ್ಲಿ ಉತ್ತರಗಳನ್ನು ಕೊಡುತ್ತಿದ್ದರು. ಆದ್ದರಿಂದಲೇ ನಾನಾ ದರ್ಶನಗಳು ಹುಟ್ಟಿದವು. ಎಲ್ಲ ಪಕ್ಷಗಳ ಅಥವಾ ಮತಗಳ ಅನುಯಾಯಿಗಳೂ ಇದ್ದರು. ಈ ಉಪನಿಷತ್ತಿನ ಎರಡನೆಯ ಪದ್ಯವನ್ನು (ಅಥವಾ ಮಂತ್ರವನ್ನು) ನೋಡಿದರೆ ಎಂತೆಂತಹ ಉತ್ತರಗಳನ್ನು ಪ್ರಾಜ್ಞರು ಕೊಡುತ್ತಿದ್ದರೆಂದು ತಿಳಿಯುತ್ತದೆ.

ಕಾಲಃ ಸ್ವಭಾವೋ ನಿಯತಿರ್ಯದೃಚ್ಛಾ
ಭೂತಾನಿ ಯೋನಿಃ ಪುರುಷ ಇತಿ ಚಿಂತ್ಯಾ।
ಸಂಯೋಗ ಏಷಾಂ ನ ತ್ವಾತ್ಮಭಾವಾದ್
ಆತ್ಮಾಪ್ಯನೀಶಃ ಸುಖದುಃಖಹೇತೋ॥

ಕಾಲವೇ ಎಲ್ಲದರ ಕಾರಣ. ಸ್ವಭಾವವೇ ಕಾರಣ. ನಿಯತಿ (ಅಗೋಚರ) ನಿಯಮವೇ ಜಗತ್ತಿನ ಕಾರಣ. ಯದೃಚ್ಛಾ= ಆಕಸ್ಮಿಕ ಸಂದರ್ಭವೇ ಕಾರಣ. ಪಂಚಭೂತಗಳೇ ಸೃಷ್ಟಿಯ ಕಾರಣ. ನಾವು ಕಾಣದ ಶಕ್ತಿಯೇ ಕಾರಣ.

ಬುದ್ಧಿಶಕ್ತಿಯುಳ್ಳ ಜೀವಾತ್ಮನೇ ಕಾರಣ – ಹೀಗೆ ಹೇಳಿದರೆ ಇದನ್ನು ಒಪ್ಪಲಾಗದು. ಇವೆಲ್ಲವುಗಳ ಸಂಯೋಗವು ಆಗಲೆಂದರೆ ಅದು ತಾನೇ ಉಂಟಾಗುವುದು ಹೇಗೆ. ಆತ್ಮನೇ ಜಗತ್‌ಸೃಷ್ಟಿಯ ಕಾರಣ ಎನ್ನೋಣ ಎಂದರೆ ಅವನೂ ಸುಖ ದುಃಖಗಳ ವಿಷಯದಲ್ಲಿ ಸಮರ್ಥನಲ್ಲ.

ಈ ಪದ್ಯದಲ್ಲಿ ಆ ಕಾಲದ ನಾನಾ ವಾದಗಳ ಸಾರವಿದೆ. ಕಾರ್ಯ ಆಗಲು ಕಾಲವೊಂದೇ ಸಾಕು. ಬೇರೆ ಏನೂ ಬೇಕಿಲ್ಲವೆಂದೂ ವಾದಿಸುವವರಿದ್ದರು. ಕಾಲವೇ ಒಳ್ಳೆಯದನ್ನೂ ಕೆಟ್ಟದ್ದನ್ನೂ ಮಾಡುತ್ತದೆ ಎಂದು ಅವರು ನಂಬಿದ್ದರು. ಇನ್ನು ಕೆಲವು ಸ್ವಭಾವವಾದಿಗಳು. ಹಾಗಾಯಿತು ಹೀಗಾಯಿತು ಎಂದರೆ ಅದಕ್ಕೆ ವಸ್ತು ಸ್ವಭಾವವೇ ಕಾರಣ ಎಂದು ಅವರ ವಾದ. ಹೂವು ಮೃದುವಾಗಿರುವುದೇಕೆ? ಮುಳ್ಳು ಚೂಪಾಗಿರುವುದೇಕೆ? ಅದು ಆಯಾ ವಸ್ತುವಿನ ಸ್ವಭಾವ. ಅದಕ್ಕೆ ಕಾರಣ ಹುಡುಕಬೇಕಾಗಿಲ್ಲ. ಜಗತ್ತು ಯಾವಾಗಲೋ ಹುಟ್ಟುವುದು, ಯಾವಾಗಲೋ ಸಾಯುವುದು ಅದರ ಸ್ವಭಾವ ಅಷ್ಟೆ ಅದಕ್ಕೆ ಬುದ್ಧೀಚ್ಛಾಯತ್ನಗಳನ್ನುಳ್ಳ ಕರ್ತಾ ಬೇಕಿಲ್ಲ ಎಂದು ಇವರ ವಾದ. ಇನ್ನು ಕೆಲವರು ನಿಯತಿವಾದಿಗಳು. ನಮಗೆ ತಿಳಿಯದ ನಿಯಮ ನಿಯತಿ. ಅದರ ಅನುಸಾರವಾಗಿ ನಾವು ಹುಟ್ಟುತ್ತೇವೆ, ಬದುಕುತ್ತೇವೆ, ಸಾಯುತ್ತೇವೆ. ಹಾಗೆ ಜಗತ್ತೂ. ಅದನ್ನು ನಾವು ತಡೆಯಲಾರೆವು. ಅರಿಯಲಾರೆವು ಎಂದು ಅವರು ವಾದಿಸುತ್ತಿದ್ದರು. ಯದೃಚ್ಛಾ ಎಂದರೆ ಆಕಸ್ಮಿಕತಾ ವಾದ. ನಮ್ಮ ಹುಟ್ಟೂ ಆಕಸ್ಮಿಕ. ಭೂಮಿಯ ಮೇಲೆ ಜೀವೋತ್ಪತ್ತಿಯಾದದ್ದೂ ಆಕಸ್ಮಿಕ. ಪ್ರಳಯವಾದರೆ ಅದೂ ಆಕಸ್ಮಿಕ. ಯಾವುದಕ್ಕೂ ಕಾರಣವಿಲ್ಲ ಎನ್ನುವುದು. ಇವರ ವಾದ ಇನ್ನು ಕೆಲವರು ಪೃಥಿವೀ, ಜಲ, ತೇಜಸ್, ವಾಯು, ಆಕಾಶ ಎಂಬ ಪಂಚಭೂತಗಳೇ ಜಗತ್ತಿನ ಎಲ್ಲಾ ಆಗುಹೋಗುಗಳಿಗೆ ಕಾರಣ ಎಂದು ಹೇಳುತ್ತಾರೆ. ನಾಲ್ಕು ಭೂತಗಳೇ ಸೇರಿ ಜೀವೋತ್ಪತ್ತಿಯನ್ನು ಮಾಡುತ್ತವೆ. ಇದಕ್ಕೆ ದೇವರು, ಪ್ರಕೃತಿ, ಶಕ್ತಿ ಇತ್ಯಾದಿಗಳನ್ನು ಕಲ್ಪಿಸಬಾರದು ಎಂದು ಇವರ ವಾದ. ಯಾವುದೋ ಶಕ್ತಿ ಇದೆ. ಅದು ಎಲ್ಲವನ್ನೂ ನಡೆಸುತ್ತಿದೆ. ಅದು ನಮಗೆ ಅಜ್ಞೇಯ. ಅದಕ್ಕೆ ಪೂಜೆ ಸಲ್ಲಿಸುವುದು. ಅದನ್ನು ಹೊಗಳಿ ಸ್ತೋತ್ರ ಹೇಳುವುದು ವೃಥಾ. ಅದರಿಂದ ಏನೂ ಪ್ರಯೋಜನವಿಲ್ಲ. ಏಕೆಂದರೆ ಆ ಶಕ್ತಿಗೆ ಅದನ್ನೆಲ್ಲ ತಿಳಿದುಕೊಳ್ಳುವ ಶಕ್ತಿ ಇಲ್ಲ. ಅದನ್ನು ತಡೆಯುವುದಾಗಲಿ, ಬದಲಾಯಿಸುವುದಾಗಲಿ ಅಶಕ್ಯ ಎಂದು ಇವರ ವಾದ. ಇನ್ನು ಆತ್ಮನೇ ಜಗದುತ್ಪತ್ತಿಯ ಕಾರಣ – ಎನ್ನುವವರೂ ಇದ್ದರು.

ಮೇಲೆ ಹೇಳಿದ ಎಲ್ಲದರ ಸಂಯೋಗ ಜಗತ್ತಿನ ಜನ್ಮಕ್ಕೆ ಕಾರಣ ಎಂಬ ವಾದವೂ ಇತ್ತು. ಆದ್ದರಿಂದಲೇ ಆತ್ಮನು ತನ್ನ ಸುಖ ದುಃಖಕ್ಕೆ ಪ್ರಭುವಲ್ಲ. ಹಾಗಿದ್ದಿದ್ದರೆ ಯಾರೂ ದುಃಖಿಗಳೇ ಆಗಿರುತ್ತಿರಲಿಲ್ಲ. ಹೀಗೆ ಮೂರು ಸಹಸ್ರ ವರ್ಷಗಳ ಹಿಂದೆಯೇ ನಡೆಯುತ್ತಿದ್ದ ಚರ್ಚೆಗಳನ್ನು ಶ್ವೇತಾಶ್ವತರ ಮಹರ್ಷಿಯು ಗಮನಿಸಿದ್ದನೆಂಬುದು ಗಮನಾರ್ಹವಾಗಿದೆ.

ಸುಸ್ತಿದಾರ ರೈತರಿಗೆ ಓಟಿಎಸ್ ಯೋಜನೆಯಡಿ ಅನುಕೂಲ

● ರೈತ ಮುಖಂಡರಿಗೆ ಸಿಎಂ ಭರವಸೆ ● ಈ ಸಂಬಂಧ ಅಧಿಕಾರಿಗಳಿಗೆ ಸೂಚಿಸುವುದಾಗಿ ಆಶ್ವಾಸನೆ

ಬೆಂಗಳೂರು, ಆ.22(ಕೆಎಂಶಿ)– ಕರ್ನಾಟಕ ಗ್ರಾಮೀಣ ಬ್ಯಾಂಕಿನಿಂದ ಬೆಳೆಸಾಲ ಪಡೆದು ಸುಸ್ತಿದಾರರಾಗಿರುವ ರೈತರಿಗೆ ಓ.ಟಿ.ಎಸ್. ಯೋಜನೆಯಡಿ ಅನುಕೂಲ ಕಲ್ಪಿಸುವ ಕುರಿತು ಬ್ಯಾಂಕಿನ ಮುಖ್ಯಸ್ಥರು, ನಬಾರ್ಡ್ ಹಾಗೂ ಪ್ರವರ್ತಕ ಬ್ಯಾಂಕ್ ಆದ ಕೆನರಾ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಹಾರ ಕಂಡುಕೊಳ್ಳಲು ಮುಖ್ಯ ಕಾರ್ಯದರ್ಶಿ ಹಾಗೂ ಹಣಕಾಸು ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಶಾಸಕ ಬಿ.ಆರ್.ಪಾಟೀಲ್ ಹಾಗೂ ದರ್ಶನ್ ಪುಟ್ಟಣ್ಣಯ್ಯ ಅವರ ನೇತೃತ್ವದಲ್ಲಿ ತಮ್ಮನ್ನು ಭೇಟಿಯಾದ ರೈತ ಮುಖಂಡರ ನಿಯೋಗದೊಂದಿಗೆ ಈ ಸಮಸ್ಯೆ ಕುರಿತು ಮುಖ್ಯಮಂತ್ರಿ ಚರ್ಚೆ ನಡೆಸಿದರು. ಬಳ್ಳಾರಿ ಜಿಲ್ಲೆಯಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕಿನಿಂದ ಬೆಳೆ ಸಾಲ ಪಡೆದ ರೈತರು, ಅತಿವೃಷ್ಟಿ, ಅನಾವೃಷ್ಟಿ, ಬೆಲೆ ಕುಸಿತದಂತಹ ಸಮಸ್ಯೆಗಳಿಂದಾಗಿ ಸಕಾಲದಲ್ಲಿ ಸಾಲ ತೀರಿಸಲಾಗದೆ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಬ್ಯಾಂಕಿನ ಸಿಬ್ಬಂದಿ ಸಾಲ ಮರುಪಾವತಿಗೆ ನೋಟೀಸು, ಲೀಗಲ್ ನೋಟೀಸುಗಳನ್ನು ಕಳುಹಿಸಿ, ಅದರ ವೆಚ್ಚವನ್ನೂ ರೈತರ ಮೇಲೆಯೇ ಹಾಕುತ್ತಿದ್ದಾರೆ.

ಇಂತಹ ಕ್ರಮಗಳಿಂದಾಗಿ 30,000 ರೂ. ಮೊತ್ತದ ಸಾಲಕ್ಕೆ 2.8 ಲಕ್ಷ ರೂ. ಪಾವತಿಸುವಂತೆ, 3 ಲಕ್ಷ ರೂ. ಸಾಲಕ್ಕೆ 30 ಲಕ್ಷ ರೂ. ಪಾವತಿಸುವಂತೆ ಕಿರುಕುಳ ನೀಡಲಾಗುತ್ತಿದೆ. ಇದನ್ನು ಪ್ರತಿಭಟಿಸಿ, 8 ತಿಂಗಳಿನಿಂದ ರೈತ ಹೋರಾಟಗಾರರು ಧರಣಿ ನಡೆಸುತ್ತಿದ್ದಾರೆ. ರೈತರು ಓ.ಟಿ.ಎಸ್. ಅಡಿ ಶೇ.50 ರಷ್ಟು ಅಸಲು ಪಾವತಿಸಲು ಸಿದ್ಧರಿದ್ದಾರೆ. ರೈತರ ಸಮಸ್ಯೆ ಬಗೆಹರಿಸಿ, ಅನುಕೂಲ ಮಾಡಿಕೊಡುವಂತೆ ಮನವಿ ಮಾಡಿದರು. ಹಲವು ರಾಷ್ಟ್ರೀಕೃತ ಬ್ಯಾಂಕುಗಳು ರೈತರಿಗೆ ಈ ಅನುಕೂಲ ಕಲ್ಪಿಸಿವೆ ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಬ್ಯಾಂಕ್ ಅಧಿಕಾರಿಗಳು, ಬ್ಯಾಂಕಿನ ಆಡಳಿತ ಮಂಡಳಿ ಇದಕ್ಕೆ ತೀರ್ಮಾನ ಕೈಗೊಳ್ಳಬೇಕಾಗುತ್ತದೆ. ಬ್ಯಾಂಕಿನಲ್ಲಿ 6500 ಕೋಟಿ ರೂ. ಸುಸ್ತಿ ಸಾಲವಿದ್ದು, ಅದರಲ್ಲಿ 5000 ಕೋಟಿ ರೂ. ಬೆಳೆ ಸಾಲವಾಗಿದೆ ಎಂದರು. ಬ್ಯಾಂಕಿನ ಅಧ್ಯಕ್ಷರು ಗೈರು ಹಾಜರಾದ ಕುರಿತು ಮುಖ್ಯಮಂತ್ರಿಗಳು ಅಸಮಾಧಾನ ವ್ಯಕ್ತಪಡಿಸಿದರು. ನಂತರ ಮಾತನಾಡಿದ ಮುಖ್ಯಮಂತ್ರಿಗಳು, ರೈತರ ಕುರಿತು ಮಾನವೀಯತೆಯಿಂದ ವರ್ತಿಸುವಂತೆ ಅಧಿಕಾರಿಗಳಿಗೆ ಸಲಹೆ ಮಾಡಿದರಲ್ಲದೆ, ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಸಂಬಂಧಿಸಿದ ಬ್ಯಾಂಕರುಗಳ ಸಭೆ ನಡೆಸಿ ಪರಿಹಾರ ಸೂತ್ರ ಕಂಡುಕೊಂಡ ನಂತರ ಮತ್ತೊಮ್ಮೆ ರೈತ ಪ್ರತಿನಿಧಿಗಳೊಂದಿಗೆ ಸಭೆ ನಡೆಸುವುದಾಗಿ ತಿಳಿಸಿದರು.

ವಿಶ್ವಕಪ್ ಚೆಸ್ ಫೈನಲ್: ಪ್ರಗ್ನಾನಂದ–ಕಾರ್ಲ್‌ಸೆನ್ ನಡುವಿನ ಮೊದಲ ಪಂದ್ಯ ಡ್ರಾ

ಬಾಕು(ಅಜರ್‌ಬೈಜಾನ್), ಆ.22–ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್ ಪ್ರಗ್ನಾನಂದ ಅವರು ಮಂಗಳವಾರ ಇಲ್ಲಿ ನಡೆದ ಫಿಡೆ ವಿಶ್ವಕಪ್ ಚೆಸ್ ಟೂರ್ನಿಯ ಫೈನಲ್‌ನ ಮೊದಲ ಕ್ಲಾಸಿಕಲ್ ಗೇಮ್‌ನಲ್ಲಿ ವಿಶ್ವದ ನಂ.1 ಮ್ಯಾಗ್ನಸ್ ಕಾರ್ಲ್‌ಸನ್ ವಿರುದ್ಧ ಡ್ರಾ ಸಾಧಿಸಿದ್ದಾರೆ.



ಈ ಪಂದ್ಯದ 2ನೇ ಕ್ಲಾಸಿಕ್ ಗೇಮ್ ನಾಳೆ ನಡೆಯಲಿದ್ದು, ಇದರಲ್ಲಿ ಗೆದ್ದವರು ವಿಶ್ವ ಚಾಂಪಿಯನ್ ಆಗಿ ಹೊರಹೊಮ್ಮಲಿದ್ದಾರೆ. 90 ನಿಮಿಷಗಳ ಮೊದಲ ಸುತ್ತಿನಲ್ಲಿ ಪ್ರಗ್ನಾನಂದ ನಾರ್ವೆಯ ಕಾರ್ಲ್‌ಸನ್ ಅವರನ್ನು ಆರಂಭದಲ್ಲೇ ಒತ್ತಡಕ್ಕೆ ಸಿಲುಕಿಸಿದ್ದರು. ಆದರೆ ಒಂದು ಹಂತ ದಾಟುತ್ತಿದ್ದಂತೆ ಪ್ರಗ್ನಾನಂದನ ಜಾಣ ನಡೆಗಳನ್ನು ಅರಿತ ಬಳಿಕ ರಕ್ಷಣಾತ್ಮಕ ಆಟಕ್ಕೆ ಒತ್ತು ನೀಡಿದ್ದರಿಂದ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಪ್ರಗ್ನಾನಂದ ಅವರು ವಿಶ್ವದ ನಂ.3 ಫ್ಯಾಬಿಯಾನೊ ಕರುವಾನಾ 3.5–2.5ರಿಂದ ಆಘಾತಕಾರಿ ಮೂಲಕ ಫೈನಲ್‌ಗೆ ಪ್ರವೇಶಿಸಿದರು. ಪ್ರಗ್ನಾನಂದ, ಚೆಸ್ ದಂತಕತೆ ವಿಶ್ವನಾಥನ್ ಆನಂದ್ ನಂತರ ವಿಶ್ವಕಪ್‌ನಲ್ಲಿ ಫೈನಲ್ ತಲುಪಿದ ದೇಶದ 2ನೇ ಆಟಗಾರನಾಗಿದ್ದಾನೆ.


15ನೇ ಹಣಕಾಸು ಆಯೋಗದ ಶಿಫಾರಸಿನಂತೆ ವಿಶೇಷ ಅನುದಾನ ಬಿಡುಗಡೆ ಮಾಡಿ

ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ

ಬೆಂಗಳೂರು: 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಕರ್ನಾಟಕಕ್ಕೆ 5,495 ಕೋಟಿ ರೂ.ಗಳ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದಿರುವ ಸಿದ್ದರಾಮಯ್ಯ, 15ನೇ ಹಣಕಾಸು ಆಯೋಗದ 2020–21ರ ಪ್ರಕಾರ ವಿಶೇಷ ಅನುದಾನವಾಗಿ 5,495 ಕೋಟಿ ರೂ. ಶಿಫಾರಸು ಮಾಡಲಾಗಿತ್ತು. ಆದರೆ, ರಾಜ್ಯಕ್ಕೆ ಯಾವುದೇ ವಿಶೇಷ ಅನುದಾನ ಬಿಡುಗಡೆಯಾಗಿಲ್ಲ. ಹೀಗಾಗಿ, ತಕ್ಷಣ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

2021–22ರಲ್ಲಿ ಹಣಕಾಸು ಆಯೋಗ 6 ಸಾವಿರ ಕೋಟಿ ರೂ. ಅನ್ನು ಬೆಂಗಳೂರಿನ ನೀರಾವರಿ ಕಾಮಗಾರಿ ಮತ್ತು ಪೆರಿಫೆರಲ್ ರಸ್ತೆ ನಿರ್ಮಾಣಕ್ಕೆ ನೀಡಿತ್ತು. ಆದರೆ ಯಾವುದೇ ಅನುದಾನ ರಾಜ್ಯ ಸರ್ಕಾರಕ್ಕೆ ನೀಡಿಲ್ಲ. ಇದರಿಂದ ರಾಜ್ಯದ ಹಣಕಾಸು ಸ್ಥಿತಿಗೆ ಹಿನ್ನಡೆಯಾಗಿದೆ. ರಾಜ್ಯದ ಹಣಕಾಸು ಸ್ಥಿತಿಯನ್ನು ಅರ್ಥಮಾಡಿಕೊಂಡು ವಿಶೇಷ ಅನುದಾನ ಮತ್ತು ನಿರ್ದಿಷ್ಟ ಅನುದಾನಕ್ಕೆ ಮೊದಲ ಆದ್ಯತೆ ನೀಡಬೇಕೆಂದು ಒತ್ತಾಯಿಸಿದ್ದಾರೆ. 14ನೆ ಹಣಕಾಸು ಆಯೋಗವು 2020–21ರಿಂದ 2025–26ನೆ ಸಾಲಿಗೆ ತೆರಿಗೆ ಹಂಚಿಕೆಯಲ್ಲಿ ರಾಜ್ಯದ ಪಾಲನ್ನು ಶೇ.4.71ರಷ್ಟು ನಿಗದಿ ಮಾಡುವಂತೆ ಶಿಫಾರಸ್ಸು ಮಾಡಿದ್ದರೂ 15ನೆ ಹಣಕಾಸು ಆಯೋಗವು ಈ ಪ್ರಮಾಣವನ್ನು ಶೇ.3.647ಕ್ಕೆ ಇಳಿಸಿದೆ. ಹಣಕಾಸು ಆಯೋಗವು ಅಳವಡಿಸಿಕೊಂಡಿರುವ ಮಾನದಂಡದಿಂದಾಗಿ ರಾಜ್ಯಕ್ಕೆ ಬಹುದೊಡ್ಡ ನಷ್ಟವಾಗಿದೆ.



2011–12ರಲ್ಲಿ ಎಲ್ಲ ರಾಜ್ಯಗಳ ಜಿಎಸ್‌ಡಿಪಿ ಸರಾಸರಿ ಶೇ.9ಕ್ಕಿಂತ ಕಡಿಮೆ ಇದ್ದರೆ, ನಮ್ಮ ರಾಜ್ಯದ ಜಿಎಸ್‌ಡಿಪಿಯನ್ನು ಶೇ.30ರಷ್ಟು ಹೆಚ್ಚಿಸಲಾಗಿದೆ. 15ನೆ ಹಣಕಾಸು ಆಯೋಗದ ಶಿಫಾರಸ್ಸಿನಂತೆ ರಾಜ್ಯಕ್ಕೆ ಯಾವುದೇ ವಿಶೇಷ ಅನುದಾನ ಬಿಡುಗಡೆಯಾಗಿಲ್ಲ. ಹಾಗಾಗಿ ಕೂಡಲೇ 5495 ಕೋಟಿ ರೂ. ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದು ಸಿದ್ದರಾಮಯ್ಯ ಮನವಿ ಮಾಡಿದ್ದಾರೆ. 2011–12ರಲ್ಲಿ ಐಟಿ ಸಂಬಂಧಿತ ಸೇವೆಗಳಲ್ಲಿ ರಾಜ್ಯದ ಜಿಎಸ್‌ಡಿಪಿ ಗಣನೀಯವಾಗಿ ಹೆಚ್ಚಳವಾಗಿದೆಯಾದರೂ ಐಟಿ ಸೇವೆಗಳ ರಫ್ತು ಶೂನ್ಯ ದರವನ್ನು ಹೊಂದಿರುವುದರಿಂದ ರಾಜ್ಯದ ತೆರಿಗೆಗಳಿಗೆ ಈ ಸೇವೆಗಳು ಯಾವುದೇ ಸಹಕಾರಿಯಾಗಿಲ್ಲ. 14ನೇ ಹಣಕಾಸು ಆಯೋಗದ ಶಿಫಾರಸಿಗೆ ಹೋಲಿಸಿದರೆ 15ನೆ ಹಣಕಾಸು ಆಯೋಗದಲ್ಲಿ ಕರ್ನಾಟಕಕ್ಕೆ ತೆರಿಗೆ ಹಂಚಿಕೆ ಪಾಲು ಕಡಿಮೆಯಾಗಿದೆ. ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯಕ್ಕೆ ಒಟ್ಟು ತೆರಿಗೆ ಹಂಚಿಕೆಯಲ್ಲಿ 37,011 ಕೋಟಿ ರೂ.ಕಡಿಮೆಯಾಗಿದೆ.

ರಾಜ್ಯದ ಸಂಪನ್ಮೂಲಗಳು ಮತ್ತು ಕೇಂದ್ರ ಸರಕಾರದ ಹಣಕಾಸಿನ ಬದ್ಧತೆಗಳನ್ನು ಗಮನದಲ್ಲಿಟ್ಟುಕೊಂಡು, ವಿಶೇಷ ಅನುದಾನಗಳ ಶಿಫಾರಸನ್ನು ಸೂಕ್ತವಾಗಿ ಪರಿಗಣಿಸಲಾಗುವುದು ಎಂದು ಹೇಳಿದೆ. ಆದರೆ, ಕರ್ನಾಟಕ ರಾಜ್ಯಕ್ಕೆ ಇದುವರೆಗೆ ಯಾವುದೇ ಅನುದಾನ ಬಿಡುಗಡೆಯಾಗಿಲ್ಲ ಮತ್ತು ತೆರಿಗೆ ಹಂಚಿಕೆಯಲ್ಲಿ ತೀವ್ರ ಕಡಿತ ಮಾಡಲಾಗಿದೆ. ಈಗಾಗಲೇ ಸಂಕಷ್ಟದಲ್ಲಿರುವ ರಾಜ್ಯದ ಹಣಕಾಸಿನ ಸ್ಥಿತಿಗೆ ಇದು ದೊಡ್ಡ ಹಿನ್ನಡೆಯಾಗಿದೆ. 2021–26ನೇ ಸಾಲಿನಲ್ಲಿ ಹಣಕಾಸು ಆಯೋಗ 6 ಸಾವಿರ ಕೋಟಿ ರೂ.ಗಳನ್ನು ಬೆಂಗಳೂರಿನ ನೀರಾವರಿ ಕಾಮಗಾರಿ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕೆ ನೀಡಿತ್ತು. ಆದರೆ, ಯಾವುದೇ ಅನುದಾನ ಕರ್ನಾಟಕ ಸರ್ಕಾರಕ್ಕೆ ನೀಡಿಲ್ಲ. ಇದರಿಂದ ರಾಜ್ಯದ ಹಣಕಾಸು ಸ್ಥಿತಿಗೆ ಹಿನ್ನಡೆ ಆಗಿದೆ. ರಾಜ್ಯದ ಹಣಕಾಸು ಸ್ಥಿತಿಯನ್ನು ಅರ್ಥ ಮಾಡಿಕೊಂಡು ವಿಶೇಷ ಅನುದಾನವನ್ನು ಬಿಡುಗಡೆ ಮಾಡುವಂತೆ ಮನವಿ ಮಾಡಿಕೊಂಡಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಲ್ಲಿ 'ಗೃಹಲಕ್ಷ್ಮಿ' ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಎರಡು ಲಕ್ಷ ಜನ ಪಾಲ್ಗೊಳ್ಳುವ ನಿರೀಕ್ಷೆ

- ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಸಚಿವರು, ಶಾಸಕರು, ಮುಖಂಡರು ಭಾಗಿ
- ಸರ್ಕಾರದ ಕಾರ್ಯಕ್ರಮವಾದರೂ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಕ್ತಿ ಪ್ರದರ್ಶನಕ್ಕೆ ಪ್ರಾಧಾನ್ಯತೆ
- ಕಾರ್ಯಕ್ರಮದಲ್ಲಿ ಜನರಿಗೆ ಊಟದ ವ್ಯವಸ್ಥೆ; ನಿರ್ಮಾಣವಾಗುತ್ತಿದೆ ವಿಶಾಲವಾದ ಜರ್ಮನ್ ಪೆಂಡಾಲ್

ಮೈಸೂರಿನಲ್ಲಿ ಮೂರು ದಿನ ಸಿದ್ದರಾಮಯ್ಯ ವಾಸ್ತವ್ಯ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಗಸ್ಟ್ 28ರಿಂದ ಮೂರು ದಿನಗಳ ಕಾಲ ಮೈಸೂರಿನಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಮುಖ್ಯಮಂತ್ರಿ ಆದ ನಂತರ ಇದೇ ಮೊದಲ ಬಾರಿಗೆ ಹೆಚ್ಚು ಸಮಯ ಮೈಸೂರಿನಲ್ಲಿ ಸಿದ್ದರಾಮಯ್ಯ ವಾಸ್ತವ್ಯ ಹೂಡುತ್ತಿದ್ದಾರೆ. ಆಗಸ್ಟ್ 28 ರಂದು ಮೈಸೂರಿಗೆ ಆಗಮಿಸುವ ಸಿದ್ದರಾಮಯ್ಯ ಕೆಡಿಪಿ ಸಭೆ ನಡೆಸಲಿದ್ದಾರೆ. ಮೈಸೂರು ನಗರ ಹಾಗೂ ಜಿಲ್ಲೆಯ ಪ್ರಗತಿ ಬಗ್ಗೆ ಸಭೆ ನಡೆಸಿ, ಅಧಿಕಾರಿಗಳಿಗೆ ಚುರುಕು ಮುಟ್ಟಿಸಲಿದ್ದಾರೆ. ಈ ವೇಳೆ ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಿದ್ಧತಾ ಕಾರ್ಯಗಳ ಬಗ್ಗೆಯೂ ಪರಿಶೀಲನೆ ನಡೆಸುವರು. ಮಾರನೇ ದಿನ ಅಂದರೆ ಆಗಸ್ಟ್ 29 ರಂದು ಸುತ್ತೂರು ಮಠದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇದರ ಜೊತೆಗೆ ಇನ್ನು ಕೆಲವು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮೈಸೂರು ನಗರದಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಆಗಸ್ಟ್ 30 ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯುವ ಗೃಹಲಕ್ಷ್ಮಿ ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮೂರು ದಿನದಲ್ಲಿ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವ ಸಾಧ್ಯತೆಯೂ ಇದೆ.

ಮೈಸೂರು, ಆ.22(ಬಿಎಲ್‌ಯು)– ಕುಟುಂಬದ ಯಜಮಾನಿಗೆ 2 ಸಾವಿರ ರೂಪಾಯಿ ನೀಡುವ ಗೃಹಲಕ್ಷ್ಮಿ ಯೋಜನೆಗೆ ಆಗಸ್ಟ್ 30 ರಂದು ಮೈಸೂರಿನಲ್ಲಿ ಚಾಲನೆ ದೊರೆಯಲಿದ್ದು, ಈ ಮಹತ್ವದ ಕಾರ್ಯಕ್ರಮದಲ್ಲಿ ಎರಡು ಲಕ್ಷ ಜನರು ಭಾಗವಹಿಸುವ ನಿರೀಕ್ಷೆ ಇದೆ. ಈ ಹಿನ್ನೆಲೆ ಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ರಮೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಸಿದ್ಧತಾ ಕಾರ್ಯಗಳ ಪರಿಶೀಲನೆ ನಡೆಸಿದರು.

ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಗೃಹಲಕ್ಷ್ಮಿ ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮ ನಡೆಯಲಿದ್ದು, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಸೇರಿದಂತೆ ಸಿದ್ದರಾಮಯ್ಯ ಸಂಪುಟದ ಬಹುತೇಕ ಮಂತ್ರಿಗಳು, ಪಕ್ಷದ ಶಾಸಕರು, ಮುಖಂಡರು ಭಾಗವಹಿಸಲಿದ್ದಾರೆ. ಗೃಹಜ್ಯೋತಿ ಯೋಜನೆಗೆ ಕಲ್ಬುರ್ಗಿಯಲ್ಲಿ ಚಾಲನೆ ನೀಡಲಾಗಿತ್ತು. ಗೃಹಲಕ್ಷ್ಮಿ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆ ಮೈಸೂರಿನಲ್ಲಿ ಚಾಲನೆ ನೀಡಲಾಗುತ್ತಿದೆ. ಇದು ಸರ್ಕಾರಿ ಕಾರ್ಯಕ್ರಮವಾದರೂ ಮುಂದಿನ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಶಕ್ತಿ ಪ್ರದರ್ಶನ ಎಂದೇ ಬಿಂಬಿಸಲಾಗುತ್ತಿದೆ. ಸಮಾರಂಭ ನಡೆಯುವ ಮಹಾರಾಜ ಕಾಲೇಜು ಮೈದಾನದಲ್ಲಿ ಗಾಳಿ, ಮಳೆ, ಬಿಸಿಲಿನಿಂದ ಸುರಕ್ಷಿತ ವಿಶಾಲವಾದ ಜರ್ಮನ್ ಪೆಂಡಾಲ್ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ. ನೂರಾರು ಜನರು ಪೆಂಡಾಲ್ ನಿರ್ಮಾಣ ಕಾರ್ಯದಲ್ಲಿ ತೊಡಗಿದ್ದಾರೆ. ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು ಜಿಲ್ಲೆಯ ಫಲಾನುಭವಿಗಳು ಸೇರಿದಂತೆ 2 ಲಕ್ಷ ಜನರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ವ್ಯವಸ್ಥಿತ ಆಸನದ ವ್ಯವಸ್ಥೆ, ವಾಹನ ನಿಲುಗಡೆ ವ್ಯವಸ್ಥೆ, ಊಟದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಬೇಕು ಎಂದು ಇದೇ ವೇಳೆ ಡಾ. ರಾಜೇಂದ್ರ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮೊಬೈಲ್ ಶೌಚಾಲಯ, ಆಂಬುಲೆನ್ಸ್ ಹಾಗೂ ವೈದ್ಯರ ತಂಡ ನಿಯೋಜಿಸಬೇಕು. ಎಲ್ಲೂ ಲೋಪ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು. ನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್, ಮುಡಾ ಆಯುಕ್ತ ದಿನೇಶ್ ಕುಮಾರ್, ಡಿಸಿಪಿ ಮುತ್ತುರಾಜ್, ಜಾಹ್ನವಿ ಸೇರಿದಂತೆ ಇತರೆ ಅಧಿಕಾರಿಗಳು ಈ ವೇಳೆ ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಡಾ.ರಾಜೇಂದ್ರ ಸಿದ್ಧತಾ ಕಾರ್ಯ ಪರಿಶೀಲನೆ





ಡಾ.ಕಿಶೋರಿ, ಕಿಶೋರ ಹಂಪಿ ಹೋಳಿ ಶಾಸ್ತ್ರೀಯ ನೃತ್ಯ



ಮೈಸೂರು, ಆ. 22– ಪರಮಪೂಜ್ಯ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀ ಪಾದಂಗಳರವರ 36ನೇ ಚಾತುರ್ಮಾಸ್ಯದ ಪ್ರಯುಕ್ತ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣದಾಮದಲ್ಲಿ ನಾಳೆ (ಆ. 23) ಸಂಜೆ 7 ಗಂಟೆಗೆ ಡಾ. ಕಿಶೋರಿ ಮತ್ತು ಕಿಶೋರ ಹಂಪಿ ಹೋಳಿ ಅವರಿಂದ ಶಾಸ್ತ್ರೀಯ ನೃತ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಚಾತುರ್ಮಾಸ್ಯ ಸಮಿತಿಯ ಕಾರ್ಯಾಧ್ಯಕ್ಷರಾದ ರವಿಶಾಸ್ತ್ರಿ ತಿಳಿಸಿದ್ದಾರೆ.

ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಮಹಿಳೆಯರಿಗೆ ಸೆಲ್ಫಿ ಸ್ಪರ್ಧೆ



ಮೈಸೂರು, ಆ. 22– ಮಹಿಳೆಯರು ಹಾಗೂ ಮಕ್ಕಳಲ್ಲಿ ಸ್ಪರ್ಧೆಗಳು, ವಿಶೇಷ ಆಸಕ್ತಿ ಹಾಗೂ ವಿನೂತನ ಅಭಿರುಚಿ ಕಲಿಸುತ್ತವೆ ಎಂದು ಉಡುಪಿ ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ತಿಳಿಸಿದರು.

ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಕೆಎಂಪಿಕೆ ಟ್ರಸ್ಟ್, ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಆನ್‌ಲೈನ್ ಮೂಲಕ ಮಹಿಳೆಯರಿಗಾಗಿ ಆಯೋಜಿಸಿರುವ ಸೆಲ್ಫಿ ಸ್ಪರ್ಧೆಯ ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಶ್ರೀಗಳು, ಹಬ್ಬದಂತಹ ಧಾರ್ಮಿಕ ಆಚರಣೆಗಳು ಕುಟುಂಬದಲ್ಲಿ ಶಾಂತಿ ನೆಮ್ಮದಿ ನೆಲೆಸಲು ಮುನ್ನುಡಿ ಬರೆಯುತ್ತವೆ. ಮನೆಗಳಲ್ಲಿ ಮಕ್ಕಳಲ್ಲಿ ಸಂಸ್ಕಾರ ಬೆಳೆಸಿಕೊಳ್ಳಲು, ಪರಂಪರೆ ಉಳಿಯಲು ಪ್ರೇರೇಪಣೆ ನೀಡುತ್ತವೆ. ಇಂತಹ ಹಬ್ಬಗಳ ಆಚರಣೆ ಮನಸ್ಸಿಗೆ ನೆಮ್ಮದಿ ತಂದುಕೊಡುತ್ತದೆ ಎಂದರು.

ಹಬ್ಬದ ಆಚರಣೆಗಳಲ್ಲಿ ಇಂತಹ ಸ್ಪರ್ಧೆಗಳು ಮಹಿಳೆಯರಲ್ಲಿ ಹಾಗೂ ಮಕ್ಕಳಲ್ಲಿ ಹೆಚ್ಚಿನ ಮಟ್ಟದಲ್ಲಿ ಆಸಕ್ತಿ ಹಾಗೂ ವಿನೂತನ ಅಭಿರುಚಿ ಮೂಡಲು ಒತ್ತಾಸೆಯಾಗಿ ನಿಲ್ಲುತ್ತವೆ. ಸ್ಪರ್ಧಾತ್ಮಕ ಶಕ್ತಿ ಮಕ್ಕಳಲ್ಲಿ ಬೆಳೆದರೆ ಮಕ್ಕಳ ಪ್ರತಿಭೆ ಗುರುತಿಸಲು ಇಂತಹ ವೇದಿಕೆಗಳು ಅವಶ್ಯಕ ಎಂದರು.

ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್ ಮಾತನಾಡಿ, ಆನ್‌ಲೈನ್ ಮೂಲಕ ಮನೆಯಲ್ಲಿ ಅಲಂಕರಿಸಿ ಪ್ರತಿಷ್ಠಾಪಿಸಿರುವ ವರಮಹಾಲಕ್ಷ್ಮಿ ದೇವಿಯ ಜೊತೆಗೆ ಫೋಟೋವನ್ನು ಕಳಿಸುವ ಮೂಲಕ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ನೊಂದಣಿ ಶುಲ್ಕ 100ರೂ ಇರುತ್ತದೆ. ಆಗಸ್ಟ್ 26ರ ಬೆಳಿಗ್ಗೆ 11 ಗಂಟೆಯ ಒಳಗಡೆ 9880752727 ದೂರವಾಣಿಗೆ ವರಮಹಾಲಕ್ಷ್ಮಿ ಜೊತೆ ಫೋಟೋ ಮತ್ತು ವಿಳಾಸ ಕಳಿಸಿಕೊಡಬೇಕು. ಅತ್ಯುತ್ತಮ 10 ಚಿತ್ರಕ್ಕೆ ಬಹುಮಾನ ಹಾಗೂ ಸ್ಪರ್ಧಿಸಿದ ಎಲ್ಲಾ ಸ್ಪರ್ಧಾಳುಗಳಿಗೆ ಸ್ಮರಣಿಕೆ ಮತ್ತು ಪ್ರಮಾಣ ಪತ್ರ ನೀಡಲಾಗುವುದು ಎಂದು ಸ್ಪರ್ಧೆಯ ವಿವರ ತಿಳಿಸಿದರು.

ಚಾತುರ್ಮಾಸ್ಯ ಸಮಿತಿಯ ಕಾರ್ಯಾಧ್ಯಕ್ಷ ರವಿ ಶಾಸ್ತ್ರಿ, ನಗರಪಾಲಿಕ ಸದಸ್ಯರಾದ ಪ್ರಮೀಳಾ ಭರತ್, ರೂಪದರ್ಶಿ ತನಿಷ್ಕಮೂರ್ತಿ, ಮುಖಂಡರಾದ ಲಕ್ಷ್ಮೀದೇವಿ, ಜ್ಯೋತಿ ರೇಚಣ್ಣ, ಜೀವದಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಜಿ ಎಂ ಪಂಚಾಕ್ಷರಿ, ಸವಿತಾ ಘಾಟ್ಕೆ, ನಾಗಮಣಿ, ರುಕ್ಮಿಣಿ, ಸುಚೇಂದ್ರ, ಚರಣ್, ದರ್ಶನ್ ಇನ್ನಿತರರು ಭಾಗವಹಿಸಿದ್ದರು.



ದಿವಂಗತ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಹಾಗೂ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಹುಟ್ಟು ಹಬ್ಬದ ಅಂಗವಾಗಿ ಮೈಸೂರಿನ ಕನಕಗಿರಿಯಲ್ಲಿರುವ ಸರ್ಕಾರಿ ಶಾರದಾ ವಿಲಾಸ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಮಕ್ಕಳಿಗೆ ಪಠ್ಯ ಸಾಮಗ್ರಿಗಳನ್ನು ವಿತರಣೆ ಮಾಡಲಾಯಿತು. ಈ ವೇಳೆ ದೇವರಾಜು ಅರಸು ಅವರ ಮರಿ ಮೊಮ್ಮಗ ಸಮೃದ್ಧ ಹೆಗಡೆ, ಎನ್‌ಎಸ್‌ಯುಐ ಘಟಕದ ಅಧ್ಯಕ್ಷ ಮನೋಜ್, ಎನ್ ರಜತ್, ರಫೀಕ್, ಉಮನಾಶ್ರೀ, ಅಭಯ್, ಯೋಗಿಶ್, ಸಮೀರ್, ರವಿ, ಮಂಜುನಾಥ್ ಮತ್ತಿತರರು ಉಪಸ್ಥಿತರಿದ್ದರು.

ಉದ್ಯೋಗ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಆ. 22–ದೀನ ದಯಾಳ್ ಗ್ರಾಮೀಣ ಕೌಶಲ್ಯ ಕೇಂದ್ರದ ವತಿಯಿಂದ ಗ್ರಾಮೀಣ ಯುವಕ–ಯುವತಿಯರಿಗೆ ಮೂರು ತಿಂಗಳ ವಸತಿ ಸಹಿತ ಉದ್ಯೋಗ ಪೂರ್ವ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. 18 ರಿಂದ 35 ವರ್ಷದೊಳಗಿನ ಗ್ರಾಮೀಣ ಯುವಕ–ಯುವತಿಯರು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಗ್ರಾಮೀಣ ಪ್ರದೇಶದ ಯುವಕ ಯುವತಿಯರು ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ಕೇಂದ್ರದ ವತಿಯಿಂದ ತರಬೇತಿ ನಂತರ ಶೇಕಡ ನೂರರಷ್ಟು ಉದ್ಯೋಗವನ್ನು ಕಲ್ಪಿಸಿಕೊಡಲಾಗುತ್ತದೆ. ಫಲಾನುಭವಿಗಳು ಉಚಿತ ವಸತಿ ಮತ್ತು ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ತರಬೇತಿಯಲ್ಲಿ ಉಚಿತವಾಗಿ ಸಮವಸ್ತ್ರ ಪುಸ್ತಕ ಪರಿಕರಗಳನ್ನು ನೀಡಲಾಗುತ್ತದೆ. ಗ್ರಾಮೀಣ ಪ್ರದೇಶದ ಯುವಕ ಯುವತಿಯರು ಇದರ ಸದುಪಯೋಗಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ ಸ್ವರಾಜ್ ಜೈನ್ ದೀನ ದಯಾ ಉಪಾಧ್ಯಾಯ ಕೌಶಲ್ಯ ಕೇಂದ್ರದ ಉಪನ್ಯಾಸಕರು 94482 19639 ಸಂಪರ್ಕಿಸಬಹುದು.



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ 2023ನೇ ಸಾಲಿನ ಅತ್ಯುತ್ತಮ ಛಾಯಾಗ್ರಾಹಕ ಪ್ರಶಸ್ತಿಯು 'ಟೈಮ್ಸ್ ಆಫ್ ಇಂಡಿಯಾ' ಛಾಯಾಗ್ರಾಹಕ ಎಸ್.ಆರ್. ಮಧುಸೂದನ್ ಅವರಿಗೆ ತಮಿಳುನಾಡಿನ ಮಧುರೈನಲ್ಲಿ ನಡೆದ ಜಲ್ಲಿಕಟ್ಟಿನ ಛಾಯಾಚಿತ್ರಕ್ಕೆ ಲಭಿಸಿದೆ.



ಮೈಸೂರು ನಗರ ಪಾಲಿಕೆ ಸದಸ್ಯರಾಗಿ ನಾಮನಿರ್ದೇಶಿತಗೊಂಡ ಇಟ್ಟಿಗೆಗೂಡಿನ ಆರ್.ಹೆಚ್.ಕುಮಾರ್ ಅವರು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅವರನ್ನು ಅಭಿನಂದಿಸಿದರು. ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಸೋಮಶೇಖರ್, ಎಸ್.ವೆಂಕಟೇಶ್, ಪುರುಷೋತ್ತಮ್, ಉಮೇಶ್, ಚಿಕ್ಕಲಿಂಗು ,ಮಹೇಶ್ (ಟೈಲ್ಸ್), ರಾಮಮೂರ್ತಿ, ಗುಣಶೇಖರ್, ಮಹ್ಮದ್ ಫಾರೂಖ್, ಅರುಣ್ ಮತ್ತಿತರರು ಉಪಸ್ಥಿತರಿದ್ದರು.

ಶಿಕ್ಷಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಆ.22(ಎಸ್‌ಪಿಎನ್)– 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರ ಮಕ್ಕಳಿಗೆ ಪತ್ರಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.5 ಕೊನೆ ದಿನವಾಗಿದೆ ಎಂದು ಜಿಲ್ಲಾಧ್ಯಕ್ಷ ಕೆ.ಬಿ. ಸೋಮೇಗೌಡ, ಜಿಲ್ಲಾ ಪ್ರಕಾರ್ಯದರ್ಶಿ ಹೆಚ್.ಎಸ್.ಮಹೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮೊ.ಸಂ:9880122527/ 9901207250 ಅನ್ನು ಸಂಪರ್ಕಿಸಬಹುದು.

ವಿಕ್ರಂ ಲ್ಯಾಂಡರ್ ಯಶಸ್ವಿಗೆ ಸರ್ವಸಿದ್ಧ ಯಾಗ



ಮೈಸೂರು, ಆ. 22– ಮೈಸೂರು ನಗರ, ಜಿಲ್ಲಾ ಬ್ರಾಹ್ಮಣ ಸಂಘಟನೆ ಹಾಗೂ ಅರ್ಚಕರ ಸಂಘದ ವತಿಯಿಂದ ಇರ್ವಿನ್ ರಸ್ತೆಯಲ್ಲಿರುವ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ವಿಕ್ರಂ ಲ್ಯಾಂಡರ್ ಯಶಸ್ವಿಗೆ ಸರ್ವಸಿದ್ಧ ಯಾಗವನ್ನು ಅರ್ಚಕರ ಸಂಘದ ಅಧ್ಯಕ್ಷರು ಹಾಗೂ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ವಾನ್ ಕೃಷ್ಣಮೂರ್ತಿ ನೇತೃತ್ವದಲ್ಲಿ ನೆರವೇರಿಸಲಾಯಿತು. ಈ ವೇಳೆ ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಮಾತನಾಡಿ, ಈ ಅಪೂರ್ವ ಸಾಧನೆಗೆ ಕಾರಣರಾದ ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ, ಇಸ್ರೋ ಅಧ್ಯಕ್ಷರು, ವಿಜ್ಞಾನಿಗಳಿಗೆ ದೇವರು ಆಯುರಾರೋಗ್ಯ ಕರುಣಿಸಲಿ ಎಂದು ಪ್ರಾರ್ಥಿಸಲಾಯಿತು.

ಚಂದ್ರಯಾನ 3ರ ಚಂದ್ರನ ನೌಕೆಯು ಚಂದ್ರನ ದಕ್ಷಿಣ ಧ್ರುವದಲ್ಲಿ ಸುರಕ್ಷಿತವಾಗಿ ಇಳಿಯಲಿ. ಈ ಯೋಜನೆಯಿಂದ ದೇಶ ಇತಿಹಾಸ ನಿರ್ಮಿಸಲಿ, ಪ್ರಪಂಚದಲ್ಲಿ ಅಗ್ರಗಣ್ಯವಾಗಲಿ ಎಂದು ಆಶಿಸಿದರು. ಅರ್ಚಕರ ಸಂಘದ ಅಧ್ಯಕ್ಷರಾದ ವಿದ್ವತ್ ಕೃಷ್ಣಮೂರ್ತಿ, ಮೈಸೂರು ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಸುಚಿಂದ್ರ,ಅಪೂರ್ವ ಸುರೇಶ್, ಎಸ್.ಎನ್. ರಾಜೇಶ್, ಆನಂದ್, ರಾಕೇಶ್ ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

ಡಾ.ಎಸ್‌ಪಿಬಿ ಗಾನರಸಾಯನ ಸವಿದ ಮೈಸೂರಿನ ಜನತೆ



ಮೈಸೂರು, ಆ.22– ಮೈಸೂರಿನ ಶಾರದಾದೇವಿನಗರದಲ್ಲಿರುವ ಗಾನ ಚಂದನ ಕಲಾ ಬಳಗದ ವತಿಯಿಂದ ಇತ್ತೀಚೆಗೆ ನಾದಬ್ರಹ್ಮ ಸಭಾಂಗಣದಲ್ಲಿ ಆಯೋಜಿಸಿದ್ದ ಮೇರು ಗಾಯಕ, ಪದ್ಮಪ್ರಶಸ್ತಿ ಪುರಸ್ಕೃತ ಡಾ.ಎಸ್.ಪಿ. ಬಾಲಸುಬ್ರಹ್ಮಣ್ಯಂರವರ ಗಾನರಸಾಯನ ಕಾರ್ಯಕ್ರಮ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಡಾ.ಎಸ್‌ಪಿಬಿ ಸ್ಮರಣೆಯ ಜೊತೆ ಅವರು ಹಾಡಿರುವ ವಿವಿಧ ಭಾಷೆಯ ಹಾಡುಗಳನ್ನು ಪ್ರಸ್ತುತಪಡಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆ.ಆರ್.ಕ್ಷೇತ್ರದ ಶಾಸಕ ಶ್ರೀವತ್ಸ ಅವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸ್ಥೆ ಅಧ್ಯಕ್ಷ ಸುಧೀಂದ್ರರವರು ಜಯ ಗಣೇಶ ಜಯ ಗಣೇಶ ರಕ್ಷಿಸು... ಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭಿಸಿದರು. ನಂತರದಲ್ಲಿ ಸುಧೀಂದ್ರ ಯಾವ ಹೂವು ಯಾರ ಮುಡಿಗೋ, ರಾಧಿಕೇ ನಿನ್ನ ಸರಸ ಇದೇನೇ, ಶಂಕರಾ ನಾದ ಶರೀರಾಪರಾ ಹಾಗೂ ಗಾಯಕಿ ರಶ್ಮಿರಾವ್ ಜೊತೆ ಬೇಲೂರ ಗುಡಿಯಲ್ಲಿ, ಮಾತೊಂದ ಹೇಳೂವೆ ಹತ್ತಿರ ಹತ್ತಿರ ಬಾ ಮುಂತಾದ ಹಾಡುಗಳನ್ನು ಸುಶ್ರಾವ್ಯ ಹಾಡಿ ಪ್ರೇಕ್ಷಕರನ್ನು 70–80ರ ದಶಕಕ್ಕೆ ಕರೆದೊಯ್ದರು. ಗಾಯಕ ನಟರಾಜ್ ಮತ್ತು ಶಶಿಕಲಾ ಆನಂದ ಆನಂದ ಆನಂದವೇ ಹಾಗೂ ಜಿಮ್ಮಿಗಲ್ಲು ಚಿತ್ರದ ದೇವ ಮಂದಿರದಲ್ಲಿ ದೇವರು ಕಾಣಲೇ ಇಲ್ಲ ಹಾಡುಗಳನ್ನು ಪ್ರಸ್ತುತಪಡಿಸಿದರು. ಮತ್ತೊಬ್ಬ ಪ್ರತಿಭಾವಂತ ಗಾಯಕ ವಿಶ್ವಾಥ ಶಾಸ್ತ್ರಿ ರಶ್ಮಿಯವರ ಜೊತೆ ಶಂಕರಾಭರಣಂ ಚಿತ್ರದ ಓಂಕಾರ ನಾದಾನುಸಂಧಾನ ಗಾನಮೇ, ಸ್ವಾತಿಮುತ್ತು ಚಿತ್ರದ ಸುವ್ವಿ ಸುವ್ವಿ ಸುವ್ವಾಲಮ್ಮ ಹಾಡುಗಳನ್ನು ಹಾಗೂ ಶಶಕಲಾ ಅವರೊಂದಿಗೆ ವಸಂತ ಬರೆದನು ಒಲವಿನ ಓಲೆ ಮುಂತಾದ ಯಶಸ್ವಿ ಹಾಡುಗಳನ್ನು ಹಾಡಿದರು. ಶ್ರೀನಿವಾಸ್ ಮುನಿಯನ ಮಾದರಿ ಚಿತ್ರದ ಹಳ್ಳಿ ದಾರಿಯಲ್ಲಿ, ಒಂದೇ ಗುರಿ ಚಿತ್ರದ ಈ ಭಾವಗೀತೆ ನಿನಗಾಗಿ ಹಾಡಿದೆ, ಗಾಯಕಿ ಶಶಿಕಲಾ ಜೊತೆಗೂಡಿ ಇದೋ ಇದೋ ಎನ್ ಪಲ್ಲವಿ ಗೀತೆಗಳನ್ನು ಹಾಡಿದರು. ಉಳಿದಂತೆ ಗಾಯಕ ಪುಟ್ಟಣ್ಣ ಬರೆಯುವೆ ನಿನಗಾಗಿ, ನಾಗರಾಜ್ ನನ್ನ ಮುದ್ದುತಾರೆ ಹಾಡುಗಳನ್ನು ಹಾಡಿ ಕಿಕ್ಕಿರಿದು ನೆರೆದಿದ್ದ ಪ್ರೇಕ್ಷಕರನ್ನು ರಂಜಿಸಿದರು. ಗಾಯಕಿ ಧನ್ಯಶ್ರೀ ಸಹ ಧನಿಗೂಡಿಸಿದರು. ಡಾ.ಎಸ್‌ಪಿಬಿ ಹಾಡಿರುವ ಹಾಡುಗಳ ಪೈಕಿ ಸುಮಾರು 30ಕ್ಕೂ ಹೆಚ್ಚಿನ ಕನ್ನಡ, ಹಿಂದಿ, ತಮಿಳು, ತೆಲುಗು ಹಾಡುಗಳನ್ನು ಪ್ರಸ್ತುತಪಡಿಸಲಾಯಿತು.

ಸಂಸ್ಥೆ ಅಧ್ಯಕ್ಷ ಸುಧೀಂದ್ರ ನಿರೂಪಣೆಯ ಜೊತೆಗೆ ಗೀತೆಗಳನ್ನೂ ಹಾಡಿದ್ದು ಮತ್ತೊಂದು ವಿಶೇಷ. ಕಾರ್ಯಕ್ರಮದಲ್ಲಿ ಲೆಕ್ಕಪರಿಶೋಧಕ ಅಚ್ಚುತ, ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಎಂ.ಡಿ.ಪಾರ್ಥಸಾರಥಿ, ಬಿಜೆಪಿ ನಾಯಕ ಜೋಗಿ ಮಂಜು, ಜೆಡಿಎಸ್ ನಾಯಕ ಶೇಖರ್ ಭಾಗವಹಿಸಿದ್ದರು.

ಅರ್ಜಿ ಆಹ್ವಾನ

ಮೈಸೂರು, ಆ.22–ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ 2023–24 ನೇ ಸಾಲಿನ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು www.kacdc.karnataka.gov.in ವೆಬ್‌ಸೈಟ್ ಮೂಲಕ ಸಲ್ಲಿಸಲು ಸೆ.18 ಕೊನೆಯ ದಿನಾಂಕವಾಗಿರುತ್ತದೆ. ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–ಬಿ ಪಡೆದಿರಬೇಕು. ಆಯ್ಕೆ ನಡೆಸುವಾಗ ಸಮಿತಿಯು ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5, ತೃತೀಯ ಲಿಂಗಿಗಳಿಗೆ ಶೇ.5 ಮೀಸಲಾತಿಯನ್ನು ನೀಡಲಾಗುವುದು. ಸಹಾಯವಾಣಿ:9448 451111 ಅಥವಾ ಕಛೇರಿ ಸಮಯದಲ್ಲಿ ಮೈಸೂರು ಜಿಲ್ಲಾ ಕಛೇರಿ ದೂ.ಸಂ: 0821–23411947 ಅನ್ನು ಸಂಪರ್ಕಿಸಬಹುದು.

ಮೈಸೂರಲ್ಲಿ ಮಾಜಿ ಸಿಎಂ ಗುಂಡೂರಾಯರ ಕೊಡುಗೆ ಸ್ಮರಣೆ



ಮೈಸೂರು, ಆ. 22– ಕರ್ನಾಟಕದ ಮಾಜಿ ಮುಖ್ಯಮಂತ್ರಿ ಆರ್. ಗುಂಡೂರಾವ್ ಅವರ 30ನೇ ಪುಣ್ಯಸ್ಮರಣೆ ಅಂಗವಾಗಿ ಕರ್ನಾಟಕ ಕಲಾಮಂದಿರದ ಆವರಣದಲ್ಲಿ ಗುಂಡೂರಾಯರ ನೆನಪಿನಂಗಳ ಕಾರ್ಯಕ್ರಮವನ್ನು ಗುಂಡೂರಾವ್ ಅಭಿಮಾನಿಗಳ ಬಳಗದ ವತಿಯಿಂದ ಏರ್ಪಡಿಸಲಾಗಿತ್ತು.

ಈ ವೇಳೆ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ ಮಾತನಾಡಿ, ಗುಂಡೂರಾಯರ ಕೊಡುಗೆ ಕರ್ನಾಟಕ ರಾಜ್ಯಕ್ಕೆ ಅಪಾರ. ಬಡವರ್ಗದ ಲಕ್ಷಾಂತರ ಮಂದಿ ಸ್ವಾಭಿಮಾನಿಗಳಾಗಿ ದುಡಿಯಲು ಪ್ರೇರೇಪಿಸಿದವರೇ ಗುಂಡೂರಾಯರು. ಪೇ ಕಮಿಷನ್ ಜಾರಿಗೆ ತಂದರು. ರಾಜಧಾನಿಯಲ್ಲಿ ಕೇಂದ್ರ ರೈಲ್ವೆ ನಿಲ್ದಾಣದ ಪಕ್ಕದಲ್ಲೇ ನಗರ ಮತ್ತು ಗ್ರಾಮೀಣ ಬಸ್ ನಿಲ್ದಾಣ ಸ್ಥಾಪಿಸುವ ಮೂಲಕ ಜನಪರ ಕಾರ್ಯ ಮಾಡಿದ್ದರು. ಕುಗ್ರಾಮದಲ್ಲಿರುವ ಬಡವರಿಗೆ ಉಚಿತ ವಿದ್ಯುತ್ ಯೋಜನೆ, ಬೆಂಗಳೂರಿಗೆ ಕಾವೇರಿ ನೀರು ಪೂರೈಕೆ ಸೇರಿದಂತೆ ಸಾಕಷ್ಟು ಜನೋಪಯೋಗಿ ಯೋಜನೆಗಳನ್ನು ಮುಖ್ಯಮಂತ್ರಿಯಾಗಿ ಅನುಷ್ಠಾನಗೊಳಿಸಿದ್ದಾರೆ ಎಂದರು.

ಹಿರಿಯ ಸಮಾಜ ಸೇವಕರಾದ ಕೆ.ರಘುರಾಂ ವಾಜಪೇಯಿ ಮಾತನಾಡಿ, ಮೈಸೂರಿನಲ್ಲಿ ಭವ್ಯವಾದ ಸಾಂಸ್ಕೃತಿಕ ಕಟ್ಟಡ 'ಕರ್ನಾಟಕ ಕಲಾಮಂದಿರ' ಜನಪ್ರಿಯ ಮುಖ್ಯಮಂತ್ರಿಗಳಾಗಿದ್ದ ಆರ್.ಗುಂಡೂರಾವ್ ಅವರ ಕನಸಿನ ಕೂಸು. ಅವರು ಪ್ರತಿ ತಾಲೂಕು, ಜಿಲ್ಲಾ ಕೇಂದ್ರಗಳಲ್ಲಿ ಸಾಂಸ್ಕೃತಿಕ ಭವನಗಳನ್ನು ಸರ್ಕಾರದ ವೆಚ್ಚದಲ್ಲೇ ನಿರ್ಮಿಸಿಕೊಡಬೇಕೆಂಬ ಆಶಯ ಹೊಂದಿದ್ದರು ಎಂದರು.

ಮೈಸೂರಲ್ಲಿ ಭವ್ಯ ಸಾಂಸ್ಕೃತಿಕ ಭವನ ನಿರ್ಮಾಣಕ್ಕೆ ಕಾರಣಕರ್ತರಾದರೂ ಅವರ ಸಂಸ್ಮರಣೆ ಮಾಡುವಂತಹ ಕನಿಷ್ಠ ಪ್ರತಿಮೆಯೂ ಇಲ್ಲದಿರುವುದು ವಿಷಾದಕರ ಸಂಗತಿ. ಕೂಡಲೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವರು ಆರ್.ಗುಂಡೂರಾಯರ ಆಳೆತ್ತರದ ಪ್ರತಿಮೆಯನ್ನು ಸ್ಥಾಪಿಸಿ, ಕಲಾಮಂದಿರಕ್ಕೆ 'ಆರ್.ಗುಂಡೂರಾವ್ ಕರ್ನಾಟಕ ಕಲಾಮಂದಿರ' ಎಂದು ನಾಮಕರಣ ಮಾಡಬೇಕೆಂದು ಆಗ್ರಹಿಸಿದರು.

ಗುಂಡೂರಾವ್ ಅಭಿಮಾನಿಗಳ ಬಳಗದ ಅಧ್ಯಕ್ಷ ವಿನಯ್ ಕಣಗಾಲ್ ಮಾತನಾಡಿ, ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನ ಮೈಸೂರಿನಲ್ಲಿ ಯಶಸ್ವಿಯಾಗಿ ನೆರವೇರಲು ಗುಂಡೂರಾಯರ ಚಿಂತನೆ ಬಹಳಷ್ಟಿದೆ. ಮೈಸೂರಿನಲ್ಲಿ ರಾಜಾಶ್ರಯವಿದ್ದಾಗ ಬಹಳಷ್ಟು ಕಟ್ಟಡಗಳು ನಿರ್ಮಾಣವಾದುವು. ಆದರೆ ಪ್ರಜಾಪ್ರಭುತ್ವ ಬಂದ ನಂತರ ಕನ್ನಡ ಮತ್ತು ಸಂಸ್ಕೃತಿ ಹೆಗ್ಗುರುತಾಗಿ ಕಲಾಮಂದಿರವೇ ಮೊದಲ ಕಟ್ಟಡ ಸ್ಥಾಪನೆಯಾಗಿದ್ದು, ಅದಕ್ಕೆ ಎಷ್ಟೇ ವಿರೋಧವಿದ್ದರೂ, ಸಾಂಸ್ಕೃತಿಕ ರಾಜಧಾನಿಯಲ್ಲಿ ಕನ್ನಡ ಭಾಷೆ, ಕಲೆ, ಸಾಹಿತ್ಯ, ಜನಪದ ಶೈಲಿಯ ಅಸ್ತಿತ್ವ ಉಳಿಯಲು ಗುಂಡೂರಾಯರ ದಿಟ್ಟ ನಡೆ ಮುಖ್ಯ ಕಾರಣ. ಕರ್ನಾಟಕ ಕಲಾಮಂದಿರ ಇವತ್ತಿಗೂ ರಾಜ್ಯದ ದೊಡ್ಡ ಕಲಾ ಸಭಾಂಗಣ ಎಂಬ ಹಿರಿಮೆ ಪಡೆದಿದೆ ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹನಿರ್ದೇಶಕ ಡಾ.ಸುದರ್ಶನ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕಾಂಗ್ರೆಸ್ ಯುವ ಮುಖಂಡ ಸಿಎಸ್.ರಘು, ಮುಡಾ ಮಾಜಿ ಸದಸ್ಯೆ ಲತಾಮೋಹನ್, ವಿಜಯ್ ಕುಮಾರ್, ರೈಲ್ವೆ ರಾಮಣ್ಣ, ಸುಬ್ಬಣ್ಣ, ಪವನ್ ಸಿದ್ದರಾಮು, ಎಸ್.ಎನ್.ರಾಜೇಶ್, ರಾಕೇಶ್, ಪಣೀಶ್, ಸುಚೇಂದ್ರ, ವಿದ್ಯಾ, ಚಕ್ರಪಾಣಿ, ಇನ್ನಿತರರು ಉಪಸ್ಥಿತರಿದ್ದರು.

ನೀರು ಹರಿಸಿದ ಪಾಪಕ್ಕಾಗಿ ಸರ್ಕಾರದಿಂದ ಸರ್ವಪಕ್ಷ ಸಭೆ

ಮಾಜಿ ಸಚಿವ ಸಿ.ಟಿ.ರವಿ ವ್ಯಂಗ್ಯ



ಮಂಡ್ಯ, ಆ.22– ತಮಿಳುನಾಡಿಗೆ ಕಾವೇರಿ ನೀರು ಹರಿಸಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಇದೀಗ ಮಾಡಿರುವ ಪಾಪಕ್ಕೆ ಅಧಿಕೃತ ಮುದ್ರೆ ಒತ್ತಿಸಿಕೊಳ್ಳಲು ಸರ್ವಪಕ್ಷ ಸಭೆ ಕರೆದಿದೆ ಎಂದು ಮಾಜಿ ಸಚಿವ ಸಿ.ಟಿ.ರವಿ ವ್ಯಂಗ್ಯವಾಡಿದರು.

ಮಂಗಳವಾರ ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಮಿಳುನಾಡಿಗೆ ಈಗಾಗಲೇ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಸಿರುವ ಸರ್ಕಾರ ಯಾವ ಉದ್ದೇಶಕ್ಕಾಗಿ ಸಭೆ ಕರೆದಿದೆ. ನೀರು ಬಿಡುವ ಮುನ್ನ ಸರ್ವಪಕ್ಷದವರ ಸಭೆ ಕರೆದಿದ್ದರೆ ಯಾವುದಾದರೊಂದು ಪರಿಹಾರ ಸಿಗುತ್ತಿತ್ತು. ಸರ್ಕಾರ ಏಕಪಕ್ಷೀಯ ನಿರ್ಧಾರ ತೆಗೆದುಕೊಂಡು ನೀರು ಬಿಟ್ಟ ಬಳಿಕ ಇದೀಗ ಸರ್ವಪಕ್ಷ ಸಭೆ ನಡೆಸಿದರೆ ಏನು ಪ್ರಯೋಜನ ಎಂದು ಪ್ರಶ್ನಿಸಿದ ಅವರು, ಸರ್ಕಾರ ರೈತರಿಗೆ ಮಾಡಿದ ದ್ರೋಹ ಮತ್ತು ತಪ್ಪನ್ನು ಎತ್ತಿ ತೋರಿಸಲು ಬಿಜೆಪಿ ಸರ್ವಪಕ್ಷ ಸಭೆಯಲ್ಲಿ ಭಾಗವಹಿಸಲಿದೆ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಪಕ್ಷದ ಕಾಲ್ಗುಣ ನಾಡಿಗೆ ಬರಗಾಲ ತಂದಿದ್ದು, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲ ಇಂತಹ ಬರಗಾಲ ಪರಿಸ್ಥಿತಿ ಎದುರಾಗುತ್ತಿದೆ. ದೇವರ ಮೇಲೆ ನಂಬಿಕೆ ಇಲ್ಲ. ಹಾಗಾಗಿ ದೇವರು ಸರ್ಕಾರಕ್ಕೆ ಕೃಪೆ ತೋರದ ಕಾರಣ ರಾಜ್ಯದ ಜನತೆ ಹೈರಾಣಾಗುತ್ತಿದ್ದಾರೆ ಎಂದರು.

ಬಿಜೆಪಿಯ ಯಾವ ಶಾಸಕರೂ ಪಕ್ಷ ತೊರೆಯುವುದಿಲ್ಲ. ಕಾಂಗ್ರೆಸ್ಸಿಗರು ಬಿಜೆಪಿ ಶಾಸಕರನ್ನು ಪ್ರೀತಿಯಿಂದ ಕರೆದಿಲ್ಲ. ಅವರೇ ಹೇಳಿರುವಂತೆ ಒಂದು ವೇಳೆ ನಮ್ಮ ಪಕ್ಷದಿಂದ ಶಾಸಕರು ಕಾಂಗ್ರೆಸ್ಸಿಗೆ ಹೋದರೆ ಕೊನೆ ಬೆಂಚಿನಲ್ಲಿ ಕೂರಬೇಕು. ನಮ್ಮ ಪಕ್ಷದಲ್ಲಿ ವಲಸಿಗ ಶಾಸಕರನ್ನು ಉತ್ತಮವಾಗಿ ನಡೆಸಿಕೊಂಡಿದ್ದು ಯಾರೂ ಸಹ ಪಕ್ಷ ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಬಿಜೆಪಿ ಆಪರೇಷನ್ ಕಮಲ ಮಾಡಿದಾಗ ಭಿನ್ನ ಪರಿಸ್ಥಿತಿ ಇತ್ತು ಯಾವುದೇ ಪಕ್ಷಕ್ಕೆ ಸ್ಪಷ್ಟ ಬಹುಮತ ಇರಲಿಲ್ಲ. ಜೊತೆಗೆ ಕಾಂಗ್ರೆಸ್– ಜೆಡಿಎಸ್ ಸಮ್ಮಿಶ್ರ ಸರ್ಕಾರದ ಅಧ್ವಾನದಿಂದ ಆ ಪಕ್ಷಗಳ ಶಾಸಕರು ಬಿಜೆಪಿ ಪಕ್ಷದತ್ತ ಮುಖ ಮಾಡಿದ್ದರು. ಯಾವೊಬ್ಬ ಶಾಸಕರು ಬಿಜೆಪಿ ತೊರೆಯುವುದಿಲ್ಲ. ಎಲ್ಲರನ್ನೂ ಸಂಪರ್ಕ ಮಾಡಿದ್ದು, ಎಲ್ಲರೂ ಪಕ್ಷದಲ್ಲೇ ಉಳಿಯಲಿದ್ದಾರೆ. ಎಂತಹ ಪರಿಸ್ಥಿತಿ ಬಂದರೂ ಪಕ್ಷ ಬಿಡುವುದಿಲ್ಲ ಎಂದು ಶಾಸಕರು ಸ್ಪಷ್ಟಪಡಿಸಿದ್ದಾರೆ ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ 3 ತಿಂಗಳಲ್ಲಿ ಭ್ರಷ್ಟಾಚಾರ ಬಯಲಿಗೆ ಬಂದಿದೆ. ಸಚಿವರ ವಿರುದ್ಧ ಶಾಸಕರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದರು. ಇದರ ಬೆನ್ನಲ್ಲೇ ಶಾಸಕಾಂಗ ಸಭೆ ಕರೆಯಲಾಗಿತ್ತು. ಇದರ ಗಂಭೀರತೆ ಅಲ್ಲೇ ಜಗಜ್ಜಾಹೀರಾಯಿತು. ಇದೀಗ ಪರಿಷತ್ತಿಗೆ ನಾಮನಿರ್ದೇಶನ ವಿಚಾರದಲ್ಲಿ ನಾಲ್ವರು ಸಚಿವರು ಕಾಂಗ್ರೆಸ್ ಹೈಕಮಾಂಡ್‌ಗೆ ಪತ್ರ ಬರೆದಿದ್ದಾರೆ. ಎಲ್ಲವನ್ನೂ ಗಮನಿಸಿದರೆ ರಾಜ್ಯ ಸರ್ಕಾರದಲ್ಲಿ ಎಲ್ಲವೂ ಸರಿ ಇಲ್ಲ ಎಂಬುದು ಗೊತ್ತಾಗಲಿದೆ ಎಂದರು.

ಸರ್ಕಾರದ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸುವ ಅವಶ್ಯಕತೆ ಕಂಡು ಬರುತ್ತಿಲ್ಲ. ಬದಲಾಗಿ ವಾಸ್ತವ ಚಿತ್ರಣ ಬಯಲಿಗೆ ಬರುತ್ತಿದ್ದು, ಹಲವು ಇಲಾಖೆಗಳಲ್ಲಿ ನೌಕರರಿಗೆ ಸಂಬಳ ಆಗಿಲ್ಲ. ಗೃಹ ಜ್ಯೋತಿ ಯೋಜನೆಯಿಂದ ಜನಕ್ಕೆ ತೊಂದರೆಯಾಗಿದೆ. ಉದ್ದಿಮೆದಾರರ ಸಂಕಷ್ಟ ಏನು, ಸಣ್ಣ ಕೈಗಾರಿಕೆಗಳು ಏನಾಗುತ್ತಿವೆ. ಅಷ್ಟೇ ಅಲ್ಲದೆ ಮಧ್ಯಮ ವರ್ಗದ ಜನತೆ ಯಾವ ರೀತಿ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂಬುದೆಲ್ಲಾ ಹೊರ ಜಗತ್ತಿಗೆ ಬಂದಿದೆ. ನೂತನ ಸರ್ಕಾರದ ಆರ್ಥಿಕ ಪರಿಸ್ಥಿತಿ ಮೂರು ತಿಂಗಳಲ್ಲೇ ಹೀನಾಯವಾಗಿದೆ ಎಂದು ಲೇವಡಿ ಮಾಡಿದರು.

ಗ್ಯಾರಂಟಿ ಯೋಜನೆಗಳಿಗೆ ಹಣ ಸರಿದೂಗಿಸಲು ಎಲ್ಲಾ ಇಲಾಖೆಗಳಿಗೂ ಅನುದಾನ ಕಡಿತ ಮಾಡುತ್ತಿದ್ದು, ಮದ್ಯ ಮಾರಾಟ ಶೇ.15 ರಷ್ಟು ಕುಸಿತಗೊಂಡಿದೆ. ಸರ್ಕಾರದ ಆದಾಯಕ್ಕೆ ಖೋತಾ ಬಿದ್ದಿದ್ದು, ಕಾಂಗ್ರೆಸ್ ಸರ್ಕಾರದಲ್ಲಿ ಜನತೆ ಮತ್ತಷ್ಟು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ. ಉಮೇಶ್, ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಡಾ.ಸಿದ್ದರಾಮಯ್ಯ, ವಕ್ತಾರ ಸಿ.ಟಿ. ಮಂಜುನಾಥ್ ಸೇರಿದಂತೆ ಇನ್ನಿತರರಿದ್ದರು.

ಚುನಾವಣೆಗೂ ಮುನ್ನ ನಮ್ಮ ನೀರು ನಮ್ಮ ಹಕ್ಕು ಎಂದು ಮೇಕೆದಾಟು ಪಾದಯಾತ್ರೆ ನಡೆಸಿದ ಕಾಂಗ್ರೆಸ್ ನಾಯಕರು ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ರೂಪಿಸಿರುವ ಸಂಕಷ್ಟ ಸೂತ್ರ ಮರೆತು ತಮಿಳುನಾಡಿಗೆ ನೀರು ಹರಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಮಂಡ್ಯ ಜಿಲ್ಲಾ ರೈತರಿಗೆ ಶಾಪವಾಗಿದ್ದು, ತಮಿಳು ನಾಡಿಗೆ ವರವಾಗಿದೆ. ಕಾವೇರಿ ನದಿ ನೀರಿನ ಹಕ್ಕನ್ನು ತಮಿಳುನಾಡಿಗೆ ಬಿಟ್ಟು ಕೊಟ್ಟಿರುವ ಕಾಂಗ್ರೆಸ್ ಸರ್ಕಾರ ಇಂಡಿಯಾ ಮೈತ್ರಿ ಕೂಟದ ರಾಜಕೀಯ ಲಾಭಕ್ಕಾಗಿ ಅಲ್ಲಿನ ಮುಖ್ಯಮಂತ್ರಿ ಸ್ಟಾಲಿನ್ ಅವರನ್ನು ಓಲೈಸಲು ನೀರು ಬಿಡುಗಡೆ ಮಾಡಿದೆ.

- ಸಿ.ಟಿ.ರವಿ, ಮಾಜಿ ಸಚಿವ

ಸಾರಂಗಿ ಪಿಎಸಿಎಸ್‌ಗೆ ನಾಗೇಶ್ ಅಧ್ಯಕ್ಷ



ಕೆ.ಆರ್.ಪೇಟೆ, ಆ.22– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿ ಸಾರಂಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಸ್.ಎನ್.ನಾಗೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ದೇವರಾಜು ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನಾಗೇಶ್ ಅವರನ್ನು ಹೊರತು ಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಸಿಡಿಓ ಭರತ್ ಘೋಷಿಸಿದರು.

ನೂತನ ಅಧ್ಯಕ್ಷ ಎಸ್.ಎನ್.ನಾಗೇಶ್ ಮಾತನಾಡಿ, ನನ್ನ ಆಯ್ಕೆಗೆ ಕಾರಣರಾದ ಶಾಸಕ ಹೆಚ್.ಟಿ.ಮಂಜು, ಜೆಡಿಎಸ್ ಮುಖಂಡ ಮೋಹನ್ ಸೇರಿದಂತೆ ಸಂಘದ ಎಲ್ಲಾ ಸದಸ್ಯರಿಗೆ ಧನ್ಯವಾದ. ಮುಂದಿನ ದಿನಗಳಲ್ಲಿ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಸಂಘದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ತಾಪಂ ಮಾಜಿ ಸದಸ್ಯ ಮೋಹನ್ ಮಾತನಾಡಿದರು. ಈ ವೇಳೆ ಸಂಘದ ಉಪಾಧ್ಯಕ್ಷೆ ಪಾರ್ವತಮ್ಮ, ಗ್ರಾಪಂ ಅಧ್ಯಕ್ಷೆ ಹೇಮಾ, ಮನ್‌ಮುಲ್ ಮಾಜಿ ನಿರ್ದೇಶಕ ನಂಜುಂಡೇಗೌಡ, ನಿರ್ದೇಶಕರಾದ ದೇವರಾಜು, ರಾಜು, ಕೆ.ಎಸ್.ದಿನೇಶ್, ನಂಜುಂಡೇಗೌಡ, ಟಿ.ನಾಗರಾಜು, ಅಶೋಕ್, ಕೆಂಪಮ್ಮ, ಗಂಗಾಧರ, ಎಂ.ಕೆ.ಮೋಹನ್, ಗ್ರಾಪಂ ಉಪಾಧ್ಯಕ್ಷ ನಂಜಪ್ಪ, ಜಯರಾಂ, ರಾಜು, ಶಿವು, ವಿಕ್ರಾಂತ್ ರಂಗೇಗೌಡ, ವಿಕ್ರಾಂತ್ ಲಕ್ಷ್ಮಣ್, ಜೆಸಿಬಿ ನಂಜುಂಡೇಗೌಡ, ಗ್ರಾಪಂ ಸದಸ್ಯರಾದ ರಮೇಶ್ ಸೇರಿದಂತೆ ಇತರರಿದ್ದರು.

ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಂಡ್ಯ, ಆ.22– 2023–24ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ಧೆಗೆ ಆಸಕ್ತ ರೈತ/ ರೈತ ಮಹಿಳೆಯಿಂದ ಪ್ರತ್ಯೇಕ ಅರ್ಜಿ ಆಹ್ವಾನಿಸಲಾಗಿದೆ. ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಮಂಡ್ಯ ಜಿಲ್ಲೆಗೆ ನಿಗದಿಪಡಿಸಿರುವ ಭತ್ತ(ನೀರಾವರಿ) ಮತ್ತು ರಾಗಿ(ಖುಷ್ಕಿ) ಬೆಳೆಗಳಿಗೆ ರಾಜ್ಯ/ ಜಿಲ್ಲಾ/ತಾಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಅರ್ಜಿಯನ್ನು ಸಂಬಂಧಪಟ್ಟ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದಾಗಿದೆ. ಆ.31 ಕೊನೆ ದಿನ ಎಂದು ಪ್ರಕಟಣೆ ತಿಳಿಸಿದೆ.

ಪತ್ನಿ ಕೊಂದು ಪರಾರಿಯಾಗಿದ್ದವನ ಬಂಧನ

ನಾಗಮಂಗಲ, ಆ.22– ಪತ್ನಿ ಕೊಂದು ಮಗುವಿನೊಂದಿಗೆ ಪರಾರಿಯಾಗಿದ್ದ ಆರೋಪಿ ಬಂಧಿಸುವಲ್ಲಿ ನಾಗಮಂಗಲ ಪೊಲೀಸರು ಯಶಸ್ವಿಯಾಗಿದ್ದಾರೆ.

ಮಂಜುನಾಥ್ ಬಂಧಿತ ಆರೋಪಿ. ಈತ ಇತ್ತೀಚೆಗೆ ಪತ್ನಿ ಮಧುಶ್ರೀ ಮೇಲೆ ಅನುಮಾನ ವ್ಯಕ್ತಪಡಿಸಿ ಆಕೆಯನ್ನು ಚಾಕುವಿನಿಂದ ಇರಿದು ಹತ್ಯೆಗೈದು 4 ವರ್ಷದ ಮಗ ಮನ್ವಿತ್‌ನೊಂದಿಗೆ ಪರಾರಿಯಾಗಿದ್ದ. ಆರೋಪಿ ಬಂಧನಕ್ಕೆ ಡಿವೈಎಸ್ಪಿ ಲಕ್ಷ್ಮಿನಾರಾಯಣ್ ನೇತೃತ್ವದಲ್ಲಿ ತಂಡ ರಚಿಸಲಾಗಿತ್ತು. ಬಳಿಕ ತನಿಖೆ ಕೈಗೊಂಡಿದ್ದ ಪೊಲೀಸರು ಮಂಜುನಾಥ್ ಮೊಬೈಲ್ ನೆಟ್‌ವರ್ಕ್ ಆಧರಿಸಿ ಬೆಂಗಳೂರಿನ ಕೋಣನಕುಂಟೆ ಬಳಿ ಆತನನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಗೌರಮ್ಮ ನಿಧನ



ಕೆ.ಆರ್.ಪೇಟೆ, ಆ.22– ತಾಲೂಕಿನ ಬೀರುವಳ್ಳಿ ಗ್ರಾಮದ ನಿವೃತ್ತ ಶಿಕ್ಷಕ ಶಂಕರೇಗೌಡರ ಪತ್ನಿ ಗೌರಮ್ಮ(60) ಮಂಗಳವಾರ ಬೆಳಗ್ಗೆ ನಿಧನರಾದರು. ಮೃತರು ಪುತ್ರಿ ಗಾಯಿತ್ರಿ ಮಲ್ಲಿಕಾರ್ಜುನ್ ಸೇರಿದಂತೆ ಇಬ್ಬರು ಪುತ್ರಿಯರು, ಇಬ್ಬರು ಪುತ್ರರು, ಅಳಿಯ ರಾಜ್ಯ ಆರ್‌ಟಿಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಸೇರಿದಂತೆ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಸ್ವಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಿ.ಜೆ.ರಾಮಚಂದ್ರು



ಶ್ರೀರಂಗಪಟ್ಟಣ, ಆ.22– ತಾಲೂಕಿನ ಬೆಳಗೊಳ ಗ್ರಾಮದ ನಿವಾಸಿ ಬಿ.ಜೆ.ರಾಮಚಂದ್ರು(75) ಮಂಗಳವಾರ ನಿಧನರಾದರು. ಮೃತರು ಪತ್ನಿ ಪ್ರಭಾವತಿ, ಪುತ್ರರಾದ ಪ್ರವೀಣ್, ಕೃಷ್ಣ, ಪುತ್ರಿ ಪ್ರತಿಮಾ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ 12.30ಕ್ಕೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿವೆ.

ಸಿ.ಮೋಹನ್ ಕುಮಾರಿ



ಕೆ.ಆರ್.ಪೇಟೆ, ಆ.22– ತಾಲೂಕಿನ ಬಳ್ಳೇಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕಿ ಸಿ.ಮೋಹನ್ ಕುಮಾರಿ(45) ಮಂಗಳವಾರ ಸಂಜೆ ನಿಧನರಾದರು. ಮೃತರು ಪತಿ ಹೊಸಹೊಳಲು ಸರ್ಕಾರಿ ಪ್ರೌಢಶಾಲೆ ಹಿರಿಯ ಶಿಕ್ಷಕ ಡಿ.ರಮೇಶ್, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಬೂಕನಕೆರೆ ಹೋಬಳಿ ಅರೆಭೂವನಹಳ್ಳಿಯಲ್ಲಿ ಬುಧವಾರ ಮಧ್ಯಾಹ್ನ 2 ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗಾಂಜಾ ಮಾರಾಟ: ಆರೋಪಿ ಬಂಧನ



ನಾಗಮಂಗಲ, ಆ.22– ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ನಾಗಮಂಗಲ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಿಹಾರ ಮೂಲದ ಪಂಕಜ್ ಬಂಧಿತ ಆರೋಪಿ. ಈತ ಪಟ್ಟಣದ ಟಿ.ಬಿ.ಬಡಾವಣೆಯ ಕಸುವಿನಹಳ್ಳಿ ರಸ್ತೆಯ ಗವಿಗಂಗಪ್ಪ ದೇವಸ್ಥಾನದ ಬಳಿ ಗಾಂಜಾ ಮಾರಾಟ ಮಾಡುತ್ತಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಪಂಕಜ್‌ನನ್ನು ಬಂಧಿಸಿ, ಆತನಿಂದ ಸುಮಾರು 12 ಸಾವಿರ ರೂ. ಮೌಲ್ಯದ 350 ಗ್ರಾಂ ಗಾಂಜಾ ಸೊಪ್ಪನ್ನು ವಶಪಡಿಸಿಕೊಂಡಿದ್ದಾರೆ.

ಕಾರ್ಯಾಚರಣೆಯಲ್ಲಿ ಎಸ್‌ಐ ಅಶೋಕ್‌ಕುಮಾರ್, ಎಎಸ್‌ಐ ಚನ್ನಬಸಪ್ಪ, ಗುರುಪ್ರಸಾದ್, ಮುಕ್ರಂ, ರವಿ ಸೇರಿದಂತೆ ಸಿಬ್ಬಂದಿ ಭಾಗವಹಿಸಿದ್ದರು.

ಹುಂಡಿ ಕಳವು ವೇಳೆ ಗ್ರಾಮಸ್ಥರಿಗೆ ಸಿಕ್ಕಿಬಿದ್ದ ಕಳ್ಳ



ಪಾಂಡವಪುರ, ಆ.22– ದೇವಾಲಯದ ಹುಂಡಿ ಕಳ್ಳತನ ಮಾಡುತ್ತಿದ್ದ ಕಳ್ಳನೋರ್ವನನ್ನು ಗ್ರಾಮಸ್ಥರೇ ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಘಟನೆ ತಾಲೂಕಿನ ಕನಗನಹಳ್ಳಿ ನಡೆದಿದೆ. ಮೈಸೂರು ನಿವಾಸಿ ಮುಬಾರಕ್ (30) ಸಿಕ್ಕಿಬಿದ್ದ ಕಳ್ಳ.

ವಿವರ: ಮುಬಾರಕ್ ಸೇರಿದಂತೆ ಇಬ್ಬರು ಕಳ್ಳರು ಸೋಮವಾರ ಮಧ್ಯರಾತ್ರಿ ಕನಗನಹಳ್ಳಿ ಗ್ರಾಮದ ಶ್ರೀವೀರಾಂಜನೇಯ ಸ್ವಾಮಿ ದೇವಸ್ಥಾನಕ್ಕೆ ಬೈಕ್‌ನಲ್ಲಿ ಬಂದಿದ್ದಾರೆ. ಮುಬಾರಕ್ ದೇವಾಲಯದ ಬಾಗಿಲು ಮುರಿದು ಹುಂಡಿ ಹಣ ದೋಚುತ್ತಿದ್ದರೆ, ಮತ್ತೋರ್ವ ದೇವಾಲಯದ ಹೊರಗೆ ನಿಂತು ನೋಡಿಕೊಳ್ಳುತ್ತಿದ್ದ ಎನ್ನಲಾಗಿದೆ. ಹುಂಡಿ ಹೊಡೆಯುವ ಶಬ್ದ ದೇವಾಲಯದ ಪಕ್ಕದ ಮನೆಯ ಮಹಿಳೆಗೆ ಕೇಳಿಸಿದ್ದು, ತಕ್ಷಣ ಎಚ್ಚರಗೊಂಡ ಆಕೆ ಮನೆಯ ಕಿಟಕಿಯ ಮೂಲಕ ದೇವಾಲಯವನ್ನು ನೋಡಿದ್ದು, ಕಳ್ಳರು ದೇವಾಲಯಕ್ಕೆ ನುಗ್ಗಿರುವುದನ್ನು ಮನೆಯವರಿಗೆ ತಿಳಿಸಿ, ಫೋನ್ ಮೂಲಕ ಅಕ್ಕಪಕ್ಕದ ಮನೆಯವರಿಗೂ ತಿಳಿಸಿದ್ದಾರೆ. ಈ ವೇಳೆ ಗ್ರಾಮಸ್ಥರು ಹಾಗೂ ಯುವಕರು ದೇವಾಲಯ ಸುತ್ತುವರೆಯುವುದನ್ನು ಕಂಡ ಹೊರಗಡೆ ನಿಂತಿದ್ದ ಕಳ್ಳ ಅಲ್ಲಿಂದ ಪರಾರಿಯಾಗಿದ್ದಾನೆ. ದೇವಾಲಯದ



ಒಳಗೆ ಹುಂಡಿ ಕಳವು ಮಾಡುತ್ತಿದ್ದ ಮುಬಾರಕ್ ಸಹ ದೇವಾಲಯದ ಕಾಂಪೌಂಡ್ ಹಾರಿ ಪರಾರಿಯಾಗಲು ಯತ್ನಿಸಿದ್ದು, ಗ್ರಾಮದ ಯುವಕರು ಆತನನ್ನು ಹಿಂಬಾಲಿಸಿ ಹಿಡಿದು ಥಳಿಸಿ ಗ್ರಾಮದ ವಿದ್ಯುತ್ ಕಂಬಕ್ಕೆ ಕಟ್ಟಿ ಪಾಂಡವಪುರ ಠಾಣೆಗೆ ವಿಷಯ ಮುಟ್ಟಿಸಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಮುಬಾರಕ್‌ನನ್ನು ವಶಕ್ಕೆ ಪಡೆದು ಪರಾರಿಯಾದ ಮತ್ತೋರ್ವನಿಗಾಗಿ ಬಲೆ ಬೀಸಿದ್ದಾರೆ.

ಈ ಸಂಬಂಧ ಪಾಂಡವಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಮೈಸೂರಿನ ಶೇಷಾದ್ರಿಪುರಂ ಪದವಿ ಕಾಲೇಜಿನ ಬಿ.ಕಾಂ, ಬಿಬಿಎ ಮತ್ತು ಬಿಸಿಎಯಿಂದ ಒಟ್ಟು 93 ವಿದ್ಯಾರ್ಥಿಗಳು 2022–23ನೇ ಶೈಕ್ಷಣಿಕ ಸಾಲಿನ ಕ್ಯಾಂಪಸ್ ನೇಮಕಾತಿಯಲ್ಲಿ ವಿವಿಧ ಉದ್ಯೋಗಗಳಿಗೆ ಆಯ್ಕೆಯಾದರು. ಈ ಪ್ಲೇಸ್‌ಮೆಂಟ್‌ನಲ್ಲಿ 55 ಕಂಪನಿಗಳಿಗೆ ಈ ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ. ಚಿತ್ರದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಕೆ.ಸೌಮ್ಯ ಈರಪ್ಪ, ಪ್ಲೇಸ್‌ಮೆಂಟ್ ಸಂಚಾಲಕರಾದ ಮೃತ್ಯುಲಾ ಸೋಜನ್, ಶ್ರೀದೇವಿ ಎನ್.ಪ್ರಭು, ಅನುಷಾ, ಅರುಣ್, ರುದ್ರೇಶ್ ಹಾಗೂ ಆಯ್ಕೆಯಾದ ವಿದ್ಯಾರ್ಥಿಗಳನ್ನು ಕಾಣಬಹುದು.



ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕಿನ ನೂತನ ಅಧ್ಯಕ್ಷರಾಗಿ ಆಯ್ಕೆಗೊಂಡ ಶ್ರೀಮತಿ ಪಿ. ರಾಜೇಶ್ವರಿ ಅವರು ಮಾಜಿ ಸಚಿವರೂ ಆದ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ, ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ ಅವರನ್ನು ಅಭಿನಂದಿಸಿದರು. ಈ ವೇಳೆ ಬ್ಯಾಂಕಿನ ಮಾಜಿ ಅಧ್ಯಕ್ಷರೂ ಆದ ಹಾಲಿ ನಿರ್ದೇಶಕ ಕೆ.ಉಮಾಶಂಕರ, ಉಪಾಧ್ಯಕ್ಷ ಹರೀಶ್ ಕುಮಾರ್, ಮಾಜಿ ಅಧ್ಯಕ್ಷ ರೇವಣ್ಣ, ನಿರ್ದೇಶಕರಾದ ಸವಿತ ಸೇರಿದಂತೆ ಇನ್ನಿತರರು ಹಾಜರಿದ್ದರು.

ತಂಬಾಕು ಉತ್ಪಾದನೆಯಲ್ಲಿ ಗಮನಾರ್ಹ ಸಾಧನೆ ಮಾಡಿದ ರೈತರಿಗೆ ಪ್ರಶಸ್ತಿ, ಸನ್ಮಾನ



ಮೈಸೂರು, ಆ. 22–ಆಧುನಿಕ, ನವೀನ ಮತ್ತು ಸುಸ್ಥಿರ ಕೃಷಿ ಅಭ್ಯಾಸಗಳನ್ನು ಬಳಸಿಕೊಂಡು ಕೃಷಿ ಉತ್ಪಾದಕತೆ ಮತ್ತು ಇಳುವರಿಯನ್ನು ಹೆಚ್ಚಿಸುವಲ್ಲಿ ಶ್ರಮಿಸಿದ ಹಾಗೂ ಗಮನಾರ್ಹ ಪ್ರದರ್ಶನ ನೀಡಿದ ರೈತರನ್ನು ಗೌರವಿಸಲು 23ನೇ ಆವೃತ್ತಿಯ ಟಿಐಐ ಟೊಬ್ಯಾಕೊ ಫಾರ್ಮರ್ಸ್ ಅವಾರ್ಡ್ಸ್(ತಂಬಾಕು ರೈತರ ಪ್ರಶಸ್ತಿಗಳು) ಕಾರ್ಯಕ್ರಮವನ್ನು ದಿ ಟೊಬ್ಯಾಕೊ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ (ಟಿಐಐ–ಭಾರತೀಯ ತಂಬಾಕು ಸಂಸ್ಥೆ) ವತಿಯಿಂದ ಆಯೋಜಿಸಲಾಗಿತ್ತು.

ಈ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಶುಸಂಗೋಪನೆ ಮತ್ತು ರೇಷ್ಮೆ ಕೃಷಿ ಸಚಿವ ಕೆ. ವೆಂಕಟೇಶ್; ಸಂಸದ ಪ್ರತಾಪ್ ಸಿಂಹ; ವಿಧಾನ ಪರಿಷತ್ ಸದಸ್ಯ ಎ.ಎಚ್. ವಿಶ್ವನಾಥ್, ಶಾಸಕರಾದ ಎ. ಮಂಜು, ಅನಿಲ್ ಕುಮಾರ್ ಚಿಕ್ಕಮಾದು, ಡಿ.ರವಿಶಂಕರ್, ಜಿ.ಡಿ.ಹರೀಶ್‌ಗೌಡ; ಟೊಬ್ಯಾಕೊ ಮಂಡಳಿ ಉಪಚೇರ್ಮನ್ ಎಚ್.ಸಿ. ಬಸವರಾಜು, ಟೊಬ್ಯಾಕೊ ಮಂಡಳಿಯ ಕಾರ್ಯನಿರ್ವಾಹಕ ನಿರ್ದೇಶಕ ಡಾ. ಎ.ಶ್ರೀಧರ್ ಬಾಬು, ತಂಬಾಕು ಮಂಡಳಿ ಹರಾಜು ವಿಭಾಗದ ನಿರ್ದೇಶಕರಾದ ಶ್ರೀಮತಿ ಎಂ.ಅಶ್ವಿನಿ ನಾಯ್ಡು; ಹುಣಸೂರಿನ ಐಸಿಎಆರ್–ಸಿಟಿಆರ್‌ಐ ಸಂಶೋಧನಾ ಕೇಂದ್ರದಲ್ಲಿ ಪ್ರಧಾನ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ಎಸ್. ರಾಮಕೃಷ್ಣನ್ ಇತರರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಕರ್ನಾಟಕದ 10 ತಂಬಾಕು ಬೆಳೆಗಾರರಿಗೆ 'ಜೀವಮಾನದ ಸಾಧನೆ', 'ಅತ್ಯುತ್ತಮ ರೈತರು', 'ಸುಸ್ಥಿರತೆ; ಮತ್ತು 'ಮಾನ್ಯತೆ' ಎಂಬ ನಾಲ್ಕು ವರ್ಗಗಳಲ್ಲಿ ಸನ್ಮಾನಿಸಲಾಯಿತು. ಟಿಐಐನ ನಿರ್ದೇಶಕ ಶರದ್ ಟಂಡನ್ ಮಾತನಾಡಿ, ಜಗತ್ತಿನಲ್ಲಿ ಭಾರತ ಮುಂಚೂಣಿಯ ತಂಬಾಕು ರಫ್ತು ಮಾಡುವ ದೇಶವಾಗಿರುವುದಲ್ಲದೆ, ಜಗತ್ತಿನಲ್ಲಿ ಎರಡನೇ ಅತ್ಯಂತ ಹೆಚ್ಚು ತಂಬಾಕು ಉತ್ಪಾದಿಸುವ ರಾಷ್ಟ್ರವಾಗಿದೆ. 4.5 ಕೋಟಿ ಭಾರತೀಯರಿಗೆ ತಂಬಾಕು ಜೀವನಾಧಾರವಾಗಿದೆ. ಇವರಲ್ಲಿ ರೈತರು ಮತ್ತು ಕೃಷಿ ಕಾರ್ಮಿಕರು ಸೇರಿರುತ್ತಾರೆ ಎಂದಲ್ಲದೆ, ಫ್ಲ್ಯೂ ಕ್ಯೂರ್ಡ್ ವರ್ಜೀನಿಯಾ (ಎಫ್‌ಸಿವಿ), ಬರ್ಲಿ, ಓರಿಯಂಟಲ್, ಬೀಡಿ, ಚ್ಯೂಯಿಂಗ್ ಮುಂತಾದವುಗಳು ಸೇರಿದಂತೆ ಭಾರತದ 13 ರಾಜ್ಯಗಳಲ್ಲಿ ಬೆಳೆಯುವ ಬೇರೆ ಬೇರೆ ರೀತಿಯ ತಂಬಾಕು ವಿಧಗಳ ಬಗ್ಗೆ ಅವರು ಮಾಹಿತಿ ನೀಡಿದರು.

ಶಕ್ತಿ ಯೋಜನೆ ವಿರೋಧಿಸಿ ಕರ್ನಾಟಕ ಬಂದ್

ಖಾಸಗಿ ಸಾರಿಗೆ ಸಂಸ್ಥೆಗಳ ಒಕ್ಕೂಟದಿಂದ ಸಿಎಂ ನೇತೃತ್ವದ ಸಭೆ ಬಹಿಷ್ಕಾರ

ಬೆಂಗಳೂರು: 'ಶಕ್ತಿ' ಯೋಜನೆ ಜಾರಿ ಬಳಿಕ ಸಂಕಷ್ಟಕ್ಕೆ ಸಿಲುಕಿಕೊಂಡಿದ್ದು, ರಾಜ್ಯ ಸರ್ಕಾರಕ್ಕೆ ನಷ್ಟ ಭರಿಸುವಂತೆ ಒತ್ತಾಯಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ಸಾರಿಗೆ ಸಂಸ್ಥೆಗಳ ಒಕ್ಕೂಟ ಸೋಮವಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಭೆಯನ್ನು ಬಹಿಷ್ಕರಿಸಿದ್ದವು.

ಶಕ್ತಿ ಯೋಜನೆ ಜಾರಿ ಆದ ನಂತರ ಖಾಸಗಿ ಸಾರಿಗೆ ಉದ್ಯಮಕ್ಕೆ ಎದುರಾದ ಸಂಕಷ್ಟಗಳ ಕುರಿತಂತೆ ಆಗಾಗ್ಗೆ ಆಕ್ರೋಶ ವ್ಯಕ್ತವಾಗುತ್ತಿತ್ತು. ಇದರ ಗಂಭೀರತೆ ಅರಿತ ಸಚಿವ ರಾಮಲಿಂಗಾರೆಡ್ಡಿ ಹಲವು ಸುತ್ತಿನ ಮಾತುಕತೆ ಸಹ ನಡೆಸಿದ್ದರು. ಆದರೆ ಯಾವುದಕ್ಕೂ ತಾರ್ಕಿಕ ಅಂತ್ಯ ಸಿಗದ ಹಿನ್ನೆಲೆ ಸೋಮವಾರ ಸಿಎಂ ಸಿದ್ದರಾಮಯ್ಯ ನೇತತ್ವದಲ್ಲಿ ಸಭೆ ನಡೆಸಲಾಗಿತ್ತು. ಆದರೆ, ಈ ಸಭೆಯನ್ನು ಹಲವು ಸಂಘಟನೆಗಳು ಬಹಿಷ್ಕರಿಸಿವೆ.

ಹೆಚ್ಚುವರಿ ಸಾರಿಗೆ ಆಯುಕ್ತ ಹೇಮಂತ್ ಕುಮಾರ್ ಅವರು ಸಭೆಯಲ್ಲಿ ಭಾಗವಹಿಸುವವರ ಪಟ್ಟಿಯಲ್ಲಿ ಫೆಡರೇಶನ್‌ನ ಭಾಗವಾಗಿರುವ ಕೆಲವು ಸಂಘಗಳ ಹೆಸರನ್ನು ಕೈಬಿಟ್ಟಿದ್ದು, ಬೆಂಗಳೂರು ಬಂದ್‌ಗೆ ಕರೆ ನೀಡದ ಸಂಘಗಳನ್ನು ಸೇರಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಅಧಿಕಾರಿಗಳ ವರ್ತನೆ ಒಕ್ಕೂಟದ ಕಣ್ಣು ಕೆಂಪಗಾಗುವಂತೆ ಮಾಡಿದೆ. ಖಾಸಗಿ ಸಾರಿಗೆ ಸಂಸ್ಥೆಗಳ ಒಕ್ಕೂಟ ಅಧ್ಯಕ್ಷ ನಟರಾಜ್ ಶರ್ಮಾ ಮಾತನಾಡಿ, 'ಶಕ್ತಿ' ಯೋಜನೆ ಜಾರಿಯಾದ ನಂತರ ಖಾಸಗಿ ಸಾರಿಗೆ ಸಂಸ್ಥೆಗಳ ಸಮಸ್ಯೆಗಳಿಗೆ ಸ್ಪಂದಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಭರವಸೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ಯೋಜಿತ ಪ್ರತಿಭಟನೆಯನ್ನು ತಡೆ ಹಿಡಿದಿದ್ದೆವು. ಆದರೆ, ಹೋರಾಟಕ್ಕೆ ಬೆಂಬಲ ಸೂಚಿಸದ ಸಂಘಟನೆಗಳನ್ನು ಸಭೆಗೆ ಕರೆಯಲಾಗಿದೆ. ಸಾರಿಗೆ ಅಡಿಷನಲ್ ಕಮೀಷನರ್, ಹೇಮಂತ್ ಕುಮಾರ್ ಸಂಘಗಳನ್ನು ಒಡೆಯೋ ಕೆಲಸ ಮಾಡುತ್ತಾರೆ. ಹೇಮಂತ್ ಕುಮಾರ್ ವರ್ಗಾವಣೆಗೆ ಕಮಿಷನರ್‌ಗೆ ಮನವಿ ಮಾಡಿದ್ದೇವೆಂದು ಹೇಳಿದರು. ಸಿಎಂ ಸಭೆಗೆ 32 ಸಂಘಟನೆಗಳು ಬಹಿಷ್ಕರಿಸಿದ್ದೇವೆ. ಸಿಎಂ ಸಭೆಯನ್ನು ತುಚ್ಛವಾಗಿ ನೋಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕು. ಇನ್ನೂ 10 ದಿನ ಕಾಲಾವಕಾಶವಿದ್ದು, ಅಷ್ಟರೊಳಗೆ ಮತ್ತೆ ಎಲ್ಲಾ ಸಂಘಟನೆಗಳು ಸೇರಿ ಸಭೆ ಕರೆಯಬೇಕು. ಇಲ್ಲದಿದ್ದರೆ ಹೋರಾಟದ ದಾರಿ ಹಿಡಿಯುತ್ತೇವೆ. ಸೆಪ್ಟೆಂಬರ್ 1 ರಂದು ಬೆಂಗಳೂರು ಅಥವಾ ಕರ್ನಾಟಕ ಬಂದ್ ದಿನಾಂಕ ಪ್ರಕಟಿಸುತ್ತೇವೆ ಎಂದು ತಿಳಿಸಿದರು.

ತಂತ್ರಜ್ಞಾನದ ಜತೆ ಮಾಧ್ಯಮಗಳು ಬದಲಾಗುತ್ತಿವೆ



ಮೈಸೂರು, ಆ.22(ಎಸ್‌ಪಿಎನ್)– ತಂತ್ರಜ್ಞಾನ ಬದಲಾದಂತೆ 'ದೃಶ್ಯ ಮತ್ತು ಮುದ್ರಣ' ಮಾಧ್ಯಮಗಳ ಕಾರ್ಯ ವೈಖರಿಯೂ ಬದಲಾಗುತ್ತಿದೆ ಎಂದು ಖಾಸಗಿ ನ್ಯೂ ಚಾನಲ್ ನಿರೂಪಕ ಅವಿನಾಶ್ ಯುವನ್ ಅಭಿಪ್ರಾಯಪಟ್ಟರು.

ಮೈಸೂರು ವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ಆಯೋಜಿಸಿದ್ದ ಜನೋತ್ರಿ–23 ಮಾಧ್ಯಮ ಹಬ್ಬ ಮುಕ್ತಾಯ ಸಮಾರಂಭದಲ್ಲಿ ಮಾತನಾಡಿದರು.

ದೃಶ್ಯ ಮಾದ್ಯಮ ಅಥವಾ ಮುದ್ರಣ ಮಾಧ್ಯಮದಲ್ಲಾಗಲಿ ಯಶಸ್ವಿಗೆ ಸಾಕಷ್ಟು ಶ್ರಮದ ಅಗತ್ಯವಿದೆ. ಮಾಧ್ಯಮ ವೃತ್ತಿಯಲ್ಲಿ ಹಲವು ಏರಿತಗಳಿರುತ್ತವೆ. ಇವೆಲ್ಲವನ್ನು ದಾಟಿ ಮುನ್ನುಗ್ಗಬೇಕು ಎಂದು ತಿಳಿಸಿದರು.

ಮೈಸೂರು ವಿವಿ ಮುಖ್ಯ ಹಣಕಾಸು ಅಧಿಕಾರಿ ಡಾ.ಸಂಗೀತ ಗಜಾನನ ಭಟ್ ಮಾತನಾಡಿ, ನನಗೆ ಮೊದಲಿಂದಲೂ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಕಾರ್ಯ ವೈಖರಿಗಳ ಬಗ್ಗೆ ಮೆಚ್ಚುಗೆ ಇದೆ. ಈ ವಿಭಾಗದ ವಿದ್ಯಾರ್ಥಿಗಳ ಸದಾ ಸಕ್ರಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮೈಸೂರು ವಿವಿ ಕೀರ್ತಿಗೆ ಕಾರಣಕರ್ತರಾಗಿದ್ದಾರೆ ಎಂದರು.

ದಿನನಿತ್ಯ ಪತ್ರಿಯೊಬ್ಬರು ದಿನಪತ್ರಿಕೆಗಳನ್ನು ಓದದೇ ನಿತ್ಯ ಕೆಲಸಗಳು ಆರಂಭವಾಗುವುದಿಲ್ಲ. ಅದೇ ರೀತಿ ದೂರದರ್ಶನದಲ್ಲಿ ಬರುವ ದೇಶ–ವಿದೇಶ ಸಮಾಚಾರಗಳನ್ನು ಸವಿಯದೇ ರಾತ್ರಿ ವೇಳೆ ಕೆಲವರ ಮನಸ್ಸಿಗೆ ಸಮಾಧಾನ ಇರುವುದಿಲ್ಲ. ಹಾಗಾಗಿ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ವಿಭಾಗ ಅತಿ ಹೆಚ್ಚು ಜನರ ಗಮನ ಸೆಳೆಯುವ ವಿಭಾಗವಾಗಿದೆ. ಜನೋತ್ರಿ–23 ರೂವಾರಿ ಪ್ರೊ.ಎಂ.ಎಸ್. ಸಪ್ನ ಎಲ್ಲಾ ವಿದ್ಯಾರ್ಥಿಗಳನ್ನು ಒಗ್ಗೂಡಿಸಿ ಈ ಕಾರ್ಯಕ್ರಮದ ಯಶಸ್ವಿಗೆ ಕಾರಣಕರ್ತರಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜನೋತ್ರಿ–23 ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಶ್ವವಿದ್ಯಾನಿಲಯ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಬಹುಮಾನಗಳಿಸಿದ್ದಾರೆ. ಅದರಲ್ಲಿ ಟಿನ್ ಟೈಪ್ ಮೊಬೈಲ್ ಫೋಟೋಗ್ರಫಿ ಸ್ಪರ್ಧೆಯಲ್ಲಿ ಲಕ್ಷ್ಮೀ ಶಿವಣ್ಣ (ಪ್ರ), ಸಿ.ಮಲ್ಲಿಕಾರ್ಜುನ (ದ್ವಿ), ಡಿ.ಎನ್. ಅನಿಲ್‌ಕುಮಾರ್ (ತೃ) ಸ್ಥಾನ ಪಡೆದಿದ್ದಾರೆ. ಸಾಂಸ್ಕೃತಿಕ ವಿಷಯದ ವಿಶೇಷ ಬರವಣಿಗೆ ಸ್ಪರ್ಧೆಯಲ್ಲಿ ಎಸ್.ಅಭಿಜಿತ್ (ಪ್ರ), ನಿತ್ಯಪವ್ಯೆ (ದ್ವಿ), ಧನ್ಯ (ತೃ) ಬಹುಮಾನ ಪಡೆದಿದ್ದಾರೆ.

ಡಿಎಸ್‌ಎಲ್‌ಆರ್ ಸ್ಪರ್ಧೆಯಲ್ಲಿ ಎಂ.ಅಭಿರಾಂ (ಪ್ರ), ದೀಪಕ್ ಸಬು (ದ್ವಿ), ನಿಖಿಲ್ ಜೆ ಮಥಾಯಿ(ತೃ) ಬಹುಮಾನ ಪಡೆದಿದ್ದಾರೆ. ವಾಘ್ಮಾಯ ಸ್ಪರ್ಧೆಯಲ್ಲಿ ಎಂ.ಪಿ.ಪೂಜಾ (ಪ್ರ), ಆಫ್ನಾನ್ ಪಾಷ (ದ್ವಿ), ಅನೂಪ್ ದಾಸ್ (ತೃ) ಬಹುಮಾನ ಪಡೆದಿದ್ದಾರೆ. ಧ್ವನಿ ಸ್ಪರ್ಧೆಯಲ್ಲಿ ಸಿ.ಇಂಚರ (ಪ್ರ), ನಾಗಶ್ರೀ (ದ್ವಿ), ಎಂ.ಪಿ.ಪೂಜಾ (ತೃ) ಬಹುಮಾನ ಪಡೆದಿದ್ದಾರೆ. ಮಾಡ್ ಆಡ್ ಮನಿಯ ಸ್ಪರ್ಧೆಯಲ್ಲಿ ಮೈಸೂರಿನ ಅಮೃತಾ ವಿಶ್ವ ವಿದ್ಯಾಪೀಠಂ (ಪ್ರ), ಬೆಂಗಳೂರಿನ ಜಿಎಫ್‌ಜಿಸಿ ಕಾಲೇಜು (ದ್ವಿ), ತುಮಕೂರು ವಿವಿ (ತೃ) ಬಹುಮಾನ ಪಡೆದಿದೆ. ವರದಿಗಾರಿಕೆ ಸ್ಪರ್ಧೆಯಲ್ಲಿ ಜೆ.ಗಿರಿಜಾ (ಪ್ರ), ವರ್ಷ (ದ್ವಿ), ಹೆಚ್.ತನುಜಾ (ತೃ) ಸ್ಥಾನ ಪಡೆದಿದ್ದಾರೆ. ಮೋಜೋ ಟ್ರೇಡಿಂಗ್ ಸ್ಪರ್ಧೆಯಲ್ಲಿ ಕಸ್ಮಾ ಮತ್ತು ಅಂಜನ (ಪ್ರ), ರೇಷ್ಮಾ ರಿಯಾಜ್ ಮತ್ತು ಉಮ್ಮೆರ್ (ದ್ವಿ), ಕಾವ್ಯ ಮತ್ತು ಇಂಚರ ಇತರರು (ತೃ) ಸ್ಥಾನ ಪಡೆದಿದ್ದಾರೆ. ಪೋಸ್ಟರ್ ಪಿಕಾಸ್ ಸ್ಪರ್ಧೆಯಲ್ಲಿ ಬಿ.ವಿಶ್ವಾಸ್ (ಪ್ರ), ಸುಕನ್ಯಾ (ದ್ವಿ), ತೇಜಕುಮಾರ್ (ತೃ) ಸ್ಥಾನ ಪಡೆದಿದ್ದಾರೆ. ರಸಪ್ರಶ್ನೆ ಸ್ಪರ್ಧೆಯಲ್ಲಿ ಡಿ.ಪಿ.ಶಿವಕುಮಾರ್ (ಪ್ರ), ಮಂಜುನಾಥ (ದ್ವಿ), ಎ.ಎನ್.ದರ್ಶನ್ (ತೃ)ಸ್ಥಾನ ಪಡೆದಿದ್ದಾರೆ.

ನ್ಯಾಷನಲ್ ಯೂಥ್ ಪಾರ್ಲಿಮೆಂಟ್ ಕರ್ನಾಟಕ ಎಡಿಷನ್‌ನಿಂದ ಮೈಸೂರು ವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಸಂಶೋಧನಾ ವಿದ್ಯಾರ್ಥಿ ಕೆ.ಎಸ್. ಮಂಜುನಾಥ್ ಅವರು ರಾಷ್ಟ್ರಮಟ್ಟದ ಯುವ ಸಂಸತ್ ಆಯ್ಕೆಯಾಗಿರುವುದಕ್ಕೆ ಜನೋತ್ರಿ – 23 ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಪ್ರೊ. ಸಿ.ಕೆ.ಪುಟ್ಟಸ್ವಾಮಿ, ಡಾ.ಎನ್.ಮಮತಾ, ಸಮಾಜ ಸೇವಕ ಎಚ್. ಎಂ.ಮುತ್ತುರಾಜ್ ಉಪಸ್ಥಿತರಿದ್ದರು.

ಲಯನ್ಸ್ ಕ್ಲಬ್ ಆಫ್ ಮೈಸೂರು ಚಂದನದ ಪದಾಧಿಕಾರಿಗಳ ಪದಗ್ರಹಣ



ಮೈಸೂರು,ಆ.22(ಪಿಎಂ)– ಲಯನ್ಸ್ ಇಂಟರ್‌ನ್ಯಾಷನಲ್ ಡಿಸ್ಟ್ರಿಕ್ 317ಜಿ ವತಿಯಿಂದ ಇತ್ತೀಚೆಗೆ ಹೆಬ್ಬಾಳು ರಿಂಗ್ ರಸ್ತೆಯಲ್ಲಿ ಹಮ್ಮಿಕೊಂಡಿದ್ದ ಪದಗ್ರಹಣ ಸಮಾರಂಭದಲ್ಲಿ ಲಯನ್ಸ್ ಕ್ಲಬ್ ಆಫ್ ಮೈಸೂರು ಚಂದನದ 2023–24ನೇ ಸಾಲಿನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಅಧಿಕಾರ ಸ್ವೀಕರಿಸಿದರು.

ಲಯನ್ಸ್ ಮಾಜಿ ಡಿಸ್ಟ್ರಿಕ್ ಗವರ್ನರ್ ಕೆ.ದೇವೇಗೌಡ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿಕೊಟ್ಟರು. ಅಧ್ಯಕ್ಷರಾಗಿ ಮಾದೇಶ್, ಉಪಾಧ್ಯಕ್ಷರಾಗಿ ಎನ್.ಸತೀಶ್, ಸಿ.ಉಮೇಶ್, ಕಾರ್ಯದರ್ಶಿಯಾಗಿ ಆರ್.ಬಿ. ಶಿವಪ್ರಸಾದ್, ಖಜಾಂಚಿಯಾಗಿ ನಾರಾಯಣ್ ಹಾಗೂ ಇನ್ನಿತರ ಪದಾಧಿಕಾರಿಗಳು ಅಧಿಕಾರ ವಹಿಸಿಕೊಂಡರು. ಇದೇ ವೇಳೆ ಪಿಯುಸಿ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಣೆ ಮಾಡಲಾಯಿತು.

ಜನರಲ್ ತಿಮ್ಮಯ್ಯ ಪ್ರತಿಮೆ ತಕ್ಷಣ ಪುನರ್ ನಿರ್ಮಿಸಬೇಕು

ಶಾಸಕ, ಮಾಜಿ ಸಚಿವರ ನೇತೃತ್ವದ ಸಭೆಯಲ್ಲಿ ಚರ್ಚೆ



ಮಡಿಕೇರಿ, ಆ.22– ವೀರ ಸೇನಾನಿ ಜನರಲ್ ತಿಮ್ಮಯ್ಯ ಅವರ ಪ್ರತಿಮೆ ತಕ್ಷಣ ಪುನರ್ ನಿರ್ಮಾಣ ಮಾಡಬೇಕು ಎಂದು ಶಾಸಕರಾದ ಡಾ.ಮಂಥರ್ ಗೌಡ ಹಾಗೂ ಮಾಜಿ ಸಚಿವ ಎಂ.ಸಿ.ನಾಣಯ್ಯ ಅವರ ಉಪಸ್ಥಿತಿಯಲ್ಲಿ ನಗರದ ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಕ್ಯಾಂಟೀನ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಒತ್ತಾಯಗಳು ಕೇಳಿಬಂದವು.

ಸಭೆಯಲ್ಲಿ ಮಾತನಾಡಿದ ಶಾಸಕ ಡಾ.ಮಂತರ್ ಗೌಡ, ವೀರ ಸೇನಾನಿ ಜನರಲ್ ತಿಮ್ಮಯ್ಯ ಅವರ ಪ್ರತಿಮೆ ನಿರ್ಮಾಣ ಸಂಬಂಧ ಎಲ್ಲರ ಸಹಕಾರ ಪಡೆಯುವ ನಿಟ್ಟಿನಲ್ಲಿ ಸಭೆ ಆಹ್ವಾನಿಸಲಾಗಿದೆ. ಸದ್ಯ ಈಗಿರುವ ಪ್ರತಿಮೆಯನ್ನು ಸರಿಪಡಿಸಿ ಪುನರ್ ನಿರ್ಮಾಣ ಮಾಡುವಂತಾಗಬೇಕು. ಆ ನಿಟ್ಟಿನಲ್ಲಿ ಪ್ರತಿಮೆ ನಿರ್ಮಾಣದ ಖರ್ಚು ವೆಚ್ಚವನ್ನು ಭರಿಸಲಾಗುವುದು ಎಂದರು.

ಹೊಸ ಪ್ರತಿಮೆ ನಿರ್ಮಾಣ ಮಾಡುವುದಕ್ಕೆ ಅಭ್ಯಂತರವಿಲ್ಲ ಆದರೆ ಈಗಿರುವ ಮಾದರಿಯಲ್ಲಿ ಪ್ರತಿಮೆ ಫಿನಿಶಿಂಗ್ ಬರುತ್ತದೆ ಎಂದು ಹೇಳುವುದು ಕಷ್ಟಸಾಧ್ಯವಾಗಿದೆ. ಜೊತೆಗೆ ಕಾಲಾವಕಾಶ ಬೇಕಿದೆ. ಆದ್ದರಿಂದ ಈಗಿರುವ ಪ್ರತಿಮೆಯನ್ನು ಸರಿಪಡಿಸಿ ಆದಷ್ಟು ಶೀಘ್ರ ಪ್ರತಿಮೆ ಪುನರ್ ಸ್ಥಾಪಿಸುವುದು ಅತ್ಯಗತ್ಯವಾಗಿದೆ ಎಂದು ಡಾ.ಮಂಥರ್ ಗೌಡ ಅಭಿಪ್ರಾಯ ವ್ಯಕ್ತಪಡಿಸಿದರು.

ಈಗಿರುವ ಸ್ಥಳದ ಬದಲಾವಣೆ ಇಲ್ಲ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಂಜಿನಿಯರ್‌ಗಳು ಅಭಿಪ್ರಾಯ ನೀಡುವಂತಾಗಬೇಕು ಎಂದರು. ಮಾಜಿ ಸಚಿವರಾದ ಎಂ.ಸಿ.ನಾಣಯ್ಯ ಅವರು ಮಾತನಾಡಿ, ಈಗಿರುವ ಪ್ರತಿಮೆಯನ್ನು ತ್ವರಿತವಾಗಿ ಪುನರ್ ಸ್ಥಾಪಿಸಬೇಕು ಎಂದು ಸಲಹೆ ನೀಡಿದರು. 50 ವರ್ಷಗಳ ಹಿಂದೆ ಪ್ರತಿಮೆ ಸ್ಥಾಪಿಸುವ ನಿಟ್ಟಿನಲ್ಲಿ ಶ್ರಮಿಸಲಾಗಿತ್ತು. ಜನರಲ್ ತಿಮ್ಮಯ್ಯ ಅವರ 30–35 ಫೋಟೋಗಳನ್ನು ಸಂಗ್ರಹಿಸಿ ಅದರಲ್ಲಿ ಎತ್ತರದ ಫೋಟೋವನ್ನು ಆಯ್ಕೆ ಮಾಡಿ ಪ್ರತಿಮೆ ನಿರ್ಮಾಣ ಮಾಡಲಾಗಿತ್ತು. ಈ ರೀತಿಯ ಪ್ರತಿಮೆ ನಿರ್ಮಿಸುವುದು ಕಷ್ಟಸಾಧ್ಯವಾಗಲಿದೆ. ಆದ್ದರಿಂದ ಹೊಸ ಪ್ರತಿಮೆ ಬದಲಾಗಿ, ಈಗಿರುವ ಪ್ರತಿಮೆಯನ್ನು ಸರಿಪಡಿಸಿ ಪುನರ್ ಸ್ಥಾಪಿಸಬೇಕಿದೆ ಎಂದರು.

'ಪ್ರತಿಮೆ ನಿರ್ಮಾಣ ಸಂಬಂಧ ಜಿಲ್ಲಾಡಳಿತ, ನಗರ ಸಭೆ ಹೆಚ್ಚಿನ ಜವಾಬ್ದಾರಿ ವಹಿಸಬೇಕು. ಸಂಚಾರ ದಟ್ಟಣೆ, ನಿಯಂತ್ರಣ ಸಂಬಂಧ ಪೊಲೀಸ್ ಇಲಾಖೆ ಅಗತ್ಯ ಕ್ರಮವಹಿಸಬೇಕು. ಒಂದು ತಿಂಗಳೊಳಗೆ ಪ್ರತಿಮೆ ಪುನರ್ ಸ್ಥಾಪಿಸಬೇಕು ಎಂದು ಎಂ.ಸಿ. ನಾಣಯ್ಯ ಅವರು ತಿಳಿಸಿದರು.' ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ ಅವರು ಮಾತನಾಡಿ, ಪ್ರತಿಮೆ ನಿರ್ಮಾಣ ಸಂಬಂಧ ನಗರಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ಪ್ರತಿಮೆ ನಿರ್ಮಾಣಕ್ಕೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದರು.

ಮಡಿಕೇರಿ ಕೊಡವ ಸಮಾಜದ ಅಧ್ಯಕ್ಷ ಎಂ.ಪಿ. ಮುತ್ತಪ್ಪ ಮಾತನಾಡಿ, ಈಗಿರುವ ಜಾಗದಲ್ಲಿಯೇ ಜನರಲ್ ತಿಮ್ಮಯ್ಯ ಅವರ ಪ್ರತಿಮೆಯನ್ನು ಪುನರ್ ನಿರ್ಮಾಣ ಮಾಡಬೇಕು ಎಂದು ಮನವಿ ಮಾಡಿದರು.

ಪ್ರಮುಖರಾದ ತೆನ್ನಿರಾ ಮೈನಾ ಅವರು ಮಾತನಾಡಿ ವೀರ ಸೇನಾನಿ ಜನರಲ್ ತಿಮ್ಮಯ್ಯ ಅವರ ಪ್ರತಿಮೆ ಭಾವನಾತ್ಮಕ ಸಂಬಂಧವನ್ನು ಹೊಂದಿದ್ದು, ಈಗಿನ ಪ್ರತಿಮೆ ಭಗ್ನವಾಗಿದೆ ಆದ್ದರಿಂದ ಹೊಸ ಪ್ರತಿಮೆ ನಿರ್ಮಾಣ ಮಾಡಬೇಕು ಎಂದು ಸಲಹೆ ಮಾಡಿದರು.

ಪುಲಿಯಂಡ ಜಗದೀಶ್, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸತೀಶ್, ಚೆಯ್ಯಂಡ ಸತ್ಯ, ಟಿ.ಪಿ. ರಮೇಶ್ ಮಾತನಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಅವರು ಜನರಲ್ ತಿಮ್ಮಯ್ಯ ವೃತ್ತದಲ್ಲಿ ಬ್ಯಾರಿಕೇಡ್ ಅಳವಡಿಸಿ ಸಂಚಾರ ನಿಯಂತ್ರಣಕ್ಕೆ ಕ್ರಮವಹಿಸಲಾಗುವುದು ಎಂದರು.

ಪ್ರಮುಖರಾದ ಚುಮ್ಮಿ ದೇವಯ್ಯ, ಮಡಿಕೇರಿ ನಗರದಲ್ಲಿ ಯಾವುದೇ ವಾಹನಗಳು 20 ಕಿ.ಮೀ. ವೇಗದಲ್ಲಿ ಸಂಚಾರ ಮಾಡಬೇಕು ಎಂದು ಹಲವರು ಸಲಹೆ ಮಾಡಿದರು. ಕನ್ನಂಡ ಕವಿತಾ ಅವರು ಮಾತನಾಡಿ ಹೊಸ ಪ್ರತಿಮೆ ನಿರ್ಮಾಣ ಮಾಡಬೇಕು ಎಂದು ಸಲಹೆ ಮಾಡಿದರು. ಜಿಲ್ಲಾಧಿಕಾರಿ ವೆಂಕಟ್ ರಾಜಾ, ಉಪ ವಿಭಾಗಾಧಿಕಾರಿ ಡಾ.ಯತೀಶ್ ಉಳ್ಳಾಲ್, ತಹಶೀಲ್ದಾರ್ ಪ್ರವೀಣ್ ಕುಮಾರ್, ಕೆಎಸ್‌ಆರ್‌ಟಿಸಿ ಮಡಿಕೇರಿ ಘಟಕದ ವ್ಯವಸ್ಥಾಪಕರಾದ ಗೀತಾ, ಪೌರಾಯುಕ್ತ ವಿಜಯ, ಎಂಜಿನಿಯರ್ ಸಿದ್ದೇ ಗೌಡ, ಮಡಿಕೇರಿ ನಗರ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷರಾದ ಧನಂಜಯ ಇತರರು ಇದ್ದರು.

ಸ್ಕೇಟಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಗೆ ಎಂ.ಕಲ್ಪನಾ ಕುಟ್ಟಪ್ಪ



ಕುಶಾಲನಗರ, ಆ.22– ಇಟಲಿಯಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಮಟ್ಟದ ವೇಗದ ಸ್ಕೇಟಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಕೊಡಗು ಜಿಲ್ಲೆಯ ಕುಶಾಲನಗರದ ಎಂ. ಕಲ್ಪನಾ ಕುಟ್ಟಪ್ಪ ಪ್ರತಿನಿಧಿಸಲಿದ್ದಾರೆ.

ಇಟಲಿಯಲ್ಲಿ ಆಗಸ್ಟ್ 27ರಿಂದ ಆರಂಭಗೊಳ್ಳಲಿರುವ ಸ್ಪರ್ಧೆಗೆ ರಾಜ್ಯದಿಂದ ಇಬ್ಬರು ಸ್ಕೇಟಿಂಗ್ ಪಟುಗಳು ಪ್ರತಿನಿಧಿಸುತ್ತಿದ್ದು ಕೊಡಗು ಜಿಲ್ಲೆಯ ಕುಶಾಲನಗರದ ಕಲ್ಪನಾ ಕುಟ್ಟಪ್ಪ ಮತ್ತು ಬೆಂಗಳೂರಿನ ಸುವರ್ಣಿಕ ರಾಧಾಕೃಷ್ಣನ್ ಪಾಲ್ಗೊಳ್ಳಲಿದ್ದಾರೆ. ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಮಂಗಳವಾರ ದೆಹಲಿ ಮೂಲಕ ಇಟಲಿಗೆ ಪ್ರಯಾಣ ಬೆಳೆಸಿದ್ದಾರೆ.

ಕಲ್ಪನಾ ಕುಟ್ಟಪ್ಪ ಪ್ರಸಕ್ತ ಮೈಸೂರಿನಲ್ಲಿ ಪಿಯುಸಿ ವ್ಯಾಸಂಗ ಮುಗಿಸಿದ್ದು, ಬೆಂಗಳೂರಿನಲ್ಲಿ ಈ ಹಿಂದೆ ನಡೆದ ರಾಷ್ಟ್ರೀಯ ಮಟ್ಟ ಸ್ಕೇಟಿಂಗ್ ಸ್ಪರ್ಧೆಯಲ್ಲಿ ಎರಡು ಚಿನ್ನದ ಪದಕ ಒಂದು ಬೆಳ್ಳಿ ಪದಕ ಪಡೆದಿದ್ದು ಇದುವರೆಗೆ ರಾಜ್ಯ, ಜಿಲ್ಲಾ ಮಟ್ಟದ ಸ್ಕೇಟಿಂಗ್ ಸ್ಪರ್ಧೆಗಳಲ್ಲಿ ಸೇರಿದಂತೆ ಹಲವು ಸ್ಪರ್ಧೆಗಳಲ್ಲಿ 50ಕ್ಕೂ ಅಧಿಕ ಚಿನ್ನದ ಪದಕ ಪಡೆದಿದ್ದಾಳೆ.

ಮುಂದಿನ ಅಕ್ಟೋಬರ್ 20 ರಿಂದ 10 ದಿನಗಳ ಕಾಲ ಚೈನಾದಲ್ಲಿ ನಡೆಯಲಿರುವ ಏಶಿಯನ್ ಸ್ಕೇಟಿಂಗ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಕೂಡ ಪಾಲ್ಗೊಳ್ಳಲು ಕಲ್ಪನಾ ಕುಟ್ಟಪ್ಪ ಆಯ್ಕೆಯಾಗಿದ್ದಾರೆ. ಕಲ್ಪನಾ ಏಕಲವ್ಯ ಪ್ರಶಸ್ತಿ ವಿಜೇತ ಸ್ಕೇಟಿಂಗ್ ಪಟು ಪ್ರತೀಕ್ ರಾಜ ಅವರ ಮಾರ್ಗದರ್ಶನದಲ್ಲಿ ಮೈಸೂರಿನಲ್ಲಿ ತರಬೇತಿ ಪಡೆಯುತ್ತಿದ್ದು, ಮುಕ್ಕಾಟಿರ ರವಿ ಮತ್ತು ಸ್ವಾತಿ ದಂಪತಿಗಳ ಪುತ್ರಿ.

ಅರ್ಜಿ ಆಹ್ವಾನ

ಮಡಿಕೇರಿ, ಆ.22– ಪ್ರಸಕ್ತ(2023–24) ಸಾಲಿನಲ್ಲಿ ಬಿಎಡ್ ಹಾಗೂ ಡಿಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ವತಿಯಿಂದ 2023–24ನೇ ಸಾಲಿನಲ್ಲಿ ಬಿಎಡ್ ಹಾಗೂ ಡಿಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಪಾರ್ಸಿ, ಜೈನ್, ಬೌದ್ಧ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡಲು ಸೇವಾಸಿಂಧು ಪೋರ್ಟಲ್‌ನ ಆನ್‌ಲೈನ್‌ನಲ್ಲಿ https://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್, 21 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೌಲಾನಾ ಆಜಾದ್ ಭವನ, ಎಫ್‌ಎಂಸಿ ಕಾಲೇಜು ಹತ್ತಿರ, ಮಡಿಕೇರಿ ದೂ.ಸಂ.08272–225528, ಮಾಹಿತಿ ಕೇಂದ್ರ, ಮಡಿಕೇರಿ 08272–220214 ನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಿ.ಎಚ್. ವೀರಭದ್ರಪ್ಪ ಅವರು ತಿಳಿಸಿದ್ದಾರೆ.

ಗಾಂಜಾ ಸಾಗಾಟ, ಮಹಿಳೆಯರ ಜೊತೆ ಅಸಭ್ಯವಾಗಿ ವರ್ತಿಸುವ ಆಟೋ ಚಾಲಕರ ಲೈಸನ್ಸ್ ಅಮಾತನುಗೊಳಿಸಿ

ಪೊಲೀಸರ ಸಭೆಯಲ್ಲಿ ಆಟೋ ಚಾಲಕರಿಂದಲೇ ಆಗ್ರಹ



ಮಡಿಕೇರಿ, ಆ.22– ಗಾಂಜಾ ಸಾಗಾಟ, ಮಹಿಳೆಯರೊಂದಿಗೆ ಅಸಭ್ಯ ವರ್ತನೆ ಸೇರಿದಂತೆ ಅಕ್ರಮ ಚಟುವಟಿಕೆಗಳಲ್ಲಿ ತೊಡಗುವ ಆಟೋ ಚಾಲಕರ 'ಚಾಲನಾ ಪರವಾನಗಿ'ಯನ್ನು ನಿರ್ದಿಷ್ಟ ಅವಧಿಗೆ ಸ್ಥಗಿತಗೊಳಿಸುವಂತೆ ಆಟೋ ಚಾಲಕರ ಸಂಘದ ಪದಾಧಿಕಾರಿಗಳೆ ಆಗ್ರಹಿಸಿದ ಘಟನೆ ಪೊಲೀಸ್ ಮತ್ತು ಚಾಲಕರ ಸಭೆಯಲ್ಲಿ ನಡೆಯಿತು.

ನಗರದ ಸಂಚಾರಿ ಪೊಲೀಸ್ ಠಾಣೆಯಲ್ಲಿ ಎಸ್.ಐ ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಜಿಲ್ಲಾ ಆಟೋ ಚಾಲಕರ ಮತ್ತು ಮಾಲೀಕರ ಸಂಘದ ಅಧ್ಯಕ್ಷ ಮೇದಪ್ಪ ಮಾತನಾಡಿ, ನಗರ ವ್ಯಾಪ್ತಿಯಲ್ಲಿ ಅಕ್ರಮ ಚಟುವಟಿಕೆಗಳನ್ನು ನಡೆಸುವ ಆಟೋ ಚಾಲಕರ ಚಾಲನಾ ಪರವಾನಗಿಯನ್ನು ಕನಿಷ್ಠ 1 ವರ್ಷದವರೆಗೆ ಸ್ಥಗಿತಗೊಳಿಸುವ ಕಠಿಣ ಕ್ರಮ ಕೈಗೊಳ್ಳಿ. ಇಂತಹ ವಿಚಾರದಲ್ಲಿ ಸಂಘ ಎಂದಿಗೂ ಚಾಲಕರ ಪರ ನಿಲ್ಲುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಆಟೋ ನಿಲುಗಡೆ ಸಮಸ್ಯೆ: ಮಡಿಕೇರಿ ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆಯಿಂದ ವಾಹನ ನಿಲುಗಡೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ಈ ಹಿನ್ನೆಲೆ ಆಟೋ ಚಾಲಕರು ತಮ್ಮ ಆರೋಗ್ಯ ಸಮಸ್ಯೆಗಳಿಗೆ ಆಸ್ಪತ್ರೆಗೆ ತೆರಳಬೇಕಾದರೆ, ಆಸ್ಪತ್ರೆಯ ಬಳಿಯಲ್ಲಿ ಸಾರ್ವಜನಿಕ ವಾಹನ ನಿಲುಗಡೆ ಸ್ಥಳದಲ್ಲಿ ಆಟೋ ರಿಕ್ಷಾ ನಿಲುಗಡೆಗೆ ಅವಕಾಶ ವಿಲ್ಲವಾಗಿದೆ. ಇದಕ್ಕೆ ಅವಕಾಶ ನೀಡುವಂತೆ ಮೇದಪ್ಪ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಎಸ್.ಐ ಶ್ರೀಧರ್, ಆಟೋ ರಿಕ್ಷಾಗಳಿಗೆ ಸಾರ್ವಜನಿಕ ನಿಲುಗಡೆ ಪ್ರದೇಶಗಳಲ್ಲಿ ಯಾವುದೇ ಕಾರಣಕ್ಕೂ ನಿಲುಗಡೆಗೆ ಅವಕಾಶವಿಲ್ಲ. ಹೀಗಿದ್ದೂ ವೈಯಕ್ತಿಕ ಕಾರಣಗಳ ಹಿನ್ನೆಲೆ ಆಸ್ಪತ್ರೆಗೆ ತೆರಳುವ ಹಂತದಲ್ಲಿ ಒಂದು ಆಟೋ ನಿಲುಗಡೆಗೆ ಅವಕಾಶ ಮಾಡಿಕೊಡಲಾ ಗುತ್ತದೆ. ಅದಕ್ಕೆ ಅಗತ್ಯವಾದ ಬೋರ್ಡ್ ಅಳವಡಿಸುವಂತೆ ಆಟೋ ಚಾಲಕರ ಸಂಘಕ್ಕೆ ಸೂಚಿಸಿ, ಯಾವುದೇ ಕಾರಣಕ್ಕೂ ಅಲ್ಲಿ ಹೆಚ್ಚಿನ ಆಟೋಗಳನ್ನು ನಿಲ್ಲಿಸುವುದಕ್ಕೆ ಅವಕಾಶವಿಲ್ಲವೆಂದು ಸ್ಪಷ್ಟಪಡಿಸಿದರು. ಸಭೆಯಲ್ಲಿದ್ದ ನಗರಸಭೆ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಉಣ್ಣಿಕೃಷ್ಣ, ಜಿಲ್ಲಾ ಆಸ್ಪತ್ರೆ ಮುಂಭಾಗದ ಮುಖ್ಯ ರಸ್ತೆಯ ಬದಿಗಳಲ್ಲಿ ಭಾರೀ ವಾಹನಗಳನ್ನು ದಿನಗಟ್ಟಲೆ ನಿಲುಗಡೆ ಮಾಡಲಾಗುತ್ತಿದೆ. ಇದಕ್ಕೆ ಅವಕಾಶ ನೀಡದಿದ್ದಲ್ಲಿ ಆ ವಿಭಾಗದ ವಾಹನ ನಿಲುಗಡೆ ಸಮಸ್ಯೆ ಪರಿಹಾರವಾಗಬಹುದೆನ್ನುವ ಸಲಹೆ ನೀಡಿದರು.

ನಿಗದಿತ ಸ್ಥಳದಲ್ಲೆ ವಾಹನ ನಿಲುಗಡೆ: ಮಡಿಕೇರಿ ನಗರ ವ್ಯಾಪ್ತಿಯ ಟ್ಯಾಕ್ಸಿ, ಪಿಕಪ್, ಆಟೋ ರಿಕ್ಷಾ, ಲಾರಿ ಸೇರಿದಂತೆ ವಿವಿಧ ವಾಹನಗಳ ನಿಲುಗಡೆಗೆ ಜಾಗವನ್ನು ಗೊತ್ತುಪಡಿಸಲಾಗಿದೆ. ಅಂತಹ ಸ್ಥಳದಲ್ಲಿ ಇತರೆ ವಾಹನಗಳ ನಿಲುಗಡೆಯಾಗುತ್ತಿದೆ. ಯಾವುದೇ ಕಾರಣಕ್ಕೂ ಸೂಚಿಸಿದ ವಾಹನಗಳು ಮಾತ್ರ ಅಲ್ಲಿ ನಿಲುಗಡೆಯಾಗಬೇಕು. ನಿಯಮ ಮೀರಿದಲ್ಲಿ ಕ್ರಮ ಅನಿವಾರ್ಯವೆಂದು ಎಸ್.ಐ. ಶ್ರೀಧರ್ ತಿಳಿಸಿದರು.

ಈ ಸಂದರ್ಭ ಪಿಕ್‌ಅಪ್, ಟ್ಯಾಕ್ಸಿ ಚಾಲಕರ ಸಂಘದ ಪ್ರತಿನಿಧಿಗಳು ಮಾತನಾಡಿ, ತಮಗೆ ನಿಗದಿಪಡಿಸಿದ ಸ್ಥಳಗಳಲ್ಲಿ ವೈಟ್ ಬೋರ್ಡ್ ವಾಹನಗಳನ್ನು ಕೆಲವರು ನಿಲ್ಲಿಸುತ್ತಾರೆ. ಇದನ್ನು ಪ್ರಶ್ನಿಸಿದಲ್ಲಿ ಅನಗತ್ಯ ಸಂಘರ್ಷಗಳು ಉಂಟಾಗುತ್ತದೆಂದು ತಮ್ಮ ಸಮಸ್ಯೆಯನ್ನು ಮುಂದಿಟ್ಟರು. ನಗರದ ಇಂದಿರಾ ಗಾಂಧಿ ವೃತ್ತದಿಂದ ರಾಮ ಮಂದಿರದವರೆಗೆ ಇರುವ ನಿಲುಗಡೆ ಸ್ಥಳದಲ್ಲಿ ಅಲ್ಲಿನ ಅಂಗಡಿ ಮಾಲೀಕರೆ ತಮ್ಮ ವಾಹನಗಳನ್ನು ಬೆಳಗ್ಗಿನಿಂದ ಸಂಜೆಯವರೆಗೆ ನಿಲ್ಲಿಸುವುದರಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಸುದೀರ್ಘ ಚರ್ಚೆ ನಡೆಯಿತು. ಬಸ್ ನಿಲ್ದಾಣದಿಂದ ಪತ್ರಿಕಾ ಭವನಕ್ಕಾಗಿ ತೆರಳುವ ಹಾದಿಯಲ್ಲಿ ಅತಿಯಾದ ವಾಹನ ನಿಲುಗಡೆಯಿಂದ ಬಸ್ ಸಂಚಾರ ಕಷ್ಟಕರವಾಗಿದೆ ಎಂದು ಬಸ್ ನಿರ್ವಾಹಕರೊಬ್ಬರು ತಮ್ಮ ಸಮಸ್ಯೆಯನ್ನು ಸಭೆಯ ಮುಂದಿಟ್ಟರು. ಈ ಎಲ್ಲಾ ಸಮಸ್ಯೆಗಳನ್ನು ಆಲಿಸಿದ ಎಸ್.ಐ ಶ್ರೀಧರ್, ಈ ಎಲ್ಲಾ ವಿಚಾರಗಳ ಬಗ್ಗೆ ಗಮನ ಹರಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಸಭೆಯಲ್ಲಿ ಎಎಸ್‌ಐ ನಂದ ಉಪಸ್ಥಿತರಿದ್ದರು.

ವೈದ್ಯಕೀಯ ಕಾಲೇಜು ವಿದ್ಯಾರ್ಥಿನಿಯರ ಹಾಸ್ಟೆಲ್ ಮುಂದೆ ಅಸಭ್ಯ ವರ್ತನೆ, ಬೆದರಿಕೆ ಪ್ರಕರಣ

ಆಟೋ ಚಾಲಕನ ಬಂಧನ, ಹಲವರ ವಿರುದ್ಧ ಪ್ರಕರಣ ದಾಖಲು



ಮಡಿಕೇರಿ, ಆ.22– ಮಡಿಕೇರಿ ನಗರದಲ್ಲಿರುವ ಕೊಡಗು ವೈದ್ಯಕೀಯ ಕಾಲೇಜ್‌ನ ವಿದ್ಯಾರ್ಥಿನಿಯರ ಹಾಸ್ಟೆಲ್ ಬಳಿ ಅಸಭ್ಯವಾಗಿ ವರ್ತಿಸುತ್ತಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಆಟೋ ಚಾಲಕ, ನೆಲ್ಲಿಹುದಿಕೇರಿ ನಿವಾಸಿ ಸಿಜಿಲ್(25) ಎಂಬಾತನೇ ಬಂಧಿತ ಆರೋಪಿಯಾಗಿದ್ದಾನೆ. ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಗೆ ಬೆದರಿಕೆ ಹಾಕಿದ ಆರೋಪದಡಿ ಮಡಿಕೇರಿ ನಿವಾಸಿಗಳಾದ ಸಿ.ಮನು (27), ಎಸ್.ಪ್ರಶಾಂತ್(27) ಹಾಗೂ ಕಿರಣ್ (28) ಎಂಬುವವರ ವಿರುದ್ಧವೂ ಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ವೈದ್ಯಕೀಯ ಕಾಲೇಜ್‌ನ ಹಾಸ್ಟೆಲ್‌ನಲ್ಲಿ ಭದ್ರತೆ ಲೋಪದ ಬಗ್ಗೆ ಕಾಲೇಜು ವಿದ್ಯಾರ್ಥಿಗಳು ಸೋಮವಾರ ಪ್ರತಿಭಟನೆ ನಡೆಸಿ ಆಡಳಿತ ವ್ಯವಸ್ಥೆಯ ಗಮನ ಸೆಳೆದಿದ್ದರು. ಪುಂಡರು ಕಾಲೇಜು ಆವರಣಕ್ಕೆ ಬಂದು ಅಸಭ್ಯವಾಗಿ ವರ್ತಿಸುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರು. ಕಾಲೇಜ್‌ಗೆ ಸೂಕ್ತ ಭದ್ರತೆಯ ಗೇಟ್, ಸಿ.ಸಿ ಕ್ಯಾಮರಾ ಮತ್ತು ವಿದ್ಯುತ್ ವ್ಯವಸ್ಥೆ ಇಲ್ಲವೆಂದು ಟೀಕಿಸಿದ್ದರು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಅವರು ತ್ವರಿತ ಕ್ರಮಕ್ಕೆ ಪೊಲೀಸರಿಗೆ ಮಾರ್ಗದರ್ಶನ ನೀಡಿದ್ದರು. ಸಿ.ಸಿ. ಕ್ಯಾಮರಾ ದೃಶ್ಯಾವಳಿಯನ್ನು ಆಧರಿಸಿ ಪೊಲೀಸರ ತಂಡ ಕಾರ್ಯಾಚರಣೆ ನಡೆಸಿದೆ.

ಮಾಹಿತಿ ನೀಡಿ: ಶಾಲಾ, ಕಾಲೇಜುಗಳಲ್ಲಿ ಕಿಡಿಗೇಡಿಗಳು ತೊಂದರೆ ನೀಡುವುದು ಕಂಡು ಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡುವಂತೆ ಎಸ್.ಪಿ ಮನವಿ ಮಾಡಿದರು. ಬೈಕ್‌ಗಳಲ್ಲಿ ವೀಲಿಂಗ್ ಮಾಡುವುದು, ಹೆಣ್ಣು ಮಕ್ಕಳಿಗೆ ಚುಡಾಯಿಸುವುದು ಸೇರಿದಂತೆ ಸಾರ್ವಜನಿಕ ಪ್ರದೇಶದಲ್ಲಿ ಅಸಭ್ಯವಾಗಿ ವರ್ತಿಸುವವರ ವಿರುದ್ಧ ಕಠಿಣ ಕಾನೂನು ಜರುಗಿಸುವುದಾಗಿ ಎಸ್.ಪಿ. ರಾಮರಾಜನ್ ಎಚ್ಚರಿಕೆ ನೀಡಿದರು.

ಬಾಲಕಿ ಮೇಲೆ ಅತ್ಯಾಚಾರ: ವ್ಯಕ್ತಿಗೆ 20 ವರ್ಷ ಶಿಕ್ಷೆ

ಚಾಮರಾಜನಗರ, ಆ.22– ಬಾಲಕಿ ಮೇಲೆ ಅತ್ಯಾಚಾರವೆಸಗಿದ್ದ ವ್ಯಕ್ತಿಗೆ 20 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿ ಇಲ್ಲಿನ ಮಕ್ಕಳ ಸ್ನೇಹಿ ಮತ್ತು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಆದೇಶ ಹೊರಡಿಸಿದೆ.

ಹನೂರು ತಾಲೂಕಿನ ರಾಮಾಪುರ ಠಾಣಾ ವ್ಯಾಪ್ತಿಯ ಗ್ರಾಮವೊಂದರ ಬಸವರಾಜು ಅಲಿಯಾಸ್ ಬಸವಾಚಾರಿ(35) ಶಿಕ್ಷೆಗೆ ಒಳಗಾದವನು. ಈತ 2019ರ ಡಿ.12ರಂದು ಮನೆ ಮುಂದೆ ಆಟವಾಡುತ್ತಿದ್ದ 5 ವರ್ಷದ ಬಾಲಕಿಯನ್ನು ಇಡ್ಲಿ ಕೊಡುವ ನೆಪದಲ್ಲಿ ತನ್ನ ಮನೆಗೆ ಕರೆದುಕೊಂಡು ಹೋಗಿ ಅತ್ಯಾಚಾರವೆಸಗಿದ್ದ. ಈ ವೇಳೆ ಬಾಲಕಿ ಕಿರುಚಿಕೊಂಡಿದ್ದರಿಂದ ಓಡಿ ಹೋಗಿದ್ದ. ಪೋಷಕರು ಬಾಲಕಿಯನ್ನು ವಿಚಾರಿಸಿದ ಬಳಿಕ ಬಸವರಾಜುನನ್ನು ಪ್ರಶ್ನಿಸಲು ಹೋದಾಗ, ಆತ ಮನೆಯೊಳಕ್ಕೆ ಹೋಗಿ ಸೀಮೆಎಣ್ಣೆ ಮೈಮೇಲೆ ಸುರಿದುಕೊಂಡು ಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದ. ಘಟನೆ ಸಂಬಂಧ ರಾಮಾಪುರ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಾಗಿತ್ತು. ಅಂದಿನ ಇನ್‌ಸ್ಪೆಕ್ಟರ್ ಮನೋಜ್ ಕುಮಾರ್ ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದರು.

ಬಸವರಾಜು ಎಸಗಿರುವ ಕೃತ್ಯ ಸಾಕ್ಷ್ಯಾಧಾರಗಳಿಂದ ಸಾಬೀತಾದ ಹಿನ್ನೆಲೆಯಲ್ಲಿ ಪೋಕ್ಸೊ ಕಾಯ್ದೆಗಳ ವಿವಿಧ ಸೆಕ್ಷನ್‌ಗಳ ಅಡಿ 20 ವರ್ಷಗಳ ಕಠಿಣ ಶಿಕ್ಷೆ ಮತ್ತು 20 ಸಾವಿರ ದಂಡ ವಿಧಿಸಿ ಮಕ್ಕಳ ಸ್ನೇಹಿ ಮತ್ತು ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಸಿ.ಎ.ನಿಶಾರಾಣಿ ಆದೇಶ ಹೊರಡಿಸಿದ್ದಾರೆ.

ಅಪರಾಧಿಯು ಶಿಕ್ಷೆಯನ್ನು ಏಕಕಾಲದಲ್ಲಿ ಅನುಭವಿಸಬೇಕು. ಅಲ್ಲದೇ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರವು ಸಂತ್ರಸ್ತ ಬಾಲಕಿಗೆ 4 ಲಕ್ಷ ಪರಿಹಾರವನ್ನು 30 ದಿನಗಳ ಒಳಗಾಗಿ ನೀಡಬೇಕು ಎಂದು ತಿಳಿಸಿದ್ದಾರೆ. ಪ್ರಾಸಿಕ್ಯೂಷನ್ ಪರ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಯೋಗೇಶ್ ವಾದ ಮಂಡಿಸಿದ್ದರು.

ಹಿಂದುಳಿದ ವರ್ಗಗಳ ಏಳಿಗೆಗೆ ಅರಸು ಕೊಡುಗೆ ಅಪಾರ

ಶಾಸಕ ಸಿ.ಪುಟ್ಟರಂಗಶೆಟ್ಟಿ ಅಭಿಪ್ರಾಯ



ಚಾಮರಾಜನಗರ, ಆ.22– ಹಿಂದುಳಿದ ವರ್ಗಗಳು, ಶೋಷಿತ ಜನಾಂಗದ ಸಮಗ್ರ ಅಭಿವೃದ್ಧಿಗೆ ಹಲವು ಕ್ರಾಂತಿಕಾರಕ ಯೋಜನೆಗಳನ್ನು ಜಾರಿಗೆ ತಂದು ಅಪಾರ ಕೊಡುಗೆ ನೀಡಿದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಸದಾ ಸ್ಮರಣೀಯರು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಪಂ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಆಯೋಜಿಸಿದ್ದ ಹಿಂದುಳಿದ ವರ್ಗಗಳ ನೇತಾರ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 108ನೇ ಜನ್ಮ ದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಿ.ದೇವರಾಜ ಅರಸು ಅವರು ಹಿಂದುಳಿದ ವರ್ಗಗಳು, ಶೋಷಿತ ವರ್ಗಗಳ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸ್ಥಾಪಿಸಿದರು. ಹಾವನೂರು ಆಯೋಗ ರಚಿಸಿ ಹಿಂದುಳಿದ ವರ್ಗಗಳ ಸಮುದಾಯಗಳ ಸಮೀಕ್ಷೆ ನಡೆಸಿ ಅನುಕೂಲ ಕಲ್ಪಿಸಿಕೊಟ್ಟರು. ರಾಜಕೀಯದಲ್ಲಿ ಹೊಸ ಹಾದಿ ತೋರಿಸಿಕೊಟ್ಟರು ಎಂದರು.

ಅರಸು ಅವರು ಯಾರನ್ನು ನಿಷ್ಠುರ ಮಾಡಿಕೊಳ್ಳದೇ ಎಲ್ಲರ ವಿಶ್ವಾಸಗಳಿಸಿ ಉತ್ತಮ ಕೆಲಸಗಳನ್ನು ಕೈಗೊಂಡರು. ವಯೋವೃದ್ಧರಿಗೆ ಮಾಸಾಶನ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಜಾರಿ ಸೇರಿದಂತೆ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಕಾರಕ ಯೋಜನೆಗಳನ್ನು ಅನುಷ್ಠಾನಕ್ಕೆ ತಂದರು. ಶೋಷಿತ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಿದರು. ಡಿ.ದೇವರಾಜ ಅರಸು ಅವರು ಮೌನಕ್ರಾಂತಿ ಮೂಲಕ ಹೆಸರುವಾಸಿಯಾಗಿ ರಾಷ್ಟ್ರಾದ್ಯಂತ ಖ್ಯಾತಿ ಹೊಂದಿದರು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಪಂ ಸಿಇಓ ಎಸ್.ಪೂವಿತಾ, ಡಿ.ದೇವರಾಜ ಅರಸು ಅವರು ಬಾಲ ಕಾರ್ಮಿಕ ಪದ್ಧತಿ ಹಾಗೂ ಸಮಾಜದ ಕಟ್ಟುಪಾಡು, ಕಂದಾಚಾರಗಳನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಶ್ರಮಿಸಿದರು. ಅರಸು ಅವರ ಉತ್ತಮ ಸಂದೇಶಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

> ಭಾರತ ಕಂಡ ಧೀಮಂತ ನಾಯಕ ಡಿ.ದೇವರಾಜ ಅರಸು. ಅವರು 21 ಅಂಶಗಳ ಕಾರ್ಯಕ್ರಮಗಳು, ಹಾವನೂರು ಆಯೋಗದ ರಚನೆ, ಜೀತ ವಿಮುಕ್ತಿ, ಉಳುವವನೇ ಭೂ ಒಡೆಯದಂತಹ ಯಶಸ್ವಿ ಕಾರ್ಯಕ್ರಮಗಳನ್ನು ಜಾರಿಗೆ ತಂದರು. ಹಿಂದುಳಿದ ವರ್ಗಗಳ ಏಳಿಗೆಗಾಗಿ ಅರಸು ಕೊಡುಗೆ ಅಪಾರ.
> - ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾಧಿಕಾರಿ.

ಪ್ರಧಾನ ಭಾಷಣ ಮಾಡಿದ ಇರಸವಾಡಿ ಸರ್ಕಾರಿ ಪ್ರೌಢಶಾಲೆ ಅಧ್ಯಾಪಕ ಗೋವಿಂದರಾಜು, ಸಾಮಾನ್ಯ ಮನೆತನದಲ್ಲಿ ಹುಟ್ಟಿ ಎಲ್ಲರ ಮನಸ್ಸಿನಲ್ಲಿ ಹೆಸರು ಮಾಡಿದ್ದ ಧೀಮಂತ ನಾಯಕ ಡಿ.ದೇವರಾಜ ಅರಸು. ಸಾಮಾಜಿಕ, ಆರ್ಥಿಕ ಪ್ರಜಾಪ್ರಭುತ್ವದ ನೆಲೆಗಟ್ಟಿನಲ್ಲಿ ಚಿಂತಿಸಿದವರು. ನೊಂದ ಸಾಮಾಜಿಕ ಧ್ವನಿಗಳಿಗೆ ಜೊತೆಗೂಡಿ ಅನೇಕ ರಂಗದಲ್ಲಿ ಉನ್ನತ ಅವಕಾಶಗಳನ್ನು ಕಲ್ಪಿಸಿದರು ಎಂದರು.

ಇದೇ ವೇಳೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸೌಲಭ್ಯಗಳನ್ನು ಫಲಾನುಭವಿಗಳಿಗೆ ವಿತರಿಸಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಚಾಮರಾಜೇಶ್ವರ ದೇವಾಲಯದ ಬಳಿ ಡಿ.ದೇವರಾಜು ಅರಸು ಅವರ ಭಾವಚಿತ್ರದ ಮೆರವಣಿಗೆಗೆ ಶಾಸಕ ಸಿ. ಪುಟ್ಟರಂಗಶೆಟ್ಟಿ ಚಾಲನೆ ನೀಡಿದರು. ಈ ಸಂದರ್ಭ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್, ಜಿಪಂ ಸಿಇಓ ಎಸ್. ಪೂವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಇದ್ದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕೆ.ಎ.ರಾಜೇಂದ್ರ ಪ್ರಸಾದ್, ದೇವರಾಜ ಅರಸು ನಿಗಮದ ಅಧಿಕಾರಿ ಚೈತ್ರಾ ಇತರರು ಕಾರ್ಯಕ್ರಮದಲ್ಲಿದ್ದರು.

ಪೂರಕ ಪೌಷ್ಟಿಕ ಆಹಾರ ವಿತರಣೆಗೆ ಚಾಲನೆ



ಚಾಮರಾಜನಗರ, ಆ.22– ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿ ಬೇಯಿಸಿದ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿ ವಿತರಿಸುವ ಕಾರ್ಯಕ್ರಮಕ್ಕೆ ಮಂಗಳವಾರ ಚಾಲನೆ ದೊರೆಯಿತು.

ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢ ಶಾಲೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಪಂ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ವಿದ್ಯಾರ್ಥಿನಿಯರಿಗೆ ಬೇಯಿಸಿದ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿ ನೀಡುವ ಮೂಲಕ ಪೂರಕ ಪೌಷ್ಟಿಕ ಆಹಾರ ವಿತರಣೆಗೆ ಚಾಲನೆ ನೀಡಿದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಶಾಲೆಗಳಲ್ಲಿ 1 ರಿಂದ 8ನೇ ತರಗತಿ ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿಯನ್ನು ನೀಡಲಾಗುತ್ತಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ 9 ರಿಂದ 10ನೇ ತರಗತಿ ಮಕ್ಕಳಿಗೂ ಪೂರಕ ಪೌಷ್ಟಿಕ ಆಹಾರ ವಿತರಿಸಲು ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರು. ಅದರಂತೆ ಇಂದು 1 ರಿಂದ 10ನೇ ತರಗತಿವರೆಗಿನ ಎಲ್ಲಾ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿ ಮೊಟ್ಟೆ, ಬಾಳೆಹಣ್ಣು, ಶೇಂಗಾ ಚಿಕ್ಕಿ ನೀಡ ಲಾಗುತ್ತಿದೆ ಎಂದರು.

ಆಹಾರ ಸೇವನೆ ಹಕ್ಕು ಪ್ರತಿಯೊಬ್ಬರಿಗೂ ಇದೆ. ಮೊಟ್ಟೆ ಸೇವನೆ ಇಷ್ಟವಾಗದಿರುವವರಿಗೆ ಬಾಳೆಹಣ್ಣು ಅಥವಾ ಶೇಂಗಾ ಚಿಕ್ಕಿ ಕೊಡಲಾಗುತ್ತಿದೆ. ಬೆಳೆಯುವ ಮಕ್ಕಳ ಆರೋಗ್ಯ ದೃಷ್ಟಿಯಿಂದ ಪೌಷ್ಟಿಕ ಆಹಾರ ಸಿಗಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಕಾರ್ಯಕ್ರಮ ವಿಸ್ತರಣೆ ಮಾಡಿದೆ. ಇದರ ಸದುಪಯೋಗವಾಗಬೇಕು ಎಂದರು.

ವಿದ್ಯಾರ್ಥಿಗಳು ಓದಿನ ಜೊತೆ ಒಂದಲ್ಲ ಒಂದು ಕಾರ್ಯ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಶೈಕ್ಷಣಿಕ ಅಭಿವೃದ್ಧಿಗಾಗಿ ನೀಡಲಾಗುತ್ತಿರುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ವ್ಯಾಸಂಗದಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಶಾಲೆಗೆ ಒಳ್ಳೆಯ ಹೆಸರು ಕೀರ್ತಿ ತರಬೇಕು. ಉನ್ನತ ಮಟ್ಟಕ್ಕೆ ವಿದ್ಯಾರ್ಥಿಗಳು ಏರಬೇಕು ಎಂದು ಸಲಹೆ ನೀಡಿದರು.

> ಜಿಲ್ಲೆಯಲ್ಲಿ 915 ಶಾಲೆಗಳಿದ್ದು, 818 ಸರ್ಕಾರಿ ಶಾಲೆ, 97 ಅನುದಾನಿತ ಶಾಲೆಗಳು ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದ ವ್ಯಾಪ್ತಿಗೆ ಒಳಪಡಲಿವೆ. ಬಿಸಿಯೂಟದೊಂದಿಗೆ ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1 ರಿಂದ 10ನೇ ತರಗತಿಯ ಒಟ್ಟಾರೆ ಜಿಲ್ಲೆಯಲ್ಲಿ 80313 ಮಕ್ಕಳು ಪೂರಕ ಪೌಷ್ಟಿಕ ಆಹಾರ ಪಡೆಯಲಿದ್ದಾರೆ.
> - ರಾಮಚಂದ್ರರಾಜೇ ಅರಸ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಮಾತನಾಡಿ, ಸದೃಢ ದೇಹವಿದ್ದರೆ ಸದೃಢ ಮನಸ್ಸು ಇರುತ್ತದೆ. ಹೀಗಾಗಿ ಸರ್ಕಾರ ಪೂರಕ ಪೌಷ್ಟಿಕ ಆಹಾರವನ್ನು ಎಲ್ಲಾ ವಿದ್ಯಾರ್ಥಿಗಳಿಗೆ ನೀಡುತ್ತಿದೆ. ಶಿಕ್ಷಣ ಶ್ರೇಯೋಭಿವೃದ್ಧಿಗಾಗಿ ಸಮಾನ ಅವಕಾಶಗಳನ್ನು ಕಲ್ಪಿಸಿದೆ. ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲೂ ಅದರಲ್ಲೂ ಶಾರೀರಿಕ ಬಲವರ್ಧನೆಗೆ ಪೂರಕವಾದ ಚಟುವಟಿಕೆಗಳಲ್ಲಿ ಭಾಗಿಯಾಗಬೇಕು ಎಂದರು.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ಕವಿತಾ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಅಕ್ಷರ ದಾಸೋಹ ಅಧಿಕಾರಿ ಗುರುಲಿಂಗಯ್ಯ, ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ ಪ್ರಾಂಶುಪಾಲ ಎಂ.ಕಾಶಿನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಣ್ಣೇಗೌಡ, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಉಪ ಪ್ರಾಂಶುಪಾಲ ಹೆಚ್.ಎನ್. ನಂಜುಂಡಸ್ವಾಮಿ ಇತರರಿದ್ದರು.

ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ನಗರಸಭಾ ಸದಸ್ಯರಾದ ಮಹೇಶ್, ಅಧಿಕಾರಿಗಳು ಕಾರ್ಯಕ್ರಮದ ಬಳಿಕ ಶಾಲಾವರಣದಲ್ಲಿ ಕುಳಿತು ವಿದ್ಯಾರ್ಥಿನಿಯರೊಂದಿಗೆ ಬಿಸಿಯೂಟ, ಪೌಷ್ಟಿಕ ಆಹಾರ ಸೇವಿಸಿದರು.

ಅಭಿವೃದ್ಧಿ ಮೂಲಕ ಜನರ ವಿಶ್ವಾಸ ಉಳಿಸಿಕೊಳ್ಳುವೆ

ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್



ಗುಂಡ್ಲುಪೇಟೆ, ಆ.22– ನನ್ನ ಮೇಲೆ ವಿಶ್ವಾಸವಿಟ್ಟು ಕ್ಷೇತ್ರದ ಜನರು ಗೆಲ್ಲಿಸಿದ್ದಾರೆ. ಅವರ ವಿಶ್ವಾಸ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಶಾಸಕ ಹೆಚ್.ಎಂ. ಗಣೇಶ್‌ಪ್ರಸಾದ್ ತಿಳಿಸಿದರು.

ತಾಲೂಕಿನ ಬೆರಟಹಳ್ಳಿ ಗ್ರಾಮದಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಂದ ಅಭಿನಂದನೆ ಸ್ವೀಕರಿಸಿ ಹಾಗೂ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕೊಠಡಿ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮದ ಜನರು ಒಟ್ಟಾಗಿ ಗ್ರಾಮದಲ್ಲಿ ಇಂತಹ ಕೆಲಸ ಆಗಬೇಕು ಎಂದು ಪಟ್ಟಿ ಮಾಡಿ ಕೊಡಿ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಅವುಗಳನ್ನು ಅನುಷ್ಠಾನಗೊಳಿಸುತ್ತೇನೆ. ಇದರಲ್ಲಿ ಯಾವುದೇ ಅನುಮಾನ ಬೇಡ ಎಂದರು.

ಕಾರ್ಯಕರ್ತರು ನನ್ನನ್ನು ನೋಡಲು ಮೈಸೂರಿಗೆ ಬರುವ ಬದಲು ಪ್ರವಾಸಿ ಮಂದಿರಕ್ಕೆ ಬನ್ನಿ. ಅಲ್ಲಿಯೇ ಪಕ್ಷದ ಮುಖಂಡರು ಇರುತ್ತಾರೆ. ಅಧಿಕಾರಿಗಳು ಅಲ್ಲೇ ಇರುತ್ತಾರೆ ಎಂದು. ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡಬೇಕು. ಹೀಗಾಗಿ ಜನರ ಕೆಲಸ ಆಗುವುದಾದರೇ ಮಾಡಿ ಇಲ್ಲವಾದರೇ ನಮ್ಮಿಂದ ಆಗಿಲ್ಲ ಎಂದು ಹೇಳಿ ಸುಮ್ಮನೇ ಅಲೆಸಬೇಡಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಚುನಾವಣೆಗೂ ಮುನ್ನ ನೀಡಿದ್ದ ಭರವಸೆಯಂತೆ 5 ಗ್ಯಾರಂಟಿಗಳ ಪೈಕಿ ಈಗಾಗಲೇ 3 ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿದೆ. ಈ ತಿಂಗಳ ಅಂತ್ಯದಲ್ಲಿ ಗೃಹಲಕ್ಷ್ಮಿ ಯೋಜನೆ ಜಾರಿಯಾಗಲಿದೆ. ಐದು ಗ್ಯಾರಂಟಿಗಳ ಜಾರಿಗೆ ಸಿಎಂ, ಡಿಸಿಎಂ ಶ್ರಮಿಸುತ್ತಿದ್ದಾರೆ ಎಂದರು. ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ ಅನುದಾನ ಬೇಕಿರುವ ಕಾರಣ ಅಭಿವೃದ್ಧಿ ಕೆಲಸಕ್ಕೆ ಸ್ವಲ್ಪ ಹಿನ್ನಡೆಯಾಗಿದೆ. ಈಗ ಶಾಸಕರ ಅನುದಾನ 2 ಕೋಟಿ ಬದಲು 50 ಲಕ್ಷ ರೂ. ಬಿಡುಗಡೆಯಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಸರಿ ಹೋಗಲಿದೆ ಎಂದರು.

ಸಹಾಯಧನ

ಚಾಮರಾಜನಗರ, ಆ.22– ತೋಟಗಾರಿಕೆ ಇಲಾಖೆಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ನೆರಳು ಪರದೆ ಘಟಕ ನಿರ್ಮಾಣಕ್ಕೆ ಎಲ್ಲಾ ವರ್ಗದ ರೈತರಿಗೂ ಶೇ.50ರಷ್ಟು ಸಹಾಯ ಧನ ನೀಡಲಾಗುತ್ತದೆ. ಆಸಕ್ತ ರೈತರು ಸಹಾಯಧನಕ್ಕಾಗಿ ಅಗತ್ಯ ದಾಖಲಾತಿಗಳೊಂದಿಗೆ ಆಯಾ ತಾಲೂಕಿನ ತೋಟಗಾರಿಕೆ ಇಲಾಖೆ ಸಂಪರ್ಕಿಸಿ.

ಯಳಂದೂರು ತಾಲೂಕಿನ ಇರಸವಾಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಎಂ.ಮಹದೇವಯ್ಯ ಅವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು. ಈ ವೇಳೆ ಮುಖ್ಯ ಶಿಕ್ಷಕಿ ಅಲಮೇಲಮ್ಮ, ಸಹ ಶಿಕ್ಷಕರಾದ ಮಹದೇವ, ರಾಜಶೇಖರ್, ಮಹೇಶ್, ಜೆ.ಪಿ.ಶಿಲ್ಪ, ಮಹೇಶ್ವರಿ, ರಿಜ್ವಾನ್ ಸೇರಿದಂತೆ ಇತರರಿದ್ದರು.



ಒಂದನೇ ಪುಟದಿಂದ

ಹಲವು ರೈತರ ಬಂಧನ

ಹಳೆ ಮೈಸೂರಿಗೆ ನೀರು ಬೇಡವೇ ಎಂದು ಪ್ರಶ್ನಿಸಿದರು. ನಮ್ಮ ಹೋರಾಟಕ್ಕೆ ಪೊಲೀಸರು ಸಹಕರಿಸಬೇಕು ಎಂದು ಮನವಿ ಮಾಡಿದ ಸಂದರ್ಭದಲ್ಲಿ ಎಸ್ಪಿ ಯತೀಶ್, ನಾವು ಕಾನೂನು ಪಾಲಿಸಬೇಕಿದೆ, ಅರ್ಥ ಮಾಡಿಕೊಳ್ಳಿ ಎಂದು ಸಮಜಾಯಿಷಿ ಕೊಟ್ಟರು.

ಪೊಲೀಸ್ ವಶಕ್ಕೆ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರೈತ ಮುಖಂಡರು, ರೈತರ ಪರ ಸಂಸತ್ತಿನಲ್ಲಿ ಧನಿ ಎತ್ತಬೇಕಾದ ಸಂಸದೆ ಸುಮಲತಾ ಅಂಬರೀಶ್, ಬೀದಿಗಿಳಿದು ಹೋರಾಟ ಮಾಡುವ ಮೂಲಕ ರೈತರನ್ನು ದಿಕ್ಕು ತಪ್ಪಿಸುತ್ತಿದ್ದಾರೆ. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಪಕ್ಷದವರು ಬೀದಿಗಿಳಿದು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಿದ್ದರೆ, ರಾಜ್ಯದ ಕಾಂಗ್ರೆಸ್ ಸರ್ಕಾರ ನೀರನ್ನೆಲ್ಲಾ ತಮಿಳುನಾಡಿಗೆ ಹರಿಸಿ ಇದೀಗ ಸರ್ವಪಕ್ಷ ಸಭೆ ಕರೆದು ರೈತರ ಪರ ಮೊಸಳೆ ಕಣ್ಣೀರು ಸುರಿಸಲು ಮುಂದಾಗಿದ್ದಾರೆ ಎಂದು ಕಿಡಿಕಾರಿದರು.

ಕಾವೇರಿ ಕಣಿವೆ ಜಲಾಶಯಗಳಿಂದ ನೀರು ಬಿಡುವ ಮುನ್ನ ಎಚ್ಚೆತ್ತುಕೊಂಡು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಮುಂದಾಗದೆ ಏಕಾಏಕಿ ನೀರು ಬಿಟ್ಟು ಜಲಾಶಯಗಳನ್ನು ಬರಿದು ಮಾಡಿ ಕುಡಿಯುವ ನೀರಿಗೂ ತತ್ವಾರ ತಂದು ಇದೀಗ ರೈತರ ಕಣ್ಣಿಗೆ ಮಣ್ಣೆರಚುವ ಕೆಲಸಕ್ಕೆ ಮುಂದಾಗಿದೆ ಎಂದು ದೂರಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ ನೇತೃತ್ವದಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿತ್ತು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಇಂಡುವಾಳು ಚಂದ್ರಶೇಖರ್, ರೈತ ಮುಖಂಡರಾದ ಮಂಜೇಶ್‌ಗೌಡ, ಸೊ.ಶಿ.ಪ್ರಕಾಶ್, ಬನ್ನೂರು ನಾರಾಯಣ್, ಸಿದ್ದೇಗೌಡ, ಇ.ಬಸವರಾಜ್, ಕಸ್ತೂರಿ ಕರ್ನಾಟಕ ಜನಪರ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಸೇರಿ ನೂರಾರು ಮಂದಿ ರೈತರು ಭಾಗವಹಿಸಿದ್ದರು.

ಬರಪೀಡಿತ ಪ್ರದೇಶಗಳ ಘೋಷಣೆ

ಬಿತ್ತನೆಯಾದ ಕೆಲವು ಬೆಳೆಗಳು ಆಗಸ್ಟ್ ತಿಂಗಳ ಮಳೆ ಹಾಗೂ ತೇವಾಂಶ ಕೊರತೆ ಅನುಭವಿಸುತ್ತಿವೆ. ಮಳೆ ಕೊರತೆ ಮುಂದುವರೆದ ಪಕ್ಷದಲ್ಲಿ ಬೆಳೆಗಳು ಒಣಗುವ ಸಾಧ್ಯತೆ ಇದೆ. 1.82 ಲಕ್ಷ ಹೆಕ್ಟೇರ್ ತೋಟಗಾರಿಕೆ ಬೆಳೆ ಬಿತ್ತನೆಯಾಗಿದ್ದು, ಇದೇ ಅವಧಿಯ ವಾಡಿಕೆ ಬಿತ್ತನೆ (2.15 ಲಕ್ಷ ಹೆಕ್ಟೇರ್)ಗೆ ಹೋಲಿಸಿದ್ದಲ್ಲಿ ಶೇ.65ರಷ್ಟು ಬಿತ್ತನೆಯಾಗಿದೆ. ಕೆಲವೆಡೆ ಮಳೆ ಕೊರತೆಯಿಂದ ಈರುಳ್ಳಿ ಬೆಳೆ ತೇವಾಂಶ ಕೊರತೆ ಅನುಭವಿಸುತ್ತಿವೆ.

ನೀರು ಸಂಗ್ರಹ ಕುಸಿತ: ರಾಜ್ಯದ 14 ಪ್ರಮುಖ ಜಲಾಶಯಗಳ ನೀರಿನ ಸಂಗ್ರಹಣಾ ಸಾಮರ್ಥ್ಯ 896 ಟಿಎಂಸಿಗಳಾಗಿದ್ದು, ಪ್ರಸ್ತುತ ಅವಧಿಯಲ್ಲಿ 618 ಟಿಎಂಸಿ ನೀರು ಸಂಗ್ರಹವಾಗಿದೆ. ಇದು ಒಟ್ಟು ಸಂಗ್ರಹಣದ ಶೇ.69ರಷ್ಟಿದೆ.

ಕಳೆದ ಸಾಲಿನ ಇದೇ ಅವಧಿಯಲ್ಲಿ 796 ಟಿಎಂಸಿ ನೀರು ಸಂಗ್ರಹವಾಗಿತ್ತು. ರಾಜ್ಯದ ಕಾವೇರಿ ಕಣಿವೆಯ ಜಲಾಶಯಗಳಲ್ಲಿ ಒಟ್ಟು ಸಂಗ್ರಹಣಾ 114 ಟಿಎಂಸಿಯಾಗಿದ್ದು, ಇಲ್ಲಿಯವರೆಗೆ 80 ಟಿಎಂಸಿ ನೀರು ಸಂಗ್ರಹವಾಗಿದೆ. ರಾಜ್ಯದ ಕೃಷ್ಣ ಜಲಾನಯನ ಪ್ರದೇಶದಲ್ಲಿ 6 ಜಲಾಶಯಗಳಿದ್ದು, ಅವುಗಳ ಒಟ್ಟು ಸಾಮರ್ಥ್ಯ 422 ಟಿಎಂಸಿಗಳಾಗಿದ್ದು, ಇಲ್ಲಿಯವರೆಗೆ 348 ಟಿಎಂಸಿ ನೀರು ಸಂಗ್ರಹವಾಗಿದೆ.

ರಾಜ್ಯದ ವಿದ್ಯುಚ್ಛಕ್ತಿ ಉತ್ಪಾದನಾ ಜಲಾಶಯಗಳಾದ ಲಿಂಗನಮಕ್ಕಿ, ಸೂಫ ಮತ್ತು ವರಾಯಿ ಜಲಾಶಯಗಳ ಒಟ್ಟು ಸಾಮರ್ಥ್ಯ 328 ಟಿಎಂಸಿಯಾಗಿದ್ದು, ಇಲ್ಲಿಯವರೆಗೂ ಕೇವಲ 165 ಟಿಎಂಸಿ ನೀರು ಶೇಖರಣೆಯಾಗಿದೆ ಎಂಬ ಮಾಹಿತಿ ಸಭೆ ನೀಡಲಾಗಿದೆ. ರಾಜ್ಯದಲ್ಲಿ 115 ಲಕ್ಷ ದನಕರುಗಳು ಹಾಗೂ 155 ಲಕ್ಷ ಕುರಿ, ಮೇಕೆಗಳಿದ್ದು, ಸದ್ಯಕ್ಕೆ 150 ಲಕ್ಷ ಟನ್ ಮೇವು ಲಭ್ಯವಿದ್ದು, 28 ವಾರಗಳ ಬಳಕೆಗೆ ಸಾಕಾಗುತ್ತದೆ. ಆದರೂ ಮುಂದಿನ ದಿನಗಳಲ್ಲಿ ಮೇವಿನ ಕೊರತೆ ಉಂಟಾಗದಂತೆ ಇಲಾಖೆಯ ಯೋಜನೆಗಳ ಮೂಲಕ ರೈತರಿಗೆ ಮೇವಿನ ಬೀಜ ವಿತರಿಸಿ, ಮೇವು ಬೆಳೆಸಲು, ಪ್ರೋತ್ಸಾಹಿಸಲು ಕ್ರಮ ಕೈಗೊಳ್ಳಲಾಗಿದೆ.

ಆಘಾತದಿಂದ ತಂದೆಯೂ ಸಾವು

ಕಾವೇರಿ ಮುಖ್ಯ ರಸ್ತೆ ನಿವಾಸಿ ಕಿರಣ್ ಅಲಿಯಾಸ್ ಬೆಗ್ಗರ್(20) ಬಂಧಿಸಿದ್ದರು.

ಯುವಕನ ಕೊಲೆ ಪ್ರಕರಣದಲ್ಲಿ ಭಾಗಿಯಾಗಿ ಪತಿ ಮತ್ತು ಪುತ್ರ ಬಂಧನಕ್ಕೊಳಗಾದ ವಿಷಯ ತಿಳಿಯುತ್ತಿದ್ದಂತೆಯೇ ಮನ ನೊಂದು ಭಾನುವಾರ ಮಧ್ಯಾಹ್ನ ಸಾಮ್ರಾಟ್ ತಾಯಿ ಇಂದ್ರಾಣಿ(40), ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡರು. ಪ್ರಕರಣ ದಾಖಲಿಸಿಕೊಂಡ ನಜರ್‌ಬಾದ್ ಠಾಣೆ ಪೊಲೀಸರು, ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸ್ಥಳಾಂತರಿಸಿ, ಕಾನೂನು ಪ್ರಕ್ರಿಯೆ ನಡೆಸುತ್ತಿದ್ದರು.

ತನ್ನ ಪತ್ನಿ ಆತ್ಮಹತ್ಯೆಗೆ ಶರಣಾದ ವಿಷಯ ತಿಳಿಯುತ್ತಿದ್ದಂತೆಯೇ ಆಘಾತದಿಂದ ರೋಧಿಸುತ್ತಿದ್ದ ನ್ಯಾಯಾಂಗ ಬಂಧನದಲ್ಲಿ ಜೈಲಲ್ಲಿದ್ದ ಆಕೆಯ ಪತಿ ಉಮಾಶಂಕರ್‌ಗೆ ಸೋಮವಾರ ಮಧ್ಯರಾತ್ರಿ ತೀವ್ರ ಎದೆ ನೋವು ಕಾಣಿಸಿಕೊಂಡಿದೆ. ತಕ್ಷಣ ಆತನನ್ನು ಜೈಲು ಅಧಿಕಾರಿಗಳು ಕೆ.ಆರ್.ಆಸ್ಪತ್ರೆಗೆ ಕರೆದೊಯ್ದರಾದರೂ, ಚಿಕಿತ್ಸೆ ಫಲಕಾರಿಯಾಗದೇ ಇಂದು ಮುಂಜಾನೆ ಕೊನೆಯುಸಿರೆಳೆದಿದ್ದಾರೆ.

ಪ್ರಕರಣ ದಾಖಲಿಸಿಕೊಂಡಿರುವ ಮಂಡಿ ಠಾಣೆ ಪೊಲೀಸರು ಇಂದು ಮಧ್ಯಾಹ್ನ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರದಲ್ಲಿ ಉಮಾಶಂಕರ್ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೊಳಪಡಿಸಿದರೆ, ಅದೇ ವೇಳೆ ನಜರ್‌ಬಾದ್ ಠಾಣೆ ಪೊಲೀಸರು ಪತ್ನಿ ಇಂದ್ರಾಣಿ ಮೃತದೇಹದ ಮರಣೋತ್ತರ ಪರೀಕ್ಷೆಗೊಳಪಡಿಸಿದರು. ಸಾವಿನಲ್ಲೂ ಒಂದಾದ ದಂಪತಿಯ ದೇಹಗಳನ್ನು ಒಟ್ಟಿಗೇ ಮರಣೋತ್ತರ ಪರೀಕ್ಷೆ ಮುಗಿಸಿ ಸಂಬಂಧಿಕರಿಗೆ ಒಪ್ಪಿಸಲಾಯಿತು. ಬಳಿಕ ಇಂದು ಸಂಜೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ಒಟ್ಟಿಗೇ ಅವರ ಅಂತ್ಯಕ್ರಿಯೆಯನ್ನು ನಡೆಸಲಾಯಿತು.

ನ್ಯಾಯಾಲಯದಿಂದ ವಿಶೇಷ ಅನುಮತಿ ಪಡೆದು ಪುತ್ರ ತೇಜಸ್ ತಮ್ಮ ತಂದೆ-ತಾಯಿಯ ಅಂತ್ಯಕ್ರಿಯೆಯಲ್ಲಿ ಭಾಗಿಯಾದ ಬಳಿಕ ಪೊಲೀಸರು ಆತನನ್ನು ಮತ್ತೆ ಜೈಲಿಗೆ ಕರೆದೊಯ್ದು ಒಪ್ಪಿಸಿದರು. ಕ್ಷುಲ್ಲಕ ಕಾರಣಕ್ಕೆ ಕೋಪಕ್ಕೆ ಬುದ್ಧಿ ಕೊಟ್ಟು, ತಾಯಿ, ತಂದೆ ಬಲಿಯಾದರೆ, ಪುತ್ರ ಜೈಲು ಸೇರಿದ. ಕೊಲೆ ಪ್ರಕರಣದಿಂದಾಗಿ ಇಡೀ ಕುಟುಂಬದಲ್ಲಿ ಅಲ್ಲೋಲ-ಕಲ್ಲೋಲ ನಡೆದು ಹೋಯಿತು. ಶವಾಗಾರದ ಬಳಿ ನೆರೆದಿದ್ದ ಇಂದ್ರಾಣಿ ಮತ್ತು ಉಮಾಶಂಕರ್ ಅವರ ಸಂಬಂಧಿಕರ ರೋಧನೆ ಮುಗಿಲು ಮುಟ್ಟಿತ್ತು. ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಉಮಾಶಂಕರ್, ಅವರ ಪುತ್ರ ತೇಜಸ್ ಸೇರಿದಂತೆ ನಾಲ್ವರ ವಿರುದ್ಧ ಐಪಿಸಿ ಸೆಕ್ಷನ್ 302, 341 ರೆಡ್‌ವಿತ್ 34, 3(2) (1/a) of SC & ST Act ಅಡಿ ಪ್ರಕರಣ ದಾಖಲಿಸಿಕೊಂಡಿರುವ ನಜರ್‌ಬಾದ್ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ ನೇತೃತ್ವದಲ್ಲಿ ಇದೀಗ ಮುಂದಿನ ತನಿಖೆ ನಡೆಯುತ್ತಿದೆ. ಸಾವನ್ನಪ್ಪಿದ ಇಂದ್ರಾಣಿ ಮತ್ತು ಉಮಾಶಂಕರ್ ದಂಪತಿಗೆ ತೇಜಸ್ ಏಕಮಾತ್ರ ಪುತ್ರನಾಗಿದ್ದು, ಅವರ ಮನೆಯಲ್ಲೀಗ ಸ್ಮಶಾನ ಮೌನ.

ಚಂದ್ರಯಾನ-3 ಮಿಷನ್ ಲ್ಯಾಂಡಿಂಗ್

ಪ್ರದೇಶವನ್ನು ಪತ್ತೆಹಚ್ಚಲು ಸಹಾಯ ಮಾಡುವ ಈ ಕ್ಯಾಮೆರಾವನ್ನು -- ಬಂಡೆಗಳು ಅಥವಾ ಆಳವಾದ ಕಂದಕಗಳಿಲ್ಲದೆ -- ಇಸ್ರೋದ ಪ್ರಮುಖ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರವಾದ ಅಹಮದಾಬಾದ್ ಮೂಲದ ಸ್ಪೇಸ್ ಅಪ್ಲಿಕೇಶನ್ ಸೆಂಟರ್ (SAC) ಅಭಿವೃದ್ಧಿಪಡಿಸಿದೆ. ಚಂದ್ರಯಾನ-3ರ ಮಿಷನ್ ಉದ್ದೇಶಗಳನ್ನು ಸಾಧಿಸಲು, ಎಲ್ ಎಚ್ ಡಿಎಸಿಯಂತಹ ಹಲವಾರು ಸುಧಾರಿತ ತಂತ್ರಜ್ಞಾನಗಳು ಲ್ಯಾಂಡರ್‌ನಲ್ಲಿವೆ. ಜುಲೈ 14 ರಂದು ಉಡಾವಣೆಯಾದ ಚಂದ್ರಯಾನ-3, ಚಂದ್ರನ ಮೇಲ್ಮೈಯಲ್ಲಿ ಸುರಕ್ಷಿತ ಲ್ಯಾಂಡಿಂಗ್ ಮತ್ತು ರೋವಿಂಗ್‌ನಲ್ಲಿ ಅಂತ್ಯದಿಂದ ಕೊನೆಯವರೆಗೆ ಸಾಮರ್ಥ್ಯವನ್ನು ಪ್ರದರ್ಶಿಸಲು ಚಂದ್ರಯಾನ-2 ನ ಮುಂದುವರಿದ ಮಿಷನ್ ಆಗಿದೆ

ಸೂರು ನಿರ್ಮಾಣ ಕಾರ್ಯ ಆರಂಭ

ಬಿಸಿಲಿನ ತಾಪ ಹೆಚ್ಚಾಗಿ ಆನೆಗಳು ನಿತ್ರಾಣಗೊಳ್ಳದಂತೆ ಎತ್ತರದ ಮೇಲ್ಛಾವಣಿ ಮೂಲಕ ಶೆಡ್‌ಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ರಾಜಮಾರ್ಗದಲ್ಲಿ ತಾಲೀಮು: ಚಿನ್ನದ ಅಂಬಾರಿ ಹೊರುವ ಅಭಿಮನ್ಯು ನೇತೃತ್ವದಲ್ಲಿ ಆನೆಗಳಿಗೆ ಪ್ರತಿದಿನ ಜಂಬೂ ಸವಾರಿ ಮಾರ್ಗದಲ್ಲಿ ತಾಲೀಮು ನಡೆಸಲಾಗುತ್ತದೆ. ಇದರಿಂದ ದಣಿದು ಬರುವ ಆನೆಗಳಿಗೆ ಪೌಷ್ಠಿಕಾಂಶಯುಕ್ತ ಆಹಾರ ನೀಡಲಾಗುತ್ತಿದೆ. ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ಭತ್ತ, ಬೆಲ್ಲ, ಬೆಣ್ಣೆ, ಬೇಯಿಸಿದ ಕಾಳುಗಳನ್ನು ನೀಡಲಾಗುತ್ತದೆ. ಈ ಹಿನ್ನೆಲೆಯಲ್ಲಿ ಆನೆಗಳಿಗೆ ಆಹಾರ ತಯಾರಿಸಲು ಪ್ರತ್ಯೇಕ ಶೆಡ್ ಕೂಡ ನಿರ್ಮಿಸಲಾಗುತ್ತಿದೆ. ದಸರಾದಲ್ಲಿ ಭಾಗವಹಿಸುವ 14 ಆನೆಗಳ ಮಾವುತರು, ಕಾವಾಡಿಗಳು, ಆಹಾರ ತಯಾರು ಮಾಡುವ ಸಿಬ್ಬಂದಿ ಸೇರಿದಂತೆ ಅರಣ್ಯ ಇಲಾಖೆಯ ಇತರೆ ಸಿಬ್ಬಂದಿ ಪರಿವಾರದ ವಾಸ್ತವ್ಯಕ್ಕೆ 40 ಶೆಡ್‌ಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ಶಾಶ್ವತ ಶೌಚಾಲಯ: ಈ ಮೊದಲು ಮಾವುತರು ಹಾಗೂ ಕಾವಾಡಿಗಳ ಕುಟುಂಬಕ್ಕೆ ತಾತ್ಕಾಲಿಕ ಶೌಚಾಲಯ ನಿರ್ಮಾಣ ಮಾಡಲಾಗುತ್ತಿತ್ತು. ಅದರಿಂದ ಅಶುಚಿತ್ವ ಉಂಟಾದ ಕಾರಣ ಅರಮನೆಯ ಜಯಮಾರ್ತಾಂಡ ದ್ವಾರದ ಬಳಿ ಈ ಮೊದಲೇ ಇದ್ದ ಶೌಚಾಲಯವನ್ನು ನವೀಕರಿಸಲಾಗುತ್ತಿದೆ. ಮಳೆ ಬಂದರೆ ನೀರು ತುಂಬಿ, ಹಾವುಗಳು ನುಗ್ಗುತ್ತಿದ್ದ ಕಾರಣ, ಸುರಕ್ಷತೆ ದೃಷ್ಟಿಯಿಂದಲೂ ಮೈಸೂರು ಅರಮನೆ ಮಂಡಳಿ ಶೌಚಾಲಯವನ್ನು ನವೀಕರಿಸಿದೆ. ಈ ಮೂಲಕ ಮಾವುತರು ಹಾಗೂ ಕಾವಾಡಿಗಳ ಕುಟುಂಬಕ್ಕೆ ಅಲ್ಲೇ ಶೌಚಾಲಯದ ಸೌಲಭ್ಯ ಕಲ್ಪಿಸಲಾಗಿದೆ. ದಸರಾ ಗಜಪಡೆ ಮೈಸೂರು ಅರಮನೆಗೆ ಬರಲು ಇನ್ನು ಹತ್ತು ದಿನಗಳ ಕಾಲಾವಕಾಶವಿದ್ದು, ಅಷ್ಟರಲ್ಲಿ ಶೆಡ್‌ಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲಾಗುವುದು. ಆನೆಗಳು ಬರುವುದು ಎರಡು ದಿನ ಇರುವಂತೆ ಅವುಗಳ ವಾಸ್ತವ್ಯ ಸ್ಥಳ ಸೇರಿದಂತೆ ಮೈಸೂರು ಅರಮನೆಯ ಆವರಣದ ಸೂಕ್ಷ್ಮ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುವುದು. ದಸರಾ ಗಜಪಡೆಗೆ ಹುಲ್ಲು, ಭತ್ತ ಸೇರಿದಂತೆ ಪೌಷ್ಟಿಕಾಂಶಯುಕ್ತ ಆಹಾರ ಸರಬರಾಜು ಮಾಡುವ ಟೆಂಡರ್ ಪ್ರಕ್ರಿಯೆಯನ್ನು ಅರಣ್ಯ ಇಲಾಖೆ ಬಹುತೇಕ ಪೂರ್ಣಗೊಳಿಸಿದೆ. ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಆನೆಗಳ ಸುರಕ್ಷತೆಗೆ ಅರಣ್ಯ ಇಲಾಖೆ ಎಲ್ಲಾ ಮುಂಜಾಗ್ರತಾ ಕ್ರಮ ಕೈಗೊಂಡಿದೆ. ದಸರಾ ಜಂಬೂ ಸವಾರಿ ಮೆರವಣಿಗೆಗೆ 45 ದಿನಗಳ ಮೊದಲೇ ಆನೆಗಳು ಮೈಸೂರಿಗೆ ಆಗಮಿಸುತ್ತವೆ.

ಅಧಿಕಾರಿಗಳಿಗೇ ಮಾಹಿತಿ ಕೊರತೆ; 'ಉದಯರವಿ' ರಸ್ತೆ ಸಂಬಂಧ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ಗೊಂದಲ

ಮೈಸೂರು, ಆ.22(ಎಸ್‌ಬಿಡಿ)- ಮೈಸೂರು ಮಹಾನಗರ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ರಸ್ತೆಗೆ ನಾಮಕರಣ ಮಾಡುವ ಪ್ರಸ್ತಾವನೆ ಬಗ್ಗೆ ಚರ್ಚಿಸುವಾಗ ಭಾರಿ ಗದ್ದಲ ಉಂಟಾಯಿತ್ತಲ್ಲದೆ, ಕಾಂಗ್ರೆಸ್ ಹಾಗೂ ಬಿಜೆಪಿ ಸದಸ್ಯರ ನಡುವೆ ಜಟಾಪಟಿಯೂ ನಡೆಯಿತು.



ಸಭೆ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಮೇಯರ್ ಡಾ. ಜಿ.ರೂಪಾ, ಪಾಲಿಕೆ ಹೆಚ್ಚುವರಿ ಆಯುಕ್ತೆ ಎಂ.ಜೆ.ರೂಪಾ ಉಪಸ್ಥಿತರಿದ್ದಾರೆ.

ನಗರ ಪಾಲಿಕೆಯ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ವಾಡಿಕೆಯಂತೆ ಪ್ರಭಾರ ಮೇಯರ್ ಆಗಿ ಉಪ ಮೇಯರ್ ಡಾ.ಜಿ.ರೂಪಾ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಕೌನ್ಸಿಲ್ ಸಭೆ, ರಸ್ತೆಗೆ ನಾಮಕರಣ ಮಾಡುವ ಪ್ರಸ್ತಾವನೆ ಹಾಗೂ ಹಿಂದಿನ ಸಭೆಯಲ್ಲಾದ ನಿರ್ಣಯಗಳ ಸಂಬಂಧ ಗದ್ದಲದ ಗೂಡಾಯಿತೇ ಹೊರತು, ಗಂಭೀರ ಚರ್ಚೆ ನಡೆಯಲಿಲ್ಲ.

ಎನ್‌ಐಇ ಕಾಲೇಜು ಹಾಸ್ಟೆಲ್ ಪಕ್ಕದ ಅಶೋಕಪುರಂ ರಸ್ತೆಯಿಂದ ಇಸ್ಕಾನ್ ದೇವಸ್ಥಾನದ ಮಂಭಾಗ, ಸಿಗ್ನಲ್ ಲೈಟ್ ಮೂಲಕ ರಾಮಕೃಷ್ಣನಗರ ವೃತ್ತದವರೆಗಿನ ರಸ್ತೆಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ ತಂದೆ ರಾಮ್‌ಜಿ ಸಕ್ಪಾಲ್ ಹೆಸರನ್ನು ನಾಮಕರಣ ಮಾಡುವಂತೆ ಜನಪರ ವೇದಿಕೆಯ ಎಸ್.ಶಿವಪ್ಪ ಪಾಲಿಕೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಈ ಸಂಬಂಧ ಆ.8ರ ಕೌನ್ಸಿಲ್ ಸಭೆಯಲ್ಲೂ ಚರ್ಚೆಗೆ ಬಂದಿತ್ತು. ಈಗಾಗಲೇ ಈ ರಸ್ತೆಗೆ ಬೇರೆ ಹೆಸರಿರುವುದರಿಂದ ಪರಿಶೀಲಿಸಿ, ಮುಂದಿನ ಸಭೆಯಲ್ಲಿ ಚರ್ಚೆಗೆ ತರಲು ನಿರ್ಣಯಿಸಲಾಗಿತ್ತು.

ಈ ಪ್ರಸ್ತಾವನೆ ಮತ್ತೆ ಕೌನ್ಸಿಲ್‌ಗೆ ಮಂಡಿಸಿದ್ದರಿಂದ ಅನೇಕ ಸದಸ್ಯರು ಈ ಬಗ್ಗೆ ಅಧಿಕಾರಿಗಳಿಂದ ಸ್ಪಷ್ಟನೆ ಕೋರಿದರು. ಪಾಲಿಕೆಯ ಎಸ್‌ಇ ಕೆ.ಜೆ.ಸಿಂಧು, ಪ್ರಸ್ತಾಪಿತ ರಸ್ತೆಗೆ ಈಗಾಗಲೇ 'ಉದಯರವಿ' ಎಂದು ಹೆಸರಿದೆ ಎಂದರು. ಆಗ ಸದಸ್ಯೆ ಪಲ್ಲವಿ ಬೇಗಂ, ಉದಯರವಿ ಯಾರು?, ಮೈಸೂರಿಗೆ ಅವರ ಕೊಡುಗೆ ಏನು? ಅಧಿಕೃತವಾಗಿ ನಾಮಕರಣವಾಗಿದೆಯೇ?, ಯಾರು ಮೇಯರ್ ಆಗಿದ್ದಾಗ ನಿರ್ಣಯ ಕೈಗೊಳ್ಳಲಾಗಿದೆ? ಎಂದು ಪ್ರಶ್ನಿಸಿದರು. ಬಿಜೆಪಿ ಸದಸ್ಯ ಎಂ.ಸಿ.ರಮೇಶ್, ಈಗಾಗಲೇ ಆ ರಸ್ತೆಗೆ ಉದಯರವಿ ಎಂಬ ಹೆಸರಿದೆ. ಕುವೆಂಪುನಗರ, ಸಿಐಟಿಬಿ(ಇಂದಿನ ಮುಡಾ) ನಿರ್ಮಿಸಿದ್ದು, ರಸ್ತೆಗಳಿಗೂ ನಾಮಕರಣ ಮಾಡಿದ್ದಾರೆ ಎಂದರು.

ಮಾಜಿ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿ, ರಸ್ತೆ ಹಾಗೂ ವೃತ್ತಕ್ಕೆ ನಾಮಕರಣ ಪ್ರಸ್ತಾವನೆ ಬಂದಾಗ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಈಗಾಗಲೇ ಆ ರಸ್ತೆಗೆ ಬೇರೆ ಹೆಸರಿದೆಯೇ? ಅಥವಾ ಪ್ರಸ್ತಾವನೆಯಲ್ಲಿರುವ ಹೆಸರನ್ನು ಬೇರೆ ಕಡೆ ಇಡಲಾಗಿದೆಯೇ? ಎಂದು ನಿಖರ ಮಾಹಿತಿ ಕಲೆಹಾಕಿ ವರ್ಕ್ಸ್ ಕಮಿಟಿಗೆ ಸಲ್ಲಿಸಬೇಕು. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಗೊಂದಲ ಸೃಷ್ಟಿಯಾಗುತ್ತಿದೆ ಎಂದರಲ್ಲದೆ, ಸೂರ್ಯ ಉದಯಿಸಿದ ಸಂದರ್ಭದಲ್ಲಿ ಅದಕ್ಕೆ ಅಭಿಮುಖವಾಗಿದೆ ಎಂದು ಆ ರಸ್ತೆಗೆ 'ಉದಯರವಿ' ಎಂದು ಹೆಸರಿಡಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಕಾಂಗ್ರೆಸ್‌ನ ಆರೀಫ್ ಹುಸೇನ್, ಉದಯರವಿ ಹೆಸರನ್ನು ಅಧಿಕೃತವಾಗಿ ನಾಮಕರಣ ಮಾಡಿಲ್ಲ. ನಮ್ಮ ಏರಿಯಾಗೆ ಸುಭಾಷ್‌ನಗರ ಎಂಬ ಹೆಸರಿದೆ. ಆದರೆ ಮನೆ ಮಂಜೂರು ಮಾಡಿರುವ ದಾಖಲೆಯಲ್ಲಿ ಬಡಾ ಮಕಾನ್ ಎಂದು ನಮೂದಿಸಿದ್ದಾರೆ. ಹಾಗಂತಾ ಕುವೆಂಪುನಗರ ಬಡಾವಣೆ ಹೆಸರಿನ ಬಗ್ಗೆ ಯಾರ ತಕರಾರೂ ಇಲ್ಲ. ಆದರೆ ಅಲ್ಲಿನ ರಸ್ತೆಗೆ ರಾಮ್‌ಜಿ ಸಕ್ಪಾಲ್ ಹೆಸರಿಡಬೇಕು ಎಂದು ವಾದಿಸಿದರು.

ಸದಸ್ಯರ ಒತ್ತಾಯದ ಮೇರೆಗೆ ಮತ್ತೆ ಸ್ಪಷ್ಟನೆ ನೀಡಿದ ಎಸ್‌ಇ ಸಿಂಧು, ಉದಯರವಿ ಎಂದು ಪಾಲಿಕೆಯಿಂದ ಅಧಿಕೃತವಾಗಿ ನಾಮಕರಣವಾಗಿಲ್ಲ. ಆದರೆ ಗೂಗಲ್ ಮ್ಯಾಪ್ ಹಾಗೂ ಭೌತಿಕವಾಗಿ ಅದೇ ಹೆಸರಿನಿಂದ ಗುರುತಿಸಲಾಗುತ್ತಿದೆ. ಈ ಬಗ್ಗೆ ಮುಡಾದಿಂದ ಮಾಹಿತಿ ಪಡೆಯುತ್ತೇವೆ ಎಂದು ತಿಳಿಸಿದರು. ಅಧಿಕೃತ ವಾಗಿ ನಾಮಕರಣವಾಗಿಲ್ಲ ಎಂದಷ್ಟೇ ಹೇಳಿ. ಗೂಗಲ್ ಮ್ಯಾಪ್‌ನಲ್ಲಿ ಇದೆ ಎಂದು ಹೇಳುವ ಅಗತ್ಯವಿಲ್ಲ ಎಂದು ಕಾಂಗ್ರೆಸ್‌ನ ಹಲವು ಸದಸ್ಯರು ಹೇಳಿದರು. ಹಾಗಾದರೆ ಆಸ್ತಿಗಳ ದಾಖಲೆಯಲ್ಲಿ ಉದಯರವಿ ರಸ್ತೆ ಎಂದಿದೆ. ಅಲ್ಲೆಲ್ಲಾ ತಿದ್ದುಪಡಿ ಮಾಡಲು ಸಾಧ್ಯವೇ? ಎಂದು ಬಿಜೆಪಿ ಸದಸ್ಯ ಬಿ.ವಿ.ಮಂಜುನಾಥ್ ಪ್ರಶ್ನಿಸಿದರು.

ಕಾಂಗ್ರೆಸ್ ಸದಸ್ಯರ ಪ್ರತಿಭಟನೆ: ಈ ಸಂಬಂಧ ಮತ್ತೊಮ್ಮೆ ಪರಿಶೀಲನೆ ಮಾಡಿಸಿ, ಸಮರ್ಪಕ ಮಾಹಿತಿ ಪಡೆದುಕೊಂಡು ಮುಂದಿನ ಸಭೆಯಲ್ಲಿ ಚರ್ಚಿಸಿ, ತೀರ್ಮಾನ ತೆಗೆದುಕೊಳ್ಳೋಣ ಎಂದು ಉಪ ಮೇಯರ್ ಡಾ.ಜಿ.ರೂಪಾ ತಿಳಿಸಿದರು. ಆದರೆ ವಿಷಯ ಮುಂದೂಡಲು ಬಿಜೆಪಿ ಸದಸ್ಯೆ ಅಶ್ವಿನಿ ಶರತ್ ಆಕ್ಷೇಪ ವ್ಯಕ್ತಪಡಿಸಿದರು. ಜೆಡಿಎಸ್ ಸದಸ್ಯ ರಮೇಶ್, ಧ್ವನಿಗೂಡಿಸಿದರು. ಯಾವ ಕಾರಣಕ್ಕೂ ವಿಷಯ ಮುಂದೂಡಬಾರದು ಎಂದು ಕಾಂಗ್ರೆಸ್‌ನ ಆರೀಫ್ ಹುಸೇನ್, ಸಿ.ಶ್ರೀಧರ್, ಸತ್ಯರಾಜ್, ಪಲ್ಲವಿ ಬೇಗಂ, ಗೋಪಿ, ಶೋಭಾ ಸುನಿಲ್ ಮತ್ತಿತರರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು.

ಮಹನೀಯರ ಹೆಸರಲ್ಲಿ ಜಟಾಪಟಿ: ಪ್ರತಿಭಟನೆಗಿಳಿದ ಕಾಂಗ್ರೆಸ್ ಸದಸ್ಯರು, ಡಾ.ಅಂಬೇಡ್ಕರ್ ವಿರೋಧಿ ಬಿಜೆಪಿ, ದಲಿತ ವಿರೋಧಿ ಬಿಜೆಪಿ ಎಂದು ಘೋಷಣೆ ಕೂಗಿದರು. ನಮ್ಮೆಲ್ಲರಿಗೂ ಡಾ.ಅಂಬೇಡ್ಕರ್ ಅವರ ಬಗ್ಗೆ ಗೌರವವಿದೆ. ಅಶೋಕಪುರಂನ ಒಂದು ರಸ್ತೆಗೆ ಡಾ.ಅಂಬೇಡ್ಕರ್ ಅವರ ತಾಯಿ ಭೀಮಾ ಬಾಯಿ ಹೆಸರಿಡಲು ಹಿಂದಿನ ಕೌನ್ಸಿಲ್‌ನಲ್ಲಿ ನಿರ್ಣಯಿಸಲಾಗಿದೆ. ಸುಖಾ ಸುಮ್ಮನೆ ಕಿಚ್ಚು ಹತ್ತಿಸುವ ಕೆಲಸ ಮಾಡಬೇಡಿ ಎಂದು ಬಿಜೆಪಿ ಸದಸ್ಯರು ಹೇಳಿದರು. ಆದರೂ ಕಾಂಗ್ರೆಸ್ ಸದಸ್ಯರ ಘೋಷಣೆ ಮುಂದುವರೆದಿದ್ದರಿಂದ ಬಿಜೆಪಿಯ ಬಿ.ವಿ.ಮಂಜುನಾಥ್, ರಾಷ್ಟ್ರಕವಿ ಕುವೆಂಪು ವಿರೋಧಿ ಕಾಂಗ್ರೆಸ್ ಎಂದು ಘೋಷಣೆ ಕೂಗಿದರು. ಚುನಾವಣೆಯಲ್ಲಿ ಅಂಬೇಡ್ಕರ್ ಅವರನ್ನು ಸೋಲಿಸಿದ್ದು ನೀವೇ ಎಂದು ಎಂ.ಯು. ಸುಬ್ಬಯ್ಯ ಕಾಂಗ್ರೆಸ್‌ನವರಿಗೆ ತಿರುಗೇಟು ನೀಡಿದರು.

ಸಭೆ ಮುಂದೂಡಿಕೆ: ಗದ್ದಲ ಹೆಚ್ಚಾಗಿದ್ದರಿಂದ ಉಪ ಮೇಯರ್ ಜಿ.ರೂಪಾ ಮೇಯರ್ ಪೀಠದಿಂದ ಮೇಲೆದ್ದರು. ಪರಿಣಾಮ ಸದನದ ಬಾವಿಯಲ್ಲಿದ್ದ ಕಾಂಗ್ರೆಸ್ ಸದಸ್ಯರು ತಮ್ಮ ಸ್ಥಾನಕ್ಕೆ ವಾಪಸ್ಸಾಗುತ್ತಿದ್ದರು. ಬಳಿಕ ಪರಿಸ್ಥಿತಿ ತಿಳಿಗೊಳಿಸುವ ಉದ್ದೇಶದಿಂದ ಸಂಜೆ 6.22ಕ್ಕೆ 10 ನಿಮಿಷ ಸಭೆಯನ್ನು ಮುಂದೂಡಿದರು. ಸಂಜೆ 6.50ಕ್ಕೆ ಸಭೆ ಪುನರಾರಂಭಿಸಿದ ಉಪ ಮೇಯರ್ ರೂಪಾ, ಮತ್ತೊಂದು ವಿಚಾರ, ಪ್ರತಿ ವಾರ್ಡ್‌ಗೆ 10 ಲಕ್ಷ ರೂ. ಉಪ ಮೇಯರ್ ಅನುದಾನ ಘೋಷಿಸಲಾಗಿದೆ ಎಂದರು. ಆಗ ಆರೀಫ್ ಹುಸೇನ್ ನಮಗೆ ಅನುದಾನ ಬೇಡ, ರಸ್ತೆ ನಾಮಕರಣ ವಿಚಾರ ನಿರ್ಣಯ ಮಾಡಿ ಎಂದರು. ಮತ್ತೆ ಗದ್ದಲವಾಗಬಹುದೆಂದು ಉಪ ಮೇಯರ್ ಜಿ.ರೂಪಾ, ಸಭೆಯನ್ನು ಮುಂದೂಡಿದರು. ಪಾಲಿಕೆ ಹೆಚ್ಚುವರಿ ಆಯುಕ್ತೆ ಎಂ.ಜೆ.ರೂಪಾ ಸಭೆಯಲ್ಲಿ ಹಾಜರಿದ್ದರು.

ಸಭೆಯಲ್ಲಿ 'ರೌಡಿಸಂ'! : ಜೆಡಿಎಸ್ ಸದಸ್ಯರ ಆಕ್ರೋಶ

ಮೈಸೂರು, ಆ.22- ಮಾಜಿ ಮೇಯರ್ ಅಯೂಬ್ ಖಾನ್ ಬಳಸಿದ ಪದವೊಂದಕ್ಕೆ ಜೆಡಿಎಸ್ ಸದಸ್ಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಪ್ರಸಂಗ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ನಡೆಯಿತು.

ಹಿಂದಿನ ಕೌನ್ಸಿಲ್ ಸಭೆಯಲ್ಲಿ ಚರ್ಚೆಗೆ ಅವಕಾಶ ನೀಡದೆ ವಿಷಯಗಳಿಗೆ ಒಪ್ಪಿಗೆ ನೀಡಿದ್ದರ ಬಗ್ಗೆ ಜೆಡಿಎಸ್ ಸದಸ್ಯರು ಪ್ರಶ್ನಿಸುತ್ತಿದ್ದ ಸಂದರ್ಭದಲ್ಲಿ ಮಾಜಿ ಮೇಯರ್ ಅಯೂಬ್ ಖಾನ್, ಮೇಯರ್ ಸ್ಥಾನವನ್ನು ಹೇಗೆ ಗೌರವಿಸಬೇಕು, ನಮ್ಮ ನಡವಳಿಕೆ ಹೇಗಿರಬೇಕು ಎಂದು ಸ್ವಲ್ಪ ಅರ್ಥೈಸಿಕೊಳ್ಳಬೇಕು. ಹಿಂದಿನ ಸಭೆಯಲ್ಲಿ ಜೆಡಿಎಸ್ ಸದಸ್ಯರು ಹೇಗೆ ವರ್ತಿಸಿದರೆಂದು ಮಾಧ್ಯಮಗಳಲ್ಲಿ ಪ್ರಕಟವಾಗಿದೆ ಎಂದರು.

ಇದಕ್ಕೆ ಜೆಡಿಎಸ್‌ನ ಎಸ್‌ಬಿಎಂ ಮಂಜು ಪ್ರತಿಕ್ರಿಯಿಸಿ, ಕಾಂಗ್ರೆಸ್ ಸದಸ್ಯರು ಸಭೆಯಲ್ಲಿ ನೇಮ್ ಪ್ಲೇಟ್ ತೆಗೆದುಕೊಂಡು ಟೇಬಲ್‌ಗೆ ಕುಟ್ಟಿ ಎಸೆದಿದ್ದರು. ಅಂದೂ ಕೂಡ ಪತ್ರಿಕೆಗಳಲ್ಲಿ ಕಾಂಗ್ರೆಸ್ ಸದಸ್ಯರ ದಬ್ಬಾಳಿಕೆ ಎಂದು ಬರೆದಿದ್ದರು. ಅವರವರ ಮೂಗಿನ ನೇರಕ್ಕೆ ಮಾತನಾಡಬಾರದು ಎಂದರು.

ಪ್ರಜಾಪ್ರಭುತ್ವದಲ್ಲಿ ಹಕ್ಕುಗಳಿಗಾಗಿ ಪ್ರತಿಭಟನೆ ನಡೆಸುವುದು ಸಹಜ. ಯಾವುದೇ ಚರ್ಚೆ ಮಾಡದೆ ಏಕಾಏಕಿ ಕೋಟ್ಯಾಂತರ ರೂ. ಯೋಜನೆಗಳಿಗೆ ಒಪ್ಪಿಗೆ ಕೊಟ್ಟಿದ್ದಾರೆ. ನಾವು ಹಕ್ಕಿಗಾಗಿ ಹೋರಾಟ ಮಾಡಿದ್ದೇವೆಯೇ ಹೊರತು ಮೇಯರ್ ಅವರನ್ನು ಅಪಮಾನ ಮಾಡಿದ್ದಲ್ಲ. ಇದೇನು ಮೊದಲಲ್ಲ. ಈ ಹಿಂದೆ ಎಲ್ಲರೂ ಸದನದ ಬಾವಿಗಿಳಿದು ಪ್ರತಿಭಟನೆ ಮಾಡಿದ್ದಾರೆ ಎಂದು ಕೆ.ವಿ.ಶ್ರೀಧರ್ ಹೇಳಿದರು.

ಬಾವಿಗಿಳಿದು ಪ್ರತಿಭಟಿಸಬಾರದು ಎಂದು ನಾನು ಹೇಳುತ್ತಿಲ್ಲ. ಆದರೆ 'ರೌಡಿಸಂ' ರೀತಿಯಲ್ಲಿ ನಡೆದುಕೊಳ್ಳಬಾರದಿತ್ತು ಎಂದು ಅಯೂಬ್ ಖಾನ್ ಹೇಳುತ್ತಿದ್ದಂತೆ ಜೆಡಿಎಸ್ ಸದಸ್ಯರು ಸಿಟ್ಟಿಗೆದ್ದರು. 'ರೌಡಿಸಂ' ಪದ ವಾಪಸ್ ಪಡೆಯುವಂತೆ ಒತ್ತಾಯಿಸಿದರು. ಪ್ರೇಮಾ ಶಂಕರೇಗೌಡ, ಅಶ್ವಿನಿ ಅನಂತು, ಎಸ್‌ಬಿಎಂ ಮಂಜು, ಕೆ.ವಿ.ಶ್ರೀಧರ್ ಆಕ್ರೋಶ ವ್ಯಕ್ತಪಡಿಸಿದರು. ಅಯೂಬ್ ಅವರು ಸಿಗ್ನಲ್ ಕೊಟ್ಟು ಗಲಾಟೆ ಮಾಡಿಸಿದ್ದನ್ನು ನಾವೂ ನೋಡಿದ್ದೇವೆ ಎಂದು ಕುಟುಕಿದರು. ಅಂತಿಮವಾಗಿ ಉಪ ಮೇಯರ್ ಆ ಪದವನ್ನು ಕಡತದಿಂದ ತೆಗೆಯಲು ಸೂಚಿಸಿ, ಪರಿಸ್ಥಿತಿ ತಿಳಿಗೊಳಿಸಿದರು.

ನಾಮ ನಿರ್ದೇಶಿತರ ಪ್ರಮಾಣ ವಚನ

ಮೈಸೂರು ಮಹಾನಗರ ಪಾಲಿಕೆಗೆ ಸರ್ಕಾರದಿಂದ ನಾಮ ನಿರ್ದೇಶಿತರಾಗಿರುವ ಆರ್.ಶ್ರೀನಿವಾಸಮೂರ್ತಿ, ಆರ್. ಹೆಚ್. ಕುಮಾರ್, ಎಂ.ಯು.ಬಾಲರಾಜು, ಕಲ್ಪನಾ ಹಾಗೂ ನಿರಾಲ್ ಸಿ.ಪಾಷಾ ಅವರು ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಚರ್ಚೆಯೇ ಇಲ್ಲದೆ ಮೂರು ವಿಷಯಗಳಿಗೆ ಅನುಮೋದನೆ; ಕೌನ್ಸಿಲ್ ಕಾರ್ಯದರ್ಶಿ ಪತ್ರ ವಿಚಾರ ಬಹಿರಂಗ

ಮೈಸೂರು, ಆ.22(ಎಸ್‌ಬಿಡಿ)- ಮೈಸೂರು ಮಹಾನಗರ ಪಾಲಿಕೆಯ ಹಿಂದಿನ ಕೌನ್ಸಿಲ್ ಸಭೆಯಲ್ಲಿ ಚರ್ಚೆಗೆ ಅವಕಾಶ ನೀಡದೆ ಮೂರು ವಿಷಯಗಳಿಗೆ ಮೇಯರ್ ಒಪ್ಪಿಗೆ ನೀಡಿದ್ದು ಸರಿಯಾದ ಕ್ರಮವಲ್ಲ ಎಂದು ಸರ್ಕಾರಕ್ಕೆ ಪತ್ರ ಬರೆದಿರುವುದಾಗಿ ಕೌನ್ಸಿಲ್ ಕಾರ್ಯದರ್ಶಿ ಆರ್.ರಂಗಸ್ವಾಮಿ ಮಂಗಳವಾರದ ಕೌನ್ಸಿಲ್ ಸಭೆಯಲ್ಲಿ ತಿಳಿಸಿದರು. ಇದು ಸಭೆಯಲ್ಲಿ ಸುದೀರ್ಘ ಚರ್ಚೆಗೆ ಗ್ರಾಸವಾಯಿತು.

ಸಭೆಯ ಆರಂಭದಲ್ಲೇ ಜೆಡಿಎಸ್ ಸದಸ್ಯೆ ಅಶ್ವಿನಿ ಅನಂತು, ಹಿಂದಿನ ಸಭೆಯಲ್ಲಿ ನಾವು ಸದನದ ಬಾವಿಗಿಳಿದು ಪ್ರತಿಭಟಿಸುವ ಸಂದರ್ಭದಲ್ಲಿ ಮೇಯರ್ ಮೂರು ವಿಷಯಗಳನ್ನು ಒಪ್ಪಲಾಯಿತು ಎಂದು ಘೋಷಿಸಿದರು, ಅವುಗಳ ಬಗ್ಗೆ ಚರ್ಚೆಯಾಗಬೇಕು ಎಂದು ಆಗ್ರಹಿಸಿದರು. ಇದಕ್ಕೆ ಎಸ್‌ಬಿಎಂ ಮಂಜು ಧ್ವನಿಗೂಡಿಸಿದರು. ಕಾಂಗ್ರೆಸ್‌ನ ಪುಷ್ಪಲತಾ ಜಗನ್ನಾಥ್, ಗದ್ದಲದ ನಡುವೆ ಒಪ್ಪಿಗೆ ಸೂಚಿಸಿದ್ದು, ಸಿಂಧುವೇ ಎಂದು ಸ್ಪಷ್ಟಪಡಿಸುವಂತೆ ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕೌನ್ಸಿಲ್ ಕಾರ್ಯದರ್ಶಿ ರಂಗಸ್ವಾಮಿ, ಆ.8ರ ಸಭೆಯಲ್ಲಿ ಸದಸ್ಯರು ಆಗ್ರಹಿಸುತ್ತಿದ್ದ ಸಂದರ್ಭದಲ್ಲಿ ಮೂರು ವಿಷಯಗಳನ್ನು ಚರ್ಚೆಗೆ ಅವಕಾಶ ನೀಡದೆ ಒಂದೇ ಸಮನೆ ಒಪ್ಪಿಗೆ ನೀಡಿದ್ದು ಅಧಿಸೂಚನೆ ಪ್ರಕಾರ ಸರಿಯಾದ ಕ್ರಮವಲ್ಲ. ಈ ಕಾರಣದಿಂದ ನಾನು ಆಯುಕ್ತರಿಗೆ ಪತ್ರ ಬರೆದಿದ್ದೆ. ಆಯುಕ್ತರು ಅದನ್ನು ಸರ್ಕಾರಕ್ಕೆ ಕಳುಹಿಸಿದ್ದಾರೆ ಎಂದು ಸ್ಪಷ್ಟಪಡಿಸಿದರು. ಈ ವೇಳೆ ಮಾಜಿ ಮೇಯರ್ ಅಯೂಬ್ ಖಾನ್, ಹಾಗಾದರೆ ಗ್ಯಾಸ್ ಪೈಪ್‌ಲೈನ್ ವಿಚಾರದಲ್ಲೂ ಹೀಗೆ ಆಗಿತ್ತು. ಆಗ ಏಕೆ ಪತ್ರ ಬರೆಯಲಿಲ್ಲ ಎಂದು ಪ್ರಶ್ನಿಸಿದರು. ಇದಕ್ಕೆ ರಂಗಸ್ವಾಮಿ ಪ್ರತಿಕ್ರಿಯಿಸಿ, ಆ ಸಭೆಯಲ್ಲಿ ನಾನಿರಲಿಲ್ಲ. ಆಗಿನ ಕೌನ್ಸಿಲ್ ಕಾರ್ಯದರ್ಶಿಗಳು ನಿರ್ಣಯವಾಗಿ 15 ದಿನಗಳೊಳಗೆ ಪತ್ರ ಬರೆಯಬೇಕಿತ್ತು ಅಂದರು. ಹಾಗಾದರೆ ಹಿಂದಿನ ಕೌನ್ಸಿಲ್ ಕಾರ್ಯದರ್ಶಿಗಳದ್ದು ತಪ್ಪು ಎಂದು ಒಪ್ಪಿಕೊಳ್ಳುವಿರಾ ಎಂದಾಗ ರಂಗಸ್ವಾಮಿ ಹೌದು ಎಂದರು. ಅಂದರೆ ಸಭೆಗೆ ತಪ್ಪು ಮಾಹಿತಿ ನೀಡಿದ ಕೌನ್ಸಿಲ್ ಕಾರ್ಯದರ್ಶಿ ಹಾಗೂ ಆಯುಕ್ತರ ವಿರುದ್ಧ ಶಿಸ್ತು ಕ್ರಮಕ್ಕೆ ಸರ್ಕಾರಕ್ಕೆ ಶಿಫಾರಸು ಮಾಡಬೇಕು. ಇಲ್ಲವಾದರೆ ಕಾಂಗ್ರೆಸ್ ಸದಸ್ಯರೆಲ್ಲಾ ಪ್ರತಿಭಟನೆ ಮಾಡುತ್ತೇವೆ ಎಂದು ಅಯೂಬ್‌ಖಾನ್ ಎಚ್ಚರಿಸಿದರು.

ಹಿಂದಿನ ಸಭೆಯ ನಿರ್ಣಯಗಳು ಈಗ ರೀಡ್ ಅಂಡ್ ರೆಕಾರ್ಡ್‌ಗೆ ಬಂದಿವೆ. ಅಷ್ಟರಲ್ಲಿ ಕೌನ್ಸಿಲ್ ಕಾರ್ಯದರ್ಶಿ ಸರ್ಕಾರಕ್ಕೆ ಪತ್ರ ಬರೆದಿರುವುದು ಅವೈಜ್ಞಾನಿಕ ಕ್ರಮ ಎಂದು ಬಿ.ವಿ.ಮಂಜುನಾಥ್ ಹೇಳಿದರು. ಕೌನ್ಸಿಲ್ ಕಾರ್ಯದರ್ಶಿ ಪತ್ರಕ್ಕೆ ಸರ್ಕಾರದಿಂದ ಉತ್ತರ ಬಂದಿಲ್ಲ, ಹಾಗಾಗಿ ಕೌನ್ಸಿಲ್ ನಿರ್ಣಯದ ಬಗ್ಗೆ ಚರ್ಚೆ ಮಾಡಿ, ಸರ್ಕಾರಕ್ಕೆ ಕಳುಹಿಸಬಹುದು ಎಂದು ಎಂ.ಯು.ಸುಬ್ಬಯ್ಯ ತಿಳಿಸಿದರು. ಗದ್ದಲದ ನಡುವೆ ನಿರ್ಣಯ ಕೈಗೊಂಡಿರುವ ಉದಾಹರಣೆಗಳು ಸಾಕಷ್ಟಿವೆ. ಖಾಯಂಗಾಗಿ ಕಾಯದೆ ಸರ್ಕಾರಕ್ಕೆ ಕಳುಹಿಸುವಂತೆ ನಿರ್ಣಯ ಮಾಡಲಾಗಿದೆ ಎಂದು ಹೇಳುತ್ತಾರೆ. ಮತ್ತೊಂದೆಡೆ ನಿರ್ಣಯ ಕೈಗೊಂಡಿದ್ದು ಸರಿಯಿಲ್ಲ ಎಂದು ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಈ ರೀತಿ ಗೊಂದಲ ಸೃಷ್ಟಿಸಿದ್ದೇಕೆ ಎಂದು ಆಡಳಿತ ಪಕ್ಷ(ಬಿಜೆಪಿ) ನಾಯಕ ಮಾ.ವಿ.ರಾಂಪ್ರಸಾದ್ ಪ್ರಶ್ನಿಸಿದರು. ಕಾಂಗ್ರೆಸ್‌ನ ಪುಷ್ಪಲತಾ ಜಗನ್ನಾಥ್ ಅವರು ಮೇಯರ್ ಆಗಿದ್ದಾಗ ಪ್ರಸ್ತಾಪವೇ ಇಲ್ಲದೆ 4.70 ಕೋಟಿ ರೂ. ಅನುದಾನವನ್ನು ವಾರ್ಡ್‌ಗಳಿಗೆ ಹಂಚಿಕೆ ಮಾಡಲಾಗಿತ್ತು. ಆಗಲೂ ಯಾವುದೇ ಪತ್ರ ಬರೆದಿರಲಿಲ್ಲ ಎಂದು ಎಂ.ಸಿ.ರಮೇಶ್ ಆರೋಪಿಸಿದರು.

ಪಾಲಿಕೆ ಕಟ್ಟಡಕ್ಕೆ ಶಾಶ್ವತ ದೀಪಾಲಂಕಾರಕ್ಕೆ ಒಪ್ಪಿಗೆ ನೀಡಬಹುದು ಎಂದು ಮಾ.ವಿ.ರಾಂಪ್ರಸಾದ್ ಮಾತು ಮುಂದುವರೆಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅಯೂಬ್ ಖಾನ್, ಕೌನ್ಸಿಲ್ ಕಾರ್ಯದರ್ಶಿಗಳು ಕಾನೂನಾತ್ಮಕ ಸ್ಪಷ್ಟನೆ ನೀಡಿದ್ದಾರೆ. ಬಹಳ ವರ್ಷಗಳ ನಂತರ ಕಾನೂನಿನ ಅಂಶದ ಬಗ್ಗೆ ಚರ್ಚೆಯಾಗುತ್ತಿದೆ. ಯಾವುದೇ ತೀರ್ಮಾನದಿಂದ ನಷ್ಟವಾಗುವುದಿದ್ದರೆ ಸರ್ಕಾರಕ್ಕೆ ಬರೆಯಬೇಕಾಗುತ್ತದೆ. ಹಿಂದೆ ನಮ್ಮನ್ನು ಕತ್ತಲಲ್ಲಿ ಇಟ್ಟು ನಿರ್ಣಯ ಮಾಡಿದ್ದರ ಬಗ್ಗೆ ಕ್ರಮವಾಗಬೇಕು ಎಂದು ಆಗ್ರಹಿಸಿದರು. ಸುದೀರ್ಘ ಚರ್ಚೆಯ ಬಳಿಕ ಅಂತಿಮವಾಗಿ ಕಳೆದ ಕೌನ್ಸಿಲ್ ನಡಾವಳಿಯನ್ನು ಖಾಯಂ ಮಾಡಲಾಗಿದೆ ಎಂದು ಉಪ ಮೇಯರ್ ರೂಪಾ ಘೋಷಣೆ ಮಾಡಿದರು.

ನೈಪುಣ್ಯ ಶಾಲೆ ಮಕ್ಕಳಿಗೆ ಅಂಚೆ ಸಂಸ್ಕೃತಿ ಮನವರಿಕೆ

ಮೈಸೂರು, ಆ. 22- ಮೈಸೂರಿನ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ವಿದ್ಯಾರ್ಥಿಗಳು ನಿನ್ನೆ ಮೈಸೂರಿನ ಪ್ರಧಾನ ಅಂಚೆ ಕಚೇರಿಗೆ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿ ಹಾಗೂ ಅಂಚೆ ತಲುಪುವ ವಿಧಾನವನ್ನು ಪತ್ರ ಸಂಸ್ಕೃತಿ ಕಾರ್ಯಕ್ರಮದಡಿ ಮನದಟ್ಟು ಮಾಡಿಕೊಂಡರು.



ಭಾರತೀಯ ಸಂಸ್ಕೃತಿ ಹಾಗೂ ಇತಿಹಾಸದಲ್ಲಿ ಅಂಚೆ ಕಚೇರಿಗಳು ಬಹಳ ಕಾಲದಿಂದಲೂ ಪತ್ರ ಸಂಸ್ಕೃತಿಯನ್ನು ಅನುಸರಿಸುತ್ತಾ ಬಂದಿವೆ. ಇದನ್ನು ಅಲಕ್ಷಿಸುವುದು ತರವಲ್ಲ ಎಂಬುದನ್ನು ಮಕ್ಕಳಿಗೆ ಮನವರಿಕೆ ಮಾಡಿಕೊಡಲಾಯಿತು. ಈ ನಿಟ್ಟಿನಲ್ಲಿ ನೈಪುಣ್ಯ ಶಾಲೆ ಮಕ್ಕಳಿಗೆ ಅವರ ಬಂಧುಗಳು ಹಾಗೂ ಆಪ್ತರಿಗೆ ಪತ್ರಗಳನ್ನು ಬರೆಸಿ ಅಂಚೆ ಪೆಟ್ಟಿಗೆಗೆ ಹಾಕಿಸುವ ಮೂಲಕ ಅರಿವು ಮೂಡಿಸಲಾಯಿತು.

ಅಂಚೆ ಕಚೇರಿ ಪೋಸ್ಟಲ್ ಟ್ರೈನಿಂಗ್ ಅಕಾಡೆಮಿಯ ಶಕುಮನಿ ಆರಾಧ್ಯ, ಫಿಲಾಟಿಲಿ ಬ್ಯೂರೋ ಉಸ್ತುವಾರಿ ಅಧಿಕಾರಿ ನಿವೇದಿತಾ ಅವರ ಮಾರ್ಗದರ್ಶನದಲ್ಲಿ ಕಚೇರಿಯ ಸಿಬ್ಬಂದಿಗಳು ಅಂಚೆ ವ್ಯವಸ್ಥೆ ನಡೆದು ಬಂದ ಹಾದಿಯನ್ನು ಸಾಕ್ಷೀಕರಿಸುವ ಅಂಚೆ ಮ್ಯೂಸಿಯಂಗೂ ವಿದ್ಯಾರ್ಥಿಗಳನ್ನು ಕರೆದೊಯ್ದು ಐತಿಹಾಸಿಕ ಮಹತ್ವದ ಮಾಹಿತಿಗಳನ್ನು ಮನವರಿಕೆ ಮಾಡಿಕೊಟ್ಟರು. ಇಲ್ಲಿ ಅಂಚೆ ಚೀಟಿಗಳ ಸಂಗ್ರಹ ಇತಿಹಾಸ ಮಕ್ಕಳನ್ನು ಬಹುವಾಗಿ ಆಕರ್ಷಿಸಿತು. ಮೈಸೂರಿನ ಅಂಚೆ ಸಂಸ್ಕೃತಿಗೆ ಪಾರಂಪರಿಕ ಹಿನ್ನೆಲೆ ಇದ್ದು, ಮನುಷ್ಯ-ಮನುಷ್ಯನ ಸಂಬಂಧಗಳನ್ನು ಗಟ್ಟಿಗೊಳಿಸುವ ಸತ್ವವನ್ನು ಒಳಗೊಂಡಿದೆ ಎಂದು ಮಕ್ಕಳಿಗೆ ಮನದಟ್ಟು ಮಾಡಲಾಯಿತು.

ಇದೇ ವೇಳೆ ಅಂಚೆ ಕಚೇರಿಯಲ್ಲಿ ಸಾರ್ವಜನಿಕರಿಗೆ ಲಭ್ಯವಿರುವಂತಹ ಸೇವೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಪರಿಚಯಿಸಲಾಯಿತು. ಪಿಎಲ್‌ಐ ಅಧಿಕಾರಿ ವೈ.ಆರ್. ಮುರಳೀಧರ್, ಮಾರ್ಕೆಟಿಂಗ್ ಎಕ್ಸಿಕ್ಯೂಟಿವ್ ಪ್ರೊ.ಸುರೇಶ್, ನೈಪುಣ್ಯ ಶಾಲೆಯ ಶಿಕ್ಷಕಿಯರಾದ ಶಾಲಿನಿ ಮೇಷೋ, ಕೆ.ಎಸ್. ದೇಚಮ್ಮ ಎ.ಪಿ. ವರ್ಷ, ಎಸ್. ಮಂಜುಳ ಇತರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಪೂರ್ಣಯ್ಯ ನಾಲೆ ಮೇಲೆ ಅನಧಿಕೃತ ಖಾತೆಗಳಾಗಿದ್ದರೆ ಎಫ್‌ಐಆರ್

ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಎಚ್ಚರಿಕೆ





ಮೈಸೂರು,ಆ.22(ಪಿಎಂ)- ದಿವಾನ್ ಪೂರ್ಣಯ್ಯ ನಾಲೆಯ ಮೇಲೆ ಅನಧಿಕೃತವಾಗಿ ಖಾತೆಗಳಾಗಿದ್ದರೆ ಎಫ್‌ಐಆರ್ ದಾಖಲಿಸುತ್ತೇನೆ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಎಚ್ಚರಿಸಿದರು.

ಬೋಗಾದಿ ಎರಡನೇ ಹಂತದಲ್ಲಿ ಮಂಗಳವಾರ ಅಕ್ರಮ ವಹಿವಾಟು ನಡೆಸುತ್ತಿರುವ ಆರೋಪ ಸಂಬಂಧ ಸ್ಥಳ ಪರಿಶೀಲಿಸಿದ ಸಂದರ್ಭದಲ್ಲಿ ಸಮೀಪದಲ್ಲಿ ಹಾದು ಹೋಗಿರುವ ಪೂರ್ಣಯ್ಯ ನಾಲೆಯನ್ನೂ ಅವರು ಗಮನಿಸಿದರು. ಇದೇ ವೇಳೆ ಪೂರ್ಣಯ್ಯ ನಾಲೆ ಸಂರಕ್ಷಣೆಗೆ ಕ್ರಮ ವಹಿಸುವಂತೆ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು. ನಾಲೆ ಮೇಲೆ ಅನಧಿಕೃತ ಖಾತೆಗಳಾಗಿದ್ದರೆ ಸಂಬಂಧಿಸಿದವರ ವಿರುದ್ಧ ಎಫ್‌ಐಆರ್ ದಾಖಲಿಸುತ್ತೇನೆಂದೂ ಎಚ್ಚರಿಕೆ ನೀಡಿದರು.

ಹಲವೆಡೆ ನಾಲೆ ಜಾಗ ಒತ್ತುವರಿ ಮಾಡಲಾಗಿದೆ ಎಂದು ಅಧಿಕಾರಿಯೊಬ್ಬರು ಅವರ ಗಮನಕ್ಕೆ ತಂದಾಗ, ನಾಲೆ ಜಾಗದಲ್ಲಿ ಖಾಸಗಿ ಕಟ್ಟಡಗಳು ಹೇಗೆ ಬರುತ್ತವೆ. ಗುರುತಿಸಿ, ಕಟ್ಟಡ ಮಾಲೀಕರಿಗೆ ನೋಟಿಸ್ ಜಾರಿಗೊಳಿಸಬೇಕು. ಉಳಿದೆಡೆ ಯಾವುದೇ ಕಟ್ಟಡ ತಲೆ ಎತ್ತಬಾರದು. ಉಳಿದಿರುವ ನಾಲೆ ಜಾಗದ ಸಂರಕ್ಷಣೆಗೆ ಕ್ರಮ ವಹಿಸಬೇಕು ಎಂದು ಸೂಚಿಸಿದರು. ನಾಲೆಗೆ ಸಂಬಂಧಿಸಿದಂತೆ ಕೇವಲ ಒಂದೆರಡು ಜಾಗಗಳನ್ನಷ್ಟೇ ಪರಿಶೀಲಿಸದೇ ಪೂರ್ಣ ಪ್ರಮಾಣದಲ್ಲಿ ಪರಿಶೀಲನೆ ನಡೆಸಬೇಕು. ಯಾವ್ಯಾವ ವರ್ಷದಲ್ಲಿ ಏನೇನೂ ಮಾಡಲಾಗಿದೆ ಎಂಬ ವಿವರ ನೀಡಬೇಕು. ನಮ್ಮ ಮಹಾರಾಜರು ಆ ಕಾಲದಲ್ಲಿ ಕುಕ್ಕರಹಳ್ಳಿ ಕೆರೆ ನಿರ್ಮಿಸಿದರು. ನಾವೆಲ್ಲಾ ಅದನ್ನು ಮುಚ್ಚುತ್ತಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ಸಚಿನ್ ಚುನಾವಣಾ ಆಯೋಗದ ರಾಷ್ಟ್ರೀಯ ಐಕಾನ್

ನವದೆಹಲಿ: ಚುನಾವಣಾ ಪ್ರಕ್ರಿಯೆಯಲ್ಲಿ ಹೆಚ್ಚಿನ ಮತದಾರರ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಕೇಂದ್ರ ಚುನಾವಣಾ ಆಯೋಗ(ಇಸಿ) ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ ಅವರನ್ನು "ರಾಷ್ಟ್ರೀಯ ಐಕಾನ್" ಎಂದು ಬುಧವಾರ ನೇಮಕ ಮಾಡಿದೆ.



ಇಂದು ದೆಹಲಿಯಲ್ಲಿ ಈ ಸಂಬಂಧ ತೆಂಡೂಲ್ಕರ್ ಮತ್ತು ಚುನಾವಣಾ ಸಮಿತಿ ನಡುವೆ ಒಡಂಬಡಿಕೆ ಪತ್ರಕ್ಕೆ ಸಹಿ ಹಾಕಲಾಗಿದೆ. ಮೂರು ವರ್ಷಗಳ ಒಪ್ಪಂದ ಇದಾಗಿದ್ದು, ತೆಂಡೂಲ್ಕರ್ ಮತದಾರರಲ್ಲಿ ಜಾಗೃತಿ ಮೂಡಿಸಲಿದ್ದಾರೆ.

ಈ ಸಹಯೋಗವು ಮುಂಬರುವ ಚುನಾವಣೆಗಳಲ್ಲಿ ವಿಶೇಷವಾಗಿ 2024 ರ ಸಾರ್ವತ್ರಿಕ ಚುನಾವಣೆಗಳಲ್ಲಿ (ಲೋಕಸಭೆಗೆ) ಮತದಾರರ ಭಾಗವಹಿಸುವಿಕೆಯನ್ನು ಉತ್ತೇಜಿಸಲಿದೆ" ಎಂದು ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ಚುನಾವಣಾ ಆಯೋಗ ಕಳೆದ ವರ್ಷ ನಟ ಪಂಕಜ್ ತ್ರಿಪಾಠಿ ಅವರನ್ನು ರಾಷ್ಟ್ರೀಯ ಐಕಾನ್ ಎಂದು ನೇಮಕ ಮಾಡಿತ್ತು. ಈ ಹಿಂದೆ, 2019ರ ಲೋಕಸಭಾ ಚುನಾವಣೆಯ ಸಮಯದಲ್ಲಿ, ಎಂಎಸ್ ಧೋನಿ, ಅಮೀರ್ ಖಾನ್ ಮತ್ತು ಮೇರಿ ಕೋಮ್ ಅವರಂತಹ ದಿಗ್ಗಜರು ಚುನಾವಣಾ ಆಯೋಗದ ರಾಷ್ಟ್ರೀಯ ಐಕಾನ್‌ಗಳಾಗಿದ್ದರು.

ಕೇರಳದಲ್ಲಿ ಆಫ್ರಿಕನ್ ಫೀವರ್; ಕೋಟೆ ಗಡಿಯಲ್ಲಿ ಕಟ್ಟೆಚ್ಚರ

●ಕೇರಳದಿಂದ ಪ್ರಾಣಿ ಸಾಗಾಣಿಕೆ ನಿಷೇಧ, ಕೋಟೆಯಲ್ಲಿ ಹಂದಿ ಮಾಂಸ ಮಾರಾಟ ನಿಷೇಧ ●ಪ್ರಾಣಿಗಳಿಂದ ಪ್ರಾಣಿಗಳಿಗೆ ಜ್ವರ ಹರಡುವ ಬಗ್ಗೆ ಎಚ್ಚರದಿಂದಿರಲು ಸೂಚನೆ

ಹೆಚ್.ಡಿ.ಕೋಟೆ, ಆ.22– ಪ್ರಾಣಿಗಳಿಂದ ಪ್ರಾಣಿಗಳಿಗೆ ಹರಡುವ ಆಫ್ರಿಕನ್ ಸ್ವೈನ್ ಫೀವರ್ ಕೇರಳದಲ್ಲಿ ಕಾಣಿಸಿಕೊಂಡಿದ್ದು, ಗಡಿಭಾಗವಾದ ಹೆಚ್.ಡಿ.ಕೋಟೆಯ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ಕಟ್ಟುನಿಟ್ಟಿನ ಎಚ್ಚರ ವಹಿಸಲಾಗಿದೆ.



ಹೆಚ್.ಡಿ.ಕೋಟೆ ತಹಸೀಲ್ದಾರ್ ಸಣ್ಣರಾಮಪ್ಪ, ತಾಲೂಕು ಆರೋಗ್ಯಾಧಿಕಾರಿ ಡಾ.ಟಿ. ರವಿಕುಮಾರ್, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಪ್ರಸನ್ನ ಮತ್ತು ತಂಡದವರು ಕೇರಳ ಮತ್ತು ಕರ್ನಾಟಕ ಗಡಿಭಾಗವಾದ ಬಾವಲಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕೇರಳದಲ್ಲಿ ಆಫ್ರಿಕನ್ ಸ್ವೈನ್ ಫೀವರ್ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಕೇರಳ ಗಡಿಭಾಗವಾದ ಬಾವಲಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಡಿಬಿ ಕುಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹಂದಿ ಮಾಂಸ ಮಾರಾಟ ಹಾಗೂ ಹಂದಿ ಸಾಗಾಣಿಕೆ ನಿಷೇಧಿಸಲಾಗಿದೆ ಎಂದು ತಹಸೀಲ್ದಾರ್ ಸಣ್ಣರಾಮಪ್ಪ ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಿಳಿಸಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಎರಡು ತಂಡವನ್ನು ರಚನೆ ಮಾಡಿ, ಒಂದು ತಂಡ ಬೆಳಗ್ಗೆ 6ರಿಂದ ಮಧ್ಯಾಹ್ನ 2 ಗಂಟೆವರೆಗೆ, ಇನ್ನೊಂದು ತಂಡ ಮಧ್ಯಾಹ್ನ 2 ಗಂಟೆಯಿಂದ ಸಂಜೆ 6 ಗಂಟೆ ತನಕ ಕರ್ತವ್ಯ ನಿರ್ವಹಿಸಬೇಕು ಎಂದು ಸೂಚಿಸಲಾಗಿದೆ ಎಂದು ಅವರು ಹೇಳಿದರು.

ಕೇರಳದಿಂದ ಪ್ರಾಣಿಗಳ ಸಾಗಾಣಿಕೆಯನ್ನೂ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಹಂದಿ ಮಾಂಸ ಮಾರಾಟವನ್ನು ಕೂಡ ಸಂಪೂರ್ಣವಾಗಿ ನಿಷೇಧಿಸಿ, ಇದರ ಬಗ್ಗೆ ತಾಲೂಕು ಆಡಳಿತ ಕಟ್ಟುನಿಟ್ಟಿನ ಕ್ರಮವಹಿಸಲು ಸೂಚಿಸಲಾಗಿದೆ. ಇದೇ ಸಂದರ್ಭದಲ್ಲಿ ಹಂದಿ ಮಾಂಸ ಮಾರಾಟ ಮಾಡುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಹಂದಿಮಾಂಸ ಮಾರಾಟ ಮಾಡಬಾರದು ಎಂದು ಮಾರಾಟಗಾರರಿಗೆ ಸೂಚನೆ ನೀಡಲಾಗಿದ್ದು, ಪಂಚಾಯಿತಿಯ ಸಿಬ್ಬಂದಿಗಳಿಗೆ ಈ ವಿಚಾರ ಕುರಿತು ಜಾಗೃತಿ ವಹಿಸಬೇಕು ಎಂದು ಆದೇಶ ಹೊರಡಿಸಲಾಗಿದೆ ಎಂದು ಅವರು ವಿವರಿಸಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಪ್ರಸನ್ನ ಮಾತನಾಡಿ, ಆಫ್ರಿಕನ್ ಸ್ವೈನ್ ಫೀವರ್ ಆಗಸ್ಟ್ ಮೊದಲ ವಾರ ಕೇರಳದಲ್ಲಿ ಕಾಣಿಸಿಕೊಂಡಿದೆ. ಇದರ ಮುಖ್ಯ ಲಕ್ಷಣಗಳು ಹಂದಿಗಳಲ್ಲಿ ಜ್ವರ ಕಾಣಿಸಿಕೊಳ್ಳುವುದು. ನಂತರ ಮುಖ ಮತ್ತು ದೇಹದಲ್ಲಿ ಕೆಂಪು ಬಣ್ಣದ ಗುಳ್ಳೆಗಳು, ಬಾಯಿಯಲ್ಲಿ ಜೊಲ್ಲು ಸುರಿಯುವುದು, ವಾಂತಿ, ಭೇದಿ ಆರಂಭವಾಗಲಿದೆ ಈ ರೋಗವು ಪ್ರಾಣಿಗಳಿಂದ ಪ್ರಾಣಿಗಳಿಗೆ ಹರಡುತ್ತದೆ. ಯಾವುದೇ ಕಾರಣಕ್ಕೂ ಮನುಷ್ಯರಿಗೆ ಹರಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಆಫ್ರಿಕನ್ ಸ್ವೈನ್ ಫೀವರ್, ಮಾರಣಾಂತಿಕ ಕಾಯಿಲೆಯಾಗಿದ್ದು, ಇದಕ್ಕೆ ಯಾವುದೇ ಚಿಕಿತ್ಸೆ ಇಲ್ಲ ಹಾಗೂ ಕೇರಳದಲ್ಲಿ ಜಾನುವಾರುಗಳಿಗೆ ಕಾಲು ಬಾಯಿ ಜ್ವರ ಕಾಣಿಸಿಕೊಂಡಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಡಿಬಿ ಕುಪ್ಪೆ ಮತ್ತು ಬಾವಲಿ ಸುತ್ತಮುತ್ತಲಿನ ಗ್ರಾಮದಲ್ಲಿ ಜಾನುವಾರುಗಳಿಗೆ ಲಸಿಕೆಯನ್ನು ಹಾಕಲಾಗುತ್ತಿದೆ ಎಂದು ತಿಳಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಮಾತನಾಡಿ, ಜನರಿಗೆ ಯಾವುದೇ ಜ್ವರ ಕಾಣಿಸಿಕೊಂಡರು ತಕ್ಷಣ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೋಗಿ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಹಾಗೂ ಆಶಾ ಕಾರ್ಯಕರ್ತೆಯರು ಮನೆ ಮನೆ ಸಮೀಕ್ಷೆ ಮಾಡಿ ಜನರಿಗೆ ಸಾಂಕ್ರಾಮಿಕ ರೋಗದ ಬಗ್ಗೆ ಆರೋಗ್ಯ ಶಿಕ್ಷಣ ನೀಡಿ ಮಾಹಿತಿಯನ್ನು ತಾಲೂಕು ಆರೋಗ್ಯಾಧಿಕಾರಿಗಳಿಗೆ ವರದಿ ನೀಡಬೇಕು ಎಂದು ಸೂಚಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಡಿ.ಬಿ.ಕುಪ್ಪೆ ಗ್ರಾಮ ಪಂಚಾಯತಿಯ ಸದಸ್ಯರುಗಳು, ನೌಕರರು, ಅರಣ್ಯಾಧಿಕಾರಿ ರಾಘವೇಂದ್ರ, ಆರೋಗ್ಯ ಇಲಾಖೆ ರವಿರಾಜ್, ರವಿ, ಮತ್ತು ಪೊಲೀಸ್ ಇಲಾಖೆ ಸಿಬ್ಬಂದಿ, ಅರಣ್ಯ ಇಲಾಖೆ ಸಿಬ್ಬಂದಿ ವರ್ಗದವರು ಇನ್ನಿತರರು ಹಾಜರಿದ್ದರು.

ಬಾಡಿಗೆಗೆ ಟ್ರಾಕ್ಟರ್ ಪಡೆದು ಗಿರವಿ ಇಟ್ಟು ಪರಾರಿಯಾಗುತ್ತಿದ್ದ ವಂಚಕನ ಬಂಧನ



ಹುಣಸೂರು, ಆ.22– ರೈತರಿಂದ ಟ್ರಾಕ್ಟರ್‌ಗಳನ್ನು ಬಾಡಿಗೆಗೆ ಪಡೆದು ಖಾಸಗಿ ವ್ಯಕ್ತಿಗಳ ಬಳಿ ಗಿರವಿ ಇಟ್ಟು ಪಲಾಯನ ಮಾಡುತ್ತಿದ್ದ ವಂಚಕನನ್ನು ಹುಣಸೂರು ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ.

ತಾಲೂಕಿನ ಹನಗೂಡು ಹೋಬಳಿ ಗಾಣನಕಟ್ಟೆ ಕಾಲೋನಿಯ ಲಕ್ಕಯ್ಯನವರ ಮಗ ನಂದೀಶ್ ಬಂಧಿತ ಆರೋಪಿ. ಈತ ನಗರದ ಎನ್.ಎಸ್.ತಿಟ್ಟು ಬಡಾವಣೆಯ ರಾಮು, ತಾಲೂಕಿನ ಪೆಂಜಹಳ್ಳಿ ಗ್ರಾಮದ ರತ್ನಮ್ಮ, ಕೊತ್ತೆಗಾಲದ ರವಿ ಸೇರಿದಂತೆ ಹಲವು ರೈತರಿಂದ ಟ್ರಾಕ್ಟರ್‌ಗಳನ್ನು ಬಾಡಿಗೆಗೆ ಪಡೆದು ಅದನ್ನು ಬೇರೆ ಊರಿನ ಮತ್ತೊಬ್ಬರ ಬಳಿ ಹೆಚ್ಚಿನ ಹಣಕ್ಕೆ ಗಿರವಿ ಇಟ್ಟು ಪರಾರಿಯಾಗುತ್ತಿದ್ದ ಎನ್ನಲಾಗಿದೆ.

ಎನ್.ಎಸ್.ತಿಟ್ಟು ಬಡಾವಣೆಯ ರಾಮು ಷೋ ರೂಂನಿಂದ ಕಂತಿನ ರೂಪದಲ್ಲಿ ಟ್ರಾಕ್ಟರ್ ಅನ್ನು ಖರೀದಿಸಿದ್ದರು. ಮಾಸಿಕ ಕಂತು ಕಟ್ಟಲು ಸಾಧ್ಯವಾಗದೆ ಪರದಾಡುತ್ತಿದ್ದರು. ಈ ವೇಳೆ ಬಂದ ನಂದೀಶ್ ತನಗೆ ಟ್ರಾಕ್ಟರ್ ಬಾಡಿಗೆ ನೀಡುವಂತೆ, ಕಂತಿನ ಹಣವನ್ನು ತಾನೇ ಕಟ್ಟಿಕೊಂಡು ಹೋಗುವುದಾಗಿ ತಿಳಿಸಿದ. ಇದನ್ನು ನಂಬಿ ಟ್ರಾಕ್ಟರ್ ಅನ್ನು ನಂದೀಶ್‌ಗೆ ಕೊಟ್ಟಿದ್ದರು. ಆದರೆ ಮಾಸಿಕ ಕಂತು ಕಟ್ಟಿಲ್ಲ ಎಂದು ಫೈನಾನ್ಸ್ ಕಂಪನಿಯವರು ಮನೆ ಹತ್ತಿರ ಬಂದು ಕೇಳಿದಾಗ ತಾನು ಮೋಸ ಹೋಗಿರುವುದು ತಿಳಿಯಿತು. ನಂದೀಶ್‌ಗಾಗಿ ಹುಡುಕಾಡಿದರೂ ಸಿಗದಿದ್ದಾಗ ಪೊಲೀಸ್ ಠಾಣೆಗೆ ದೂರು ನೀಡಿದರು.

ಪೊಲೀಸರು ನಂದೀಶ್ ಪತ್ತೆಗಾಗಿ ಜಾಲ ಹಿಡಿದು ಹೋದಾಗ ಇಂತಹ ಹಲವಾರು ಜನ ಮೋಸ ಹೋಗಿರುವುದು ಮತ್ತು ಈ ಜಾಲದಲ್ಲಿ ಸಿಕ್ಕಿಹಾಕಿಕೊಂಡಿರುವುದು ಬೆಳಕಿಗೆ ಬಂದಿತು. ನಂದೀಶ್‌ನನ್ನು ಪತ್ತೆ ಮಾಡಿ ಠಾಣೆಗೆ ಕರೆತಂದು ವಿಚಾರಣೆ ಮಾಡಿದಾಗ ಇಂತಹ ಹಲವು ಪ್ರಕರಣಗಳು ಬೆಳಕಿಗೆ ಬಂದು ಪೊಲೀಸರು ಟ್ರಾಕ್ಟರ್‌ಗಳನ್ನು ತಂದು ಠಾಣೆಯ ಮುಂದೆ ನಿಲ್ಲಿಸಿದ್ದಾರೆ.

ನಾಲ್ಕು ಟ್ರಾಕ್ಟರ್‌ಗಳಿಗೆ ದಾಖಲಾತಿ ಇದ್ದ ಕಾರಣ ನಾಲ್ಕು ಜನರ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಉಳಿದ ಟ್ರಾಕ್ಟರ್‌ಗಳು ಇನ್ನು ನೋಂದಾವಣಿ ಸಹ ಆಗದಿರುವುದರಿಂದ ಯಾವುದೇ ದಾಖಲಾತಿಗಳು ಸಹ ಇಲ್ಲದೆ ಅನಾಥವಾಗಿ ಠಾಣೆ ಮುಂದೆ ನಿಂತಿವೆ. ಆರೋಪಿ ನಂದೀಶ್‌ನನ್ನು ಬಂಧಿಸಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ಕಂಡಕಂಡಲ್ಲಿ ಪಾರ್ಕಿಂಗ್: ವಾಹನಗಳಿಗೆ ಲಾಕ್

ನಂಜನಗೂಡು: ನಗರದಲ್ಲಿ ಕಂಡ ಕಂಡ ರಸ್ತೆಗಳಲ್ಲಿ ತಮಗೆ ಇಷ್ಟ ಬಂದ ರೀತಿ ವಾಹನಗಳನ್ನು ನಿಲ್ಲಿಸಿ ದಬ್ಬಾಳಿಕೆ ಮಾಡುತ್ತಿದ್ದ ಸ್ಕೂಟರ್ ಮತ್ತು ಕಾರು ಮಾಲೀಕರಿಗೆ ಕಾರಿನ ಚಕ್ರಕ್ಕೆ ಲಾಕ್ ಮಾಡಿ ಟ್ರಾಫಿಕ್ ಪಿಎಸ್‌ಐ ಜಯರಾಮ್ ಚುರುಕು ಮುಟ್ಟಿಸಿದ್ದಾರೆ.

ಆರ್‌ಪಿ ರಸ್ತೆ, ಎಂಜಿಎಸ್ ರಸ್ತೆ, ಚಿಂತಾಮಣಿ ಗಣಪತಿ ಗುಡಿ ಸರ್ಕಲ್ ಮತ್ತು ಹುಲ್ಲಹಳ್ಳಿ ಸರ್ಕಲ್ ಹಾಗೂ ಕೆಎಸ್‌ಆರ್‌ಟಿಸಿ ಬಸ್ ಸ್ಟ್ಯಾಂಡ್‌ಗಳಲ್ಲಿ ಸ್ಕೂಟರ್‌ಗಳು ಮತ್ತು ಕಾರುಗಳ ಮಾಲೀಕರು ತಮಗೆ ಇಷ್ಟ ಬಂದ ಸ್ಥಳದಲ್ಲಿ ವಾಹನಗಳನ್ನು ನಿಲ್ಲಿಸಿ, ಗಂಟೆಗಟ್ಟಲೆ ಹೋಗುತ್ತಿದ್ದರು. ಇಲ್ಲಿ ಹೇಳುವವರು ಮತ್ತು ಕೇಳುವರು ಇಲ್ಲದೆ ಕಾನೂನು ಉಲ್ಲಂಘಿಸಿ ಬಹಳ ತೊಂದರೆ ನೀಡುತ್ತಿದ್ದರು.

ಇತ್ತೀಚಿನ ತಿಂಗಳುಗಳಲ್ಲಿ ಬಂದಂತಹ ದಕ್ಷ ಅಧಿಕಾರಿ ಪಿಎಸ್‌ಐ ಜಯರಾಮ್ ಸಿಂಹಸ್ವಪ್ನವಾಗಿ ಕಾರ್ಯನಿರ್ವಹಿಸುತ್ತಿದ್ದು, ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಒಂದು ಮಟ್ಟಕ್ಕೆ ತಂದಿದ್ದಾರೆ. ಇದರ ಜೊತೆಗೆ ರಸ್ತೆಗಳಲ್ಲಿ ತಳ್ಳುವ ಗಾಡಿಗಳು ಮಿತಿಮೀರಿ ರಸ್ತೆಗಳಲ್ಲಿ ನಿಲ್ಲಿಸಿಕೊಂಡು ಬಹಳ ತೊಂದರೆ ಉಂಟಾಗಿತ್ತು. ಇದನ್ನು ಕೂಡ ತಮ್ಮ ವಾಹನದಲ್ಲೇ ಓಡಾಡಿಕೊಂಡು ಅನೌನ್ಸ್ ಮಾಡುವ ಮೂಲಕ ಹತೋಟಿಗೆ ತಂದಿದ್ದಾರೆ.




ಜಯಪುರ ಪೊಲೀಸ್ ಠಾಣೆಗೆ ನೂತನ ಪಿಎಸ್‌ಐ ಆಗಿ ಅಧಿಕಾರ ವಹಿಸಿಕೊಂಡ ಸುರೇಶ್ ಬೋಪಣ್ಣ ಅವರನ್ನು ಸಮಾಜ ಸೇವಕ ಎಸ್.ಶ್ರೀಕಾಂತ್ ಹೂಗುಚ್ಛ ನೀಡಿ ಸ್ವಾಗತಿಸಿದರು. ಈ ವೇಳೆ ಮುಖಂಡರಾದ ಸಂತೋಷ್ ಕುಮಾರ್, ರಂಗಸ್ವಾಮಿ, ಸಿದ್ದಪ್ಪಾಜಿ, ಚಂದ್ರು, ಮಹದೇವಯ್ಯ, ರೇಣುಕಾ ಹಾಜರಿದ್ದರು.

ಹೆಚ್.ಡಿ.ಕೋಟೆಯಲ್ಲಿ ಮುಂದುವರೆದ ಕಳ್ಳತನ

ನ್ಯಾಯಾಧೀಶರ ಮುಂದಿನ ಮನೆಯ ಬೀಗ ಮುರಿದು ಕಳವಿಗೆ ಯತ್ನ

ಹೆಚ್.ಡಿ.ಕೋಟೆ, ಆ.22– ಪಟ್ಟಣದಲ್ಲಿ ನಿರಂತರವಾಗಿ ಕಳ್ಳತನ ಪ್ರಕರಣಗಳು ಸಂಭವಿಸುತ್ತಿದ್ದು, ಸಾರ್ವಜನಿಕರು ಆತಂಕಕ್ಕೊಳಗಾಗಿದ್ದಾರೆ. ಅದರಲ್ಲೂ ಪಟ್ಟಣದ ಹೌಸಿಂಗ್ ಬೋರ್ಡ್‌ನಲ್ಲಿರುವ ನ್ಯಾಯಾಧೀಶರ ಮನೆ ಮುಂದಿರುವ ಮನೆಯ ಬೀಗ ಮುರಿದು ಕಳ್ಳತನಕ್ಕೆ ಯತ್ನಿಸಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದ್ದು, ಮತ್ತಷ್ಟು ಭಯವನ್ನುಂಟು ಮಾಡಿದೆ.



ಹೌಸಿಂಗ್ ಬೋರ್ಡ್ ನಿವಾಸಿ ಜಗನ್ನಾಥ್ ಅವರು ಕಳೆದ ಒಂದು ವಾರದ ಹಿಂದೆ ಮನೆಗೆ ಬೀಗ ಹಾಕಿ ತಮಿಳುನಾಡಿಗೆ ತೆರಳಿದ್ದರು ಎನ್ನಲಾಗಿದ್ದು, ಪಕ್ಕದ ಮನೆಯ ಮಕ್ಕಳು ಮಂಗಳವಾರ ಬೆಳಗ್ಗೆ ಆಟವಾಡುತ್ತಿದ್ದ ಸಂದರ್ಭದಲ್ಲಿ ಮನೆಯ ಹಿಂಬಾಗಿಲು ತೆರೆದಿರುವುದನ್ನು ಕಂಡು ಗಾಬರಿಗೊಂಡು ತಕ್ಷಣ ತಮ್ಮ ಪೋಷಕರುಗಳಿಗೆ ತಿಳಿಸಿದ್ದಾರೆ. ಅಕ್ಕಪಕ್ಕದ ಮನೆಯವರು ಹೋಗಿ ನೋಡಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಪೊಲೀಸರು ಹಾಗೂ ಶ್ವಾನದಳದ ತಂಡ ಆಗಮಿಸಿ ಪರಿಶೀಲನೆ ನಡೆಸಿತು. ಕಳ್ಳರು ಎರಡು ಕಬ್ಬಿಣದ ಬೀರುವನ್ನು ಮುರಿದು ಹಣ ಒಡವೆಗಳು ಇದೆಯಾ ಎಂದು ಹುಡುಕಾಡಿ ಬಟ್ಟೆಗಳನ್ನು ರೂಮಿನಲ್ಲಿ ಚೆಲ್ಲಾಪಿಲ್ಲಿ ಮಾಡಿದ್ದಾರೆ. ಆದರೆ ಕಳ್ಳರಿಗೆ ಯಾವುದೇ ವಸ್ತುಗಳು ಸಿಕ್ಕದೆ ಇರುವ ಕಾರಣ ವಾಪಸಾಗಿದ್ದಾರೆ ಎನ್ನಲಾಗಿದೆ.

ಮನೆಯ ಮಾಲೀಕ ಜಗನ್ನಾಥ್ ತಮಿಳುನಾಡಿಗೆ ತೆರಳುವ ಸಂದರ್ಭದಲ್ಲಿ ಒಡವೆ ಮತ್ತು ಹಣವನ್ನು ಬೀರುವಿನಲ್ಲಿ ಇಡದೆ ಬೇರೆ ಜಾಗದಲ್ಲಿ ಬಚ್ಚಿಟ್ಟಿದ್ದ ಕಾರಣ ಕಳ್ಳರಿಗೆ ಅದು ಸಿಗದೆ ಉಳಿದುಕೊಂಡಿದೆ.

ಮನೆಯಲ್ಲಿ ಯಾವುದೇ ಚಿನ್ನ ಮತ್ತು ನಗದು ಕಳ್ಳರಿಗೆ ಸಿಕ್ಕದ ಕಾರಣ ಅದೇ ರಾತ್ರಿ ಅಂದರೆ ಆ.19 ರಂದು ಶನಿವಾರ ರಾತ್ರಿ ಹೌಸಿಂಗ್ ಬೋರ್ಡ್ ನಿವಾಸಿ ಜಯಶಂಕರ್ ಅವರ ಮನೆಗೆ ನುಗ್ಗಿ ಮನೆಯೊಂದರಲ್ಲಿ 10 ಲಕ್ಷ ರೂ. ಮೌಲ್ಯದ ಚಿನ್ನ ಮತ್ತು ನಗದು ದರೋಡೆ ಮಾಡಿರಬಹುದು ಎಂದು ಪೊಲೀಸರು ಅನುಮಾನ ವ್ಯಕ್ತಪಡಿಸಿದ್ದಾರೆ.

ಸ್ಥಳೀಯರ ಆರೋಪ: ಇಲ್ಲಿ ನ್ಯಾಯಾಧೀಶರ ಮನೆ ಇದೆ ಇಲ್ಲಿಗೆ ಪ್ರತಿ ರಾತ್ರಿ ಪೊಲೀಸರು ಬೀಟಿಗೆ ಬಂದು ನ್ಯಾಯಾಧೀಶರ ಮನೆಯಲ್ಲಿ ಪುಸ್ತಕಕ್ಕೆ ಸಹಿ ಹಾಕುತ್ತಾರೆ. ಘಟನೆಯನ್ನು ಗಮನಿಸಿದರೆ ಪೊಲೀಸರು ರಾತ್ರಿ ಬೀಟಿಗೆ ಬರುತ್ತಿಲ್ಲ ಎಂಬುದು ತಿಳಿಯುತ್ತದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹೌಸಿಂಗ್ ಬೋರ್ಡ್ ಏರಿಯಾ ಒಂದರಲ್ಲೇ ಆಗಸ್ಟ್ 11 ರಂದು ಚಾಮುಂಡೇಶ್ವರಿ ದೇವಾಲಯದಲ್ಲಿ ದೇವಿಗೆ ತೊಡಿಸಿದ ಬೆಳ್ಳಿಯ ಮುಖವಾಡ, 5 ಗ್ರಾಂ ತೂಕದ 2 ಚಿನ್ನದ ತಾಳಿ, ಪಂಚಪಾತ್ರೆ, ಉದ್ಧರಣೆಯನ್ನು ಹಾಡಹಗಲೇ ಕಳ್ಳತನ ಮಾಡಲಾಗಿತ್ತು. ಆ.19ರ ರಾತ್ರಿ ಹೌಸಿಂಗ್ ಬೋರ್ಡ್ ನಿವಾಸಿ ಜಯಶಂಕರ್ ಅವರ ಮನೆಗೆ ನುಗ್ಗಿ ಮನೆಯೊಂದರಲ್ಲಿ 10 ಲಕ್ಷ ರೂ. ವೆಚ್ಚದ ಚಿನ್ನ ಮತ್ತು ನಗದು ದರೋಡೆ ಮಾಡಿದ್ದಾರೆ. ಆದರೆ ಇದುವರೆಗೂ ಯಾವುದೇ ಸುಳಿವು ಸಿಕ್ಕಿಲ್ಲ. ಸಂಬಂಧಪಟ್ಟ ಜಿಲ್ಲಾ ಪೊಲೀಸ್ ವರಿಷ್ಠರು ಕೋಟೆ ಪಟ್ಟಣದಲ್ಲಿ ನಡೆಯುತ್ತಿರುವ ಕಳ್ಳತನದ ಬಗ್ಗೆ ಕ್ರಮ ವಹಿಸಿ ರಾತ್ರಿ ವೇಳೆ ಪೊಲೀಸ್ ಬೀಟ್ ವ್ಯವಸ್ಥೆ ಮಾಡಿಕೊಡಬೇಕು ಎಂದು ಪಟ್ಟಣದ ನಿವಾಸಿಗಳು ಮನವಿ ಮಾಡಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಬೇಬಿ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಜೈಲರ್(ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಗದರ್–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ನಮೋ ಭೂತಾತ್ಮ–2 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಜೈಲರ್ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಗದರ್ –2 (ಹಿಂ)	4 ಪ್ರದರ್ಶನಗಳು
ಸಂಗಂ	
ಕ್ಷೇತ್ರಪತಿ (ಕ)	4 ಪ್ರದರ್ಶನಗಳು
ಲಿಡೋ	
ಕೌಸಲ್ಯ ಸುಪ್ರಜಾ ರಾಮ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬೋಳಾಶಂಕರ (ತೆ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ–2 (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10ಕ್ಕೆ, ರಾ.10.10ಕ್ಕೆ, ಜೈಲರ್ (ತ): ಮ.1ಕ್ಕೆ, ಬ್ಯಾಂಗ್ (ಕ): ಸಂ.4.30ಕ್ಕೆ ಓಎಂಜಿ 2 (ಹಿಂ): ರಾ.7.10ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.10.15ಕ್ಕೆ, ರಾ.7.25ಕ್ಕೆ, ಜೈಲರ್ (ಕ): ಮ.12.55ಕ್ಕೆ, ಗದರ್ 2 (ಹಿಂ): ಸಂ.4.05ಕ್ಕೆ, ಮಿಸ್ಟರ್ ಪ್ರಗ್ನೆಂಟ್ (ತೆ): ರಾ.10.10ಕ್ಕೆ.
ಸ್ಕ್ರೀನ್ 3	ಕ್ಷೇತ್ರಪತಿ (ಕ): ಬೆ.10.40ಕ್ಕೆ, ಆಚಾರ್ & ಕೋ (ಕ): ಮ.1.45ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಸಂ.4ಕ್ಕೆ, ಬ್ಲೂ ಬೀಟಲ್ (ಇಂ): ರಾ.7.15ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.9.50ಕ್ಕೆ, ಮ.3.50ಕ್ಕೆ, ರಾ.7.05ಕ್ಕೆ, ರಾ.10.20ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.1ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ.
ಸ್ಕ್ರೀನ್ 3	ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, **ಗದರ್ 2 (ಹಿಂ):** ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, **ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ):** ರಾ.9.45ಕ್ಕೆ, **ಆಚಾರ್ & ಕೋ (ಕ):** ಮ.3.55ಕ್ಕೆ, **ಕೌಸಲ್ಯ ಸುಪ್ರಜಾ ರಾಮ (ಕ):** ಮ.3.25ಕ್ಕೆ, ರಾ.10.30ಕ್ಕೆ, **ನಮೋ ಭೂತಾತ್ಮ (ಕ):** ಬೆ.11.55ಕ್ಕೆ, **ರಾಖಿ ಔರ್ ರಾಣಿ (ಹಿಂ):** ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, **ಓಪನ್‌ಹೈಮರ್ (ಇಂ):** ಸಂ.6.35ಕ್ಕೆ, **ಭೋಳಾ ಶಂಕರ್ (ತೆ):** ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, **ಮೆಗ್ 2 (ಇಂ):** ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವಿಶ್ವ ಛಾಯಾಗ್ರಹಣ ದಿನಾಚರಣೆ: ಸಾಧಕರಿಗೆ ಸನ್ಮಾನ



ಸರಗೂರು: ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಕೋಟೆ ಪಟ್ಟಣದ ಅಂಬೇಡ್ಕರ್ ಸಭಾಂಗಣದಲ್ಲಿ ನಡೆದ 184ನೇ ವಿಶ್ವ ಛಾಯಾಗ್ರಹಣ ದಿನಾಚರಣೆ ಸಮಾರಂಭದಲ್ಲಿ ಸನ್ಮಾನಿಸಲಾಯಿತು.

ಗ್ರಾಮೀಣ ಭಾಗದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಸರಗೂರಿನ ಹಿರಿಯ ಪತ್ರಕರ್ತ ವಾಸುಕಿ ನಾಗೇಶ್, ಕನ್ನಡ ನಾಡು–ನುಡಿ ವಿವಿಧ ಸಂಘಗಳ ಸೇವೆಗೆ ಶ್ರಮಿಸಿದ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕನ್ನಡ ಪ್ರಮೋದ್, ವನ್ಯಜೀವಿ ಸಪ್ತಾಹದಲ್ಲಿ ಪ್ರಥಮ ಬಹುಮಾನ ಪಡೆದ ಹಿನ್ನೆಲೆ ಜಕ್ಕಳ್ಳಿ ಮುರುಳಿ ಅವರಿಗೆ ಛಾಯಾಗ್ರಾಹಕ ದಿ.ಕ್ಷೀರಸಾಗರ್, ದಿ.ರಾಜುಸಾಗರ್, ದಿ.ಮಂಜು ಇವರ ಸ್ಮರಣಾರ್ಥ ಕೊಡ ಮಾಡುವ ಪ್ರಶಸ್ತಿಗಳನ್ನು ಅಂತಾರಾಷ್ಟ್ರೀಯ ಛಾಯಾಚಿತ್ರ ಪುರಸ್ಕೃತ ಜಿ.ಎಸ್.ರವಿಶಂಕರ್ ಅವರು ವೈಲ್ಡ್ ಲೈಫ್ ಛಾಯಾಚಿತ್ರದ ಭಾವಚಿತ್ರ ನೀಡುವ ಮೂಲಕ ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಸಾಧಕರಿಗೆ ಸನ್ಮಾನ ಮಾಡಿರುವುದು ತುಂಬಾ ಸಂತಸ ತಂದಿದೆ. ಇಂಥ ಸಾಧಕರಿಗೆ ಮತ್ತಷ್ಟು ಮನ್ನಣೆ ಸಿಗಬೇಕಿದೆ. ಪತ್ರಕರ್ತ ನಾಗೇಶ್ ಅವರು ಪತ್ರಿಕೋದ್ಯಮ ಕ್ಷೇತ್ರದಲ್ಲಿ ಉತ್ತಮ ಸೇವೆ ಮಾಡುವ ಮೂಲಕ ಸಾಧನೆ ಮಾಡುತ್ತಿದ್ದಾರೆ. ಹಾಗೆ ಕನ್ನಡ ಪ್ರಮೋದ್, ಮುರುಳಿ ಇವರು ಉನ್ನತ ಮಟ್ಟಕ್ಕೆ ಬೆಳೆಯಬೇಕಿದೆ ಎಂದರು.

ಅಂತಾರಾಷ್ಟ್ರೀಯ ಛಾಯಾಚಿತ್ರ ಪುರಸ್ಕೃತ ಜಿ.ಎಸ್.ರವಿಶಂಕರ್, ಕೋಟೆ ಆಸ್ಪತ್ರೆ ಚರ್ಮರೋಗ ತಜ್ಞೆ ಕೆ.ಎಸ್.ಸಹನ, ಎಪಿಎಂಸಿ ಕಾರ್ಯದರ್ಶಿ ವಸಂತ್ ಕುಮಾರ್, ಪುರಸಭೆ ಸದಸ್ಯ ಎಚ್.ಸಿ.ನರಸಿಂಹಮೂರ್ತಿ, ತಾಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನೂರಲಕುಪ್ಪೆ ಶಿವಣ್ಣ, ಪ್ರಿನ್ಸ್ ಕಲರ್ ಲ್ಯಾಬ್ ಮಾಲೀಕ ಮಹದೇವಸ್ವಾಮಿ, ವನಸಿರಿ ಶಂಕರ್, ರಮೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ತುಂಬಲ ಡೈರಿಗೆ ಅಧ್ಯಕ್ಷರಾಗಿ ಸಿದ್ದರಾಜು ಆಯ್ಕೆ



ತಿ. ನರಸೀಪುರ ಆ.22– ತಾಲೂಕಿನ ತುಂಬಲ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಬಿ.ಸಿದ್ದರಾಜು ಹಾಗೂ ಉಪಾಧ್ಯಕ್ಷರಾಗಿ ಜವರೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷ– ಉಪಾಧ್ಯಕ್ಷ ಆಯ್ಕೆ ಸಂಬಂಧ ಮಂಗಳವಾರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಿ. ಸಿದ್ದರಾಜು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಜವರೇಗೌಡ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿಯಾಗಿದ್ದ ಕೆ.ಎನ್.ರಾಜಣ್ಣ ಪ್ರಕಟಿಸಿದರು. ನೂತನ ಅಧ್ಯಕ್ಷ ಬಿ ಸಿದ್ದರಾಜು ಮಾತನಾಡಿ, ರೈತರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ನೇರವಾಗಿ ತಲುಪಿಸುವ ಮೂಲಕ ತಾಲೂಕಿಗೆ ಉತ್ತಮ ಹೆಸರು ತರುವ ರೀತಿಯಲ್ಲಿ ಕೆಲಸ ನಿರ್ವಹಿಸುತ್ತೇನೆ ಎಂದರು.

ನಿರ್ದೇಶಕರಾದ ಕರಿಶೆಟ್ಟಿ, ಕರಿಗೌಡ, ಎಂ.ನಾಗರಾಜು, ಟಿ. ಎಸ್. ನಾರಾಯಣ, ಮಹದೇವಸ್ವಾಮಿ, ಚಿಕ್ಕತಾಯಮ್ಮ, ಕೆ ಬಸವರಾಜು, ಗಿರಿಜಮ್ಮ, ಭಾಗ್ಯಮ್ಮ, ಎನ್.ಬಸವರಾಜು ಮುಖಂಡ ಟೈಲರ್ ಮಹೇಶ್, ಹಾಲು ಉತ್ಪಾದಕ ಸಹಕಾರ ಸಂಘದ ಕಾರ್ಯನಿರ್ವಹಣಾಧಿಕಾರಿ ಎಂ.ಸುನಿತಾ ಸುರೇಶ್, ಹಾಲು ಪರೀಕ್ಷಕ ಟಿ.ಆರ್.ಕೆ ಶಿವಮೂರ್ತಿ, ಸಹಾಯಕ ರವಿಕುಮಾರ್, ಎಚ್. ಶ್ರೀನಿವಾಸ್, ತುಂಬಲ ಹಾಗೂ ನಿಂಗೇಗೌಡನಹುಂಡಿ ಗ್ರಾಮಸ್ಥರು, ಮುಖಂಡರು ಉಪಸ್ಥಿತರಿದ್ದರು.

ನಂದಿನಿ ಉತ್ಪನ್ನಗಳ ಮೇಲೆ ಶೇ.20ರಷ್ಟು ರಿಯಾಯಿತಿ

ನರಸೀಪುರದಲ್ಲಿ ನಂದಿನಿ ನೂತನ ಫ್ರಾಂಚೈಸಿ ಉದ್ಘಾಟನೆ

ತಿ.ನರಸೀಪುರ, ಆ.22– ರೈತರ ಸಂಸ್ಥೆಯಾಗಿರುವ ಮೈಮುಲ್‌ನಲ್ಲಿ ಸಿಹಿತಿಂಡಿಗಳ ಮೇಲೆ ದಸರಾ ಹಬ್ಬದವರೆಗೂ ಶೇ.20 ರಷ್ಟು ರಿಯಾಯಿತಿ ದೊರಕುತ್ತಿದ್ದು, ಸಾರ್ವಜನಿಕರು ಕಲಬೆರಕೆ ಇಲ್ಲದ ನಂದಿನಿ ಉತ್ಪನ್ನಗಳನ್ನು ಹೆಚ್ಚಾಗಿ ಖರೀದಿಸುವ ಮೂಲಕ ಸಂಸ್ಥೆ ಬೆಳವಣಿಗೆಗೆ ಸಹಕಾರ ನೀಡಬೇಕೆಂದು ಮೈಮುಲ್ ಮಾಜಿ ಅಧ್ಯಕ್ಷ ಓಂ ಪ್ರಕಾಶ್ ಮನವಿ ಮಾಡಿದರು.



ಪಟ್ಟಣದ ವಿಜಯ ಭಗವಾನ್ ಚಿತ್ರಮಂದಿರ ವೃತ್ತದ ಬಳಿ ನಂದಿನಿ ಹಾಲಿನ ಉತ್ಪನ್ನಗಳ ನೂತನ ಫ್ರಾಂಚೈಸಿಯನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ನಂದಿನಿ ಉತ್ಪನ್ನಗಳು ಆರೋಗ್ಯಕರವಾದ ಉತ್ಪನ್ನಗಳಾಗಿದ್ದು ಯಾವುದೇ ಕಲಬೆರಕೆ ಇರುವುದಿಲ್ಲ. ಮೈಮುಲ್ ಆ.15 ರಿಂದ ಸೆಪ್ಟೆಂಬರ್ 20 ರವರೆಗೆ ಸಿಹಿತಿಂಡಿಗಳ ಮೇಲೆ ಶೇ.20 ರಷ್ಟು ರಿಯಾಯಿತಿ ನೀಡಿದೆ. ಅದರಿಂದ ಬಂದ ಲಾಭಾಂಶವನ್ನು ರೈತರಿಗೆ ನೀಡಲಿದೆ ಎಂದರು.

ಮೈಸೂರು ಜಿಲ್ಲೆಯ ರೈತರಿಗೆ ಸಂಸ್ಥೆ ಪ್ರತಿ ಲೀಟರ್ ಹಾಲಿಗೆ 36 ರೂಗಳನ್ನು ನೀಡುತ್ತಿದೆ ಎಂದು ಮಾಹಿತಿ ನೀಡಿದ ಅವರು, ಜಿಲ್ಲೆಯ 7 ತಾಲೂಕುಗಳ ಪೈಕಿ ನಂಜನಗೂಡು ಹೊರತುಪಡಿಸಿದರೆ ತಿ.ನರಸೀಪುರ ತಾಲೂಕು ಅತಿ ಹೆಚ್ಚು ಹಾಲು ಉತ್ಪಾದನೆ ಮಾಡುವ ತಾಲೂಕಾಗಿದೆ ಎಂದು ತಿಳಿಸಿದರು.

ಮೈಮುಲ್ ನಿರ್ದೇಶಕ ಹಾಗೂ ತಾಪಂ ಮಾಜಿ ಅಧ್ಯಕ್ಷ ಆರ್.ಚೆಲುವರಾಜು ಮಾತನಾಡಿ, ರಾಜ್ಯದ ಎಲ್ಲ ವರ್ಗದ ಜನರು ಗಡಿ ಕಾಯುವ ಸೈನಿಕರಿಗೆ ತೋರುವ ಕಾಳಜಿಯನ್ನು ರೈತರ ಮೇಲೂ ತೋರುತ್ತಿದ್ದಾರೆ. ರೈತರು ಶ್ರಮಜೀವಿಗಳಾಗಿದ್ದು, ಮೈಮುಲ್ ರೈತರೇ ಕಷ್ಟ ಪಟ್ಟು ಬೆಳೆಸಿರುವ ಸಂಸ್ಥೆಯಾಗಿದೆ. ಹಾಗಾಗಿ ಇಲ್ಲಿ ಎಷ್ಟೇ ಲಾಭ ಬಂದರೂ ಅದು ರೈತರಿಗೆ ಸೇರುತ್ತದೆ ಎಂದರು.

ಬಹಳ ಜನ ರೈತರಿಗೆ ಮೈಮುಲ್ ತಾವೇ ಕಟ್ಟಿ ಬೆಳೆಸಿದ ಸಂಸ್ಥೆ ಎಂಬುದೇ ತಿಳಿಯದೇ ಅಕ್ಕಪಕ್ಕದ ಸಿಹಿ ತಿಂಡಿ ಅಂಗಡಿಗಳ ಮೇಲೆ ಅವಲಂಬಿತರಾಗಿದ್ದಾರೆ. ಆದರೆ ನಂದಿನಿ ಉತ್ಪನ್ನಗಳಲ್ಲಿ ಕಲಬೆರಕೆಗೆ ಅವಕಾಶವಿಲ್ಲ ಹಾಗಾಗಿ ನಂದಿನಿ ಫ್ರಾಂಚೈಸಿಗಳಲ್ಲಿ ದೊರಕುವ ಉತ್ಪನ್ನಗಳನ್ನು ಹೆಚ್ಚು ಖರೀದಿ ಮಾಡುವ ಮೂಲಕ ಸಂಸ್ಥೆ ಬೆಳವಣಿಗೆಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಮೈಮುಲ್‌ನ ವ್ಯವಸ್ಥಾಪಕ ನಿರ್ದೇಶಕ ವಿಜಯ ಕುಮಾರ್ ಮಾತನಾಡಿ, ಹಾಲು ಮತ್ತು ಹಾಲಿನ ಉತ್ಪನ್ನಗಳು ರಾಜ್ಯದ ಪ್ರತಿ ಹಳ್ಳಿಗಳಲ್ಲೂ ದೊರಕಬೇಕೆಂಬ ಉದ್ದೇಶದೊಂದಿಗೆ ಹೆಚ್ಚು ಹೆಚ್ಚು ಫ್ರಾಂಚೈಸಿಗಳನ್ನು ತೆರೆಯಲಾಗುತ್ತಿದೆ. ರಾಜ್ಯದ ಎಲ್ಲ ವರ್ಗದ ಜನರಿಗೆ ಗುಣಮಟ್ಟದ ಕಲಬೆರಕೆ ಮುಕ್ತ ಉತ್ಪನ್ನ ದೊರಕಿಸಿಕೊಡಬೇಕೆಂಬುದು ಸಂಸ್ಥೆಯ ಉದ್ದೇಶವಾಗಿದ್ದು, ಸಾರ್ವಜನಿಕರು ಹೆಚ್ಚಾಗಿ ಗುಣಮಟ್ಟದ ನಂದಿನಿ ಉತ್ಪನ್ನಗಳನ್ನು ಖರೀದಿಸುವಂತೆ ಮನವಿ ಮಾಡಿದರು.

ಈ ವೇಳೆ ಮಾರುಕಟ್ಟೆ ವ್ಯವಸ್ಥಾಪಕ ಜಯಶಂಕರ್, ಕ್ಷೇತ್ರಾಧಿಕಾರಿ ಎಚ್.ಎಂ.ಮನೋಜ್, ಡೈರಿ ಗುರುಮೂರ್ತಿ, ಹಾಲಿನ ಮಹದೇವಪ್ಪ, ಫ್ರಾಂಚೈಸಿ ಮಾಲೀಕ ಮಂಜುನಾಥ್ ಮತ್ತಿತರರಿದ್ದರು.

ಬಾಗಿನ ಅರ್ಪಿಸುವ ಭಾಗ್ಯಕ್ಕೂ ಮೊದಲೇ ಕೆಆರ್‌ಎಸ್, ಕಬಿನಿ ಜಲಾಶಯ ಬರಿದು

ಈಗಾಗಲೇ 25 ಟಿಎಂಸಿ ನೀರು ಬಿಟ್ಟರೂ ತೀರದ ತಮೀಳ್ನಾಡು ನೀರಿನ ದಾಹ

- ತಮಿಳುನಾಡಿನಲ್ಲಿ ಸೆಪ್ಟೆಂಬರ್‌ನಲ್ಲಿ ಮಾನ್ಸೂನ್
- ಆ ವೇಳೆ ಮೆಟ್ಟೂರು ಜಲಾಶಯ ಭರ್ತಿಯಾಗುವ ಸಾಧ್ಯತೆ
- ಕೆಆರ್‌ಎಸ್, ಕಬಿನಿಯಲ್ಲಿ ನೀರಿನ ಪ್ರಮಾಣ ಕುಸಿತ
- ಬೇಸಿಗೆ ವೇಳೆಗೆ ಇಲ್ಲಿ ಕುಡಿಯುವ ನೀರಿಗೂ ಹಾಹಾಕಾರ

ಮೈಸೂರು, ಆ.22(ಬಿಎಲ್‌ಯು)– ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಹಾಗೂ ಮೈಸೂರಿನ ಕಬಿನಿ ಜಲಾಶಯಗಳಿಗೆ ನಾಡಿನ ದೊರೆ–ಮುಖ್ಯಮಂತ್ರಿಗಳು ಬಾಗಿನ ಅರ್ಪಿಸುವ ಮೊದಲೇ ಈ ಎರಡೂ ಜಲಾಶಯಗಳು ಬರಿದಾಗುವ ಪರಿಸ್ಥಿತಿ ಎದುರಾಗಿದೆ. ಮೆಟ್ಟೂರು ಜಲಾಶಯಕ್ಕೆ ಈ ತನಕ 25 ಟಿಎಂಸಿ ನೀರು ಹರಿಸಿದ್ದರೂ ತಮಿಳುನಾಡಿನ ನೀರಿನ ದಾಹ ಇನ್ನೂ ತೀರಿಲ್ಲ.

ಕಳೆದ ವರ್ಷ ಕೊಡಗು ಹಾಗೂ ಕೇರಳದ ವೈನಾಡು ಪ್ರದೇಶದಲ್ಲಿ ಧಾರಾಕಾರ ಮಳೆಯಾಗಿತ್ತು. ಇದರಿಂದ ಕೆಆರ್‌ಎಸ್ ಹಾಗೂ ಕಬಿನಿ ಜಲಾಶಯ ಭರ್ತಿಯಾಗಿತ್ತು. ಹಾಗಾಗಿ ಜುಲೈ 20 ರಂದು ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಬಾಗಿನ ಅರ್ಪಿಸಿದ್ದರು.


ಈ ವರ್ಷ ಕಬಿನಿ ಜಲಾಶಯ ಭರ್ತಿಯಾಗಿತ್ತು. ಇನ್ನು ಕೆಆರ್‌ಎಸ್ ಜಲಾಶಯ ಭರ್ತಿಯಾಗಲು 10 ಅಡಿ ಬಾಕಿ ಇತ್ತು. ಆದರೆ ಮುಂಗಾರು ಕೈಕೊಟ್ಟು, ಇದೇ ವೇಳೆ ನೀರು ಬಿಡುಗಡೆ ಮಾಡುವಂತೆ ತಮಿಳುನಾಡು ಕ್ಯಾತೆ ತೆಗೆದ ಕಾರಣ ಎರಡೂ ಜಲಾಶಯದಿಂದ ತಮಿಳುನಾಡಿಗೆ ಭಾರಿ ಪ್ರಮಾಣದಲ್ಲಿ ನೀರು ಹರಿಸಲಾಯಿತು.

ಕಾವೇರಿ ನ್ಯಾಯಾಧೀಕರಣದ ಐತೀರ್ಪಿನಲ್ಲಿ ಜೂನ್‌ನಲ್ಲಿ 9 ಟಿಎಂಸಿ, ಜುಲೈನಲ್ಲಿ 31 ಟಿಎಂಸಿ, ಆಗಸ್ಟ್‌ನಲ್ಲಿ 45 ಟಿಎಂಸಿ ಹಾಗೂ ಸೆಪ್ಟೆಂಬರ್ ಅಂತ್ಯಕ್ಕೆ 35 ಟಿಎಂಸಿ ನೀರು ಬಿಡಬೇಕಿದೆ. ಅದರಂತೆ ತಮಿಳುನಾಡಿಗೆ ನೀರು ಬಿಡಲು ಎರಡೂ ಜಲಾಶಯದಲ್ಲಿ ನೀರೇ ಕುಸಿದಿದೆ. ಇಂತಹ ಸಮಯದಲ್ಲಿ ಎರಡೂ ರಾಜ್ಯಗಳು ಸಂಕಷ್ಟ ಸೂತ್ರ ಪಾಲಿಸಬೇಕು. ಮಳೆಯಾಗದೆ ಜಲಾಶಯ ಭರ್ತಿಯಾಗದ ಸಮಯದಲ್ಲಿ ಸಂಕಷ್ಟ ಸೂತ್ರ ಪಾಲಿಸುವಂತೆ ಕಾವೇರಿ ನ್ಯಾಯಾಧೀಕರಣದ ತೀರ್ಪಿನಲ್ಲಿ ತಿಳಿಸಿದ್ದರೂ ತಮಿಳುನಾಡು ಮಾತ್ರ ಯಾವ ಸೂತ್ರಕ್ಕೂ ಒಪ್ಪುತ್ತಿಲ್ಲ. ಬದಲಿಗೆ ತಮ್ಮ ಪಾಲಿನ ನೀರು ಬಿಡುಗಡೆ ಮಾಡುವಂತೆ ಪಟ್ಟು ಹಿಡಿದಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಕಬಿನಿ ಹಾಗೂ ಕೆಆರ್‌ಎಸ್ ಜಲಾಶಯದಿಂದ 25 ಟಿಎಂಸಿ ನೀರು ಬಿಟ್ಟಿದೆ. ತಮಿಳುನಾಡು ಹಾಗೂ ಕರ್ನಾಟಕದ ಗಡಿ ಬಿಳಿಗುಂಡ್ಲುವಿನಲ್ಲಿ 25 ಟಿಎಂಸಿ ನೀರು ಬಿಟ್ಟಿರುವುದು ದಾಖಲಾಗಿದೆ. ಇಷ್ಟು ನೀರು ಬಿಟ್ಟಿರುವ ಕಾರಣ ಕೆಆರ್‌ಎಸ್ ಹಾಗೂ ಕಬಿನಿ ಜಲಾಶಯದಲ್ಲಿ ನೀರಿನ ಪ್ರಮಾಣ ಕುಸಿದಿದೆ. ಕೆಆರ್‌ಎಸ್‌ನ ಗರಿಷ್ಠ ಮಟ್ಟ 124.80 ಅಡಿಗಳಾಗಿದ್ದು, ಇಂದಿನ ಮಟ್ಟ 104.09 ಅಡಿಗಳಾಗಿದೆ. ಜಲಾಶಯಕ್ಕೆ 5,269 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, 13,457 ಕ್ಯೂಸೆಕ್ ನೀರು ನದಿಗೆ ಬಿಡಲಾಗುತ್ತಿದೆ. ಒಟ್ಟು 49 ಟಿಎಂಸಿ ಸಾಮರ್ಥ್ಯದ ಕೆಆರ್‌ಎಸ್ ಜಲಾಶಯದಲ್ಲಿ ಈಗ 26 ಟಿಎಂಸಿ ನೀರಿದೆ. ಹೀಗೆ ತಮಿಳುನಾಡಿಗೆ ನೀರು ಹರಿಸಿದರೆ ಕೆಆರ್‌ಎಸ್‌ನಲ್ಲಿ ನೀರಿನ ಪ್ರಮಾಣ ಮತ್ತಷ್ಟು ಕಡಿಮೆಯಾಗಲಿದೆ.

ಇನ್ನು ಕಬಿನಿ ಜಲಾಶಯದ ಗರಿಷ್ಠ ಮಟ್ಟ 2,284 ಅಡಿಗಳಾಗಿದ್ದು, ಇಂದಿನ ಮಟ್ಟ 2,276 ಅಡಿಗಳಾಗಿದೆ. ಜಲಾಶಯಕ್ಕೆ 3,659 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, 2,500 ಕ್ಯೂಸೆಕ್ ನೀರು ತಮಿಳುನಾಡಿಗೆ ಬಿಡಲಾಗುತ್ತಿದೆ. ಜಲಾಶಯ 19.52 ಟಿಎಂಸಿ ನೀರಿನ ಶೇಖರಣೆಯ ಸಾಮರ್ಥ್ಯ ಹೊಂದಿದ್ದು, ಈಗ 15.03 ಟಿಎಂಸಿ ನೀರಿದೆ.

ತಮಿಳುನಾಡಿನ ಮೆಟ್ಟೂರು ಜಲಾಶಯದ ಗರಿಷ್ಠ ಮಟ್ಟ 120 ಅಡಿಗಳಾಗಿದ್ದು, ಆಗಸ್ಟ್ 19ಕ್ಕೆ ದಾಖಲಾಗಿರುವಂತೆ ಜಲಾಶಯದ ನೀರಿನ ಮಟ್ಟ 54.40 ಅಡಿಗಳಾಗಿದೆ. 13 ಸಾವಿರ ಕ್ಯೂಸೆಕ್‌ಗೂ ಹೆಚ್ಚು ನೀರು ಕರ್ನಾಟಕದಿಂದ ಹರಿದು ಬರುತ್ತಿದ್ದು, 8 ಸಾವಿರ ಕ್ಯೂಸೆಕ್ ನೀರನ್ನು ಹೊರಗೆ ಬಿಡಲಾಗುತ್ತಿದೆ. ಮೆಟ್ಟೂರು ಜಲಾಶಯದ ಒಟ್ಟು ನೀರಿನ ಶೇಖರಣೆ ಸಾಮರ್ಥ್ಯ 93 ಟಿಎಂಸಿ ಆಗಿದ್ದು, ಈಗ 20.69 ಟಿಎಂಸಿ ನೀರಿದೆ.

ತಮಿಳುನಾಡಿಗೆ ನೀರು ಬಿಡದೆ ಎರಡೂ ಜಲಾಶಯದಲ್ಲಿ ಇರುವ ನೀರನ್ನು ಶೇಖರಣೆ ಮಾಡಿಕೊಂಡಿದ್ದರೆ ಕರ್ನಾಟಕದಲ್ಲಿ ಬೆಳೆ ಬೆಳೆಯಲು ಹಾಗೂ ಕುಡಿಯುವ ನೀರಿಗೆ ತೊಂದರೆ ಆಗುತ್ತಿರಲಿಲ್ಲ. ಆದರೆ ಈಗ ಭಾರಿ ಪ್ರಮಾಣದಲ್ಲಿ ನೀರು ಬಿಟ್ಟಿರುವ ಕಾರಣ ಬೆಳೆ ಹಾಗೂ ಮುಂದಿನ ಬೇಸಿಗೆ ತನಕ ಕುಡಿಯುವ ನೀರಿಗೆ ತೊಂದರೆ ಆಗುವ ಸಾಧ್ಯತೆ ಇದೆ.




> "ಕರ್ನಾಟಕದಲ್ಲಿ ಜೂನ್, ಜುಲೈ ಹಾಗೂ ಆಗಸ್ಟ್‌ನಲ್ಲಿ ಹೆಚ್ಚು ಮಳೆ ಬೀಳಬೇಕು. ಆದರೆ ವಾಡಿಕೆಯಷ್ಟು ಮಳೆ ಬೀಳದೆ ಜಲಾಶಯದಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ. ಈಗ ಸೆಪ್ಟೆಂಬರ್, ಅಕ್ಟೋಬರ್, ನವೆಂಬರ್ ಹಾಗೂ ಡಿಸೆಂಬರ್ ತಿಂಗಳಲ್ಲಿ ಮಳೆ ಪ್ರಮಾಣ ಕಡಿಮೆ, ಜಲಾಶಯಗಳು ತುಂಬುವಂತಹ ಮಳೆ ಆಗುವ ಸಾಧ್ಯತೆ ಕಡಿಮೆ. ತಮಿಳುನಾಡಿನಲ್ಲಿ ಸೆಪ್ಟೆಂಬರ್ ಮೊದಲ ವಾರದಲ್ಲಿ ಮಾನ್ಸೂನ್ ಆರಂಭವಾಗಲಿದ್ದು, ಹೆಚ್ಚು ಮಳೆಯಾಗಿ ಅಲ್ಲಿನ ಜಲಾಶಯ ತುಂಬುವ ಸಾಧ್ಯತೆ ಹೆಚ್ಚಿದೆ. ಈಗ ಅವರಿಗೆ ನೀರಿನ ಅವಶ್ಯಕತೆ ಇಲ್ಲ. ಆದರೂ ನೀರಿಗೆ ಪಟ್ಟು ಹಿಡಿದಿದ್ದಾರೆ. ನಾಳೆ (ಬುಧವಾರ) ನಡೆಯುವ ಸರ್ವಪಕ್ಷಗಳ ಸಭೆಯಲ್ಲಿ ನೀರು ಬಿಡದಿರುವ ಬಗ್ಗೆ ಒಮ್ಮತದ ತೀರ್ಮಾನ ಕೈಗೊಳ್ಳಬೇಕು. ಕರ್ನಾಟಕದ ಸ್ಥಿತಿ ಗತಿ ಬಗ್ಗೆ ಸುಪ್ರೀಂಕೋರ್ಟ್‌ನಲ್ಲಿ ಅಂಕಿ ಅಂಶಗಳ ವಿವರ ನೀಡಬೇಕು.
> – ಬಡಗಲಪುರ ನಾಗೇಂದ್ರ, ಅಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ

ಕಲುಷಿತ ನೀರು ಸೇವಿಸಿ ಸಾವು ಪ್ರಕರಣ ಮರುಕಳಿಸಿದರೆ ಜಿಪಂ ಸಿಇಓಗಳು ಅಮಾನತು

- ಮುಖ್ಯಮಂತ್ರಿ ಸಿದ್ದರಾಮಯ್ಯ ಕಟ್ಟಾಜ್ಞೆ
- ನಗರಸಭೆಗಳ ಆಯುಕ್ತರ ವಿರುದ್ಧವೂ ಕ್ರಮದ ಎಚ್ಚರಿಕೆ



ಬೆಂಗಳೂರು, ಆ. 22(ಕೆಎಂಶಿ)–ಕಲುಷಿತ ನೀರು ಸೇವನೆಯಿಂದ ಸಾವಿನ ಪ್ರಕರಣಗಳು ಮರುಕಳಿಸಿದರೆ ಜಿ.ಪಂ ಸಿಇಓಗಳನ್ನು ನೇರವಾಗಿ ಹೊಣೆಗಾರರನ್ನಾಗಿಸಿ ಅಮಾನತು ಮಾಡಲಾಗುವುದು. ಹಾಗೂ ನಗರಸಭೆಗಳ ಆಯುಕ್ತರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಬಡವರು ವಾಸಿಸುವ ಕೊಳಗೇರಿಗಳಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಹಾಗೂ ಚರಂಡಿ ನೀರಿನ ಪೈಪು ಗಳು ಪ್ರತ್ಯೇಕವಾಗಿರುವುದನ್ನು ಖಾತ್ರಿಪಡಿಸ ಬೇಕು. ಪ್ರತ್ಯೇಕ ಇಲ್ಲದಿರುವ ಸ್ಥಳಗಳನ್ನು ಗುರುತಿಸಿ ರಾಜ್ಯದಲ್ಲಿ ಈ ಕುರಿತು ನೈರ್ಮಲ್ಯ ಅಭಿಯಾನ ಕೈಗೊಂಡು 15 ದಿನಗಳಲ್ಲಿ ಈ ಕುರಿತು ವರದಿ ಸಲ್ಲಿಸಬೇಕೆಂದು ಮುಖ್ಯ ಮಂತ್ರಿಗಳು ಸೂಚಿಸಿದರು.


ರಾಜ್ಯದಲ್ಲಿ ಕಲುಷಿತ ನೀರಿನ ಸೇವನೆಯಿಂದಾಗಿ 13–14 ಜನ ಸಾವಿಗೀಡಾಗಿದ್ದು, ಚಿತ್ರದುರ್ಗದಲ್ಲಿಯೇ 6–7 ಜನ ಅಸುನೀಗಿದ್ದಾರೆ. ಇದನ್ನು ತಪ್ಪಿಸಲು ಸಾಧ್ಯವಿದೆ. ಕೆಲವೆಡೆ ನಿರ್ವಹಣೆ ಇಲ್ಲದೆ ಇರುವುದರಿಂದ ಈ ರೀತಿ ಅವಘಡಗಳು ಸಂಭವಿಸುತ್ತವೆ ಎಂದು ಅವರು ಹೇಳಿದರು. ಕಾವಾಡಿಗರಹಟ್ಟಿಯಲ್ಲಿ ಇತ್ತೀಚೆಗೆ ಒಬ್ಬರು ಮರಣ ಹೊಂದಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಇಂಥ ಪ್ರಕರಣಗಳು ಸಂಭವಿಸುತ್ತವೆ. ಗ್ರಾಮೀಣಾಭಿವೃದ್ಧಿ, ಆರೋಗ್ಯ, ಪೌರಾಡಳಿತ ಹಾಗೂ ನಗರಾಭಿವೃದ್ಧಿ – ಈ ನಾಲ್ಕು ಇಲಾಖೆ ಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

"ಹಾಸ್ಟೆಲ್‌ಗಳಲ್ಲಿಯೂ ವಿದ್ಯಾರ್ಥಿಗಳು ಕಲುಷಿತ ನೀರು ಕುಡಿದು ಆಸ್ಪತ್ರೆ ಸೇರಿದ್ದಾರೆ. ಈ ಬಗ್ಗೆ ಸಮರೋಪಾದಿಯಲ್ಲಿ ಕೆಲಸಗಳಾಗಬೇಕು ಎಂದರು. ಪೈಪ್‌ಲೈನ್ ಸರಿಪಡಿಸುವುದು, ಟ್ಯಾಂಕ್ ಸ್ವಚ್ಛತಾ ಕಾರ್ಯ ತುರ್ತಾಗಿ ಕೈಗೊಳ್ಳಬೇಕು ಎಂದು ಸೂಚಿಸಿದರು.

ನೈರ್ಮಲ್ಯ ಮತ್ತು ಸ್ವಚ್ಛತೆಗೆ ಪ್ರತ್ಯೇಕವಾಗಿ ಕನಿಷ್ಠ ಮೊತ್ತವನ್ನು ನಿಗದಿ ಮಾಡಬೇಕು ಎಂದು ಆರೋಗ್ಯ ಸಚಿವರು ಅಭಿಪ್ರಾಯಪಟ್ಟರು. ಸಾಮಾನ್ಯವಾಗಿ ಎಸ್.ಸಿ. ಎಸ್.ಪಿ/ ಟಿ. ಎಸ್.ಪಿಯಡಿ ಆದ್ಯತೆಯನ್ನು ರಸ್ತೆ ಇನ್ನಿತರ ಕಾಮಗಾರಿಗಳಿಗೆ ವಹಿಸಲಾಗುತ್ತದೆ ಎಂದರು. 39 ತಾಲೂಕುಗಳಲ್ಲಿ ಕುಡಿಯುವ ನೀರಿನ ಅಭಾವವಿದೆ. 121 ಹಳ್ಳಿಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಇದಕ್ಕೆ 86 ಕೋಟಿ ರೂ.ಗಳ ಅನುದಾನ ಅಗತ್ಯವಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವರು ಸಭೆಯ ಗಮನಕ್ಕೆ ತಂದರು. ಎಲ್ಲಿಯೂ ಕುಡಿಯುವ ನೀರಿಗೆ ಸಮಸ್ಯೆಯಾಗಬಾರದು. ನೀರಿನ ಸ್ವಚ್ಛತೆ ಬಗ್ಗೆ ಆದ್ಯತೆ ವಹಿಸಿರಬೇಕು. ಸ್ವಚ್ಛತೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು.

ಗಬ್ಬುನಾರುತ್ತಿದ್ದ ಸ್ಥಳವೀಗ ಚಿತ್ತಾಕರ್ಷಕ ತಾಣ

ಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು ಕಾಳಜಿಯಿಂದ ಪರಿವರ್ತನೆ



ಮೈಸೂರು,ಆ.22(ಪಿಎಂ)–ಮೂಗು ಮುಚ್ಚಿಕೊಂಡು ಓಡಾಡುವಂತಿದ್ದ ಸ್ಥಳವೀಗ ಮಕ್ಕಳು, ಹಿರಿಯರು ಸಂತೋಷದಿಂದ ವಿರಮಿಸುವ ತಾಣವಾಗಿ ಪರಿವರ್ತನೆ ಕಂಡಿದೆ. ಹೌದು, ಗೋಕುಲಂನ ಕೆಆರ್ ರಸ್ತೆಯ ಜಂಕ್ಷನ್‌ನ ಬದಿಯಲ್ಲಿ ಇಂತಹ ಬದಲಾವಣೆಗೆ ನಾಂದಿ ಹಾಡಲಾಗಿದೆ. ಇಲ್ಲಿ ರಾಶಿಗಟ್ಟಲೆ ಕಸ ತಂದು ಸುರಿಯುತ್ತಿರುವುದರನ್ನು ಗಮನಿಸಿದ ಈ ವಾರ್ಡಿನ ಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು, ಇಲ್ಲಿ ಸ್ವಚ್ಛತೆ ಕಾಯ್ದುಕೊಳ್ಳುವಂತೆ ಮನವಿ ಮಾಡಿದ್ದರು. ಆದರೂ ಯಾವುದೇ ಪ್ರಯೋಜನವಾಗದೇ ಯಥಾಸ್ಥಿತಿ ಮುಂದುವರಿದಿತ್ತು.

ಕೊನೆಗೆ ಕಸ ಹಾಕುತ್ತಿದ್ದ ಈ ಜಾಗವನ್ನು ಸ್ವಚ್ಛಗೊಳಿಸಿ, ಕುಳಿತುಕೊಳ್ಳಲು ಆಸನ, ಮಕ್ಕಳು ಆಟವಾಡಲು ಸ್ಥಳಾವಕಾಶದೊಂದಿಗೆ ಗೋಡೆಯ ಮೇಲೆ ಚಿತ್ತಾಕರ್ಷಕ ಚಿತ್ರಗಳನ್ನು ರಚಿಸಲು ಎಸ್‌ಬಿಎಂ ಮಂಜು ಕ್ರಮ ವಹಿಸಿದರು. ಇದೀಗ ಈ ಸ್ಥಳವೀಗ ಚಿತ್ತಾಕರ್ಷಕ ತಾಣವಾಗಿ ಕಂಗೊಳಿಸುತ್ತಿದೆ. ಇತ್ತೀಚೆಗೆ ಈ ಸ್ಥಳದ ಉದ್ಘಾಟನೆಯನ್ನು ಯುವರಾಜ ಕಾಲೇಜು ನಿವೃತ್ತ ಪ್ರಾಂಶುಪಾಲರಾದ ಅಶ್ವತಿ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಶಾಸಕ ಕೆ.ಹರೀಶ್‌ಗೌಡ, ಉತ್ತಮವಾದ ಕೆಲಸವನ್ನು ಪಾಲಿಕೆ ಸದಸ್ಯ ಎಸ್‌ಬಿಎಂ ಮಂಜು ಅವರು ಮಾಡಿದ್ದಾರೆ. ಹಾಗಾಗಿ ಅವರಿಗೆ ಅಭಿನಂದಿಸುತ್ತೇನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಎಸ್‌ಬಿಎಂ ಮಂಜು, ದೇಶದಾದ್ಯಂತ ಸ್ವಚ್ಛ ಸರ್ವೇಕ್ಷಣ್ ಅಭಿಯಾನ ನಡೆಯುತ್ತಿದ್ದು, ಮೈಸೂರು ಸಹ ಪಾಲ್ಗೊಂಡಿದೆ. ಈ ಅಭಿಯಾನದಲ್ಲಿ ನಮ್ಮ ಮೈಸೂರಿಗೆ ದೇಶದಲ್ಲಿಯೇ ಮೊದಲ ಸ್ಥಾನ ದೊರೆಯಬೇಕಾದರೆ ನಗರದಲ್ಲಿ ಸ್ಥಳೀಯರು ಸ್ವಚ್ಛತೆ ಕಾಯ್ದುಕೊಂಡು ಪಾಲಿಕೆಯೊಂದಿಗೆ ಸಹಕರಿಸಬೇಕು. ಇಲ್ಲಿ ಕಸದ ರಾಶಿ ಇದ್ದರೆ ಕೆಟ್ಟ ಸಂದೇಶ ಹೋಗುತ್ತದೆ ಎಂದು ವಿಶೇಷ ತಾಣವಾಗಿ ಪರಿವರ್ತಿಸಲಾಗಿದೆ ಎಂದು ಹೇಳಿದರು.

ಬೃಂದಾವನ ಬಡಾವಣೆಯಲ್ಲಿಯೂ ಒಂದು ಜಾಗದಲ್ಲಿ ಕಸ ಹಾಕುತ್ತಿದ್ದ ಸ್ಥಳವನ್ನು ಇದೇ ರೀತಿ ಪರಿವರ್ತಿಸಲಾಗಿದೆ. ವಾರ್ಡಿನ ಉಳಿದೆಡೆಯೂ ಇಂತಹ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸಿ ಇದೇ ರೀತಿಯ ನೂತನ ಸ್ಪರ್ಶ ನೀಡಲಾಗುವುದು ಎಂದರು. ಸ್ಥಳೀಯ ಮುಖಂಡರಾದ ಆದಿರಾಜ್, ಮಹದೇವು, ಕುಮಾರ್, ದಿನಕರ್, ಹನುಮೇಗೌಡ, ಪಾಲಿಕೆ ಎಂಜಿನಿಯರ್ ರಾಮು, ಅಭಿವೃದ್ಧಿ ಅಧಿಕಾರಿ ಮನುಗೌಡ ಮತ್ತಿತರರು ಹಾಜರಿದ್ದರು.

ಸಾರ್ವಜನಿಕ ಪ್ರಕಟಣೆ

ಈ ಕೆಳಗೆ ನಮೂದಿಸಿದ ಅನುಸೂಚಿ ಸ್ವತ್ತಿನ ಮಾಲೀಕರಾದ ಶ್ರೀ ಕುಮಾರ್ ಜಿ. ಕೆ. 41 ವರ್ಷ ಬಿನ್ ಬಿ.ಎಂ. ಕಾಡಪ್ಪ, ಗೆಜ್ಜಗಾರಿಪುರ ಗ್ರಾಮ, ದೊಡ್ಡಕವಲಂದೆ ಹೋಬಳಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ, ಇವರಿಂದ ಕೆಳಗೆ ನಮೂದಿಸಿರುವ ವಿಳಾಸ:– ಮನೆ ನಂ–217, ಕುಂಬಾರಕೊಪ್ಪಲ್ ಗೇಟ್, ಕೆ ಆರ್ ಎಸ್ ರಸ್ತೆ ಮೈಸೂರು–570016 ಇಲ್ಲಿ ವಾಸವಾಗಿರುವ ನನ್ನ ಕಕ್ಷಿದಾರರಾದ ಡಾ ಭರತ್ ಕುಮಾರ್ ಕೆ.ಕೆ. ರವರು ಶುದ್ಧ ಕ್ರಯಕ್ಕೆ ಪಡೆದುಕೊಳ್ಳಲು ಉದ್ದೇಶಿಸಿ ಮಾತುಕತೆ ನಡೆಸುತ್ತಿದ್ದಾರೆ. ಆದ ಕಾರಣ ಸದರಿ ಅನುಸೂಚಿ ಸ್ವತ್ತಿನ ಜಮೀನಿನ ಮೇಲೆ ಯಾರಿಗಾದರು ಯಾವುದೇ ವಿಧವಾದ ಹಕ್ಕು, ಬಾಧ್ಯತೆ, ಆಕ್ಷೇಪಣೆಗಳೇನಾದರೂ ಇದ್ದರೆ ಪುಷ್ಟೀಕರಿಸುವಂತಹ ಸೂಕ್ತ ದಾಖಲೆಗಳೊಂದಿಗೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 10 (ಹತ್ತು) ದಿನಗಳ ಒಳಗೆ ಈ ಕೆಳಗಿನ ವಿಳಾಸಕ್ಕೆ ಸಲ್ಲಿಸತಕ್ಕದ್ದು. ಯಾವುದೇ ತಕರಾರು ಸದರಿ ಕಾಲಾವಧಿಯೊಳಗೆ ಬಾರದಿದ್ದಲ್ಲಿ ಯಾರದೇ ತಕರಾರು ಇರುವುದಿಲ್ಲವೆಂದು ಪರಿಗಣಿಸಿ ನನ್ನ ಕಕ್ಷಿದಾರರು ಸದರಿ ಸ್ವತ್ತನ್ನು ಖರೀದಿಸಲು ಮುಂದಾಗುತ್ತಾರೆ. ಹಾಗೂ ಭವಿಷ್ಯದಲ್ಲಿ ಯಾವುದೇ ತಕರಾರನ್ನು ಪರಿಗಣನೆಗೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲವೆಂದು ತಿಳಿಯುವುದು.

ಅನುಸೂಚಿ ಸ್ವತ್ತು: ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ದೊಡ್ಡಕವಲಂದೆ ಹೋಬಳಿ, ಹರಗನಪುರ ಗ್ರಾಮದ ಸರ್ವೆ ನಂಬರ್– 40/1 ರಲ್ಲಿ ವಿಸ್ತೀರ್ಣ 1-14 (ಒಂದು ಎಕರೆ ಹದಿನಾಲ್ಕು ಗುಂಟೆ) ಖುಷ್ಕಿ ಜಮೀನು ಇದಕ್ಕೆ ಚಕ್ಕುಬಂದಿ:– ಪೂರ್ವಕ್ಕೆ– ಸಿದ್ದಲ್ಲಿ ಬಿನ್ ಪುಟ್ಟಮಾದಪ್ಪನವರ ಜಮೀನು, ಪಶ್ಚಿಮಕ್ಕೆ–ಡಾ. ಉಮಾಶಂಕರ್ ರವರ ಜಮೀನು, ಉತ್ತರಕ್ಕೆ– ಮಹೇಶ್ ರವರ ಜಮೀನು, ದಕ್ಷಿಣಕ್ಕೆ–ಪುಟ್ಟಪ್ಪನವರ ಜಮೀನು.

ಕಕ್ಷಿದಾರರು, ಡಾ ಭರತ್ ಕುಮಾರ್.ಕೆ.ಕೆ ಕುಂಬಾರಕೊಪ್ಪಲ್ ಗೇಟ್ ಕೆ ಆರ್ ಎಸ್ ರಸ್ತೆ, ಮೈಸೂರು–570016

ಸಹಿ/– ಸಿ. ಮಂಗಳ ಬಿ.ಎ. ಎಲ್.ಎಲ್.ಬಿ. ವಕೀಲರು ಮತ್ತು ನೋಟರಿ ಪಬ್ಲಿಕ್ ಕಾಂಪ್ಲೆಕ್ಸ್ ಮೊದಲ ಮಹಡಿ ರೂಂ ನಂ 1, ಸೂರ್ಯ ಬೇಕರಿ ಸ್ಟಾಪ್, ಹೆಬ್ಬಾಳ್, ಮೈಸೂರು–16 ಮೊ :9844463417

ದಿನಾಂಕ: 22.08.2023

